ಸಂಪುಟ: 05 ಸಂಚಿಕೆ: 220 ಪುಟಗಳು: 08 ಶನಿವಾರ 25 ಅಕ್ಟೋಬರ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

**ಮುಂಜಾನೆ ಮಾತು**

ನಿಮ್ಮ ಮನಸ್ಸು ಶಕ್ತಿಯುತ ವಸ್ತುವಾಗಿದೆ. ನೀವು ಸಕಾರಾತ್ಮಕ ಆಲೋಚನೆಗಳಿಂದ ತುಂಬಿದಾಗ, ನಿಮ್ಮ ಜೀವನವು ಬದಲಾಗಲು ಪ್ರಾರಂಭಿಸುತ್ತದೆ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಅರಣ್ಯ ಸಂರಕ್ಷಣೆ: ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡ ಉಪಲೋಕಾಯುಕ್ತ

• **ಉದಯವಾಹಿನಿ, ಬೆಂಗಳೂರು**

ಅರಣ್ಯ ಪ್ರದೇಶಗಳ ಸಂರಕ್ಷಣೆ, ಅಭಿವೃದ್ಧಿ ಕುರಿತಾಗಿ ರಾಜ್ಯದ 16 ಜಿಲ್ಲೆಗಳ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ಮತ್ತು ವಲಯ ಅರಣ್ಯಾಧಿಕಾರಿಗಳ ವಿರುದ್ಧ ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ಅವರು ಸ್ವಯಂಪ್ರೇರಿತ ದೂರು ದಾಖಿಸಿಕೊಂಡಿದ್ದಾರೆ. ಅರಣ್ಯ ಒತ್ತುವರಿ ತೆರವು, ಹಸಿರು ಹೊದಿಕೆ ಸಂರಕ್ಷಣೆ ಮತ್ತು ಅಭಿವೃದ್ಧಿ, ಈ ಎಲ್ಲಾ ಕಾರ್ಯಗಳಿಗಾಗಿ ಮೂರು ವರ್ಷಗಳಲ್ಲಿ ಮಾಡಿದ ವೆಚ್ಚ ಮತ್ತಿತರ ವಿವರಗಳನ್ನು ಸಲ್ಲಿಸಿ ಎಂದು ಸೂಚಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ, ಬೀದರ್, ಬಳ್ಳಾರಿ, ಬಾಗಲಕೋಟೆ, ಬೆಳಗಾವಿ, ದಕ್ಷಿಣ ಕನ್ನಡ, ದಾವಣಗೆರೆ, ಹಾವೇರಿ, ಕಲಬುರಗಿ, ಕೊಪ್ಪಳ, ಕೋಲಾರ, ಮಂಡ್ಯ, ರಾಯಚೂರು, ತುಮಕೂರು, ವಿಜಯನಗರ ಮತ್ತು ಉಡುಪಿ ಜಿಲ್ಲಾ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ಮತ್ತು ವಲಯ ಅರಣ್ಯಾಧಿಕಾರಿಗಳ ವಿರುದ್ಧ 16 ಸ್ವಯಂಪ್ರೇರಿತ ದೂರು ದಾಖಲಿಸಿದ್ದಾರೆ.

ದೂರುಗಳ ಪ್ರತಿಯನ್ನು ಅರಣ್ಯ ಸಚಿವ, ಆಯಾ ಜಿಲ್ಲಾ ಉಸ್ತುವಾರಿ ಸಚಿವರು, ಆಯಾ ಜಿಲ್ಲಾಧಿಕಾರಿ, ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಇಲಾಖೆಯ ಹೆಚ್ಚುವರಿ ಮುಖ್ಯಕಾರ್ಯದರ್ಶಿಗೆ ಕಳುಹಿಸಿ ಎಂದು ಸೂಚಿಸಿದ್ದಾರೆ.

## ಕತ್ತಲೆ ಜಗತ್ತಿನ ರಹಸ್ಯಗಳ ಬಗ್ಗೆ ಭಯವೇಕೆ: ಸಚಿವ ಪ್ರಿಯಾಂಕ್

• **ಉದಯವಾಹಿನಿ, ಬೆಂಗಳೂರು**

ಕತ್ತಲೆ ಜಗತ್ತಿನ ರಹಸ್ಯಗಳ ಬಗ್ಗೆ ಭಯವೇಕೆ ಎಂದು ಬಿಜೆಪಿ ನಾಯಕ ಪ್ರತಾಪ ಸಿಂಹ ಅವರನ್ನು ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನಿಸಿದ್ದಾರೆ. ನಿಷೇಧಕ್ಕೆ ನೆಹರೂ ಕುಟುಂಬದಿಂದಲೇ ಆಗಿಲ್ಲ, ಸಿದ್ದರಾಮಯ್ಯ ಮಾಡ್ತಾರಾ?: ಪ್ರತಾಪ ಈ ಬಗ್ಗೆ ಎಕ್ಸ್ ಪೋಸ್ಟ್ ಮಾಡಿರುವ ಅವರು, 'ನಿಮ್ಮ ಕತ್ತಲೆ ಜಗತ್ತಿನಲ್ಲಿ ಎಂತೆಂತಹ ಕರಾಳ ಕತೆಗಳ ರಹಸ್ಯ ಅಡಗಿವೆ? ಕತ್ತಲೆ ಜಗತ್ತಿನ ರಹಸ್ಯಗಳ ಪುಸ್ತಕಕ್ಕೆ ನೀವು ತಡೆಯಾಜ್ಞೆ ತಂದಿರುವುದೇಕೆ? ಎಂದು ಪ್ರಶ್ನಿಸಿದ್ದಾರೆ.

'ಬಿಜೆಪಿಯಿಂದ ತಿರಸ್ಕೃತಗೊಂಡ ನಿರುದ್ಯೋಗಿ ಪ್ರತಾಪ ಸಿಂಹ ಸುದ್ದಿಯಲ್ಲಿರಲು ಸಲುವಾಗಿ ಮೈಸೂರಿನ ಪತ್ರಕರ್ತರ ಕೈಕಾಲು ಹಿಡಿದು ಪ್ರತಿದಿನವೂ ನನ್ನ ಪ್ರತಿಕ್ರಿಯೆ ತಗೋಳಿ ಅಂತ ಅಂಗಲಾಚುತ್ತಿದ್ದಾರೆ ಎಂಬುದು ಮಾಧ್ಯಮ ಮಿತ್ರರ ಆಫ್ ದಿ ರೆಕಾರ್ಡ್ ವರದಿ' ಎಂದು ಹೇಳಿದ್ದಾರೆ. ಎಲ್ಲಾ ವಿಷಯಕ್ಕೂ ಬಾಯಿ ಹಾಕುವ ಪ್ರತಾಪ ಸಿಂಹರವರು ಬಿಜೆಪಿ ಪಕ್ಷದ ಯಾವ 'ಪೊಸಿಷನ್'ನಲ್ಲಿದ್ದಾರೆ ಎನ್ನುವುದನ್ನು ಮೊದಲು ಸ್ಪಷ್ಟಪಡಿಸಬೇಕು ಎಂದು ಬರೆದುಕೊಂಡಿದ್ದಾರೆ.

## ವೈದ್ಯಕೀಯ ಸೀಟು: ಆಕ್ಷೇಪಣೆಗೆ ಇಂದು ಕೊನೆಯ ದಿನ

• **ಉದಯವಾಹಿನಿ, ಬೆಂಗಳೂರು**

ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸ್‌ಗಳ ಮೂರನೇ ಸುತ್ತಿನ ಸೀಟು ಹಂಚಿಕೆಯ ತಾತ್ಕಾಲಿಕ ಫಲಿತಾಂಶವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ಪ್ರಕಟಿಸಿದ್ದು, ಅ.25ರ ಒಳಗೆ ಆಕ್ಷೇಪಣೆ ಸಲ್ಲಿಸುವಂತೆ ಸೂಚಿಸಿದೆ.

ಅಖಿಲ ಭಾರತ ಕೋಟಾದ ಮೂರನೇ ಸುತ್ತಿನಲ್ಲಿ ಸೀಟು ಪಡೆದು, ಕೆಇಎ ಮೂರನೇ ಸುತ್ತಿನಲ್ಲಿಯೂ ಸೀಟು ಪಡೆದಿರುವ ಅಭ್ಯರ್ಥಿಗಳು ಕೆಇಎ ಸೀಟು ಉಳಿಸಿಕೊಳ್ಳಲು ಆಸಕ್ತರಾಗಿದ್ದರೆ ಅ.25ರ ಮಧ್ಯಾಹ್ನ 12.30ರೊಳಗೆ ಕೆಇಎ ಕಚೇರಿಗೆ ಬಂದು ಮನವಿ ನೀಡಬೇಕು ಅಥವಾ ಅರ್ಜಿಯಲ್ಲಿ ನಮೂದಿಸಿದ್ದ ಇ-ಮೇಲ್‌ನಿಂದ keauthority-ka@nic.inಗೆ ಇ-ಮೇಲ್ ಕಳಿಸಬೇಕು. ಇಲ್ಲದಿದ್ದರೆ ಅಂತಹ ಅಭ್ಯರ್ಥಿಗಳನ್ನು ಅಂತಿಮ ಸೀಟು ಹಂಚಿಕೆಗೆ ಪರಿಗಣಿಸುವುದಿಲ್ಲ. ಪಾವತಿಸಿರುವ ವೈದ್ಯಕೀಯ ಕೋರ್ಸ್ ಶೇವಣಿಯನ್ನು ಹಿಂದಿರುಗಿಸುವುದಿಲ್ಲ ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕರಾದ ನಿರ್ದೇಶಕ ಎಚ್.ಪ್ರಸನ್ನ ಹೇಳಿದ್ದಾರೆ.

## ದಲಿತ ಮುಖಂಡರ ಎತ್ತಿಕಟ್ಟುತ್ತಿರುವ ಸಚಿವ ಪ್ರಿಯಾಂಕ್ ಖರ್ಗೆ


• **ಉದಯವಾಹಿನಿ, ಬೆಂಗಳೂರು**

ಸಚಿವ ಪ್ರಿಯಾಂಕ್ ಖರ್ಗೆ ಅವರ ಬುಡಕ್ಕೆ ಬೆಂಕಿ ಬಿದ್ದಾಗ ಮಾತ್ರ ದಲಿತರು ನೆನಪಾಗುತ್ತಾರೆ. ಖರ್ಗೆ ಕುಟುಂಬ ಎಷ್ಟು ದಲಿತರನ್ನು ಬೆಳೆಸಿದೆ? ದಲಿತರ ಪರ ಎಷ್ಟು ಹೋರಾಟಗಳನ್ನು ಮಾಡಿದೆ' ಎಂದು ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಪ್ರಶ್ನಿಸಿದರು. ಸುದ್ದಿಗಾರರ ಜತೆ ಮಾತನಾಡಿದ ಅವರು, ಚಿತ್ತಾಪುರ ವಿಚಾರದಲ್ಲಿ ಆಯ್ದ ಕೆಲವು ದಲಿತ ಮುಖಂಡರನ್ನು ಎತ್ತಿಕಟ್ಟಿ ಆಟ ಆಡುತ್ತಿದ್ದಾರೆ ಎಂದು ದೂರಿದರು. 'ಚಿತ್ತಾಪುರದಲ್ಲಿ ನ.2 ರಂದು ಹಲವು ದಲಿತ ಸಂಘಟನೆಗಳು ಪಥಸಂಚಲನ ಮಾಡುತ್ತೇವೆ ಎಂದು ನ್ಯಾಯಾಲಯದಲ್ಲಿ ಅನುಮತಿಗಾಗಿ ಅರ್ಜಿ ಹಾಕಿವೆ.

ಈ ಕಾರಣಕ್ಕೆ ಶಾಂತಿ ಸಭೆ ಮಾಡುವಂತೆ ನ್ಯಾಯಾಲಯವೂ ಆದೇಶ ನೀಡಿದೆ. ನಾವು (ಬಿಜೆಪಿ) ಯಾವ ರೀತಿ 'ಐ ಲವ್ ಆರ್ ಎಸ್‌ಎಸ್' ಎನ್ನುತ್ತೇವೆಯೊ ಹಾಗೆಯೇ ಅದೇ ರೀತಿ ಡಿಎಸ್ ಎಸ್ ಸಂಘಟನೆಗಳನ್ನೂ ಪ್ರೀತಿಯಿಂದ ಕಾಣುತ್ತೇವೆ' ಎಂದರು.

# ನೀರಿಲ್ಲ.. ನೀರಿಲ್ಲ.. ಪಾಕ್ ವಿಲವಿಲ

**ಅಫ್ಘಾನ್ ವಾಟರ್ ಬಾಂಬ್**



• **ಉದಯವಾಹಿನಿ, ಬೆಂಗಳೂರು**

ನೆರೆಯ ಎಲ್ಲಾ ರಾಷ್ಟ್ರಗಳೊಂದಿಗೂ ಕಾಲು ಕೆರೆದುಕೊಂಡು, ಸಂಘರ್ಷಕ್ಕಿಳಿದು, ಹೀನಾಯವಾಗಿ ಸೋಲು ಕಂಡ ಪಾಕಿಸ್ತಾನಕ್ಕೆ ಇದೀಗ ಅಫ್ಘಾನಿಸ್ತಾನ ಕೂಡ ಭಾರತದಂತೆಯೇ ತಕ್ಕ ಪಾಠ ಕಲಿಸಲು ಮುಂದಾಗಿದೆ. ಹೌದು, ಸಂಘರ್ಷದಲ್ಲಿ ಪಾಪಿ ಪಾಕಿಸ್ತಾನದ ವಿರುದ್ಧ ಪರಾಕ್ರಮ ಮೆರದಿದ್ದ ತಾಲಿಬಾನಿಗಳು ಇದೀಗ ಆಡಳಿತಾತ್ಮಕವಾಗಿಯೂ ಪಾಕಿಸ್ತಾನಕ್ಕೆ ತಕ್ಕ ಶಾಸ್ತಿ ಮಾಡಲು ಮುಂದಾಗಿದ್ದು, ಹಾಗಾಗಿ, ತಾಲಿಬಾನ್ ಸರ್ಕಾರವು ಕುನಾರ್ ನದಿಗೆ ಅಣೆಕಟ್ಟು ನಿರ್ಮಿಸಲು ಮುಂದಾಗಿದೆ. ಪಾಕಿಸ್ತಾನದೊಂದಿಗಿನ ಸಂಘರ್ಷದ ನಂತರ ''ನಮ್ಮ ನೀರು ನಮ್ಮ ಹಕ್ಕು'' ಎಂದು ಘೋಷಿಸಿರುವ ಇನ್ನು ಈ ಅಣೆಕಟ್ಟಿನ ನಿರ್ಮಾಣದಿಂದ ಪಾಕಿಸ್ತಾನದ ನೀರಿನ ಸರಬರಾಜನ್ನು ನಿಯಂತ್ರಿಸುವ ಉದ್ದೇಶ ಹೊಂದಿದ್ದು, ಭಾರತವು ಸಿಂಧೂ ಜಲ ಒಪ್ಪಂದವನ್ನು ರದ್ದುಗೊಳಿಸಿದ ನಂತರ ಈಗ ಈ ಅಫ್ಘಾನಿಸ್ತಾನದ ನಿರ್ಧಾರವು ಪಾಕಿಸ್ತಾನಕ್ಕೆ ಮತ್ತೊಂದು ಹೊಡೆತ ನೀಡಿದಂತಾಗಿದೆ.

**ಭಾರತದ ನಿರ್ಧಾರದಂತೆ ಅಫ್ಘಾನಿಸ್ತಾನ ನಿರ್ಧಾರ:** ಅಫ್ಘಾನಿಸ್ತಾನ ಮತ್ತು ಪಾಕಿಸ್ತಾನ ನಡುವೆ ಇತ್ತೀಚಿಗೆ ನಡೆದ ಯುದ್ಧದಲ್ಲಿ ನೂರಾರು ಮಂದಿ ಸಾವನ್ನಪ್ಪಿದ್ದ ಬೆನ್ನಲ್ಲೇ ಈ ಆದೇಶ ಬಂದಿದೆ. ಪಾಕಿಸ್ತಾನದೊಂದಿಗೆ ನೀರು ಹಂಚಿಕೆಯ ಬಗ್ಗೆ ಭಾರತದ ನಿರ್ಧಾರದಂತೆ ಇದೀಗ ಅಫ್ಘಾನಿಸ್ತಾನವೂ ನಿರ್ಧಾರ ತೆಗೆದುಕೊಂಡಿದೆ. ಕುನಾರ್ ನದಿಗೆ ಅಣೆಕಟ್ಟು ನಿರ್ಮಾಣವನ್ನು ಆದಷ್ಟು ಬೇಗ ಪ್ರಾರಂಭಿಸಲು ಮತ್ತು ದೇಶೀಯ ಕಂಪನಿಗಳೊಂದಿಗೆ ಒಪ್ಪಂದಗಳಿಗೆ ಸಹಿ ಹಾಕುವಂತೆ ಸುಪ್ರೀಂ ಲೀಡರ್ ಅಖುಂದ್ಜಾದಾ ಅವರು ಜಲ ಮತ್ತು ಇಂಧನ ಸಚಿವಾಲಯಕ್ಕೆ ಸೂಚನೆ ನೀಡಿದ್ದಾರೆ ಎಂದು ಆಫ್ಘನ್ ಮಾಹಿತಿ ಸಚಿವಾಲಯದ ಉಪ ಸಚಿವ ಮುಹಜೀರ್ ಫರಾಹಿ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ತಿಳಿಸಿದ್ದಾರೆ.

ಭಾರತದ ನಂತರ ಈಗ ಅಫ್ಘಾನಿಸ್ತಾದಿಂದ ಪಾಕಿಸ್ತಾನಕ್ಕೆ ನೀರು ಪೂರೈಕೆ ನಿರ್ಬಂಧಿಸುವ ಸರದಿ ಎಂದು ಲಂಡನ್ ಮೂಲದ ಆಫ್ಘಾನಿಸ್ತಾನದ ಪತ್ರಕರ್ತ ಸಾಮಿ ಯೂಸುಫ್‌ಜಾಯ್ ಹೇಳಿದ್ದಾರೆ. 480-ಕಿಮೀ ಉದ್ದದ ಕುನಾರ್ ನದಿಯು ಈಶಾನ್ಯ ಅಫ್ಘಾನಿಸ್ತಾನದ ಹಿಂದೂ ಕುಶ್ ಪರ್ವತಗಳಲ್ಲಿ ಪಾಕಿಸ್ತಾನದ ಗಡಿಗೆ ಸಮೀಪವಿರುವ ಬ್ರೋಘಿಲ್ ಪಾಸ್ ಬಳಿ ಹುಟ್ಟುತ್ತದೆ.

ಇದು ಪಾಕಿಸ್ತಾನದ ಖೈಬರ್ ಪಖ್ತುನ್ಖ್ವಾವನ್ನು ದಾಟುವ ಮೊದಲು ಕುನಾರ್ ಮತ್ತು ನಂಗರ್ಹಾರ್ ಪ್ರಾಂತ್ಯಗಳ ಮೂಲಕ ದಕ್ಷಿಣಕ್ಕೆ ಹರಿಯುತ್ತದೆ. ಅಲ್ಲಿ ಇದು ಜಲಾಲಾಬಾದ್ ನಗರದ ಬಳಿ ಕಾಬೂಲ್ ನದಿಯನ್ನು ಸೇರುತ್ತದೆ. ಕುನಾರ್ ಅನ್ನು ಪಾಕಿಸ್ತಾನದಲ್ಲಿ ಚಿತ್ರಾಲ್ ನದಿ ಎಂದು ಕರೆಯಲಾಗುತ್ತದೆ.

ಕುನಾರ್ ಹರಿಯುವ ಕಾಬೂಲ್ ನದಿಯು ಅಫ್ಘಾನಿಸ್ತಾನ ಮತ್ತು ಪಾಕಿಸ್ತಾನದ ನಡುವಿನ ಅತಿ ದೊಡ್ಡ ಗಡಿಯಾಚೆಗಿನ ನದಿಯಾಗಿದೆ. ಕಾಬೂಲ್ ನದಿಯು ಅಟಾಕ್ ಬಳಿ ಸಿಂಧೂ ನದಿಯನ್ನು ಸೇರುತ್ತದೆ ಮತ್ತು ಪಾಕಿಸ್ತಾನದ ವಿಶೇಷವಾಗಿ ಅದರ ಖೈಬರ್ ಪಖ್ತುಂಕ್ವಾ ಪ್ರಾಂತ್ಯದ ನೀರಾವರಿ ಮತ್ತು ಇತರ ನೀರಿನ ಅಗತ್ಯಗಳಿಗೆ ನಿರ್ಣಾಯಕವಾಗಿದೆ. ಕುನಾರ್ ನದಿಯ ನೀರಿನ ಹರಿವಿನ ಕಡಿತವು ಸಿಂಧೂ ನದಿಯ ಮೇಲೆ ಪರಿಣಾಮ ಉಂಟು ಮಾಡುತ್ತದೆ. ಇದರಿಂದಾಗಿ ಪಂಜಾಬ್‌ಗೂ ಹೊಡೆತ ಬೀಳುತ್ತದೆ.

ಪಾಕಿಸ್ತಾನಕ್ಕೆ ಹರಿಯುವ ಕಾಬೂಲ್ ಮತ್ತು ಕುನಾರ್ ನದಿಗಳು ಪಾಕಿಸ್ತಾನದಲ್ಲಿ ಬಹಳ ಹಿಂದಿನಿಂದಲೂ ನೀರಿನ ಮೂಲವಾಗಿದೆ ಎಂದು ಲಂಡನ್ ಮೂಲದ ಆಫ್ಘನ್ ಪತ್ರಕರ್ತ ಸಾಮಿ ಯೂಸಫ್‌ಜಾಯ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

**ಮುಂದಿನ ರಾಜತಾಂತ್ರಿಕ ಹಾದಿ ಏನು:** ಅಫ್ಘಾನಿಸ್ತಾನ ತನ್ನ ನೀರಿನ ಸಂಪನ್ಮೂಲಗಳನ್ನು ಅಭಿವೃದ್ಧಿ ಮತ್ತು ವಿದ್ಯುತ್ ಉತ್ಪಾದನೆಗಾಗಿ ಬಳಸುವ ಹಕ್ಕನ್ನು ಒತ್ತಿ ಹೇಳುತ್ತಿದೆ.

ಪಾಕಿಸ್ತಾನವು ಈ ನಿರ್ಧಾರವನ್ನು ಅಂತಾರಾಷ್ಟ್ರೀಯ ವೇದಿಕೆಯಲ್ಲಿ ಪ್ರಶ್ನಿಸಬಹುದು, ಆದರೆ ತಾಲಿಬಾನ್ ಸರ್ಕಾರವು ಈಗ ಯಾವುದೇ ಬಾಹ್ಯ ಒತ್ತಡಕ್ಕೆ ತಲೆಬಾಗುವ ಸಾಧ್ಯತೆ ಕಡಿಮೆ. ಕುನಾರ್ ನದಿಯ ಅಣೆಕಟ್ಟು ನಿರ್ಮಾಣ ಪೂರ್ಣಗೊಂಡರೆ, ದಕ್ಷಿಣ ಏಷ್ಯಾದ ನೀರಿನ ರಾಜಕೀಯದಲ್ಲಿ ಇದು ಒಂದು ಹೊಸ ಅಧ್ಯಾಯವಾಗಲಿದೆ.

**ಪಾಕಿಸ್ತಾನತಾಲಿಬಾನ್ ಸಂಬಂಧಗಳು ಹದಗೆಟ್ಟ ಹಿನ್ನೆಲೆ:** ಜನವರಿಯಲ್ಲಿ ತಾಲಿಬಾನ್ ಸರ್ಕಾರ ಈ ಯೋಜನೆ ಘೋಷಿಸಿದಾಗಲೇ ಪಾಕಿಸ್ತಾನಿ ಅಧಿಕಾರಿಗಳು ಅದನ್ನು ''ಪ್ರತಿಕೂಲ ಕ್ರಮ'' ಎಂದು ವಿವರಿಸಿದ್ದರು. ಕಾಬೂಲ್ ಮೇಲಿನ ಪಾಕಿಸ್ತಾನದ ವೈಮಾನಿಕ ದಾಳಿಯ ನಂತರ ತಾಲಿಬಾನ್ ಉಗ್ರರು ಪಾಕಿಸ್ತಾನದ ವಿರುದ್ಧ ಪ್ರತೀಕಾರ ದಾಳಿ ನಡೆಸಿ 58 ಸೈನಿಕರನ್ನು ಕೊಂದಿದ್ದಾರೆ. ಪ್ರಸ್ತುತ ಕದನ ವಿರಾಮ ಜಾರಿಯಲ್ಲಿದ್ದರೂ, ಈ ನೀರಿನ ಯೋಜನೆ ಇಬ್ಬರ ನಡುವೆ ಮತ್ತೆ ತೀವ್ರ ತಳಮಳ ಉಂಟುಮಾಡಬಹುದು.

**{ ಪಾಕಿಸ್ತಾನಕ್ಕೆ ಬುದ್ಧಿ ಕಲಿಸಲು ಭಾರತದ ದಾರಿ ಹಿಡಿದ ಅಫ್ಘಾನ್ }**



**ನಡಿ ನೀರು ತಡೆಗೆ ತಾಲಿಬಾನ್ ಮಾಸ್ಟರ್ ಪ್ಲಾನ್**

**ಹೊಸ ಹೈಡ್ರೋಪವರ್ ಯೋಜನೆ**

ದಿ ಡಿಪ್ಲೊಮ್ಯಾಟ್ ವರದಿ ಪ್ರಕಾರ, ಚೀನಾದ ಕಂಪನಿಯೊಂದು ಕುನಾರ್ ನದಿಗೆ ಅಡ್ಡಲಾಗಿ ದೊಡ್ಡ ಅಣೆಕಟ್ಟುಗಳಲ್ಲಿ ಹೂಡಿಕೆ ಮಾಡಲು ಆಸಕ್ತಿ ತೋರಿದೆ. ಈ ಅಣೆಕಟ್ಟು 2,000 ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸಲು ಸಾಧ್ಯವೆಂದು ಅಫ್ಘಾನ್ ಸರ್ಕಾರ ಹೇಳಿದೆ. ಇದರಿಂದ ಅಫ್ಘಾನಿಸ್ತಾನಕ್ಕೆ ಆರ್ಥಿಕ ಲಾಭ ಸಿಗಬಹುದು, ಆದರೆ ಪಾಕಿಸ್ತಾನದ ಪರವಾಗಿ ಇದು ಮತ್ತೊಂದು ಅಪಾಯದ ಸೂಚನೆ.

**ಪಾಕಿಸ್ತಾನದಲ್ಲಿ ಟೊಮೆಟೊ ಬೆಲೆ ಕೇಳಿದ್ರೆ ಶಾಕ್..!**

ಪಾಕಿಸ್ತಾನ ಹಾಗೂ ಅಫ್ಘಾನಿಸ್ತಾನದ ಇತ್ತೀಚಿನ ಸಂಘರ್ಷದ ಬಳಿಕ ಪಾಕಿಸ್ತಾನದ ದೇಶೀಯ ಮಾರುಕಟ್ಟೆ ತೀವ್ರ ಸಂಕಷ್ಟದಲ್ಲಿದೆ. ಟೊಮೆಟೊ ಬೆಲೆಗಳು ಗಗನಕ್ಕೇರಿವೆ. ಅಫ್ಘಾನಿಸ್ತಾನ ತನ್ನ ಗಡಿ ಮುಚ್ಚಿದ್ದು, ಪಾಕಿಸ್ತಾನದಲ್ಲಿ ಟೊಮೆಟೊ ಬೆಲೆ ಶೇ.400ರಷ್ಟು ಏರಿಕೆ ಕಂಡಿದೆ. ಲಾಹೋರ್ ಮತ್ತು ಕರಾಚಿ ಸೇರಿದಂತೆ ಹಲವಾರು ಪ್ರಮುಖ ನಗರಗಳಲ್ಲಿ, ಟೊಮೆಟೊ ಬೆಲೆ ಪ್ರತಿ ಕಿಲೋಗ್ರಾಂಗೆ 700 ರೂ. ತಲುಪಿದೆ. ಸ್ವಲ್ಪ ದಿನಗಳ ಹಿಂದೆ ಇದರ ಬೆಲೆ 100 ರೂ.ಗಳಿತ್ತು. ಇರಾನಿನ ಟೊಮೆಟೊಗಳು ಪ್ರಸ್ತುತ ಪಾಕಿಸ್ತಾನ ಮಾರುಕಟ್ಟೆಗೆ ಬರುತ್ತಿವೆ, ಆದರೆ ಗಡಿ ಉದ್ವಿಗ್ನತೆ ಮತ್ತು ಮಿಲಿಟರಿ ಸಂಘರ್ಷದ ನಂತರ ಅಫ್ಘಾನಿಸ್ತಾನಕ್ಕೆ ರಫ್ತು ಸ್ಥಗಿತಗೊಳಿಸುವುದರಿಂದ ಪಾಕಿಸ್ತಾನದಾದ್ಯಂತ ಟೊಮೆಟೊ ಸೇರಿದಂತೆ ಹಲವು ಉತ್ಪನ್ನಗಳ ಬೆಲೆ ಗಗನಕ್ಕೇರಿದೆ.



1. ಪಾಕಿಸ್ತಾನಕ್ಕೆ ಆಫ್ಘನ್ ಡಬಲ್ ಶಾಕ್
2. ಆಹಾರಕ್ಕೂ ಕುತ್ತು, ನೀರಿಗೂ ಬ್ರೇಕ್!
3. ಪಾಕಿಸ್ತಾನಕ್ಕೆ ಮತ್ತೊಂದು ಸಂಕಷ್ಟ ಅವಮಾನದ ಮೇಲೆ ಅವಮಾನ

## ರಕ್ಷಣೆಗೆ ಕೇಂದ್ರದ ಸಹಾಯ ಕೋರುತ್ತೇವೆ: ಆರ್‌ಎಸ್‌ಎಸ್

• **ಉದಯವಾಹಿನಿ ಬೆಂಗಳೂರು**


'ಕಲಬುರಗಿ ಜಿಲ್ಲೆಯ ಚಿತ್ತಾಪುರದಲ್ಲಿ ಬರುವ ನವೆಂಬರ್ 2ಕ್ಕೆ ನಡೆಸಲು ಉದ್ದೇಶಿಸಿರುವ ಪಥಸಂಚಲನದ ವೇಳೆ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ರಾಜ್ಯ ಸರ್ಕಾರಕ್ಕೆ ಕಷ್ಟವಾಗುತ್ತದೆ ಎಂದಾದರೆ ನಾವು ಕೇಂದ್ರದ ನೆರವು ಕೇಳುತ್ತೇವೆ' ಎಂದು ರಾಷ್ಟ್ರೀಯ ಸ್ವಯಂ ಸೇವಕ ಸಂಘ (ಆರ್‌ಎಸ್‌ಎಸ್) ಹೈಕೋರ್ಟ್‌ಗೆ ಅರುಹಿದೆ.

**ಮನವಿ ಮಾಡಲು ಸಿದ್ಧ**

ಕಲಬುರಗಿ ಚಿತ್ತಾಪುರದಲ್ಲಿ ಅಕ್ಟೋಬರ್ 19ರಂದು ಮಧ್ಯಾಹ್ನ 3 ಗಂಟೆಗೆ ನಡೆಸಲು ಉದ್ದೇಶಿಸಿದ್ದ ಪಥಸಂಚಲನಕ್ಕೆ ಅನುಮತಿ ನಿರಾಕರಿಸಿದ್ದ ತಹಶೀಲ್ದಾರ್ ಕ್ರಮವನ್ನು ಪ್ರಶ್ನಿಸಿ ಪಥಸಂಚಲನದ ಸಂಚಾಲಕರೂ ಆದ ಚಿಂಚೋಳಿಯ ಹಿರಿಯ ನಾಗರಿಕ ಅಶೋಕ್ ಪಾಟೀಲ್ (70) ಸಲ್ಲಿಸಿದ್ದ ರಿಟ್ ಅರ್ಜಿಯನ್ನು ನ್ಯಾಯಮೂರ್ತಿ ಎಂ.ಜಿ.ಎಸ್.ಕಮಲ್ ಅವರಿದ್ದ ಏಕಸದಸ್ಯ ನ್ಯಾಯಪೀಠ (ಕಲಬುರಗಿ) ವಿಚಾರಣೆ ನಡೆಸಿತು.

ಸುದೀರ್ಘ ವಾದ ಪ್ರತಿವಾದ ಆಲಿಸಿದ ನ್ಯಾಯಪೀಠ, 'ಸರ್ಕಾರ ಎಲ್ಲಾ ಸಂಘಟನೆಗಳೊಂದಿಗೆ ಇದೇ 28ರಂದು ಶಾಂತಿ ಸಭೆ ನಡೆಸಬೇಕು. ಚಿತ್ತಾಪುರದಲ್ಲಿನ ಪರಿಸ್ಥಿತಿ ಪರಿಗಣಿಸಿ ಸೂಕ್ತ ನಿರ್ಧಾರ ಕೈಗೊಳ್ಳಬೇಕು ಮತ್ತು ಸಭೆಯಲ್ಲಿ ಕೈಗೊಂಡ ನಿರ್ಣಯದ ವರದಿಯನ್ನು ಇದೇ 30ರಂದು ಕೋರ್ಟ್‌ಗೆ ತಿಳಿಸಬೇಕು' ಎಂದು ಸರ್ಕಾರಕ್ಕೆ ನಿರ್ದೇಶಿಸಿ ವಿಚಾರಣೆಯನ್ನು ಇದೇ 30ರ ಮಧ್ಯಾಹ್ನ 2.30ಕ್ಕೆ ಮುಂದೂಡಿತು.

**ಅಡ್ವಕೇಟ್ ಜನರಲ್ ಕೆ.ಶಶಿಕಿರಣ ಶೆಟ್ಟಿ ವಾದ:** ವಿವಿಧ ಸಂಘಟನೆಗಳು ಪಥಸಂಚಲನದ ಪರ ಮತ್ತು ವಿರುದ್ಧ ಮಾಧ್ಯಮಗಳಲ್ಲಿ ಹೇಳಿಕೆ ನೀಡುತ್ತಿರುವುದರ ಪರಿಣಾಮ



ಇಡೀ ನಗರದಲ್ಲಿ ಉದ್ವಿಗ್ನ ಸ್ಥಿತಿ ಉಂಟಾಗಿದೆ. ಒಂದು ವೇಳೆ ಪಥಸಂಚಲನಕ್ಕೆ ಅನುಮತಿ ನೀಡಿದರೆ ಕಾನೂನು ಮತ್ತು ಸುವ್ಯವಸ್ಥೆ ನಿಭಾವಣೆಯ ಕಷ್ಟ ಎದುರಾಗಲಿದೆ. ಈ ಹಿನ್ನೆಲೆಯಲ್ಲಿ ಸ್ಥಳೀಯ ಅಧಿಕಾರಿಗಳು ಸಂಘಟಕರೊಂದಿಗೆ ಶಾಂತಿ ಸಮಿತಿ ಸಭೆ ನಡೆಸಲು ನಿರ್ಧರಿಸಿದ್ದಾರೆ. ಎರಡು ವಾರಗಳಲ್ಲಿ ಈ ವಿಷಯವನ್ನು ಪರಿಹರಿಸಲಾಗುವುದು. ಪಥಸಂಚಲನದ ಮಾರ್ಗದಲ್ಲಿ ನ.2ರಂದು ಸಂಚಾರ ದಟ್ಟಣೆಯಾಗುವ ಸಾಧ್ಯತೆ ಇದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ತಮ್ಮ ವರದಿಯಲ್ಲಿ ತಿಳಿಸಿದ್ದಾರೆ. ಹೀಗಾಗಿ, ಯಾವುದೇ ಸಂಘಟನೆಗೂ ಪಥಸಂಚಲನಕ್ಕೆ ಅನುಮತಿ ನೀಡಬಾರದು. ಪರಿಸ್ಥಿತಿ ತಿಳಿಯಾದ ನಂತರ ಕೆಲವು ವಾರಗಳ ಬಳಿಕ ಪಥಸಂಚಲನ ನಡೆಸುವುದು ಸೂಕ್ತ ಎಂದು ವರದಿಯಲ್ಲಿ ತಿಳಿಸಿದ್ದಾರೆ. ಅಷ್ಟಕ್ಕೂ ನಾವು ಅರ್ಜಿದಾರರ ಮನವಿಯನ್ನು ತಿರಸ್ಕರಿಸಿಲ್ಲ. ಎಂಟು ವಿವಿಧ ಸಂಘಟನೆಗಳು ಪಥಸಂಚಲನಕ್ಕೆ ಅನುಮತಿ ಕೋರಿವೆ. ಅವುಗಳಲ್ಲಿ ಯಾವುದನ್ನೂ ಪರಿಗಣಿಸಿಲ್ಲ. ಎಲ್ಲರೂ ತಂತಮ್ಮ ಪಥಸಂಚಲನದ ಬಗ್ಗೆ ಒಂದೊಂದು ರೀತಿಯ ಹೇಳಿಕೆ ನೀಡಿದ್ದಾರೆ. ಹೀಗಾಗಿ, ಎರಡು ವಾರಗಳಲ್ಲಿ ಸಮಸ್ಯೆ ಬಗೆಹರಿಸಲು ಕ್ರಮ ಕೈಗೊಳ್ಳುತ್ತೇವೆ.

ನವೆಂಬರ್ 2 ರಂದು ಪಥಸಂಚಲನ ನಡೆಸಲು ಒಪ್ಪಿಕೊಂಡಿದ್ದೇವೆ. ಆದರೆ, ಸರ್ಕಾರ ವಿನಾಕಾರಣ ಸಮಸ್ಯೆಯನ್ನು ಸೃಷ್ಟಿಸುತ್ತಿದೆ. ಪಥಸಂಚಲನ ತಡೆಯಲು ಇತರ ಸಂಘಟನೆಗಳೂ ಅದೇ ದಿನ ಮೆರವಣಿಗೆ ನಡೆಸಲು ಉದ್ದೇಶಿಸಿವೆ. ಕಳೆದ ವಿಚಾರಣೆಯಲ್ಲೇ ಮಾರ್ಗದ ವಿವರವನ್ನು ನೀಡುವ ಬಗ್ಗೆ ಒಪ್ಪಂದವಾಗಿತ್ತು ಎಂದರು.

## ಕರ್ನಾಟಕದಲ್ಲಿ 13 ಕಂಪನಿಗಳಿಂದ 27 ಸಾವಿರ ಕೋಟಿ ರೂ. ಹೂಡಿಕೆಗೆ ಅಸ್ತು

■ 8704 ಮಂದಿಗೆ ನೇರ ಉದ್ಯೋಗ ■ ಒಟ್ಟು 13 ಯೋಜನೆಗಳಿಂದ ಉದ್ಯೋಗ ಸೃಷ್ಟಿಯಾಗುವ ನಿರೀಕ್ಷೆಯಿದೆ

• **ಉದಯವಾಹಿನಿ ಬೆಂಗಳೂರು**

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಉನ್ನತ ಮಟ್ಟದ ಯೋಜನಾ ಮಂಜೂರಾತಿ ಸಮಿತಿಯ ಸಭೆಯಲ್ಲಿ 27,607.26 ಕೋಟಿ ರೂ. ಬಂಡವಾಳ ಹೂಡಿಕೆಗೆ ಒಪ್ಪಿಗೆ ನೀಡಲಾಗಿದೆ.

ಒಟ್ಟು 13 ಯೋಜನೆಗಳೊಂದಿಗೆ 8,704 ನೇರ ಉದ್ಯೋಗ ಸೃಷ್ಟಿಯಾಗುವ ನಿರೀಕ್ಷೆಯಿದೆ. ಈ ಹೂಡಿಕೆಯಲ್ಲಿ 11 ಹೊಸ ಕೈಗಾರಿಕಾ ಸಂಬಂಧಿತ ಯೋಜನೆಗಳು ಮತ್ತು 2 ಹೆಚ್ಚುವರಿ ಹೂಡಿಕೆ ಪ್ರಸ್ತಾವನೆಗಳು ಸೇರಿವೆ.

ಇದರಲ್ಲಿ 11 ಹೊಸ ಕೈಗಾರಿಕಾ ಯೋಜನೆಗಳು ಮತ್ತು 2 ಹೆಚ್ಚುವರಿ ಹೂಡಿಕೆ ಪ್ರಸ್ತಾವನೆಗಳು ಸೇರಿವೆ ಎಂದು ಸಭೆ ಬಳಿಕ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಸುದ್ದಿಗಾರರಿಗೆ ತಿಳಿಸಿದರು. ಒಟ್ಟು ಈ 13 ಯೋಜನೆಗಳಿಂದ 8,704 ನೇರ ಉದ್ಯೋಗಗಳು ಸೃಷ್ಟಿಯಾಗಲಿವೆ ಎಂದಿದ್ದಾರೆ.

### 11 ಹೊಸ ಹೂಡಿಕೆ ಯಾವ ಕಂಪನಿಗಳಿಂದ

- ತೇಜಸ್ ನೆಟ್ವರ್ಕ್ಸ್ 542.19 ಕೋಟಿ ರೂ
- ವಾಯು ಅಸೆಟ್ಸ್ 1,251 ಕೋಟಿ ರೂ
- ಜಿಂದಾಲ್ ಸ್ಟೀಲ್ಸ್ 1,300.57 ಕೋಟಿ ರೂ



- ಜಿಂದಾಲ್ ಎಲೆಕ್ಟ್ರಿಕಲ್ ಸ್ಟೀಲ್ 7,102 ಕೋಟಿ ರೂ
- ಗ್ರಾಸಿಂ ಇಂಡಸ್ಟ್ರೀಸ್1,386 ಕೋಟಿ ರೂ
- ಎಸ್‌ಎಫ್‌ಎಕ್ಸ್ ಇಂಡಿಯಾ 9,298 ಕೋಟಿ ರೂ
- ಸ್ನೀಡರ್ ಎಲೆಕ್ಟ್ರಿಕ್ ಐಟಿ ಬಿಝಿನೆಸ್, ಎಚ್‌ಎಸ್‌ಎಸ್ ಟೆಕ್ಸ್‌ಟೈಲ್ಸ್ 740 ಕೋಟಿ ರೂ
- ಸ್ನೈಡರ್ ಎಲೆಕ್ಟ್ರಿಕ್ ಬಿಸಿನೆಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ 1,520.75 ಕೋಟಿ ರೂ
- ಕ್ಯೂಪಿಐಎಐ ಇಂಡಿಯಾ 1,136 ಕೋಟಿ ರೂ
- ಟೊಯೋಟಾ ಇಂಡಸ್ಟ್ರೀಸ್ ಎಂಜಿನ್ ಇಂಡಿಯಾ ಲಿಮಿಟೆಡ್ 1,330 ಕೋಟಿ ರೂ
- ರಿಲಯನ್ಸ್ ಕನ್ಸೂಮರ್ ಪ್ರಾಡಕ್ಟ್ಸ್ 1,622 ಕೋಟಿ ರೂ.
- ಎಂಬೆಸಿ ಇಂಡಸ್ಟ್ರಿಯಲ್ ಪಾರ್ಕ್ 80 ಕೋಟಿ ರೂ.
- ಬಾಲಾಜಿ ವೇಫರ್ಸ್ ಕಂಪನಿಗಳು 298.75 ಕೋಟಿ

**ಸರಕಾರಕ್ಕೆ 135 ಕೋಟಿ ಡಿವಿಡೆಂಡ್ ಚೆಕ್ ಹಸ್ತಾಂತರ**

ಸಾರ್ವಜನಿಕ ವಲಯದ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತವು (ಕೆಎಸ್ಡಿಎಲ್) 2024-25ನೇ ಸಾಲಿನ ಲಾಭದಲ್ಲಿ 135 ಕೋಟಿ ರೂಪಾಯಿಗಳನ್ನು ಶುಕ್ರವಾರ ಸರಕಾರಕ್ಕೆ ಹಸ್ತಾಂತರಿಸಿತು. ಸಂಸ್ಥೆಯ ಪರವಾಗಿ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಮತ್ತು ಕೆಎಸ್ಡಿಎಲ್ ಅಧ್ಯಕ್ಷ ಅಪ್ಪಾಜಿ ನಾಡಗೌಡ ಅವರು ಈ ಮೊತ್ತದ ಚೆಕ್ ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ನೀಡಿದರು. ಈ ಕಾರ್ಯಕ್ರಮವು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆಯಿತು.

ಸಚಿವ ಪಾಟೀಲರು ಮಾತನಾಡಿ, ಕೆಎಸ್ಡಿಎಲ್ ಸಂಸ್ಥೆಯು ಕಳೆದ ಹಣಕಾಸು ವರ್ಷದಲ್ಲಿ 1,700 ಕೋಟಿ ರೂಪಾಯಿ ವಹಿವಾಟು ನಡೆಸಿ, 451 ಕೋಟಿ ರೂ. ಲಾಭವನ್ನು ಕಂಡಿದೆ. ಇದರ ಪೈಕಿ ನಿಯಮದಂತೆ ಶೇ.30ರಷ್ಟು ಲಾಭಾಂಶವನ್ನು ಸರಕಾರಕ್ಕೆ ಕೊಡಲಾಗಿದೆ. ವಹಿವಾಟು, ಲಾಭ ಮತ್ತು ಲಾಭಾಂಶ ಮೂರರಲ್ಲೂ ಇದು ಸಾರ್ವಕಾಲಿಕ ದಾಖಲೆ ಆಗಿದೆ ಎಂದು ಹೇಳಿದ್ದಾರೆ. 2022-23ರಲ್ಲಿ ಬಿಜೆಪಿ ಸರಕಾರವಿದ್ದಾಗ ಸಂಸ್ಥೆಯ ವತಿಯಿಂದ ಸರಕಾರಕ್ಕೆ 54 ಕೋಟಿ ರೂಪಾಯಿ ಡಿವಿಡೆಂಡ್ (ಲಾಭಾಂಶ) ಕೊಡಲಾಗಿತ್ತು. 2023-24ರಲ್ಲಿ 108 ಕೋಟಿ ರೂ. ಲಾಭಾಂಶ ಹಸ್ತಾಂತರಿಸಲಾಗಿತ್ತು. ಇದಕ್ಕೆ ಹೋಲಿಸಿದರೆ ಲಾಭಾಂಶದಲ್ಲಿ ಈಗ 27 ಕೋಟಿ ರೂ. ಹೆಚ್ಚಳವಾಗಿದೆ. ಮುಂಬರುವ ವರ್ಷಗಳಲ್ಲಿ ಇದು ಮತ್ತಷ್ಟು ಹೆಚ್ಚಲಿದೆ ಎಂದು ಅವರು ನುಡಿದಿದ್ದಾರೆ. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಕೆ.ಜೆ.ಜಾರ್ಜ್, ಪ್ರಿಯಾಂಕ್ ಖರ್ಗೆ, ಡಾ.ಎಂ.ಸಿ.ಸುಧಾಕರ, ಸಂತೋಷ ಲಾಡ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಡಾ.ಪಿ.ಕೆ.ಪ್ರಶಾಂತ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹12,437/Gram24ct ₹11,400/Gram22ct ಬೆಳ್ಳಿ: ₹157.00/Gram

# ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಬಂಡವಾಳ ಹೂಡಿಕೆ ಆಕರ್ಷಣೆ ಸಭೆ

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ರಸ್ತೆ ಗುಂಡಿ ಕುರಿತಾಗಿ ಪ್ರಮುಖ ಉದ್ಯಮಿಗಳು ಆಕ್ಷೇಪ ಎತ್ತಿದ ಬೆನ್ನಲ್ಲೇ ಉದ್ಯಮ ಸ್ನೇಹಿ ವಾತಾವರಣ ನಿರ್ಮಾಣ ಮಾಡಲು ಸರ್ಕಾರದ ಮುಂದಾಗಿದೆ. ಈ ನಿಟ್ಟಿನಲ್ಲಿ ಸಿಎಂ ಸಿದ್ದರಾಮಯ್ಯ ಅವರು ಅಧಿಕಾರಿಗಳಿಗೆ ಕೆಲವೊಂದು ಖಡಕ್ ಸೂಚನೆ ನೀಡಿದ್ದಾರೆ.

ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆದ ಬಂಡವಾಳ ಹೂಡಿಕೆ ಆಕರ್ಷಣೆ ಸಭೆಯಲ್ಲಿ ಪ್ರಮುಖ ವಿಚಾರಗಳ ಬಗ್ಗೆ ಚರ್ಚೆ ನಡೆಯಿತು. ಅಲ್ಲದೆ, ರಾಜ್ಯದಲ್ಲಿ ಬಂಡವಾಳ ಹೂಡಿಕೆದಾರ ಸ್ನೇಹಿ ವಾತಾವರಣವನ್ನು ಇನ್ನಷ್ಟು ಉತ್ತಮಪಡಿಸಬೇಕು ಎಂಬ ನಿಟ್ಟಿನಲ್ಲಿ ಸಿಎಂ ಸಿದ್ದರಾಮಯ್ಯ ಪ್ರಮುಖ ಸಲಹೆಗಳನ್ನು ನೀಡಿದ್ದಾರೆ.



**ಉದ್ಯಮ ಸ್ನೇಹಿ ವಾತಾವರಣ ನಿರ್ಮಿಸಿ:** ಉದ್ಯಮ ಸ್ನೇಹಿ ವಾತಾವರಣ ನಿರ್ಮಾಣಕ್ಕೆ ಭೂ ಬಳಕೆ ಬದಲಾವಣೆ ಪ್ರಕ್ರಿಯೆ ಸೇರಿದಂತೆ ವಿವಿಧ ಎನ್‌ಒಸಿಗಳ ನೀಡಿಕೆಯ ಕಾಲಮಿತಿಯನ್ನು ಕಡಿಮೆ ಮಾಡಬೇಕು ಎಂದು ಸೂಚಿಸಿದ್ದಾರೆ. ಅಲ್ಲದೆ, ಕಾಲಮಿತಿಯನ್ನು ಕಡಿಮೆ ಮಾಡುವ ಬಗ್ಗೆ ವಿವರವಾದ ಪ್ರಸ್ತಾವನೆಯನ್ನು ಸಲ್ಲಿಸಬೇಕು. ಯಾವುದೇ ಕಾರಣಕ್ಕೂ ವಿಳಂಬಕ್ಕೆ ಅವಕಾಶ ನೀಡಬಾರದು ಎಂದು ಅಧಿಕಾರಿಗಳಿಗೆ ತಿಳಿಸಿದರು. ಇದೇ ವೇಳೆ ಅಗತ್ಯ ಮೂಲಸೌಲಭ್ಯಗಳ ಕುರಿತು ಮಾತನಾಡಿ, ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತು ಅಗ್ನಿಶಾಮಕ ಇಲಾಖೆ ಅನುಮೋದನೆ ವಿಳಂಬವಾಗುತ್ತಿದ್ದು, ಇದನ್ನು ತ್ವರಿತಗೊಳಿಸಬೇಕು.

ಇದಕ್ಕಾಗಿ ಮಂಡಳಿಯ ನಿಯಮಾವಳಿಯಲ್ಲಿ ಅಗತ್ಯ ಬದಲಾವಣೆಗಳನ್ನು ಮಾಡಬೇಕು. ಕೈಗಾರಿಕೆಗಳಿಗೆ ರಸ್ತೆ, ನೀರು, ವಿದ್ಯುತ್ ಸೇರಿದಂತೆ ಅಗತ್ಯ ಮೂಲಸೌಲಭ್ಯಗಳನ್ನು ಒದಗಿಸುವ ಕುರಿತಾಗಿ ಸಂಬಂಧಪಟ್ಟ ಇಲಾಖೆಗಳು ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕು ಎಂದು ಮುಖ್ಯಮಂತ್ರಿ ಅವರು ಸೂಚಿಸಿದರು.

**ಈ ವರ್ಷ ರಾಜ್ಯದಲ್ಲಿ 10 ಲಕ್ಷ ಕೋಟಿ ಹೂಡಿಕೆ:** ಅಲ್ಲದೇ ಹೂಡಿಕೆಗಳ ಕುರಿತು ಮಾಹಿತಿ ನೀಡಿ ರಾಜ್ಯದಲ್ಲಿ ಈ ವರ್ಷದ ಆರಂಭದಲ್ಲಿ ನಡೆದ ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ರೂ.10.27 ಲಕ್ಷ ಕೋಟಿ ಹೂಡಿಕೆ ಆಕರ್ಷಿಸಲಾಗಿದ್ದು, ಈಗಾಗಲೇ ಶೇ.60ರಷ್ಟು ಹೂಡಿಕೆಗಳು ಅನುಷ್ಠಾನ ಹಂತದಲ್ಲಿವೆ ಎಂದು ವಿವರ ನೀಡಿದರು. ಇನ್ನೂ ಸುಮಾರು ರೂ.1.5ಲಕ್ಷ ಕೋಟಿಗೂ ಹೆಚ್ಚಿನ ಬಂಡವಾಳ ಹೂಡಿಕೆ ಪ್ರಸ್ತಾವನೆಗಳು ವಿವಿಧ ಹಂತದಲ್ಲಿವೆ ಎಂದು ಹೇಳಿದ ಮುಖ್ಯಮಂತ್ರಿಗಳು, ನಿರ್ಲಕ್ಷ್ಯ ವಹಿಸುತ್ತಿರುವ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಸುಪ್ರೀಂ ಕೋರ್ಟ್‌ನ ನೆಪ ಹೇಳಿಕೊಂಡು ಅಧಿಕಾರಿಗಳು ಕೂರಬಾರದು. ಅಕ್ಕ ಪಕ್ಕದ ರಾಜ್ಯಗಳಿಗೂ ಇರುವುದೂ ಇದೇ ಸುಪ್ರೀಂ ಕೋರ್ಟ್. ಬೇರೆ ರಾಜ್ಯಗಳಿಗೆ ಆಗದ ಸಮಸ್ಯೆ ನಮಗೆ ಆಗತ್ತೆ ಅನ್ನುವ ನೆಪ ಹೇಳಿಕೊಂಡು ಕೂತರೆ ಕ್ರಮ ಜರುಗಿಸಬೇಕಾಗತ್ತೆ ಎಂದು ಸಿಎಂ ಅಧಿಕಾರಿಗಳಿಗೆ ಖಡಕ್ ಎಚ್ಚರಿಕೆ ನೀಡಿದ್ದಾರೆ.

## ಕರ್ನೂಲ್ ಬಸ್ ದುರಂತ ಸ್ಥಳಕ್ಕೆ ತೆರಳಿದ ಕರ್ನಾಟಕದ ಸಾರಿಗೆ ಇಲಾಖೆ ಅಧಿಕಾರಿಗಳ ತಂಡ

• **ಉದಯವಾಹಿನಿ, ಬೆಂಗಳೂರು**

ಆಂಧ್ರಪ್ರದೇಶದ ಕರ್ನೂಲ್‌ನ ಬೆಂಗಳೂರು-ಹೈದರಾಬಾದ್ ಹೆದ್ದಾರಿಯಲ್ಲಿ ಸಂಭವಿಸಿದ ಅಪಘಾತದಲ್ಲಿ ಬಸ್‌ಗೆ ಬೆಂಕಿ ತಗುಲಿ 15 ಮಂದಿ ಸಜೀವ ದಹನವಾಗಿದ್ದು, ಸ್ಥಳಕ್ಕೆ ರಾಜ್ಯದ ಸಾರಿಗೆ ಇಲಾಖೆ ಅಧಿಕಾರಿಗಳು ಹಾಗೂ ಪೊಲೀಸ್ ತಂಡ ತೆರಳಿದೆ. ಸ್ಥಳಕ್ಕೆ ತೆರಳಿ ಕನ್ನಡಿಗರು ಯಾರಾದರೂ ಅಪಾಯಕ್ಕೆ ಸಿಲುಕಿದ್ದಾರೆಯೇ ಎಂಬುದನ್ನು ಪರಿಶೀಲಿಸಿ ನೆರವಾಗುವಂತೆ ಬಾಗೇಪಲ್ಲಿ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಅವರು ಬೆಳಿಗ್ಗೆಯೇ ಸ್ಥಳಕ್ಕೆ ತೆರಳಿದ್ದಾರೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ತಿಳಿಸಿದ್ದಾರೆ. ಬೆಂಕಿಗೆ ಆಹುತಿಯಾಗಿರುವ ಬಸ್ ದೇಶದಾದ್ಯಂತ ಸಂಚರಿಸುವ ಪರ್ಮಿಟ್ ಹೊಂದಿತ್ತು ಎಂಬುದು ತಿಳಿದುಬಂದಿದೆ ಎಂದು ಸಾರಿಗೆ ಇಲಾಖೆಯ ಅಧಿಕಾರಿಗಳು ತಿಳಿಸಿದರು.

## ಧರ್ಮಸ್ಥಳ ಪ್ರಕರಣ: ಶೀಘ್ರವೇ ಎಸ್‌ಐಟಿ ನ್ಯಾಯಾಲಯಕ್ಕೆ ವರದಿ ಸಲ್ಲಿಕೆ ಸಾಧ್ಯತೆ

• **ಉದಯವಾಹಿನಿ, ಬೆಂಗಳೂರು**

ಧರ್ಮಸ್ಥಳ ಸಾಮೂಹಿಕ ಅಂತ್ಯಕ್ರಿಯೆ ಪ್ರಕರಣದ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡ ಈ ವಾರದ ಅಂತ್ಯದ ವೇಳೆಗೆ ನ್ಯಾಯಾಲಯಕ್ಕೆ ತನ್ನ ವರದಿಯನ್ನು ಸಲ್ಲಿಸುವ ಸಾಧ್ಯತೆಯಿದೆ. ಚಿನ್ನಯ್ಯ ಎಂಬ ವ್ಯಕ್ತಿ ನೀಡಿದ ದೂರಿನ ಮೇರೆಗೆ ಜುಲೈ 4 ರಂದು ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ನೂರಾರು ಶವಗಳನ್ನು ಹೂಳಿರುವುದಾಗಿ ದೂರುದಾರ ಬೆಳ್ತಂಗಡಿ ನ್ಯಾಯಾಲಯಕ್ಕೆ ಹಾಜರಾಗಿ ವಿವರವಾದ ಹೇಳಿಕೆ ನೀಡಿದ್ದರು. ಬಳಿಕ, ಸರ್ಕಾರವು ತನಿಖೆಯನ್ನು ಪ್ರಣಬ್ ಮೊಹಂತಿ ನೇತೃತ್ವದ ಎಸ್‌ಐಟಿಗೆ ಹಸ್ತಾಂತರಿಸಿತು. ಚಿನ್ನಯ್ಯ ಅವರ ಹೇಳಿಕೆಯನ್ನು ಆಧರಿಸಿದ ಎಸ್‌ಐಟಿ, ಅವರು ಸೂಚಿಸಿದ ಸ್ಥಳಗಳಲ್ಲಿ ಅಸ್ಥಿಪಂಜರಗಳನ್ನು ಹುಡುಕಿತು.

ಯಾವುದೇ ಅವಶೇಷಗಳು ಪತ್ತೆಯಾಗದಿದ್ದಾಗ, ಚಿನ್ನಯ್ಯ ವಿರುದ್ಧ ಅನುಮಾನಗಳು ಹುಟ್ಟಿಕೊಂಡವು. ಸುಳ್ಳು ಸಾಕ್ಷ್ಯ ನುಡಿದ ಆರೋಪದ ಮೇಲೆ ಎಸ್‌ಐಟಿ ಅವರನ್ನು ಬಂಧಿಸಿತು. ಧರ್ಮಸ್ಥಳದಲ್ಲಿ ನೂರಾರು ಶವಗಳನ್ನು ಹೂಳಲಾಗಿದೆ ಎಂಬ ಹೇಳಿಕೆಯ ಆಧಾರದ ಮೇಲೆ, ಪೊಲೀಸ್ ಠಾಣೆ ಮತ್ತು ಗ್ರಾಮ ಪಂಚಾಯಿತಿಯ ದಾಖಲೆಗಳನ್ನು ಪರಿಶೀಲಿಸಲಾಯಿತು. ಸಿಬ್ಬಂದಿ ಮತ್ತು ನಿವೃತ್ತ ಸಿಬ್ಬಂದಿಯನ್ನು ವಿಚಾರಣೆ ನಡೆಸಲಾಯಿತು. ಈಗ ತನಿಖೆ ಅಂತಿಮ ಹಂತಕ್ಕೆ ತಲುಪಿದೆ ಎಂದು ಒಂದು ನಿರ್ದಿಷ್ಟ ಗುಂಪು ಅದನ್ನು ಜೀವಂತವಾಗಿಡಲು ಸರ್ಕಾರಕ್ಕೆ ಹೊಸ ದೂರು ಸಲ್ಲಿಸಲು ಪ್ರಯತ್ನಿಸಿದೆ. ಧರ್ಮಸ್ಥಳ ಪ್ರಕರಣದಲ್ಲಿ ಸತ್ಯ ಹೊರಗೆ ಬರಬೇಕೆಂದು ಮುಖ್ಯಮಂತ್ರಿ ಮತ್ತು ಸಚಿವರುಗಳಿಗೆ ದೂರು ಸಲ್ಲಿಸಲಾಗಿದೆ.

## ತಾಂತ್ರಿಕ ವಿವರ ಕೋರಿ ಚುನಾವಣಾ ಆಯೋಗಕ್ಕೆ ಎಸ್‌ಐಟಿ ಪತ್ರ

• **ಉದಯವಾಹಿನಿ, ಬೆಂಗಳೂರು**

2023 ರ ಚುನಾವಣೆಗೂ ಮುನ್ನ ಆಳಂದ ವಿಧಾನಸಭಾ ಕ್ಷೇತ್ರದ ಮತದಾರರ ಪಟ್ಟಿಯಿಂದ ಅಕ್ರಮವಾಗಿ ಹೆಸರುಗಳನ್ನು ಅಳಿಸಿದ ಪ್ರಕರಣದ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡ (ಎಸ್‌ಐಟಿ), ತಾಂತ್ರಿಕ ವಿವರ ಕೋರಿ ಚುನಾವಣಾ ಆಯೋಗಕ್ಕೆ ಪತ್ರ ಬರೆದಿದೆ ಎಂದು ತಿಳಿದುಬಂದಿದೆ.

ಫೆಬ್ರವರಿ 2022 ಮತ್ತು ಫೆಬ್ರವರಿ 2023 ರ ನಡುವೆ ಆಳಂದ ಕ್ಷೇತ್ರದ ಮತದಾರರ ಪಟ್ಟಿಯಿಂದ ಹೆಸರುಗಳನ್ನು ಅಳಿಸಲು 6,018 ಫಾರ್ಮ್ 7 ಅರ್ಜಿಗಳನ್ನು ಸಲ್ಲಿಸಲು ಬಳಸಲಾಗಿರುವ ಪೋರ್ಟ್‌ಗಳು, ಐಪಿ ವಿಳಾಸಗಳು ಮತ್ತು ಒಟಿಪಿಗಳಂತಹ ವಿವರಗಳನ್ನು ಎಸ್ ಐಟಿ ಕೋರಿದ್ದು, ಉತ್ತರಕ್ಕಾಗಿ ಕಾಯುತ್ತಿದೆ ಎಂದು ಮೂಲಗಳು ತಿಳಿಸಿವೆ. ಚುನಾವಣಾ ಆಯೋಗದ ವರದಿ ಜೊತೆಗೆ ಗುಪ್ತಚರ ಮಾಹಿತಿ ಸಂಗ್ರಹಿಸಲು ಮುಂದಾಗಿದ್ದು, ಡಿಜಿಟಲ್ ಫೋರೆನ್ಸಿಕ್ ಸಾಧನವಾದ ಇಂಟರ್ನೆಟ್ ಪ್ರೋಟೋಕಾಲ್ ವಿವರ ದಾಖಲೆ (ಐಪಿಡಿಆರ್) ವಿವರಗಳನ್ನು ಪಡೆಯುತ್ತಿದೆ ಎಂದು ತಿಳಿದುಬಂದಿದೆ. ಈ ಮಾಹಿತಿಯಿಂದಾಗಿ ಎಸ್‌ಐಟಿ ಈಗಾಗಲೇ ಕಲಬುರಗಿಯಲ್ಲಿ ಕಾಲ್ ಸೆಂಟರ್ ಮೇಲೆ ದಾಳಿ ನಡೆಸಿದ್ದು, ಅಲ್ಲಿ ನಾಲ್ವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದೆ ಎಂದು ತಿಳಿದುಬಂದಿದೆ. ನಾಲ್ವರ ಪೈಕಿ ಓರ್ವನನ್ನು ಮೊಹಮ್ಮದ್ ಅಕ್ರಮ್ ಎಂದು ಗುರ್ತಿಸಲಾಗಿದ್ದು, ಈತ ಪ್ರಮುಖ ಆರೋಪಿ ಎಂದು ಹೇಳಲಾಗುತ್ತಿದೆ. ಅಕ್ರಮ್, ಅಶ್ಫಾಕ್ ಮತ್ತು ಇತರ ನಾಲ್ವರು ಮತದಾರರ ಪಟ್ಟಿಯಿಂದ ಹೆಸರು ಅಳಿಸುವಿಕೆಗೆ ಪ್ರತಿ ಅರ್ಜಿಗೆ ತಲಾ 80 ರೂ. ಪಡೆದಿದ್ದರು ಎಂದು ತನಿಖೆಯಿಂದ ತಿಳಿದುಬಂದಿದೆ. ಮತದಾರರ ಹೆಸರನ್ನು ಅಳಿಸಲು ಆರೋಪಿಗಳು 75 ಮೊಬೈಲ್ ಫೋನ್‌ಗಳು, ಕಡಿಮೆ ಹಾಗೂ ಮಧ್ಯಮ ಆದಾಯದ ಜನರನ್ನು ಬಳಸಿಕೊಳ್ಳಲಾಗಿದೆ ಎಂದು ಎಸ್‌ಐಟಿ ಅಧಿಕಾರಿಗಳು ತಿಳಿಸಿದ್ದಾರೆ. ಆರೋಪಿಗಳಿಗೆ ಹಣ ಪಾವತಿಯಾಗಿರುವ ವಿಧಾನ ಮತ್ತು ಮೂಲವನ್ನು ತಂಡವು ತನಿಖೆ ನಡೆಸಲಾಗುತ್ತಿದ್ದು, ಈ ಹಾದಿಯನ್ನು ಪತ್ತೆಹಚ್ಚುವುದು ಸವಾಲಾಗಿರಬಹುದು ಎಂದು ಮೂಲಗಳು ತಿಳಿಸಿವೆ.

## ಒತ್ತೆ ಇಟ್ಟ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲು ಸಾಧ್ಯವಿಲ್ಲ’



• **ಉದಯವಾಹಿನಿ, ಬೆಂಗಳೂರು**

ಸಾಲಗಾರರು ಬ್ಯಾಂಕಿನಿಂದ ಸಾಲ ಪಡೆಯಲು ಒತ್ತೆ ಇಟ್ಟ ಆಸ್ತಿಗಳ ಮುಟ್ಟುಗೋಲು ಹಾಕಿಕೊಳ್ಳುವ ಕುರಿತು ಜಾರಿ ನಿರ್ದೇಶನಾಲಯ (ED) ಹೊರಡಿಸಿದ ಮುಟ್ಟುಗೋಲು ಆದೇಶ ಮತ್ತು ನ್ಯಾಯನಿರ್ಣಯ ಪ್ರಾಧಿಕಾರ ಹೊರಡಿಸಿದ್ದ ದೃಢೀಕರಣ ಆದೇಶ ರದ್ದುಗೊಳಿಸಿ ಮೇಲ್ಮನವಿ ನ್ಯಾಯಮಂಡಳಿ ಹೊರಡಿಸಿದ ಆದೇಶವನ್ನು ಕರ್ನಾಟಕ ಹೈಕೋರ್ಟ್ ಎತ್ತಿಹಿಡಿದಿದೆ.

ಪ್ರಾಥಮಿಕ ತನಿಖೆಯಲ್ಲಿ ಅಪರಾಧದ ಆದಾಯದಿಂದ ಸ್ವಾಧೀನಪಡಿಸಿಕೊಂಡ ಆಸ್ತಿಗಳು ಎಂದು ಕಂಡುಬಂದರೆ ಮಾತ್ರ ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ (PMLA) ಅಡಿಯಲ್ಲಿ ಮುಟ್ಟುಗೋಲು ಪ್ರಕ್ರಿಯೆಗೆ ಒಳಪಡಿಸಬಹುದು ಎಂದು ಹೈಕೋರ್ಟ್ ಹೇಳಿದೆ. ಸಾಲಗಳ ವಿರುದ್ಧ ಮೇಲಾಧಾರ ಭದ್ರತೆಯಾಗಿ ನೀಡಲಾಗುವ ಆಸ್ತಿಗಳು PMLAಯ ಸೆಕ್ಷನ್ 2 (u) ಅಡಿಯಲ್ಲಿ ವ್ಯಾಖ್ಯಾನಿಸಲಾದ ಅಪರಾಧದ ಆದಾಯ ಎಂದು ವಿವರಿಸಲು ಸಾಧ್ಯವಿಲ್ಲ ಎಂದು ಹೈಕೋರ್ಟ್ ತಿಳಿಸಿದೆ. ಈ ಆಸ್ತಿಗಳನ್ನು ಅಪರಾಧದ ಆದಾಯದಿಂದ ಸ್ವಾಧೀನಪಡಿಸಿಕೊಂಡಿಲ್ಲ ಮತ್ತು ಕೇಂದ್ರವು ಮುಟ್ಟುಗೋಲು ಹಾಕಿಕೊಳ್ಳಲು ಸಾಧ್ಯವಿಲ್ಲ ಎಂದು ಹೇಳಿ, ನ್ಯಾಯಮೂರ್ತಿ ಡಿ ಕೆ ಸಿಂಗ್ ಮತ್ತು ನ್ಯಾಯಮೂರ್ತಿ ವೆಂಕಟೇಶ್ ನಾಯಕ್ ಟಿ ಅವರ ವಿಭಾಗೀಯ ಪೀಠ, ಜಾರಿ ನಿರ್ದೇಶನಾಲಯ ಸಲ್ಲಿಸಿದ್ದ ಮೇಲ್ಮನವಿಯನ್ನು ವಜಾಗೊಳಿಸಿದೆ.


# ಕೈಗಾರಿಕೆಗಳಿಗೆ ಎನ್‌ಒಸಿ ನೀಡಿಕೆ ಕಾಲಮಿತಿ ಕಡಿಮೆ ಮಾಡಲು ಸಿಎಂ ಸೂಚನೆ

### ಸಿಎಂ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ವಿಧಾನಸೌಧ ಸಭಾಂಗಣದಲ್ಲಿ ಬಂಡವಾಳ ಹೂಡಿಕೆ ಆಕರ್ಷಣೆ ಸಭೆ

• **ಉದಯವಾಹಿನಿ, ಬೆಂಗಳೂರು**

ಸಿಎಂ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ವಿಧಾನಸೌಧ ಸಭಾಂಗಣದಲ್ಲಿ ಬಂಡವಾಳ ಹೂಡಿಕೆ ಆಕರ್ಷಣೆ ಸಭೆ ನಡೆದಿದ್ದು, ಹಲವು ಪ್ರಮುಖ ವಿಷಯಗಳ ಬಗ್ಗೆ ಚರ್ಚೆ ನಡೆದಿದೆ. ಈ ವೇಳೆ ಮಾತನಾಡಿರುವ ಸಿಎಂ, ರಾಜ್ಯದಲ್ಲಿ ಬಂಡವಾಳ ಹೂಡಿಕೆದಾರ ಸ್ನೇಹಿ ವಾತಾವರಣವನ್ನು ಇನ್ನಷ್ಟು ಉತ್ತಮ ಪಡಿಸಬೇಕು.

ಇದಕ್ಕಾಗಿ ಭೂ ಬಳಕೆ ಬದಲಾವಣೆ ಪ್ರಕ್ರಿಯೆ ಸೇರಿದಂತೆ ವಿವಿಧ ಎನ್‌ಒಸಿಗಳ ನೀಡಿಕೆಯ ಕಾಲಮಿತಿಯನ್ನು ಕಡಿಮೆ ಮಾಡಬೇಕು. ಈ ಬಗ್ಗೆ ವಿವರವಾದ ಪ್ರಸ್ತಾವನೆ ಸಲ್ಲಿಸಬೇಕು. ಯಾವುದೇ ಕಾರಣಕ್ಕೂ ವಿಳಂಬಕ್ಕೆ ಅವಕಾಶ ನೀಡಬಾರದು ಎಂದು ಸೂಚನೆ ನೀಡಿದ್ದಾರೆ.




**ಭೂ ಬಳಕೆ ಬದಲಾವಣೆ ಪ್ರಕ್ರಿಯೆ**

ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತು ಅಗ್ನಿ ಶಾಮಕ ಇಲಾಖೆ ಅನುಮೋದನೆ ವಿಳಂಬವಾಗುತ್ತಿದ್ದು, ಇದನ್ನು ತ್ವರಿತಗೊಳಿಸಬೇಕು. ಇದಕ್ಕಾಗಿ ಮಂಡಳಿಯ ನಿಯಮಾವಳಿಯಲ್ಲಿ ಅಗತ್ಯ ಬದಲಾವಣೆಗಳನ್ನು ಮಾಡಬೇಕು. ಕೈಗಾರಿಕೆಗಳಿಗೆ ರಸ್ತೆ, ನೀರು, ವಿದ್ಯುತ್ ಸೇರಿದಂತೆ ಅಗತ್ಯ ಮೂಲಸೌಲಭ್ಯಗಳನ್ನು ಒದಗಿಸುವ ಕುರಿತಾಗಿ ಸಂಬಂಧಪಟ್ಟ ಇಲಾಖೆಗಳು ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕು ಎಂದು ಸಿಎಂ ಸೂಚಿಸಿದರು.

ರಾಜ್ಯದಲ್ಲಿ ಈ ವರ್ಷದ ಆರಂಭದಲ್ಲಿ ನಡೆದ ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ರೂ.10.27 ಲಕ್ಷ ಕೋಟಿ ಹೂಡಿಕೆ ಆಕರ್ಷಿಸಲಾಗಿದ್ದು, ಈಗಾಗಲೇ ಶೇ.60ರಷ್ಟು ಹೂಡಿಕೆಗಳು ಅನುಷ್ಠಾನ ಹಂತದಲ್ಲಿವೆ. ಸುಮಾರು ರೂ.1.5ಲಕ್ಷ ಕೋಟಿಗೂ ಹೆಚ್ಚಿನ ಬಂಡವಾಳ ಹೂಡಿಕೆ ಪ್ರಸ್ತಾವನೆಗಳು ವಿವಿಧ ಹಂತದಲ್ಲಿವೆ.

**ಈ ವೇಳೆ ಸಿಎಂ ಪ್ರತಿಕ್ರಿಯಿಸಿ, ರಾಜ್ಯದಲ್ಲಿ ಬಂಡವಾಳ ಹೂಡಿಕೆ ಹೆಚ್ಚಾದರೆ ಮಾತ್ರ ಉದ್ಯೋಗ ಸೃಷ್ಟಿ ಮಾಡಲು ಸಾಧ್ಯವಿದೆ. ಇದಕ್ಕಾಗಿ ಭೂ ಬಳಕೆ ಬದಲಾವಣೆ ಪ್ರಕ್ರಿಯೆ ಸೇರಿದಂತೆ ವಿವಿಧ ಎನ್‌ಒಸಿಗಳ ನೀಡಿಕೆಯ ಕಾಲಮಿತಿಯನ್ನು ಕಡಿಮೆ ಮಾಡಬೇಕು. ಎಲ್ಲಾ ಸಂಬಂಧಪಟ್ಟ ಇಲಾಖೆಗಳು ಅನುಮೋದನೆ ನೀಡುವ ಕಾಲಮಿತಿಯನ್ನು ಮರು ನಿಗದಿಪಡಿಸಬೇಕು. ಕಾಲಮಿತಿಯಲ್ಲಿ ಅನುಮೋದನೆಗಳನ್ನು ನೀಡಲು ವಿಫಲರಾಗುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.**

ಸುಪ್ರೀಂಕೋರ್ಟ್‌ನ ನೆಪ ಹೇಳಿಕೊಂಡು ಅಧಿಕಾರಿಗಳು ಕೂರಬಾರದು. ಅಕ್ಕ ಪಕ್ಕದ ರಾಜ್ಯಗಳಿಗೂ ಇರುವುದೂ ಇದೇ ಸುಪ್ರೀಂಕೋರ್ಟ್. ಬೇರೆ ರಾಜ್ಯಗಳಿಗೆ ಆಗದ ಸಮಸ್ಯೆ ನಮಗೆ ಆಗತ್ತೆ ಅನ್ನುವ ನೆಪ ಹೇಳಿಕೊಂಡು ಕೂತರೆ ಕ್ರಮ ಜರುಗಿಸಬೇಕಾಗತ್ತೆ ಎಂದು ಸಿಎಂ ಎಚ್ಚರಿಸಿದರು.

**ಕೈಗಾರಿಕೆಗಳಿಗೆ ಅನುಮತಿ ನೀಡುವ ಪ್ರಕ್ರಿಯೆ ವೇಗ ಪಡೆಯಬೇಕು:** ರಾಜ್ಯದಲ್ಲಿ work force ಹೆಚ್ಚಾಗಿದೆ.

ಕೌಶಲ್ಯಯುತ labour force ಕೂಡ ರಾಜ್ಯದಲ್ಲಿ ಹೆಚ್ಚಾಗಿದೆ. ಹೀಗಾಗಿ ಉದ್ಯೋಗ ಸೃಷ್ಟಿ ರಾಜ್ಯದಲ್ಲಿ ಹೆಚ್ಚೆಚ್ಚು ಆಗುತ್ತಿದೆ. ಕೈಗಾರಿಕೆಗಳಿಗೆ ಅನುಮತಿ ನೀಡುವ ಮತ್ತಿತರ ವಿಚಾರದಲ್ಲಿ ಪ್ರಕ್ರಿಯೆ ಇನ್ನಷ್ಟು ವೇಗ ಪಡೆಯಬೇಕು. ಇದನ್ನು ಅಧಿಕಾರಿಗಳು ಸರಿಯಾಗಿ ಅರ್ಥ ಮಾಡಿಕೊಳ್ಳಬೇಕು. ನೆಪಗಳನ್ನು ಹೇಳಿಕೊಂಡು ವಿಳಂಬ ಮಾಡಬಾರದು ಎನ್ನುವ ಅಭಿಪ್ರಾಯವನ್ನು ಸಚಿವ ಪ್ರಿಯಾಂಕ್ ಖರ್ಗೆಯವರು ಸಭೆಯಲ್ಲಿ ಪ್ರಸ್ತಾಪಿಸಿದರು. ತಮಿಳುನಾಡಿನಲ್ಲಿ 51 SEZ ಗಳಿದ್ದು ಒಟ್ಟಾರೆ 8.9% ಕೊಡುಗೆ ನೀಡುತ್ತಿವೆ. ಆದರೆ, ರಾಜ್ಯದಲ್ಲಿ ಕೇವಲ 37 SEZ (special economic zone) ಗಳಿದ್ದು ನಾವು 8.2% ರಷ್ಟು ಕೊಡುಗೆ ನೀಡುತ್ತಿದ್ದೇವೆ. ಇದರಲ್ಲೂ ರಾಜ್ಯದ ಕೊಡುಗೆಯೇ ಹೆಚ್ಚಾಗಿದೆ. ಇಂಥ ಅನುಕೂಲಕರ ಪರಿಸ್ಥಿತಿಯನ್ನು ಅಧಿಕಾರಿಗಳು ಗಮನಿಸುತ್ತಿಲ್ಲ ಎಂದು ಪ್ರಿಯಾಂಕ್ ಖರ್ಗೆಯವರು ಮುಖ್ಯಮಂತ್ರಿಗಳ ಗಮನಕ್ಕೆ ತಂದರು.


## ಕೆಎಸ್‌ಡಿಎಲ್ ಸರ್ಕಾರಕ್ಕೆ ದಾಖಲೆಯ 135 ಕೋಟಿ ರೂ.ಡಿವಿಡೆಂಡ್ ಚೆಕ್ ಹಸ್ತಾಂತರ

• **ಉದಯವಾಹಿನಿ, ಬೆಂಗಳೂರು**

ಸಾರ್ವಜನಿಕ ವಲಯದ ಕರ್ನಾಟಕ ಸಾಬೂನು ಮಾರ್ಜಕ ನಿಯಮಿತವು 2024-25ನೇ ಸಾಲಿನ ಲಾಭದಲ್ಲಿ 135 ಕೋಟಿ ರೂಪಾಯಿಗಳನ್ನು ಸರ್ಕಾರಕ್ಕೆ ಹಸ್ತಾಂತರಿಸಿತು.

ಸಂಸ್ಥೆಯ ಪರವಾಗಿ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ ಪಾಟೀಲ್ ಮತ್ತು ಕೆಎಸ್‌ಡಿಎಲ್ ಅಧ್ಯಕ್ಷ ಅಪ್ಪಾಜಿ ನಾಡಗೌಡ ಅವರು ಈ ಮೊತ್ತದ ಚೆಕ್ ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ನೀಡಿದರು. ಈ ಕಾರ್ಯಕ್ರಮವು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆಯಿತು.

ಈ ವೇಳೆ ಸಚಿವ ಪಾಟೀಲ್ ಮಾತನಾಡಿ, ಕೆಎಸ್‌ಡಿಎಲ್ ಸಂಸ್ಥೆಯು ಕಳೆದ ಹಣಕಾಸು ವರ್ಷದಲ್ಲಿ 1,700 ಕೋಟಿ ರೂಪಾಯಿ ವಹಿವಾಟು ನಡೆಸಿ, 451 ಕೋಟಿ ರೂ.ಲಾಭ ಕಂಡಿದೆ. ಇದರ ಪೈಕಿ ನಿಯಮದಂತೆ ಶೇ.30ರಷ್ಟು ಲಾಭಾಂಶವನ್ನು ಸರ್ಕಾರಕ್ಕೆ ಕೊಡಲಾಗಿದೆ. ವಹಿವಾಟು, ಲಾಭ ಮತ್ತು ಲಾಭಾಂಶ ಮೂರರಲ್ಲೂ ಇದು ಸಾರ್ವಕಾಲಿಕ ದಾಖಲೆ ಆಗಿದೆ ಎಂದಿದ್ದಾರೆ.




2022-23ರಲ್ಲಿ ಬಿಜೆಪಿ ಸರ್ಕಾರವಿದ್ದಾಗ ಸಂಸ್ಥೆಯ ವತಿಯಿಂದ ಸರ್ಕಾರಕ್ಕೆ 54 ಕೋಟಿ ರೂಪಾಯಿ ಡಿವಿಡೆಂಡ್ (ಲಾಭಾಂಶ) ಕೊಡಲಾಗಿತ್ತು. 2023-24ರಲ್ಲಿ 108 ಕೋಟಿ ರೂ. ಲಾಭಾಂಶ ಹಸ್ತಾಂತರಿಸಲಾಗಿತ್ತು. ಇದಕ್ಕೆ ಹೋಲಿಸಿದರೆ ಲಾಭಾಂಶದಲ್ಲಿ ಈಗ 27 ಕೋಟಿ ರೂ. ಹೆಚ್ಚಳವಾಗಿದೆ. ಮುಂಬರುವ ವರ್ಷಗಳಲ್ಲಿ ಇದು ಮತ್ತಷ್ಟು ಹೆಚ್ಚಲಿದೆ ಎಂದು ಅವರು ನುಡಿದಿದ್ದಾರೆ.

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಕೆ.ಜೆ ಜಾರ್ಜ್, ಪ್ರಿಯಾಂಕ್ ಖರ್ಗೆ, ಡಾ.ಎಂ.ಸಿ ಸುಧಾಕರ್, ಸಂತೋಷ ಲಾಡ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಡಾ.ಪಿ.ಕೆ ಪ್ರಶಾಂತ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಬಿಜೆಪಿ ಮೇಲೆ ಆರೋಪ ಹೊರಿಸಿದ ಈಶ್ವರ್ ಖಂಡ್ರೆ

• **ಉದಯವಾಹಿನಿ, ಬೆಂಗಳೂರು**

ರಾಹುಲ್ ಗಾಂಧಿ ಅವರ ಆರೋಪ ಸತ್ಯವಾದ ಆರೋಪ. ಅಕ್ರಮದಿಂದಲೇ ಬಿಜೆಪಿ ಕೇಂದ್ರದಲ್ಲೂ ಅಧಿಕಾರಕ್ಕೆ ಬಂದಿದೆ. ಕಾಂಗ್ರೆಸ್‌ಗೆ ಒಲವು ಇರುವ ಕಡೆ ಕಾಲ್ ಸೆಂಟರ್ ಸಂಸ್ಥೆಯನ್ನ ಹುಟ್ಟುಹಾಕಿ ಮೋಸ ಮಾಡಿದ್ದಾರೆಂದು ಸಚಿವ ಈಶ್ವರ್ ಖಂಡ್ರೆ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.




ಆಳಂದ ಕ್ಷೇತ್ರದಲ್ಲಿ ಒಂದು ಮತದಾರನ ಚೀಟಿ ಅಕ್ರಮವಾಗಿ ರದ್ದುಪಡಿಸಲು ಅರ್ಜಿ ಸಲ್ಲಿಸಿದ್ದಕ್ಕೆ 80 ರೂ. ಕೂಲಿ ನೀಡಿರುವ ವಿಚಾರವನ್ನು ಎಸ್ ಐಟಿ ತನಿಖೆ ಬಯಲಿಗೆಳೆದಿರುವ ಕುರಿತು ಮಾಧ್ಯಮಗಳೊಂದಿಗೆ ಅವರು ಮಾತನಾಡಿದರು.

**ಒಂದು ಮತ ಕಳವಿಗೆ 80 ರೂ. ಕೂಲಿ**

ಬಿಜೆಪಿ ಎಂದೂ ಜನರ ಮತದಿಂದ, ಬಹುಮತದಿಂದ ಅಧಿಕಾರಕ್ಕೆ ಬಂದಿಲ್ಲ. ಬರೀ ಹಿಂಬಾಗಿಲಿನಿಂದ ಅಧಿಕಾರಕ್ಕೆ ಬಂದಿದೆ. ಅಕ್ರಮ ಮಾಡುವ ಮೂಲಕ ಅಧಿಕಾರಕ್ಕೆ ಬಂದಿದೆ. ಸ್ವಾಯತ್ತ ಸಂಸ್ಥೆಗಳನ್ನ ದುರುಪಯೋಗ ಪಡಿಸಿಕೊಂಡು ಅಧಿಕಾರಕ್ಕೆ ಬಂದಿದೆ. ಚುನಾವಣಾ ಆಯೋಗವನ್ನೇ ದುರುಪಯೋಗ ಮಾಡಿಕೊಂಡಿರೋದು ನಾವು ನೋಡ್ತಾ ಇದ್ದೀವಿ. ರಾಹುಲ್ ಗಾಂಧಿ ಮಾಡಿದ್ದ ಆರೋಪ ಸತ್ಯವಾದ ಆರೋಪ. ತನಿಖೆಯ ಸಂದರ್ಭದಲ್ಲಿ ಅದು ಸಾಬೀತು ಆಗ್ತಾ ಇದೆ ಎಂದು ತಿಳಿಸಿದ್ದಾರೆ.

**ಕಾಂಗ್ರೆಸ್ ಮತದಾನದ ಹಕ್ಕು ಎಲ್ಲರಿಗೂ ಕೊಡಿಸುತ್ತೆ:** ರಾಹುಲ್ ಗಾಂಧಿ ಹೇಳಿಕೆಯನ್ನ ಬಿಜೆಪಿಯವರು ಅಲ್ಲಗಳೆಯುತ್ತಿದ್ದರು.

ಕೆಲವು ಕಡೆ ಕಾಂಗ್ರೆಸ್ ಕಡೆ ಒಲವು ಇದೆ, ಅವರಿಗೆ ಹಣ ನೀಡಿ ಕಾಲ್ ಸೆಂಟರ್ ಮೂಲಕ ಸಂಸ್ಥೆಯನ್ನ ಹುಟ್ಟು ಹಾಕಿದ್ದಾರೆ. ಆಸೆ ತೋರಿಸಿ ಮೋಸ ಮಾಡಿದ್ದಾರೆ. ಮತದಾನದ ಹಕ್ಕನ್ನು ಕಸಿದುಕೊಳ್ಳುವ ಕೆಲಸ ಮಾಡಲಾಗಿದೆ. ಇದು ಪ್ರಜಾಪ್ರಭುತ್ವಕ್ಕೆ ಮಾರಕವಾದದ್ದು. ಇದನ್ನ ತೀವ್ರವಾಗಿ ಖಂಡಿಸಬೇಕು. ಇದು ರಾಜ್ಯ ದೇಶದ್ಯಾಂತ ಚರ್ಚೆ ಆಗ್ತಾಇದೆ. ಕೇಂದ್ರದಲ್ಲೂ ಕೂಡ ಬಿಜೆಪಿ ಅಕ್ರಮದಿಂದಲೇ ಅಧಿಕಾರಕ್ಕೆ ಬಂದಿದೆ. ಕೇಂದ್ರದಲ್ಲಿ ಬಿಜೆಪಿ ಸರ್ಕಾರ ತೊಲಗಬೇಕು ಅನ್ನೊದು ಎಲ್ಲರ ಮನಸ್ಸಿನಲ್ಲಿ ಇದೆ. ಹೀಗಾಗಿ ಇದು ತಾರ್ಕಿಕ ಅಂತ್ಯಕ್ಕೆ ಹೋಗಿ ಸಂವಿಧಾನ ಪ್ರಜಾಪ್ರಭುತ್ವ ಉಳಿಸಬೇಕು. ಮತದಾನದ ಹಕ್ಕು ಎಲ್ಲರಿಗೂ ಸಿಗಬೇಕು. ಇದನ್ನ ನಮ್ಮ ಕಾಂಗ್ರೆಸ್ ಪಕ್ಷ ಮಾಡಲಿದೆ ಎಂದಿದ್ದಾರೆ.

ಇನ್ನೂ ಮುಂದಿನ ನಾಯಕತ್ವ ವಿಚಾರ ಬಗ್ಗೆ ಯತೀಂದ್ರ ಸಿದ್ದರಾಮಯ್ಯ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿ, ಅವರು ಯಾವ ಅರ್ಥದಲ್ಲಿ ಹೇಳಿದ್ದಾರೆ,ಏನ್ ಹೇಳಿದ್ದಾರೆ ಅಂತಾ ಮಾಹಿತಿ ಇಲ್ಲ. ಈಗಾಗಲೇ ಅವರೇ ಸ್ಪಷ್ಟೀಕರಣ ಕೊಟ್ಟಿದ್ದಾರೆ ಅನಿಸುತ್ತೆ ಎಂದು ತಿಳಿಸಿದ್ದಾರೆ.

## ಆರ್‌ಎಸ್‌ಎಸ್ ಪಥಸಂಚಲನ: ಅನುಮತಿ ನಿರ್ಧಾರ ಕಲಬುರಗಿ ಜಿಲ್ಲಾಧಿಕಾರಿಗೆ ಬಿಟ್ಟದ್ದು!

• **ಉದಯವಾಹಿನಿ, ಬೆಂಗಳೂರು**

ಚಿತ್ತಾಪುರದಲ್ಲಿ ಆರ್‌ಎಸ್‌ಎಸ್ ಪಥಸಂಚಲನ ಕುರಿತು ರಾಜ್ಯ ಸರ್ಕಾರದ ಆದೇಶದ ಆಧಾರದ ಮೇಲೆ ಕಲಬುರಗಿ ಜಿಲ್ಲಾಧಿಕಾರಿ ಆ ಜಿಲ್ಲೆಯ ವಿವಿಧ ಸಂಸ್ಥೆಗಳ ಮೆರವಣಿಗೆಗಳು ಮತ್ತು ಇತರ ಚಟುವಟಿಕೆಗಳಿಗೆ ಅನುಮತಿ ನೀಡುತ್ತಾರೆ ಎಂದು ಗೃಹ ಸಚಿವ ಡಾ ಜಿ ಪರಮೇಶ್ವರ್ ಅವರು ಹೇಳಿದರು.

ಸುದ್ದಿಗಾರರನ್ನುದ್ದೇಶಿಸಿ ಮಾತನಾಡಿದ ಅವರು, ನಮ್ಮ ಸರ್ಕಾರ ರಾಷ್ಟ್ರೀಯ ಸ್ವಯಂಸೇವಕ ಸಂಘ ಆರ್‌ಎಸ್‌ಎಸ್ ಅನ್ನು ಗಮನದಲ್ಲಿಟ್ಟುಕೊಂಡು ಆದೇಶ ಹೊರಡಿಸಿಲ್ಲ. ಜವಾಬ್ದಾರಿಯುತ ಸರ್ಕಾರವಾಗಿ, ಸಮಾಜದಲ್ಲಿ ಶಾಂತಿ ಮತ್ತು ಸಾಮರಸ್ಯವನ್ನು ಕದಡುವ ಯಾವುದೇ ಚಟುವಟಿಕೆಯನ್ನು ನಾವು ನೋಡಲು ಬಯಸುವುದಿಲ್ಲ ಎಂದು ಹೇಳಿದರು.

ಸರ್ಕಾರದ ಆದೇಶವು ಆರ್‌ಎಸ್‌ಎಸ್‌ಗೆ ಸಂಬಂಧಿಸಿಲ್ಲ. ಶಾಲಾ ಮೈದಾನಗಳು ಕ್ರೀಡೆ, ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಗೆ ಮಾತ್ರ ಬಳಕೆಯಾಗಬೇಕು. 2013 ರಲ್ಲಿ ಜಗದೀಶ್ ಶೆಟ್ಟರ್ ಮುಖ್ಯಮಂತ್ರಿಯಾಗಿದ್ದಾಗ, ಅವರು ಒಳ್ಳೆಯ ಉದ್ದೇಶದಿಂದ ಆದೇಶ ಹೊರಡಿಸಿದ್ದರು.




ನಾವೂ ಕೂಡ ಅದೇ ಆದೇಶವನ್ನು ಹೊರಡಿಸಿದ್ದೇವೆ. ಸಮಸ್ಯೆಗಳಿಗೆ ಪರಿಹಾರಗಳನ್ನು ಒದಗಿಸುವುದು ಸರ್ಕಾರದ ಕರ್ತವ್ಯ ಎಂದು ತಿಳಿಸಿದರು.

ಸರ್ಕಾರ ಸ್ಪಷ್ಟವಾಗಿ ಆದೇಶ ಹೊರಡಿಸಿದೆ. ಹೆಚ್ಚು ನಿರ್ದಿಷ್ಟವಾಗಿ ಹೇಳುವುದಾದರೆ, ಗೃಹ ಇಲಾಖೆ ಶೀಘ್ರದಲ್ಲೇ ಮಾರ್ಗಸೂಚಿಗಳನ್ನು ಹೊರಡಿಸಲಿದೆ. ಇನ್ನು ಮುಂದೆ ಜಿಲ್ಲಾಡಳಿತಗಳು ಈ ಮಾರ್ಗಸೂಚಿಗಳ ಆಧಾರದ ಮೇಲೆ ನಿರ್ಧಾರಗಳನ್ನು ತೆಗೆದುಕೊಳ್ಳಬೇಕು ಎಂದರು.

ನ.2ರಂದು ಆರ್‌ಎಸ್‌ಎಸ್ ಪಥಸಂಚಲನ ಕುರಿತು ಮಾತನಾಡಿ, ಅದೇ ದಿನ ಇನ್ನೂ ಎರಡು ಸಂಘಟನೆಗಳೂ ಕೂಡ ಅನುಮತಿ ಕೋರಿವೆ. ಈ ಬಗ್ಗೆ ಜಿಲ್ಲಾಡಳಿತ ನಿರ್ಧಾರ ತೆಗೆದುಕೊಳ್ಳಲಿದೆ ಎಂದು ಹೇಳಿದರು. ರಾಜ್ಯದಲ್ಲಿ 15,000 ಕಾನ್‌ಸ್ಟೆಬಲ್ ಹುದ್ದೆಗಳು ಖಾಲಿ ಇವೆ. 4,600 ಕಾನ್‌ಸ್ಟೆಬಲ್‌ಗಳನ್ನು ನೇಮಕ ಮಾಡಿದ ನಂತರ, 5,000 ಹೆಚ್ಚುವರಿ ಕಾನ್‌ಸ್ಟೆಬಲ್‌ಗಳನ್ನು ನೇಮಿಸಲು ಸರ್ಕಾರವು ಮತ್ತೊಂದು ಅಧಿಸೂಚನೆಯನ್ನು ಹೊರಡಿಸಲಿದೆ. ಹೊಸ ನೇಮಕಾತಿಗಳಿಗೆ ತರಬೇತಿ ನೀಡಲು ಇಲಾಖೆಗೆ ಸ್ಥಳಾವಕಾಶದ ಅಗತ್ಯವಿದೆ. ಪ್ರಸ್ತುತ, 545 ಸಬ್ ಇನ್ಸ್‌ಪೆಕ್ಟರ್‌ಗಳು ತರಬೇತಿ ಪಡೆಯುತ್ತಿದ್ದಾರೆ. ಮುಂದಿನ ನಾಲ್ಕು ತಿಂಗಳಲ್ಲಿ ಅವರನ್ನು ಪೊಲೀಸ್ ಠಾಣೆಗಳಿಗೆ ನಿಯೋಜಿಸಲಾಗುವುದು. ಸರ್ಕಾರವು 400 ಹೆಚ್ಚುವರಿ ಸಬ್-ಇನ್ಸ್‌ಪೆಕ್ಟರ್‌ಗಳನ್ನು ನೇಮಿಸಿಕೊಳ್ಳಲು ಅಧಿಸೂಚನೆ ಹೊರಡಿಸಿದೆ ಎಂದು ತಿಳಿಸಿದರು.

**ಪೊಲೀಸ್ ಇಲಾಖೆಯಲ್ಲಿ ಹೊಸ ನೇಮಕಾತಿಗಳ ಕುರಿತು ಮಾತನಾಡಿ, ಮುಂದಿನ ಐದು ದಿನಗಳಲ್ಲಿ ಸರ್ಕಾರವು 4,600 ಕಾನ್‌ಸ್ಟೆಬಲ್‌ಗಳನ್ನು ನೇಮಿಸಿಕೊಳ್ಳಲು ಅಧಿಸೂಚನೆಯನ್ನು ಹೊರಡಿಸಲಿದೆ ಎಂದು ಹೇಳಿದರು.**

## ಬದಲಾಯ್ತು ಕರ್ನಾಟಕ ಪೊಲೀಸ್ ಪೇದೆಗಳ ಟೋಪಿ

• **ಉದಯವಾಹಿನಿ, ಬೆಂಗಳೂರು**

ಅಕ್ಟೋಬರ್ 28 ರಿಂದ ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಎಲ್ಲಾ ಕಾನ್‌ಸ್ಟೆಬಲ್‌ಗಳು ಮತ್ತು ಹೆಡ್ ಕಾನ್‌ಸ್ಟೆಬಲ್‌ಗಳು ನೇವಿ ಬ್ಲೂ ಪೀಕ್ ಕ್ಯಾಪ್‌ಗಳನ್ನು (ಪಿ-ಸಿಎಪಿ) ಧರಿಸುತ್ತಾರೆ, ಏಕೆಂದರೆ ಪ್ರಸ್ತುತ ಬಳಸುತ್ತಿರುವ ಸ್ಲೌಚ್ ಟೋಪಿಗಳನ್ನು ಬದಲಾಯಿಸಲಾಗುತ್ತಿದೆ.

**ಅ. 28ರಂದು ಸಿಬ್ಬಂದಿಗೆ ಪಿ-ಕ್ಯಾಪ್ ವಿತರಣೆ**

ಪೊಲೀಸ್ ಸಿಬ್ಬಂದಿಗೆ ಅಕ್ಟೋಬರ್ 28 ರಂದು ಪಿ-ಕ್ಯಾಪ್ ವಿತರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ಸಿಬ್ಬಂದಿಗೆ ವಿಧಾನ ಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಸಿಎಂ ಸಿದ್ದರಾಮಯ್ಯ ಮತ್ತು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ಪಿ-ಕ್ಯಾಪ್ ಘೋಷಣೆ ಹಾಗೂ ವಿತರಣಾ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಡಿಜಿ, ಐಜಿಪಿ ಎಂಎ ಸಲೀಂ ಈ ಸಂಬಂಧ ಸುತ್ತೋಲೆ ಹೊರಡಿಸಿದ್ದು, ಎಲ್ಲಾ ಪೊಲೀಸ್ ಕಮಿಷನರೇಟ್‌ಗಳು ಮತ್ತು ಜಿಲ್ಲೆಗಳು ಈ ಕಾರ್ಯಕ್ರಮಕ್ಕೆ ಹಾಜರಾಗಲು ತಲಾ ಒಬ್ಬ ಪೊಲೀಸ್ ಕಾನ್‌ಸ್ಟೆಬಲ್ ಪಿಸಿ ಅಥವಾ ಹೆಡ್ ಕಾನ್‌ಸ್ಟೆಬಲ್ ಎಚ್‌ಸಿ ಅವರನ್ನು ನಾಮನಿರ್ದೇಶನ ಮಾಡುವಂತೆ ಸೂಚಿಸಿದ್ದಾರೆ.



ಆಗಸ್ಟ್ 6 ರಂದು ಸರ್ಕಾರವು ರಾಜ್ಯದಲ್ಲಿ ಪ್ರಸ್ತುತ ಬಳಸುತ್ತಿರುವ ಸ್ಲೌಚ್ ಟೋಪಿಗಳನ್ನು ನೇವಿ ಬ್ಲೂ ಪೀಕ್ ಕ್ಯಾಪ್‌ಗಳೊಂದಿಗೆ ಬದಲಾಯಿಸುವ ಆದೇಶಗಳನ್ನು ಹೊರಡಿಸಿತ್ತು. ಇತ್ತೀಚೆಗೆ ನಡೆದ ಹಿರಿಯ ಪೊಲೀಸ್ ಅಧಿಕಾರಿಗಳ ವಾರ್ಷಿಕ ಸಮ್ಮೇಳನದಲ್ಲಿ, ರಾಜ್ಯ ಪೊಲೀಸರು ಕಾನ್‌ಸ್ಟೆಬಲ್‌ಗಳಿಗೆ ಹಸಿರು ಬೆರೆಟ್‌ಗಳನ್ನು ಪ್ರಸ್ತಾಪಿಸಿದ್ದರು.

ಆದಾಗ್ಯೂ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಸಿರು ಬೆರೆಟ್‌ಗಳು ಗೃಹರಕ್ಷಕರು ಮತ್ತು ಸ್ಕೌಟ್ಸ್ ಮತ್ತು ಗೈಡ್ಸ್ ಸದಸ್ಯರು ಧರಿಸುವ ಬಟ್ಟೆಗಳನ್ನು ಹೋಲುತ್ತವೆ, ಹೀಗಾಗಿ ನೀಲಿ ಪೀಕ್ ಕ್ಯಾಪ್‌ಗಳನ್ನು ಆಯ್ಕೆ ಮಾಡಲು ಸೂಚಿಸಿದರು.

# ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಜಿಬಿಎ ವ್ಯಾಪ್ತಿಗೆ ಸೇರಿಸಲು ಸರ್ಕಾರ ಸಿದ್ಧತೆ

### ಹೊಸ ಪ್ರದೇಶಗಳ ಸೇರ್ಪಡೆ ಕುರಿತು ಚರ್ಚಿಸಲು ಸಂಬಂಧಪಟ್ಟ ಅಧಿಕಾರಿಗಳ ಸಭೆ ಕರೆ

• **ಉದಯವಾಹಿನಿ, ಬೆಂಗಳೂರು**

ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ವ್ಯಾಪ್ತಿಗೆ ಬೆಂಗಳೂರು ನಗರದ ಹೊರವಲಯದ ಹಲವು ಪ್ರದೇಶಗಳನ್ನು ಸೇರ್ಪಡೆ ಮಾಡಲು ಸರಕಾರ ಅಗತ್ಯ ತಯಾರಿ ಮಾಡಿಕೊಳ್ಳುತ್ತಿದೆ. ಈ ಬಗ್ಗೆ ಸುಳಿವು ನೀಡಿರುವ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಜಿಬಿಎಗೆ ಸೇರಲು ಅರ್ಹವಿರುವ ನಗರದ ಗಡಿಭಾಗದ ಪ್ರದೇಶಗಳು, ನಗರ ಜಿಲ್ಲೆಯ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಪ್ರದೇಶಗಳನ್ನು ವೀಕ್ಷಣೆ ಮಾಡಿದ್ದೇನೆ. ಕೆಲ ನಗರಸಭೆ, ಪಟ್ಟಣ ಪಂಚಾಯಿತಿಗಳೂ ಸೇರಿದಂತೆ ಅನೇಕ ಸ್ಥಳೀಯ ಸಂಸ್ಥೆಗಳ ಗಡಿ ಪ್ರದೇಶಗಳು ನನ್ನ ಇಲಾಖೆ ವ್ಯಾಪ್ತಿಗೆ ಬರುತ್ತವೆ, ಎಂದು ಹೇಳಿದರು. ಹೊಸ ಪ್ರದೇಶಗಳ ಸೇರ್ಪಡೆ ಕುರಿತು ಚರ್ಚಿಸಲು ಸಂಬಂಧಪಟ್ಟ ಅಧಿಕಾರಿಗಳ ಸಭೆ ಕರೆಯಲಾಗಿದೆ. ಮುಂಬರುವ ದಿನಗಳಲ್ಲಿಕೆಲ ಪ್ರದೇಶಗಳ ಭಾಗಗಳನ್ನು ಪಾಲಿಕೆಗಳ ವ್ಯಾಪ್ತಿಗೆ ಸೇರಿಸಲಾಗುತ್ತದೆ. ಬಿ.ಎಸ್.ಪಾಟೀಲ್ ನೇತೃತ್ವದ ಸಮಿತಿಯು ಜಿಬಿಎ ವ್ಯಾಪ್ತಿಗೆ ಸೇರಿಸಬಹುದಾದ ಪ್ರದೇಶಗಳ ಬಗ್ಗೆ ವರದಿ ಸಿದ್ಧಪಡಿಸುತ್ತಿದೆ. ಈ ವಿಚಾರವಾಗಿ ಶಾಸಕರು, ಸಂಸದರು, ಸಾರ್ವಜನಿಕರು, ಸಂಘ-ಸಂಸ್ಥೆಗಳೊಂದಿಗೆ ಚರ್ಚಿಸಲು ಸೂಚಿಸಲಾಗಿದೆ, ಎಂದರು. (ಬಿ ಖಾತಾದಿಂದ ಎ ಖಾತಾಗೆ ವರ್ಗಾವಣೆ ಅಭಿಯಾನ)

**ಐಟಿ-ಬಿಟಿ ಕಂಪನಿಗಳೊಂದಿಗೆ ಸಭೆ**

**ಯಾವೆಲ್ಲಾ ಪ್ರಮುಖ ಸ್ಥಳಗಳ ಸೇರ್ಪಡೆ:** ಬೆಂಗಳೂರು ದಕ್ಷಿಣ ನಗರ ಪಾಲಿಕೆಯ ಹಲವು ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಿರುವ ಪಾಲಿಕೆಗಳ ವ್ಯಾಪ್ತಿಯಿಂದಾಚೆಗೆ 25 ಲಕ್ಷ ಜನಸಂಖ್ಯೆ ಇದೆ. ಅವರನ್ನು ಪಾಲಿಕೆಗಳ ವ್ಯಾಪ್ತಿಗೆ ಸೇರಿಸಿಕೊಳ್ಳಬೇಕಾಗುತ್ತದೆ. ಎಲೆಕ್ಟ್ರಾನಿಕ್ ಸಿಟಿ, ವೈಟ್‌ಫೀಲ್ಡ್, ಏರ್‌ಪೋರ್ಟ್ ರಸ್ತೆ, ಯಲಹಂಕದ ಕೆಲ ಪ್ರದೇಶಗಳು ಇನ್ನೂ ಗ್ರಾಮ ಪಂ. ವ್ಯಾಪ್ತಿಯಲ್ಲಿಯೇ ಉಳಿದುಕೊಂಡಿವೆ. ಸಂಪೂರ್ಣವಾಗಿ ನಗರೀಕರಣಗೊಂಡಿರುವ ಪ್ರದೇಶಗಳಲ್ಲಿಅಚ್ಚುಕಟ್ಟಾದ ಯೋಜನೆ ರೂಪಿಸಬೇಕಿದೆ, ಎಂದು ಹೇಳಿದರು.

ಕೆಲ ಪ್ರದೇಶಗಳಲ್ಲಿ ಸಮರ್ಪಕವಾಗಿ ಕಸ ವಿಲೇವಾರಿಯಾಗುತ್ತಿಲ್ಲ. ಗ್ರಾಮ ಪಂಚಾಯಿತಿ ವ್ಯಾಪ್ತಿ ಎಂಬ ಕಾರಣಕ್ಕೆ ಕಸ ಸಂಗ್ರಹಿಸುತ್ತಿಲ್ಲ. ಹೀಗಾಗಿ, ಅಧಿಕಾರಿಗಳಿಗೆ ಹೊಣೆಗಾರಿಕೆ ನಿಗದಿಪಡಿಸಬೇಕಿದೆ. ನಾನು ನಕ್ಷೆಯಲ್ಲಿಆ ಪ್ರದೇಶಗಳನ್ನು ನೋಡುವುದಕ್ಕಿಂತ ಅಲ್ಲಿಗೆ ಹೋಗಿ ಕಣ್ಣಾರೆ ನೋಡಬೇಕೆಂದು ಭೇಟಿ ನೀಡುತ್ತಿದ್ದೇನೆ, ಎಂದರು.



**ಡಾಂಬರೀಕರಣ ಕಾಮಗಾರಿಗೆ ಚುರುಕು:** ಪಾಲಿಕೆ ಅಧಿಕಾರಿಗಳು ರಸ್ತೆ ಗುಂಡಿಗಳನ್ನು ಮುಚ್ಚುತ್ತಿದ್ದಾರೆ. ಕೆಲ ಪ್ರದೇಶಗಳಲ್ಲಿರಸ್ತೆ ಗುಂಡಿ ಮುಚ್ಚುವ ಬದಲಿಗೆ ಒಂದು ಪದರ ಡಾಂಬರು ಹಾಕಲಾಗುತ್ತಿದೆ. ಆದ್ಯತೆ ಮೇರೆಗೆ ಕಾಮಗಾರಿಗಳನ್ನು ವೇಗವಾಗಿ ಪೂರ್ಣಗೊಳಿಸುತ್ತಿದ್ದೇವೆ. ಮಳೆಯಿಂದಾಗಿ ಸಮಸ್ಯೆಯಾಗಿದೆ. ಮಳೆ ನಿಂತ ಕೂಡಲೇ ಕಾಮಗಾರಿ ಚುರುಕುಗೊಳಿಸಲಾಗುವುದು, ಎಂದು ಡಿಸಿಎಂ ಹೇಳಿದರು.

**ಐಟಿ-ಬಿಟಿ ಕಂಪನಿಗಳೊಂದಿಗೆ ಸಭೆ:** ಈ ವಾರಾಂತ್ಯದಲ್ಲಿ ಬೆಂಗಳೂರು ನಡಿಗೆ ಕಾರ್ಯಕ್ರಮದ ಮೂಲಕ ಸಾರ್ವಜನಿಕರನ್ನು ಭೇಟಿ ಮಾಡಲಾಗುವುದು. ಆ ಬಳಿಕ ಐಟಿ-ಬಿಟಿ ಸಂಸ್ಥೆಗಳೊಂದಿಗೆ ಸಭೆ ನಡೆಸಲಾಗುವುದು. ಮಹದೇವಪುರ ಹಾಗೂ ಕೆ.ಆರ್.ಪುರ ವ್ಯಾಪ್ತಿಯಲ್ಲಿಸಭೆ ಏರ್ಪಡಿಸಲಾಗುತ್ತದೆ, ಎಂದು ಡಿಸಿಎಂ ತಿಳಿಸಿದರು.

### ನಗರಾಭಿವೃದ್ಧಿ ಸಚಿವರ ಸಮ್ಮೇಳನ

**ಅ.30ರಂದು ಬೆಂಗಳೂರಿನಲ್ಲಿದಕ್ಷಿಣ ಭಾರತದ ಎಲ್ಲಾ ರಾಜ್ಯಗಳ ನಗರಾಭಿವೃದ್ಧಿ ಸಚಿವರ ಸಮ್ಮೇಳನ ಹಮ್ಮಿಕೊಳ್ಳಲು ಕೇಂದ್ರ ನಗರಾಭಿವೃದ್ಧಿ ಸಚಿವ ಮನೋಹರ ಲಾಲ್ ಖಟ್ಟರ್ ಒಪ್ಪಿಗೆ ನೀಡಿದ್ದಾರೆ, ಎಂದು ಡಿಸಿಎಂ ಡಿಕೆಶಿ ತಿಳಿಸಿದರು. ಕೇಂದ್ರದ ನಗರಾಭಿವೃದ್ಧಿ ಸಚಿವರು ಈ ಸಮ್ಮೇಳನದಲ್ಲಿಭಾಗವಹಿಸಲಿದ್ದು, ನಮ್ಮ ಬೇಡಿಕೆಗಳನ್ನು ಅವರ ಮುಂದಿಡುತ್ತೇವೆ. ಈಗಾಗಲೇ ಹಲವು ಬಾರಿ ಕೇಂದ್ರ ಸಚಿವರು ಹಾಗೂ ಪ್ರಧಾನಿಯವರನ್ನು ಭೇಟಿ ಮಾಡಿ ಅನುದಾನ ಕೋಳೆಯುತಿದೆ ಎಂದು ಹೇಳಿದರು.**

ಅಂತರಾಳದಿಂದ... EDITORIAL

# ಬಿಹಾರ: ಹೊಂದಾಣಿಕೆ ಕೊರತೆ
## ಪ್ರತಿಪಕ್ಷಗಳ ವಿಶ್ವಾಸಾರ್ಹತೆಗೆ ಧಕ್ಕೆ



ಬಿಹಾರ ಚುನಾವಣೆಯಲ್ಲಿ 'ಇಂಡಿಯಾ' ಮೈತ್ರಿಕೂಟದಲ್ಲಿನ ಸೀಟು ಹೊಂದಾಣಿಕೆಯ ಗೊಂದಲ 'ಮಹಾಘಟಬಂಧನ'ದ ವಿಶ್ವಾಸಾರ್ಹತೆಗೆ ಧಕ್ಕೆ ತರುವಂತಿದೆ. ಆದರೆ, ಸೀಟು ಹೊಂದಾಣಿಕೆಗೆ ಸಂಬಂಧಿಸಿದ ಒಳಗುದಿ ಮುಂದುವರಿದೇ ಇರುವುದು ಮತದಾರರಿಗೆ ಮೈತ್ರಿಕೂಟ ನೀಡುತ್ತಿರುವ ಒಳ್ಳೆಯ ಸಂದೇಶವೇನಲ್ಲ. ಎನ್‌ಡಿಎ ವಿರುದ್ಧ ಪ್ರಬಲ ಸ್ಪರ್ಧೆ ಒಡ್ಡಲು ಒಮ್ಮತದ ಪ್ರಯತ್ನಗಳನ್ನು ನಡೆಸುವ ಬದಲು, ಕೆಲವು ಕ್ಷೇತ್ರಗಳಲ್ಲಿ ಮೈತ್ರಿ ಪಕ್ಷಗಳ ಅಭ್ಯರ್ಥಿಗಳೇ ಪರಸ್ಪರ ಎದುರಾಳಿಗಳಾಗಿದ್ದಾರೆ: ಒಂದು ಪಕ್ಷ ಮೈತ್ರಿಕೂಟದಿಂದ ಹೊರಬಂದಿದೆ. ಆರ್‌ಜೆಡಿ, ಕಾಂಗ್ರೆಸ್, ಸಿಪಿಐ, ಸಿಪಿಎಂ ಹಾಗೂ ವಿಕಾಸಶೀಲ ಇನ್ಸಾನ್ ಪಕ್ಷ (ವಿಐಪಿ) 'ಮಹಾಘಟಬಂಧನ'ದಲ್ಲಿ ಇರುವ ಪಕ್ಷಗಳಾಗಿವೆ. ಇದುವರೆಗೆ ಮೈತ್ರಿಕೂಟದ ಭಾಗವಾಗಿದ್ದ 'ಜೆಎಂಎಂ', ಆರು ಕ್ಷೇತ್ರಗಳಲ್ಲಿ ಸ್ಪರ್ಧಿಸುವ ತನ್ನ ಒತ್ತಾಯ ತಿರಸ್ಕೃತಗೊಂಡ ನಂತರ ಮೈತ್ರಿಕೂಟದಿಂದ ಹೊರಬಂದಿರುವುದಾಗಿ ಹೇಳಿದೆ. ಮಿತ್ರ ಪಕ್ಷಗಳಾದ ಕಾಂಗ್ರೆಸ್ ಮತ್ತು ಆರ್‌ಜೆಡಿ ಜೊತೆಗೂಡಿ ಜಾರ್ಖಂಡ್‌ನಲ್ಲಿ ಆಡಳಿತದಲ್ಲಿರುವ ಜೆಎಂಎಂ. ಅಲ್ಲಿಯೂ ಮೈತ್ರಿ ಮುಂದುವರಿಕೆಯ ಬಗ್ಗೆ ಪರಿಶೀಲನೆ ನಡೆಸಲಿದೆ ಎಂದು ಪಕ್ಷದ ಮುಖಂಡ ಹೇಮಂತ್ ಸೊರೇನ್ ಹೇಳಿದ್ದಾರೆ. ಸುದೀರ್ಘ ಮಾತುಕತೆಗಳ ನಂತರವೂ ಆರ್‌ಜೆಡಿ ಮತ್ತು ಕಾಂಗ್ರೆಸ್ ಮುಖಂಡರಿಗೆ ಸೀಟು ಹಂಚಿಕೆಗೆ ಸಂಬಂಧಿಸಿದಂತೆ ಸಂಪೂರ್ಣ ಸಹಮತಕ್ಕೆ ಬರುವುದು ಸಾಧ್ಯವಾಗಿಲ್ಲ. ಒಪ್ಪಂದಕ್ಕೆ ಬರಲು ಸಾಧ್ಯವಾಗದ ಕನಿಷ್ಠ ಐದು ವಿಧಾನಸಭಾ ಕ್ಷೇತ್ರಗಳಲ್ಲಿ ಉಭಯ ಪಕ್ಷಗಳ ಅಭ್ಯರ್ಥಿಗಳು ಮುಖಾಮುಖಿ ಆಗಿದ್ದಾರೆ. ಕೆಲವೆಡೆ ಕಾಂಗ್ರೆಸ್ ಮತ್ತು ಸಿಪಿಐ ಎದುರಾಳಿಗಳಾಗಿವೆ. ಆರ್‌ಜೆಡಿ ಮತ್ತು ವಿಐಪಿ ಎರಡು ಕ್ಷೇತ್ರಗಳಲ್ಲಿ ಸ್ಪರ್ಧಿಗಳಾಗಿವೆ. 2020ರ ವಿಧಾನಸಭಾ ಚುನಾವಣೆಯಲ್ಲಿ 144 ಕ್ಷೇತ್ರಗಳಲ್ಲಿ ಸ್ಪರ್ಧಿಸಿದ್ದ ಆರ್‌ಜೆಡಿ. ಈ ಬಾರಿ 143 ಕ್ಷೇತ್ರಗಳಲ್ಲಿ ಸ್ಪರ್ಧಿಸುತ್ತಿದೆ ಹಾಗೂ ಎಪ್ಪತ್ತು ಕ್ಷೇತ್ರಗಳಲ್ಲಿ ಸ್ಪರ್ಧಿಸಿದ್ದ ಕಾಂಗ್ರೆಸ್, ಈ ಬಾರಿ ಒಂಬತ್ತು ಕ್ಷೇತ್ರಗಳನ್ನು ಬಿಟ್ಟುಕೊಟ್ಟು 61 ಕ್ಷೇತ್ರಗಳಲ್ಲಿ ಆಯ್ಕೆ ಬಯಸಿದೆ. ಎಲ್ಲಾ ಸಮುದಾಯಗಳನ್ನೂ ಒಳಗೊಂಡ ಒಕ್ಕೂಟದ ರೂಪದಲ್ಲಿ ಮಹಾಘಟಬಂಧನವನ್ನು ಮೈತ್ರಿಕೂಟದ ಮುಖಂಡರು ಇದುವರೆಗೆ ಬಿಂಬಿಸಿದ್ದರು.

> **ನವೆಂಬರ್ 6 ಮತ್ತು 11ರಂದು ಬಿಹಾರದಲ್ಲಿ ನಡೆಯಲಿರುವ ವಿಧಾನಸಭಾ ಚುನಾವಣೆಯಲ್ಲಿ ಆಡಳಿತಾರೂಢ 'ಎನ್‌ಡಿಎ' ಮೈತ್ರಿಕೂಟದ ವಿರುದ್ಧ ಸ್ಪರ್ಧಿಸುತ್ತಿರುವ ಪ್ರತಿಪಕ್ಷಗಳ 'ಇಂಡಿಯಾ' ಮೈತ್ರಿಕೂಟ, ಅಂತರಿಕ ಸಂಘರ್ಷದಿಂದ ಬಳಲುತ್ತಿದೆ ಹಾಗೂ ಒಗ್ಗಟ್ಟನ್ನು ಪ್ರದರ್ಶಿಸಲು ಪ್ರಯಾಸಪಡುತ್ತಿದೆ. ನಾಮಪತ್ರ ಸಲ್ಲಿಸುವ ಪ್ರಕ್ರಿಯೆ ಕೊನೆಗೊಂಡಿದೆ ಹಾಗೂ ಆರ್‌ಜೆಡಿ ಮುಖಂಡ ತೇಜಸ್ವಿ ಯಾದವ್ ಅವರನ್ನು ಮೈತ್ರಿಕೂಟದ ಮುಖ್ಯಮಂತ್ರಿ ಅಭ್ಯರ್ಥಿಯಾಗಿ ಘೋಷಿಸಲಾಗಿದೆ.**

ಇತ್ತೀಚೆಗಷ್ಟೇ ರೂಪುಗೊಂಡ. ಎರಡು ಸಣ್ಣ ಸಮುದಾಯಗಳನ್ನು ಪ್ರತಿನಿಧಿಸುವ ಇಂಡಿಯನ್ ಇನ್‌ಕ್ಲ್ಯೂಸಿವ್ ಪಾರ್ಟಿ (ಐಐಪಿ)ಗೂ ಸೀಟು ಹೊಂದಾಣಿಕೆಯಲ್ಲಿ ಪಾಲು ದೊರೆಯುವುದಾಗಿ ಹೇಳಲಾಗಿತ್ತು. ಆದರೆ, ಪ್ರಮುಖ ನಾಯಕರ ನಡುವಿನ ಭಿನ್ನಮತವು ಮೈತ್ರಿಕೂಟದಲ್ಲಿ ಒಮ್ಮತ ಇಲ್ಲದಿರುವ ಸಂದೇಶವನ್ನು ನೀಡುವಂತಿದೆ.

ಮತದಾರರ ಮುಂದೆ ಹೋಗುವ ಯಾವುದೇ ಮೈತ್ರಿಕೂಟ ಒಗ್ಗಟ್ಟು ಪ್ರದರ್ಶಿಸುವುದು ಹಾಗೂ 'ಕನಿಷ್ಠ ಸಾಮಾನ್ಯ ಕಾರ್ಯಕ್ರಮ' ಹೊಂದಿರುವುದು ಅತ್ಯವಶ್ಯ, ಆದರೆ, ಮಹಾಘಟಬಂಧನದ ಪಕ್ಷಗಳು ಚುನಾವಣೆಯ ಒಟ್ಟಾರೆ ಫಲಿತಾಂಶದ ಬಗ್ಗೆ ತಂತ್ರಗಾರಿಕೆ ರೂಪಿಸುವುದರ ಬದಲು. ಚುನಾವಣಾ ನಂತರದ ತಮ್ಮ ವೈಯಕ್ತಿಕ ಸಾಧನೆಯ ಅಂಕಿಅಂಶಗಳನ್ನು ಗಮನದಲ್ಲಿಟ್ಟುಕೊಂಡು ಕೆಲಸ ಮಾಡುತ್ತಿರುವಂತೆ ಕಾಣಿಸುತ್ತದೆ. ಈ ಒಡಕು ಮೈತ್ರಿಕೂಟಕ್ಕೆ ದುಬಾರಿಯಾಗಬಹುದು. ಪರಸ್ಪರ ಅನುಮಾನ. ಅವಾಸ್ತವಿಕ ಅಪೇಕ್ಷೆಗಳು. ಮಿತಿ ಮೀರಿದ ಆಸೆ ಹಾಗೂ ಸಾಮಾನ್ಯ ಹಿತಾಸಕ್ತಿಯೊಂದಿಗೆ ಮಾಡಿಕೊಳ್ಳುವ ರಾಜಿ, ಒಕ್ಕೂಟದ ವಿಶ್ವಾಸಾರ್ಹತೆಗೆ ಧಕ್ಕೆ ಉಂಟುಮಾಡಬಲ್ಲವು. ಪಕ್ಷಗಳಲ್ಲೂ ಆಂತರಿಕ ಸಂಘರ್ಷವಿದ್ದು, ಟಿಕೆಟ್ ಹಂಚಿಕೆ ಸಮಾಧಾನಕರ ರೀತಿಯಲ್ಲಿ ನಡೆದಂತಿಲ್ಲ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹಾಗೂ ಆರ್‌ಜೆಡಿ ಮುಖಂಡ ತೇಜಸ್ವಿ ಯಾದವ್ ನಡೆಸಿದ ಮತದಾರರ ಅಧಿಕಾರ ಯಾತ್ರೆಗೆ ದೊರೆತ ಅಭೂತಪೂರ್ವ ಸ್ಪಂದನ ಮಹಾಘಟಬಂಧನದ ನಿರೀಕ್ಷೆಗಳನ್ನು ಹೆಚ್ಚಿಸಿತ್ತು. ಮಿತ್ರಪಕ್ಷಗಳ ಒಗ್ಗಟ್ಟು ಮತ್ತು ಸಾಮಾನ್ಯ ಗ್ರಹಿಕೆಗಳ ಪ್ರದರ್ಶನಕ್ಕೆ ಚುನಾವಣಾ ಸಂದರ್ಭ ಅತ್ಯುತ್ತಮ ಸಮಯವಾಗಿದೆ. ಆದರೆ, ದೇಶದ ಮೇಲೆ ಪರಿಣಾಮ ಬೀರಬಹುದಾದ ನಿರ್ಣಾಯಕ ಚುನಾವಣೆಯ ಸಂದರ್ಭದಲ್ಲಿ ಮೈತ್ರಿಕೂಟ ಅತ್ಯುತ್ತಮ ಆರಂಭ ಪಡೆಯುವಲ್ಲಿ ತಕ್ಕ ಪ್ರಯತ್ನ ನಡೆಸಿಲ್ಲ.



# ಲಿವರ್ ಡ್ಯಾಮೇಜ್ ಆದ್ರೆ ಕೈಯಲ್ಲಿ ಈ ಕೆಲವು ಲಕ್ಷಣಗಳು ಕಾಣಿಸಲಾರಂಭಿಸುತ್ತಂತೆ





ಲಿವರ್‌ನಲ್ಲಿ ಸಮಸ್ಯೆಗಳಾದರೆ ಆರಂಭದಲ್ಲೇ ಕೆಲವೊಂದು ಲಕ್ಷಣಗಳು ಕಾಣಿಸಲಾರಂಭಿಸುತ್ತದೆ. ಅದರಲ್ಲೂ ಕೈಗಳಲ್ಲಿ ಕಾಣಿಸಿಕೊಳ್ಳುವ, ನೀವು ಸಾಮಾನ್ಯ ಎಂದು ತಿಳಿದುಕೊಳ್ಳುವ ಲಕ್ಷಣಗಳು ಯಕೃತ್ತು ಹಾನಿಗೊಳಗಾಗಿರುವುದನ್ನು ಸೂಚಿಸುತ್ತದೆ. ನಮ್ಮ ದೇಹವು ಯಾವುದೇ ಆರೋಗ್ಯ ಸಮಸ್ಯೆಯನ್ನು ಹೊಂದಿದ್ದರೆ ಬಾಹ್ಯ ಸಂಕೇತವನ್ನು ನೀಡುತ್ತದೆ. ಮೂಲಕ ಯಾವುದೇ ಆಂತರಿಕ ಸಮಸ್ಯೆಗಳ ಬಗ್ಗೆ ನಮ್ಮನ್ನು ಎಚ್ಚರಿಸಲು ಪ್ರಯತ್ನಿಸುತ್ತದೆ. ಅದೇ ರೀತಿ ಯಾವುದೇ ಯಕೃತ್ತಿನ ಸಮಸ್ಯೆ ಪ್ರಾರಂಭವಾದರೆ, ನಮ್ಮ ದೇಹದಲ್ಲಿ ವಿಶೇಷವಾಗಿ ಕೈಗಳಲ್ಲಿ ಕೆಲವು ಲಕ್ಷಣಗಳು ಕಾಣಿಸಿಕೊಳ್ಳಲಾರಂಭಿಸುತ್ತವಂತೆ. ಅಂತಹ ಲಕ್ಷಣಗಳು ಯಾವುವು ತಿಳಿಯೋಣ.

**ಕೈಯಲ್ಲಿ ಕಾಣಿಸಿಕೊಳ್ಳುವ ಲಕ್ಷಣಗಳು:** ಲಿವರ್ ಡ್ಯಾಮೇಜ್ ಆದಾಗ ಕೈಗಳಲ್ಲಿ ಈ ಬದಲಾವಣೆಗಳನ್ನು ಸಮಯಕ್ಕೆ ಸರಿಯಾಗಿ ಗಮನಿಸಿದರೆ ಯಕೃತ್ತಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಮೊದಲೇ ಪತ್ತೆ ಹಚ್ಚಬಹುದು ಮತ್ತು ಹಾನಿ ಮುಂದುವರಿಯದಂತೆ ತಡೆಯಬಹುದು. ಯಕೃತ್ತು ಹಾನಿ ಪ್ರಾರಂಭವಾದಾಗ ಕೈಯಲ್ಲಿ ಯಾವ ಚಿಹ್ನೆಗಳು ಕಾಣಿಸಿಕೊಳ್ಳುತ್ತವೆ ಎಂಬುದನ್ನು ತಿಳಿದುಕೊಳ್ಳೋಣ.

**ಉಗುರುಗಳು ಬಿಳಿ ಪಾಲಿಶ್ ರೀತಿಯಾಗುವುದು;** ಈ ಸ್ಥಿತಿಯಲ್ಲಿ ಬಹುತೇಕ ಸಂಪೂರ್ಣ ಉಗುರು ಬಿಳಿ ಅಥವಾ ಮಸುಕಾಗಿ ಕಾಣುತ್ತದೆ, ಆದರೆ ಉಗುರುಗಳ ತುದಿಗಳು ಗಾಢ ಅಥವಾ ಕೆಂಪು-ಕಂದು ಬಣ್ಣದ್ದಾಗಿರುತ್ತವೆ. ಉಗುರಿಗೆ ಬಿಳಿ ಪಾಲಿಶ್ ಲೇಪಿಸಿದಂತೆ ಕಾಣುತ್ತದೆ. ಈ ಸ್ಥಿತಿಯು ಉಗುರುಗಳಲ್ಲಿ ಪ್ರೋಟೀನ್ ಕೊರತೆ ಮತ್ತು ರಕ್ತ ಪರಿಚಲನೆಯಲ್ಲಿನ ಬದಲಾವಣೆಗಳಿಂದ ಉಂಟಾಗುತ್ತದೆ, ಇದು ಹೆಚ್ಚಾಗಿ ಯಕೃತ್ತಿನ ಸಿರೋಸಿಸ್, ಯಕೃತ್ತು ವೈಫಲ್ಯ ಅಥವಾ ಯಕೃತ್ತಿನ ಸ್ಟೀಟೋಸಿಸ್‌ಗೆ ಸಂಬಂಧಿಸಿದೆ.


**ಉಗುರು ಸುತ್ತು:** ಈ ಸ್ಥಿತಿಯಲ್ಲಿ ಉಗುರುಗಳ ಆಕಾರವು ಬದಲಾಗುತ್ತದೆ. ಬೆರಳುಗಳ ತುದಿಗಳು ದುಂಡಾಗಿ ಮತ್ತು ಊದಿಕೊಳ್ಳುತ್ತವೆ ಮತ್ತು ಉಗುರುಗಳು ಮೇಲಕ್ಕೆ ಸುರುಳಿಯಾಗಿ ಚಮಚದಂತಹ ಆಕಾರವನ್ನು ರೂಪಿಸುತ್ತವೆ. ಈ ಸ್ಥಿತಿಯನ್ನು ಗಂಭೀರ ಯಕೃತ್ತಿನ ಕಾಯಿಲೆಗಳಲ್ಲಿ, ಹಾಗೆಯೇ ಶ್ವಾಸಕೋಶ ಮತ್ತು ಹೃದಯ ಕಾಯಿಲೆಗಳಲ್ಲಿ ಕಾಣಬಹುದು. ದೇಹಕ್ಕೆ ಸರಿಯಾದ ಆಮ್ಲಜನಕ ಪೂರೈಕೆಯನ್ನು ತಡೆಯುವ ಮೂಲಕ ಯಕೃತ್ತಿನ ಸಮಸ್ಯೆಗಳು ಈ ರೋಗ ಲಕ್ಷಣವನ್ನು ಉಂಟುಮಾಡಬಹುದು.

**ಕೆಂಪು ಅಂಗೈಗಳು:** ನಿಮ್ಮ ಅಂಗೈಗಳು, ವಿಶೇಷವಾಗಿ ಹೆಬ್ಬೆರಳು ಮತ್ತು ಕಿರುಬೆರಳಿನ ಕೆಳಗಿರುವ ಉಬ್ಬುಗಳು, ಯಾವುದೇ ಸ್ಪಷ್ಟ ಕಾರಣವಿಲ್ಲದೆ ಕೆಂಪು ಬಣ್ಣಕ್ಕೆ ತಿರುಗುತ್ತಿದ್ದರೆ, ಅದು ಕಳವಳಕ್ಕೆ ಕಾರಣವಾಗಬಹುದು. ಈ ಸ್ಥಿತಿಯನ್ನು 'ಪಾಮರ್ ಎರಿಥೆಮಾ' ಎಂದು ಕರೆಯಲಾಗುತ್ತದೆ. ಒತ್ತಿದಾಗ ಈ ಕೆಂಪು ತಾತ್ಕಾಲಿಕವಾಗಿ ಕಣ್ಮರೆಯಾಗುತ್ತದೆ ಮತ್ತು ನಂತರ ಮರಳಿ ಕಾಣಿಸಿಕೊಳ್ಳುತ್ತದೆ. ಇದು ಲಿವರ್ ಸಿರೋಸಿಸ್ ಮತ್ತು ಹೆಪಟೈಟಿಸ್‌ನಂತಹ ಪರಿಸ್ಥಿತಿಗಳಿಂದ ಉಂಟಾಗುತ್ತದೆ, ಇದು ರಕ್ತನಾಳಗಳು ಹಿಗ್ಗಲು ಮತ್ತು ಅಂಗೈಗಳು ಕೆಂಪಾಗಿ ಕಾಣಲು ಕಾರಣವಾಗುತ್ತದೆ.

**ತುರಿಕೆ ಅಂಗೈಗಳು:** ಯಾವುದೇ ದದ್ದು ಅಥವಾ ಅಲರ್ಜಿಗಳಿಲ್ಲದೆ ಅಂಗೈಗಳಲ್ಲಿ ನಿರಂತರ ತುರಿಕೆ ಉಂಟಾಗುವುದು ಯಕೃತ್ತಿನ ಹಾನಿಯ ಪ್ರಮುಖ ಸಂಕೇತವಾಗಿದೆ. ಯಕೃತ್ತು ಅಸಮರ್ಪಕವಾಗಿ ಕಾರ್ಯನಿರ್ವಹಿಸಿದಾಗ, ಪಿತ್ತರಸದ ಹರಿವು ಅಡ್ಡಿಪಡಿಸುತ್ತದೆ. ಇದು ರಕ್ತದಲ್ಲಿ ಪಿತ್ತರಸ ಸಂಗ್ರಹವಾಗಲು ಕಾರಣವಾಗುತ್ತದೆ, ನಂತರ ಅದು ಚರ್ಮಕ್ಕೆ ಹರಿಯುತ್ತದೆ, ಇದು ತೀವ್ರ ತುರಿಕೆಗೆ ಕಾರಣವಾಗುತ್ತದೆ. ಈ ತುರಿಕೆ ಹೆಚ್ಚಾಗಿ ರಾತ್ರಿಯಲ್ಲಿ ಉಲ್ಬಣಗೊಳ್ಳಲಾರಂಭಿಸುತ್ತದೆ.

> **ಅಂಗೈ ಅಂಗಾಂಶಗಳು ದಪ್ಪವಾಗುವುದು**
> **ಈ ಸ್ಥಿತಿಯಲ್ಲಿ, ಅಂಗೈಯ ಚರ್ಮದ ಕೆಳಗಿರುವ ಅಂಗಾಂಶಗಳು ದಪ್ಪವಾಗಲು ಮತ್ತು ಗಟ್ಟಿಯಾಗಲು ಪ್ರಾರಂಭಿಸುತ್ತವೆ. ಕ್ರಮೇಣ ಈ ಅಂಗಾಂಶಗಳು ಕುಗ್ಗಲು ಪ್ರಾರಂಭಿಸುತ್ತವೆ, ಇದರಿಂದಾಗಿ ಬೆರಳುಗಳು ಒಳಮುಖವಾಗಿ ಬಾಗುತ್ತವೆ ಮತ್ತು ಅವುಗಳನ್ನು ನೇರಗೊಳಿಸಲು ಕಷ್ಟವಾಗುತ್ತದೆ. ಇದು ಯಕೃತ್ತಿನ ಸಿರೋಸಿಸ್‌ನ, ವಿಶೇಷವಾಗಿ ಆಲ್ಕೋಹಾಲ್ ಸಂಬಂಧಿತ ಸಿರೋಸಿಸ್‌ನ ಸಾಮಾನ್ಯ ಲಕ್ಷಣವಾಗಿದೆ.**

# ಪನೀರ್ ಮನೆಯಲ್ಲೇ ತಯಾರಿಸಿ



1 ಲೀಟರ್ ಹಾಲಿನಿಂದ ಎಷ್ಟು ಪನೀರ್ ತಯಾರಿಸಲಾಗುತ್ತದೆ ಮತ್ತು ಮನೆಯಲ್ಲಿ ಪನೀರ್ ಮಾಡಲು ಸುಲಭವಾದ ಮಾರ್ಗ ಯಾವುದು ಎಂದು ತಿಳಿಯೋಣ. ಪನೀರ್ ರುಚಿಕರ, ಆರೋಗ್ಯಕ್ಕೆ ಪ್ರಯೋಜನಕಾರಿ ಆಹಾರವಾಗಿದೆ. ಬಹಳಷ್ಟು ಮಂದಿ ಮಾರುಕಟ್ಟೆ ಸುಲಭವಾಗಿ ದೊರೆಯುವ ಪನೀರ್‌ನ್ನು ಬಳಸುತ್ತಾರೆ. ಆದರೆ ಇತ್ತೀಚೆಗೆ ಮಾರುಕಟ್ಟೆಯಲ್ಲಿ ನಕಲಿ ಪನೀರ್ ದೊರೆಯುತ್ತಿದೆ. ಈ ನಕಲಿ ಪನೀರ್ ತಿನ್ನುವುದು ಆರೋಗ್ಯಕ್ಕೆ ಹಾನಿಕಾರಕವಾಗಿದೆ. ಇತ್ತೀಚಿನ ದಿನಗಳಲ್ಲಿ, ಮಾರುಕಟ್ಟೆಯಲ್ಲಿ ನಕಲಿ ಪನೀರ್ ಹೇರಳವಾಗಿ ಮಾರಾಟವಾಗುತ್ತಿದೆ. ಇತ್ತೀಚಿನ ದಿನಗಳಲ್ಲಿ ಪನೀರ್ ಮಾದರಿಗಳನ್ನು ಸಂಗ್ರಹಿಸಿತು, ಮತ್ತು ಅವುಗಳಲ್ಲಿ 80% ನಕಲಿ ಮತ್ತು ಕಲಬೆರಕೆ ಎಂದು ಕಂಡುಬಂದಿದೆ.

**1 ಲೀಟರ್ ಹಾಲನ್ನು ಬಳಸಿ ಮನೆಯಲ್ಲಿ ಪನೀರ್ ತಯಾರಿಸುವುದು ಹೇಗೆ:** ಮೊದಲ ಹಂತ: ಪನೀರ್ ತಯಾರಿಸಲು, 1 ಲೀಟರ್ ಹಾಲು ತೆಗೆದುಕೊಳ್ಳಿ. ಕೆನೆಭರಿತ ಪನೀರ್‌ಗಾಗಿ, ಪೂರ್ಣ-ಕ್ರೀಮ್ ಹಾಲನ್ನು ಬಳಸಿ, ಮತ್ತು ಕಡಿಮೆ-ಕೊಬ್ಬಿನ ಹಾಲು ಕಡಿಮೆ-ಕೊಬ್ಬಿನ ಪನೀರ್ ತಯಾರಾಗುತ್ತದೆ. ಹಾಲು ಒಂದು ಪಾತ್ರೆಯಲ್ಲಿ ಹಾಕಿ ಬಿಸಿಯಾಗಲು ಬಿಡಿ. ಹಾಲು ಕುದಿಯಲು ಬಂದ ನಂತರ, ಬಿಳಿ ವಿನೆಗರ್ ಅಥವಾ ನಿಂಬೆ ರಸವನ್ನು ಸೇರಿಸಿ ಕುದಿಯಲು ಬಿಡಿ.

**ಮನೆಯಲ್ಲೇ ತಯಾರಿಸಿದ ಪನೀರ್ ಉತ್ತಮ:** ನೀವು ಪನೀರ್ ಪ್ರಿಯರಾಗಿದ್ದರೆ ಮನೆಯಲ್ಲಿ ಹಾಲನ್ನು ಬಳಸಿ ಪನೀರ್ ತಯಾರಿಸುವುದು ಉತ್ತಮ. ಪನೀರ್ ಅನ್ನು ಮನೆಯಲ್ಲಿಯೇ ಸುಲಭವಾಗಿ ತಯಾರಿಸಬಹುದು. ವಿಶೇಷವಾಗಿ ಪರಾಠಾಗಳು ಮತ್ತು ಭುಜಿಯಾಗಳಿಗೆ ಪನೀರ್‌ಗೆ ಯಾವುದೇ ನಿರ್ದಿಷ್ಟ ಆಕಾರದ ಅಗತ್ಯವಿಲ್ಲ.

ಆದ್ದರಿಂದ, ಹಾಲನ್ನು ಬಳಸಿ ಮನೆಯಲ್ಲಿ ಪನೀರ್ ತಯಾರಿಸಿ. ಪನೀರ್ ಅನ್ನು ಸರಿಯಾಗಿ ರೂಪಿಸಲು, ಅದನ್ನು ಬಟ್ಟೆಯಲ್ಲಿ ಕಟ್ಟಿಕೊಳ್ಳಿ.

**ಎರಡನೇ ಹಂತ:** ಹಾಲನ್ನು ಮೊಸರು ಮಾಡಲು ನೀವು ವಿನೆಗರ್, ಟಾರ್ಟರ್ ಅಥವಾ ನಿಂಬೆ ಬಳಸಬಹುದು.

ನಿಂಬೆ ರಸದಿಂದ ಪನೀರ್ ಸುಲಭವಾಗಿ ತಯಾರಾಗುತ್ತದೆ. ಹಾಲು ಮೊಸರು ಆಗುವವರೆಗೆ ಚೆನ್ನಾಗಿ ಬೆರೆಸಿ ನಂತರ ಉರಿಯನ್ನು ಆಫ್ ಮಾಡಿ. ಒಂದು ಜರಡಿಯ ಮೇಲೆ ಮಸ್ಲಿನ್ ಬಟ್ಟೆಯನ್ನು ಇರಿಸಿ ಮೊಸರು ಹಾಲನ್ನು ಸೋಸಿ. ಎಲ್ಲಾ ದ್ರವವು ಹೊರಹೋಗುತ್ತದೆ, ಪನೀರ್ ಉಳಿಯುತ್ತದೆ.

**ಮೂರನೇ ಹಂತ:** ಪನೀರ್ ಅನ್ನು ಬಟ್ಟೆಯಲ್ಲಿ ಎರಡು ಬಾರಿ ಶುದ್ಧ ನೀರಿನಿಂದ ಚೆನ್ನಾಗಿ ತೊಳೆಯಿರಿ. ಇದು ಪನೀರ್‌ನಿಂದ ನಿಂಬೆ ಅಥವಾ ವಿನೆಗರ್‌ನ ಹುಳಿ ಮತ್ತು ಪರಿಮಳವನ್ನು ತೆಗೆದುಹಾಕುತ್ತದೆ. ಈಗ ಎಲ್ಲಾ ನೀರನ್ನು ಹೊರಹಾಕಲು ಬಟ್ಟೆಯನ್ನು ಬಿಗಿಯಾಗಿ ತಿರುಗಿಸಿ. ಬಟ್ಟೆಯೊಂದಿಗೆ ಪನೀರ್ ಅನ್ನು ಒಂದು ತಟ್ಟೆಯಲ್ಲಿ ಇರಿಸಿ ಮತ್ತು ಮೇಲೆ ಭಾರವಾದ ವಸ್ತುವನ್ನು ಇರಿಸಿ. ಅದನ್ನು 1 ರಿಂದ 2 ಗಂಟೆಗಳ ಕಾಲ ಹಾಗೆಯೇ ಬಿಡಿ.

**ನಾಲ್ಕನೇ ಹಂತ:** ಬಟ್ಟೆಯಿಂದ ಪನೀರ್ ತೆಗೆದುಹಾಕಿ. ನಿಮ್ಮ ರುಚಿಕರವಾದ, ತಾಜಾ ಮತ್ತು ಕಲಬೆರಕೆಯಿಲ್ಲದ ಮನೆಯಲ್ಲಿ ತಯಾರಿಸಿದ ಪನೀರ್ ಸಿದ್ಧವಾಗಿದೆ. 1 ಲೀಟರ್ ಹಾಲು ಸರಿಸುಮಾರು 200 ಗ್ರಾಂ ಪನೀರ್ ಮಾಡುತ್ತದೆ.

# ಥಟ್ ಅಂತ ಮನೆಯಲ್ಲಿ ಮಾಡಿ ಡ್ರೈ ಜಾಮೂನ್

ಸಿಹಿ ತಿಂಡಿ ಮಾಡಿ ಸವಿಯೋದು ಕಾಮನ್. ಅದ್ರಲ್ಲೂ ವಿಶೇಷ ರುಚಿ ನೀಡುವಂತಹ ಹಲವು ತಿಂಡಿಗಳ ಮಾಡಿ ಸವಿಯುತ್ತೀರಿ. ಹಾಗೆ ನಿಮ್ಮ ಮನೆಯಲ್ಲಿರುವ ವಸ್ತುಗಳನ್ನೇ ಬಳಸಿಕೊಂಡು ಕೆಲವೇ ನಿಮಿಷದಲ್ಲಿ ಮಾಡಿ ಮುಗಿಸಬಹುದಾದ ತಿಂಡಿ ಅಂದರೆ ಎಲ್ಲರಿಗೂ ಇಷ್ಟವಾಗುತ್ತೆ. ಹಾಗಾದ್ರೆ ದೀಪಾವಳಿಯಲ್ಲಿ ನಾವಿಂದು ಸುಲಭವಾಗಿ ಮಾಡಿ ಸವಿಯಬಹುದಾದ ಡ್ರೈ ಜಾಮೂನ್ ಮಾಡಿ ಸವಿಯುವ ಕುರಿತು ತಿಳಿದುಕೊಳ್ಳೋಣ. ನೀವು ಕೂಡ ಹಲವು ಹಬ್ಬಗಳು, ವಿಶೇಷ ದಿನಗಳು, ಹಾಗೆ ಶುಭ ಸಮಯದಲ್ಲಿ ಸಿಹಿ ತಿಂಡಿ ಮಾಡಿರುತ್ತೀರಿ. ಅದ್ರಲ್ಲೂ ಸುಲಭವಾಗಿ ಮಾಡಿ ಮುಗಿಸುವಂತಹ ಡ್ರೈ ಜಾಮೂನ್ ಮಾಡಿ ಸವಿಯುವ ಕುರಿತು ತಿಳಿದುಕೊಳ್ಳೋಣ. ಡ್ರೈ ಜಾಮೂನ್ ಅನ್ನು ನೀವು ಕೂಡ ಹಲವು ಸಂದರ್ಭದಲ್ಲಿ ಸವಿದಿರುತ್ತೀರಿ. ಬೇಕರಿಗಳಲ್ಲಿ, ಅಂಗಡಿಗಳಲ್ಲಿಯೂ ಈ ಜಾಮೂನ್ ಸಿಗಲಿದೆ, ಹೀಗಾಗಿ ನಿಮಗೂ ಸಹ ಇದರ ರುಚಿ ಕಂಡು ಬಾಯಲ್ಲಿ ನೀರು ಬಂದಿರುವುದು ಸಹಜ. ಹಾಗಾದ್ರೆ ದೀಪಾವಳಿಯ ಸಮಯದಲ್ಲಿ ನಾವು ಸುಲಭವಾಗಿ ಮನೆಯಲ್ಲಿ ಎಲ್ಲರ ಇಷ್ಟದ ಡ್ರೈ ಜಾಮೂನ್ ಮಾಡಿ ಸವಿಯುವ ಕುರಿತು ತಿಳಿದುಕೊಳ್ಳೋಣ. ಹಲವರು ಡ್ರೈ ಜಾಮೂನ್ ಮಾಡಿದ್ರೆ, ಗಟ್ಟಿಯಾಗುವುದು ಇಲ್ಲವೆ ಬಹಳ ಮೃದುವಾಗುವುದು, ಹಾಗೆ ಕಪ್ಪಾಗುವುದು ಇಂತಹ ಸಮಸ್ಯೆ ಎದುರಿಸುವುದು ನೋಡಬಹುದು. ಆದ್ರೆ ನಾವಿಂದು ಹೇಳುವ ವಿಧಾನದಲ್ಲಿ ನೀವು ಈ ಜಾಮೂನ್ ಮಾಡಲು ಮುಂದಾದರೆ ಬಹಳ ಮೃದುವಾಗಿ, ಸರಿಯಾದ ವಿಧಾನದಲ್ಲಿ ಬರಲಿದೆ, ನೀವು ಕೂಡ ಇದನ್ನು ಮಾಡುವುದು ಹೇಗೆ ಅನ್ನೋದನ್ನು ತಿಳಿದುಕೊಳ್ಳಿ.



**ಡ್ರೈ ಜಾಮೂನ್ ಮಾಡಲು ಯಾವೆಲ್ಲಾ ವಸ್ತುಗಳು ಬೇಕು**
- ಜಾಮೂನ್ ಪೌಡರ್
- ಹಾಲು
- ಒಣ ಕೊಬ್ಬರಿ
- ಸಕ್ಕರೆ ಪುಡಿ
- ಏಲಕ್ಕಿ ಪುಡಿ
- ನಿಂಬೆ ರಸ
- ತುಪ್ಪ
- ಡ್ರೈ ಫ್ರೂಟ್ಸ್
- ಸಕ್ಕರೆ

**ಡ್ರೈ ಜಾಮೂನ್ ಮಾಡುವ ಸುಲಭದ ವಿಧಾನ ಇಲ್ಲಿದೆ :**ಮೊದಲು ಒಲೆ ಮೇಲೆ ಒಂದು ಪಾತ್ರೆ ಇಟ್ಟು ಅಳತೆ ಕಪ್‌ನಲ್ಲಿ 2 ಕಪ್ ಸಕ್ಕರೆ ಹಾಕಿಕೊಂಡು ಅದಕ್ಕೆ ಒಂದು ಗ್ಲಾಸ್ ನೀರು ಹಾಕಿ ಕರಗಲು ಬಿಡಿ. ಹಾಗೆ ಇದು ಒಂದೆಳೆ ಪಾಕ ಬರಬೇಕು. ಇದಕ್ಕೆ ಏಲಕ್ಕಿ ಪುಡಿ ಸಹ ಹಾಕಿಕೊಂಡು ಕುದಿಯಲು ಬಿಟ್ಟು ಒಲೆ ಆಫ್ ಮಾಡಿ 5 ರಿಂದ 6 ಹನಿ ನಿಂಬೆ ರಸ ಇದಕ್ಕೆ ಹಾಕಿಕೊಳ್ಳಿ. ಈಗ ಪಾಕ ಗಟ್ಟಿಯಾಗುವುದಿಲ್ಲ. ಈಗ ಜರಡಿ ಹಿಡಿದ ಜಾಮೂನ್ ಹಿಟ್ಟು ತೆಗೆದುಕೊಂಡು ಅದಕ್ಕೆ ಹಾಲು ಹಾಕಿಕೊಳ್ಳುತ್ತಾ ಮಿಕ್ಸ್ ಮಾಡಿ. ಹಾಲಿಗೆ ಸ್ವಲ್ಪ ನೀರು ಹಾಕಿ ಸ್ವಲ್ಪ ಸ್ವಲ್ಪ ಹಾಕಿಕೊಂಡು ಮಿಕ್ಸ್ ಮಾಡಿ. ಚಪಾತಿ ಹಿಟ್ಟಿನಂತೆ ಬರುವವರೆಗೂ ಹದ ಮಾಡಿ ಹಿಟ್ಟನ್ನು ಬದಿಗಿಟ್ಟುಕೊಳ್ಳಿ. ಈಗ ಒಲೆ ಮೇಲೆ ಬಾಣಲೆ ಇಟ್ಟು ಅದಕ್ಕೆ ಎಣ್ಣೆ ಹಾಕಿ ಕಾಯಲು ಇಡಿ. ಈಗ ಎಣ್ಣೆ ಕಾದ ಬಳಿಕ ಹಿಟ್ಟನ್ನು ಮೃದುವಾದ ಉಂಡೆ ಮಾಡುತ್ತಾ ಬನ್ನಿ. ಈಗ ಎಣ್ಣೆಗೆ ಈ ಉಂಡೆಗಳನ್ನು ಹಾಕಿಕೊಳ್ಳುತ್ತಾ ಕರಿದುಕೊಳ್ಳಿ. ನಿಧಾನವಾಗಿ ಕರಿದುಕೊಳ್ಳಿ. ಇದು ಬ್ರೌನ್ ಕಲರ್‌ಗೆ ಬರಬೇಕು. 10 ನಿಮಿಷ ಆದರೂ ಬೇಯಿಸಬೇಕು. ನಂತರ ತೆಗೆದು ಜರಡಿಯಲ್ಲಿ ಹಾಕಿ ಇಟ್ಟುಕೊಳ್ಳಿ. ಈಗ ಕರಿದುಕೊಂಡ ಉಂಡೆಯನ್ನು ನಿಧಾನವಾಗಿ ಸಕ್ಕರೆ ಪಾಕಕ್ಕೆ ಹಾಕಿಕೊಂಡು ಮುಳುಗಲು ಬಿಡಿ. ಪಾಕ ಸ್ವಲ್ಪ ಬಿಸಿಯಾಗಿರಬೇಕು. ಪಾಕದಲ್ಲಿ ಈ ಜಾಮೂನು 30 ನಿಮಿಷ ಬಿಟ್ಟು ಅನಂತರ ಕೊಬ್ಬರಿ ಪುಡಿ ಹಾಗೆ ಸಕ್ಕರೆ ಪುಡಿಯಲ್ಲಿ ಈ ಜಾಮೂನನ್ನು ಹಾಕಿ ಉರುಳಿಸಬೇಕು. ಇಷ್ಟಾದರೆ ನಿಮ್ಮ ಮುಂದೆ ಡ್ರೈ ಜಾಮೂನ್ ಸಿದ್ದವಾಗುತ್ತೆ.

# ವೈದ್ಯಕೀಯ 3ನೇ ಸುತ್ತಿನ ತಾತ್ಕಾಲಿಕ ಸೀಟು ಹಂಚಿಕೆ ಫಲಿತಾಂಶ ಪ್ರಕಟ: ಕೆಇಎ

• ಉದಯವಾಹಿನಿ, ಬೆಂಗಳೂರು

ಪ್ರಸಕ್ತ 2025ನೇ ಸಾಲಿನ ವೈದ್ಯಕೀಯ, ದಂತವೈದ್ಯಕೀಯ ಕೋರ್ಸುಗಳ ಪ್ರವೇಶಕ್ಕೆ ಮೂರನೇ ಸುತ್ತಿನ ಸೀಟು ಹಂಚಿಕೆಯ ತಾತ್ಕಾಲಿಕ ಫಲಿತಾಂಶವನ್ನು (ಅ.24 ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

ಇದಕ್ಕೆ ಯಾವುದೇ ಆಕ್ಷೇಪಣೆಯಿದ್ದಲ್ಲಿ ಅ.25ರ ಬೆಳಿಗ್ಗೆ 10ರೊಳಗೆ ಇಲ್ಲಿನ ಮಲ್ಲೇಶ್ವರದಲ್ಲಿರುವ ಕೆಇಎ ಕಚೇರಿಗೆ ಖುದ್ದು ಬಂದು ಬರೆದು ತಿಳಿಸಬಹುದು ಅಥವಾ keauthority-ka@nic.inಗೆ ಇ-ಮೇಲ್ ಕಳಿಸಬಹುದು ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸೂಚಿಸಿದೆ.

ಅಖಿಲ ಭಾರತ ಕೋಟಾ ಅಡಿಯ ಮೂರನೇ ಸುತ್ತಿನಲ್ಲಿ ಪಾಲ್ಗೊಂಡು ಸೀಟು ಪಡೆಯುವ ಜೊತೆಗೆ ಕೆಇಎ ಮೂರನೇ ಸುತ್ತಿನಲ್ಲಿಯೂ ಸೀಟು ಪಡೆದಿರುವ ಅಭ್ಯರ್ಥಿಗಳು ಕೆಇಎ ಸೀಟು ಉಳಿಸಿಕೊಳ್ಳಲು ಇಚ್ಛಿಸಿದಲ್ಲಿ ಅ.25ರ ಮಧ್ಯಾಹ್ನ 12:30ರೊಳಗೆ ಕೆಇಎ ಕಚೇರಿಗೆ ಬಂದು ಖುದ್ದು ಮನವಿ ನೀಡಬೇಕು ಅಥವಾ ತಾವು ಅರ್ಜಿಯಲ್ಲಿ ನಮೂದಿಸಿದ್ದ ಇ-ಮೇಲ್ ಐ.ಡಿ.ಯಿಂದ keauthority-ka@nic.inಗೆ ಇ-ಮೇಲ್ ಕಳಿಸಬೇಕು. ಇಲ್ಲದಿದ್ದರೆ ಅಂತಹ ಅಭ್ಯರ್ಥಿಗಳನ್ನು 3ನೇ ಸುತ್ತಿನ ಅಂತಿಮ ಸೀಟು ಹಂಚಿಕೆಗೆ ಪರಿಗಣಿಸುವುದಿಲ್ಲ ಹಾಗೂ ಪಾವತಿಸಿರುವ ವೈದ್ಯಕೀಯ ಕೋರ್ಸ್ ಶುಲ್ಕ ಠೇವಣಿಯನ್ನು ಹಿಂದಿರುಗಿಸುವುದಿಲ್ಲ ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ಮಾಧ್ಯಮ ಪ್ರಕಟಣೆಯಲ್ಲಿ ಸ್ಪಷ್ಟಪಡಿಸಿದ್ದಾರೆ.

ಮೂರನೇ ಸುತ್ತಿನ ಸೀಟು ಹಂಚಿಕೆಯ ಅಂತಿಮ ಫಲಿತಾಂಶವನ್ನು ಅ.27ರ ಮಧ್ಯಾಹ್ನ 12ರ ನಂತರ ಪ್ರಕಟಿಸಲಾಗುತ್ತದೆ. ಸೀಟು ಪಡೆದವರು ಅ.30ರೊಳಗೆ ಉಳಿದ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸಿ, ಸೀಟು ಖಾತರಿ ಚೀಟಿಯನ್ನು ಡೌನ್ ಲೋಡ್ ಮಾಡಿಕೊಂಡು ಆಯಾ ಕಾಲೇಜಿಗೆ ಎಲ್ಲಾ ಮೂಲದಾಖಲೆಗಳೊಂದಿಗೆ ತೆರಳಿ ಪ್ರವೇಶ ಪಡೆಯಬೇಕು ಎಂದು ತಿಳಿಸಲಾಗಿದೆ.

# ರಾಮಾಯಣ



**ಮಾರೀಚನು ಮಾಯಾ ಮೃಗರೂಪದಿಂದ ಸೀತಾದೇವಿಯ ಬಳಿಗೆ ಬಂದದ್ದು**

• ಹಿಂದಿನ ಸಂಚಿಕೆಯಿಂದ — 120 ನೆಯ ಅಧ್ಯಾಯ

ಇದು ಮಾಯೆಯಲ್ಲದೆ ಸಹಜವಾದದ್ದಲ್ಲ ಎಂದು ನುಡಿದನು. ಸೀತಾದೇವಿಯು ಆ ಮೃಗದಲ್ಲೇ ಪರವಶಳಾಗಿ ಬುದ್ಧಿತೋರದೆ ತನ್ನ ಪತಿಯನ್ನು ಕುರಿತು ಶ್ರೀರಾಮ ಮನೋಹರವಾದ ಈ ಮೃಗವು ನನ್ನ ಮನಸ್ಸನ್ನು ಅಪಹರಿಸುತ್ತಿದೆ. ನನಗೆ ವಿನೋದಾರ್ಥವಾಗಿ ಈ ಮೃಗವನ್ನು ತಂದು ಕೊಡು. ಈ ಆಶ್ರಮದಲ್ಲಿ ಮನೋಹರವಾದ ಅನೇಕ ಮೃಗಗಳು ಸಂಚರಿಸುತ್ತಿವೆ. ಕರಡಿಗಳು ಎರಳೆಗಳು ವಾನರಗಳು ಕಿನ್ನರ ಮೃಗಗಳು ಮೊದಲಾದ ಸುಂದರ ಮೃಗಗಳು ಸಂಚರಿಸುತ್ತಿವೆ. ಅವುಗಳೊಳಗೆ ಈ ಮೃಗಕ್ಕೆ ಸರಿಯಾದ ಮೃಗವೊಂದೂ ಇಲ್ಲ. ಈ ಜಿಂಕೆಯು ತೇಜಸ್ಸಿನಿಂದಲೂ ಕಾಂತಿಯಿಂದಲೂ ಅತಿಮನೋಹರವಾಗಿದೆ. ಅಲ್ಲಲ್ಲಿ ರತ್ನ ಬಿಂದು ರಜತಬಿಂದುಗಳುಳ್ಳದ್ದಾಗಿ ನಾನಾವರ್ಣವಾದ ಶರೀರವುಳ್ಳದ್ದಾಗಿ ಚಂದ್ರನಂತೆ ತನ್ನ ತನುಕಾಂತಿಯಿಂದ ಈ ವನವನ್ನು ಬೆಳಗಿಸುತ್ತಿದೆ. ಈ ಮೃಗಸ್ವರೂಪವನ್ನೂ ಇದರ ಸೌಂದರ್ಯವನ್ನೂ ಇದರ ಮನೋಹರವಾದ ಧ್ವನಿಯನ್ನೂ ಏನೆಂದು ಹೇಳಲಿ ನಾನಾವರ್ಣದ ಈ ಮೃಗವನ್ನು ಕಂಡು ನನಗೆ ಬಹಳ ಹರ್ಷವಾಗುತ್ತಿದೆ. ಈ ಮೃಗವು ಜೀವಸಹಿತವಾಗಿ ನಿನ್ನ ಕೈಗೆ ಸಿಕ್ಕಿದರೆ ವಿಸ್ಮಯವನ್ನುಂಟುಮಾಡುವುದು. ಕೈಗೆ ಸಿಕ್ಕದೆ ನಿನ್ನ ಬಾಣದಿಂದ ಹತವಾದ ಪಕ್ಷದಲ್ಲಿ ಇದರ ಕೋಮಲವಾದ ಚರ್ಮದಮೇಲೆ ಕುಳಿತುಕೊಳ್ಳಲು ಇಚ್ಛಿಸುತ್ತೇನೆ. ಸ್ತ್ರೀಯರಿಗೆ ಕಂಡದ್ದನ್ನು ಬೇಡುವುದು ಉಚಿತವಲ್ಲ. ಆದರೂ ಈ ಮೃಗದ ರೂಪವನ್ನು ಕಂಡು ನನಗೆ ಅತ್ಯಂತ ಕುತೂಹಲವಾಗಿದೆ ಎಂದು ಹೇಳಿದಳು. ಆ ಸಮಯದಲ್ಲಿ ಸುವರ್ಣಮಯವಾದ ರೋಮಗಳುಳ್ಳದ್ದಾಗಿ ಅನರ್ಘ್ಯವಾದ ರತ್ನಗಳಂತೆ ಒಪ್ಪುವ ಕೊಂಬುಗಳುಳ್ಳ ಆ ಮೃಗವು ಉದಯವಾಗುವ ಸೂರ್ಯನಿಂದ ಅಂತರಿಕ್ಷಮಾರ್ಗವು ಬೆಳಗುವಂತೆ ತನ್ನ ತನುಕಾಂತಿಯಿಂದ ಒಪ್ಪಿ ಮೆರೆಯುತ್ತ ಶ್ರೀರಾಮನಿಗೂ ಭ್ರಮೆಯನ್ನುಂಟು ಮಾಡಿತು. ಆತನು ಚಿತ್ರವರ್ಣದ ಮೃಗಕ್ಕೆ ಮನಸೋತು ಸೀತಾಜೀವಿಯಿಂದ ಪ್ರಾರ್ಥಿಸಲ್ಪಟ್ಟವನಾಗಿ ಲಕ್ಷ್ಮಣನನ್ನು ಕುರಿತು ಹೀಗೆಂದನು: ''ಲಕ್ಷ್ಮಣ, ಸೀತಾದೇವಿಗೆ ಈ ಮೃಗದಲ್ಲಿ ಇಚ್ಛೆಯಾಗಿರುವುದನ್ನು ನೋಡು. ಇಂಥ ಸುಂದರವಾದ ಮೃಗವು ಈ ವನದಲ್ಲಿ ಮತ್ತೊಂದಿಲ್ಲ. ಇಂದ್ರನ ನಂದನವನದಲ್ಲಿಯೂ ಕುಬೇರನ ಚೈತ್ರರಥವೆಂಬ ವನದಲ್ಲಿಯೂ ಇಲ್ಲ. ಇದರ ರೋಮ ರೇಖೆಗಳು ಸಾಲುಸಾಲಾಗಿ ಹಿಂದುಮುಂದಾಗಿ ಕನಕಬಿಂದು ರಜತಬಿಂದುಗಳಂತೆ ನಾನಾವಿಧವಾಗಿ ಕಂಗೊಳಿಸುತ್ತಿವೆ. ಇದು ಆಕಳಿಸುವಾಗ ಬಾಯೊಳಗೆ ನಾಲಿಗೆಯ ತುದಿಯು ಪ್ರಜ್ವಲಿಸುವ ಅಗ್ನಿಜ್ವಾಲೆಯಂತೆಯ ಮೇಘಮಂಡಲದ ಮಧ್ಯದಲ್ಲಿ ತೋರುವ ಮಿಂಚಿನಂತೆಯೂ ಮಿರುಗುತ್ತಿದೆ. ಇಂದ್ರನೀಲಮಣಿಯಂತೆ ಮುಖವುಳ್ಳದ್ದಾಗಿ ಶಂಖದಂತೆಯೂ ಮುತ್ತಿನಮಣಿಯಂತೆಯೂ ಒಪ್ಪುತ್ತಿರುವ ಹೊಟ್ಟೆಯುಳ್ಳ ಈ ಮೃಗವು ಯಾರ ಮನಸ್ಸನ್ನು ಅಪಹರಿಸದೆ ಇದ್ದೀತು ಪುಟವಿಟ್ಟ ಸುವರ್ಣದಂತೆ ತನುಕಾಂತಿಯುಳ್ಳದ್ದಾಗಿ ನಾನಾ ರತ್ನ ಮಯವಾದ ಈ ದಿವ್ಯಮೃಗವು ಎಲ್ಲರ ಮನಸ್ಸಿಗೂ ಆಶ್ಚರ್ಯವನ್ನುಂಟುಮಾಡುವುದು.

**ಮುಂದುವರಿಯುವುದು...**


# ಮುಖ ಚೆಂದ ಕಾಣಿಸುವಲ್ಲಿ ಪರಿಣಾಮಕಾರಿ ಸೆರಮ್



ನಾವು ನಮ್ಮ ಸೌಂದರ್ಯದ ಕಡೆಗೆ ಸ್ವಲ್ಪ ಗಮನಹರಿಸಿದರೆ ನಾವು ಹೇಗೇ ಇದ್ದರೂ ಆಕರ್ಷಕವಾಗಿ ಕಾಣುತ್ತೇವೆ. ತ್ವಚೆಯ ಆರೈಕೆ ಕಡೆಗೆ ತುಂಬಾನೇ ಗಮನಹರಿಸಬೇಕು. ತ್ವಚೆ ಸೌಂದರ್ಯ ಕಾಪಾಡುವಲ್ಲಿ ಸೆರಮ್ ತುಂಬಾನೇ ಪರಿಣಾಮಕಾರಿ, ಸೆರಮ್‌ನಲ್ಲಿ ಸ್ಕಿನ್‌ಕೇರ್ ಹೆಚ್ಚಾಗಿ ಬಳಸುವುದು ವಿಟಮಿನ್ ಸಿ ಹಾಗೂ ರೆಟಿನೋಲ್, ಆದರೆ ಕೆಲವರಿಗೆ ವಿಟಮಿನ್ ಸಿ ಪರಿಣಾಮಕಾರಿ, ಇನ್ನು ಕೆಲವರಿಗೆ ರೆಟಿನೋಲ್ ಸಹಕಾರಿ, ಇ ಇವುಗಳಲ್ಲಿ ನಿಮ್ಮ ತ್ವಚೆಗೆ ಯಾವುದು ಒಳ್ಳೆಯದು ಎಂದು ನೋಡೋಣ:

**ಮೊದಲಿಗೆ ರೆಟಿನೋಲ್ ಎಂದರೇನು ತಿಳಿಯೋಣ**

ರೆಟಿನೋಲ್ ಎಂಬುವುದು ವಿಟಮಿನ್ ಎ ಬ್ಯೂಟಿ ಸೆರಮ್ ಆಗಿದೆ, ಇದು ತ್ವಚೆಯನ್ನು ಮೃದುವಾಗಿಸಲು, ತ್ವಚೆ ಕಾಂತಿ ಹೆಚ್ಚಿಸಲು ಸಹಕಾರಿಯಾಗಿದೆ, ಯಾರಿಗೆ ನೆರಿಗೆ ಬೀಳುತ್ತದೆ, ಮೊಡವೆ, ಹೈಪರ್‌ಪಿಗ್ಮೆಂಟೇಷನ್ ಇವುಗಳನ್ನು ತಡೆಗಟ್ಟಲು ಸಹಕಾರಿಯಾಗಿದೆ. ರೆಟಿನೋಲ್ ನೆರಿಗೆ ತಡೆಗಟ್ಟಲು ಸಹಕಾರಿಯಾಗಿದೆ ವಯಸ್ಸು ಮೂವತ್ತು ದಾಟುತ್ತಿದ್ದಂತೆ ಮುಖದಲ್ಲಿ ನೆರಿಗೆ ಬೀಳಲಾರಂಭಿಸುತ್ತದೆ, ಆದರೆ ಈ ರೆಟಿನೋಲ್ ಬಳಸಿ ಆರೈಕೆ ಮಾಡುವುದರಿಂದ ಮುಖದಲ್ಲಿ ನೆರಿಗೆ ಬೀಳುವುದು ಕಡಿಮೆಯಾಗುವುದು, ಅಲ್ಲದೆ ಡ್ರೈ ತ್ವಚೆಯಿದ್ದರೆ ತ್ವಚೆಯನ್ನು ಮೃದುವಾಗಿಸಲು ಸಹಕಾರಿ. ಹಾಗಾಗಿ ಮುಖದಲ್ಲಿ ನೆರಿಗೆ ಬೀಳುವುದನ್ನು ತಡೆಗಟ್ಟಲು ರೆಟಿನೋಲ್ ಸಹಕಾರಿಯಾಗಿದೆ. ಮೊಡವೆ ತಡೆಗಟ್ಟುತ್ತದೆ



ವಿಟಮಿನ್ ಸಿಗೆ ಹೋಲಿಕೆ ಮಾಡಿದರೆ ಮೊಡವೆ ತಡೆಗಟ್ಟಲು ರೆಟಿನೋಲ್ ಸಹಕಾರಿಯಾಗಿದೆ, ಇದು ಮುಖದಲ್ಲಿ ರಂಧ್ರಗಳು ಬೀಳುವುದನ್ನು ತಡೆಗಟ್ಟುತ್ತದೆ, ಅಲ್ಲದೆ ಮೊಡವೆಯಿಂದ ಉಂಟಾಗುವ ಉರಿಯೂತ ತಡೆಗಟ್ಟಲು ಅಲ್ಲದೆ ಮೊಡವೆ ಏಳುವುದನ್ನು ತಡೆಗಟ್ಟಲು ಸಹಕಾರಿಯಾಗಿದೆ. ಹಾಗಾಗಿ ಮೊಡವೆ ಸಮಸಯೆ ಇರುವವರೆಗೆ ರೆಟಿನೋಲ್ ಬಳಸುವುದು ಸೂಕ್ತವಾಗಿದೆ

**ಕಪ್ಪುಕಲೆ ಹೋಗಲಾಡಿಸುತ್ತೆ:** ರೆಟಿನೋಲ್ ಹೈಪರ್ ಪಿಗ್ಮೆಂಟೇಷನ್ ತಡೆಗಟ್ಟಲು ಸಹಕಾರಿಯಾಗಿದೆ, ಇದು ಕಪ್ಪು ಕಲೆ ಹೋಗಲಾಡಿಸುತ್ತೆ, ಅಲ್ಲದೆ ಸನ್ ಡ್ಯಾಮೇಜ್, ಮೊಡವೆ ಕಲೆ ಹೋಗಲಾಡಿಸಲು ಅಲ್ಲದೆ ಪಿಗ್ಮೆಂಟೇಷನ್, ಕಪ್ಪು ಕಲೆ ಇವುಗಳನ್ನು ಹೋಗಲಾಡಿಸಲು ಈ ಸೆರಮ್ ಸಹಕಾರಿಯಾಗಿದೆ.

> **ತ್ವಚೆಯ ಬಿಳುಪು ಹೆಚ್ಚಿಸುತ್ತದೆ**
> **ಇದು ತ್ವಚೆ ಬಣ್ಣ ಬಿಳುಪಾಗಿಸುತ್ತದೆ ಹೀಗಾಗಿ ಹೈಪರ್ ಪಿಗ್ಮೆಂಟೇಷನ್ ಉಂಟಾಗದಂತೆ ತಡೆಯುವಲ್ಲಿ ಸಹಕಾರಿಯಾಗಿದೆ, ಅಲ್ಲದೆ ಮುಖದ ಕಾಂತಿ ಹೆಚ್ಚಿಸುವುದು. ಈಗ ನಿಮ್ಮ ತ್ವಚೆಗೆಯಾವುದು ಅವಶ್ಯಕ ಅನಿಸುವುದೋ ಅದನ್ನು ಬಳಸಿ ತ್ವಚೆ ಆರೈಕೆ ಮಾಡಿ.**

**ವಿಟಮಿನ್ ಸಿ ಸೆರಮ್ ಎಂದರೇನು** ಇದು ತ್ವಚೆಯ ಕಾಂತಿ ಹೆಚ್ಚಿಸುತ್ತದೆ, ವಿಟಮಿನ್ ಸಿ ವಾಯು ಮಾಲಿನ್ಯದಿಂದ ತ್ವಚೆ ರಕ್ಷಣೆ ಮಾಡುತ್ತದೆ, ಅಲ್ಲದೆ ವಿಟಮಿನ್ ಸಿ ಮುಖದಲ್ಲಿ ಕೊಲೆಜಿನ್ ಉತ್ಪತ್ತಿ ಹೆಚ್ಚಿಸಲು ಸಹಕಾರಿಯಾಗಿದೆ. ವಿಟಮಿನ್ ಸಿ ಸೆರಮ್ ಹೈಪರ್ ಪಿಗ್ಮೆಂಟೇಷನ್ ಕಡಿಮೆ ಮಾಡಿ, ಮುಖದ ಕಾಂತಿ ಹಚ್ಚಿಸುತ್ತದೆ, ಮುಖದ ಕಾಂತಿ ಹೆಚ್ಚಿಸುವಲ್ಲಿ ಇದು ಸಹಕಾರಿಯಾಗಿದೆ. ಇದರಲ್ಲಿ antioxidants ಅಧಿಕವಿರುತ್ತದೆ ವಿಟಮಿನ್ ಸಿಯಲ್ಲಿ antioxidants ಅಧಿಕವಿರುತ್ತದೆ ಅಲ್ಲದೆ ಇದು ಕೂಡ ಅವಧಿಪೂರ್ವ ನೆರಿಗೆ ಬೀಳುವುದನ್ನು ತಡೆಗಟ್ಟುವಲ್ಲಿ ಸಹಕಾರಿಯಾಗಿದೆ, ಅಲ್ಲದೆ ಇದನ್ನು ಯೌವನ ಪ್ರಾಯದಲ್ಲಿಯೇ ಬಳಸಲಾರಂಭಿಸಿದರೆ ವಯಸ್ಸು 40 ದಾಟಿದರೂ ಮುಖದಲ್ಲಿ ನೆರಿಗೆ ಬೀಳುವುದನ್ನು ತಡೆಗಟ್ಟಬಹುದಾಗಿದೆ ಅಲ್ಲದೆ ಇದು ಪರಿಸರ ಮಾಲಿನ್ಯದಿಂದ ತ್ವಚೆ ರಕ್ಷಣೆಗೆ ತುಂಬಾನೇ ಸಹಕಾರಿಯಾಗಿದೆ. ಮುಖದಲ್ಲಿ ಕೊಲೆಜಿನ್ ಉತ್ಪತ್ತಿಗೆ ಸಹಕಾರಿ ವಿಟಮಿನ್ ಸಿ ಮುಖದಲ್ಲಿ ಕೊಲೆ ಜಿನ್ ಉತ್ಪತ್ತಿಗೆ ತುಂಬಾನೇ ಸಹಕಾರಿಯಾಗಿದೆ,

ಇದರಿಂದಾಗಿ ಮುಖದಲ್ಲಿ ಯೌವನದ ಕಳೆ ಬೇಗನೆ ಮಾಸುವುದಿಲ್ಲ. ವಿಟಮಿನ್ ಸಿ ಬಳಸುವುದರಿಂದ ತ್ವಚೆ ಸಡಿಲವಾಗುವುದಿಲ್ಲ, ತ್ವಚೆಯನ್ನು ಬಿಗಿಯಾಗಿಡುತ್ತದೆ.

# ಪುರಸಭೆ ವಿಶೇಷ ಸಭೆ : ಪಾವತಿ ಪಾರ್ಕಿಂಗ್ ವ್ಯವಸ್ಥೆಗೆ ಒಪ್ಪಿಗೆ

• ಉದಯವಾಹಿನಿ ಕುಂದಾಪುರ

ಪುರಸಭಾ ವ್ಯಾಪ್ತಿಯಲ್ಲಿನ ವಾಹನಗಳ ಅವ್ಯವಸ್ಥಿತ ನಿಲುಗಡೆಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ, ವಾಹನಗಳ ನಿಲುಗಡೆಗೆ ಸೂಕ್ತ ಪಾರ್ಕಿಂಗ್ ಸೌಲಭ್ಯ ಕಲ್ಪಿಸಿ. ಇದಕ್ಕಾಗಿ ವಾಹನ ಚಾಲಕರು–ಮಾಲೀಕರಿಂದ ಹಣ ಪಡೆಯುವ ವ್ಯವಸ್ಥೆ ಜಾರಿಗೆ ತರಲು ಶಾಸಕ ಎ.ಕಿರಣ್ ಕುಮಾರ ಕೊಡ್ಗಿ ಅವರ ಪ್ರಸ್ತಾವನೆಗೆ ಪುರಸಭೆಯ ಬಹುತೇಕ ಸದಸ್ಯರು ಒಪ್ಪಿಗೆ ಸೂಚಿಸಿದ್ದಾರೆ.

ಪುರಸಭೆಯ ಡಾ.ವಿ.ಎಸ್.ಆಚಾರ್ಯ ಸಭಾಂಗಣದಲ್ಲಿ ನಗರದ ಪಾರ್ಕಿಂಗ್ ವ್ಯವಸ್ಥೆಯ ಕುರಿತಂತೆ ಶಾಸಕ ಎ.ಕಿರಣ್ ಕುಮಾರ್ ಕೊಡ್ಗಿ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ, ಶಾಸ್ತ್ರಿ ಸರ್ಕಲ್ ಬಳಿಯಲ್ಲಿನ ಫ್ಲೈಓವರ್ ಕೆಳಗೆ ಪಾವತಿ ಆಧಾರಿತ ವ್ಯವಸ್ಥಿತ ಪಾರ್ಕಿಂಗ್ ಕಲ್ಪಿಸುವ ಬಗ್ಗೆ ವಿಸ್ತ್ರತ ಚರ್ಚೆ ನಡೆಯಿತು.

ಲಯನ್ಸ್ ಕ್ಲಬ್ ವತಿಯಿಂದ ರೂ. 50 ಲಕ್ಷ ವೆಚ್ಚದಲ್ಲಿ


☛ ಉದಯವಾಹಿನಿ ಚಿತ್ರ

ಎರಡು ಬದಿಯಲ್ಲಿ ತಲಾ 20 ಸಾವಿರ ಚದರ ಅಡಿಯ ಸ್ಥಳವನ್ನು ಸುಂದರೀಕರಣ ಮಾಡಲಾಗಿದೆ. ಪಾರ್ಕಿಂಗ್ ವ್ಯವಸ್ಥೆಗೆ ಈ ಸ್ಥಳವನ್ನು ಬಳಸಿಕೊಳ್ಳಬಹುದು. ಇದರಿಂದ ನಗರದ ದೊಡ್ಡ ಸಮಸ್ಯೆ ನಿವಾರಣೆಯಾಗುತ್ತದೆ ಎಂದು ಲಯನ್ಸ್ ಕ್ಲಬ್‌ನ ರಮಾನಂದ ಕೆ. ಹೇಳಿದರು. ಉತ್ತಮ ನಿರ್ವಹಣೆಗಾಗಿ ಸಿಬ್ಬಂದಿಗಳ ನೇಮಕಾತಿ ಹಾಗೂ ನಿಲುಗಡೆಗೆ ಮಾರ್ಕಿಂಗ್ ಅಗತ್ಯತೆ ಬಗ್ಗೆ ಸದಾನಂದ ನಾವಡ ಹಾಗೂ ಪ್ರಜೇಶ್ ಪ್ರಭು ಹೇಳಿದರು.

ಡಿವೈಎಸ್‌ಪಿ ಎಚ್.ಡಿ.ಕುಲಕರ್ಣಿ ಮಾತನಾಡಿ, ಉಚಿತ ನಿಲುಗಡೆಗೆ ಅವಕಾಶ ಕೊಟ್ಟಲ್ಲಿ ಗಂಟೆಗಟ್ಟಲೆ ವಾಹನ ನಿಲ್ಲಿಸಿ ಹೋಗುವವರಿದ್ದಾರೆ. ವಾಹನ ಹಾಳಾದಲ್ಲಿ, ದೂರದ ಊರಿಗೆ ಹೋದಲ್ಲಿ ವಾರಗಟ್ಟಲೆ ಇಟ್ಟು ಹೋಗುವವರೂ ಇದ್ದಾರೆ. ಶುಚಿತ್ವ, ನಿರ್ವಹಣೆ ಸೇರಿ ಅನೇಕ ಸಮಸ್ಯೆಗಳು ಬರುತ್ತವೆ. ವ್ಯವಸ್ಥಿತ ನಿರ್ವಹಣೆಗೆ ಹಣ ಪಾವತಿಸುವ ಪದ್ಧತಿಯೇ ಉತ್ತಮ ಎಂದರು.

ಬೇಕಾಬಿಟ್ಟಿ ವಾಹನ ನಿಲುಗಡೆಯಿಂದ ಸಂಚಾರ ವ್ಯವಸ್ಥೆಯೇ ಹದಗೆಟ್ಟು ಹೋಗುತ್ತಿದೆ. ಭಂಡಾರ್ಕಾರ್ಸ್ ಕಾಲೇಜು ರಸ್ತೆಯಲ್ಲಿ ಒಂದೇ ಬದಿ ವಾಹನ ನಿಲುಗಡೆಗೆ ಅವಕಾಶ ಮಾಡಬೇಕು. ಸಾಧ್ಯವಾದರೆ ಉಚಿತ ಪಾರ್ಕಿಂಗ್ ವ್ಯವಸ್ಥೆ ಆಗಲಿ. ಹಣ ಕೊಟ್ಟು ಪಾರ್ಕಿಂಗ್ ವ್ಯವಸ್ಥೆಗೆ ಹೋಗುವವರ ಸಂಖ್ಯೆ ಕಡಿಮೆ ಇರುವುದರಿಂದ ಇದು ವಿಫಲ ಆಗುವ ಸಾಧ್ಯತೆಯೂ ಇದೆ ಎಂದು ರೋಹಿಣಿ ಉದಯ ಕುಮಾರ್ ಹೇಳಿದರು. ದೊಡ್ಡ ನಗರಗಳಂತೆ ಇಲ್ಲಿ ಮಲ್ಟಿ ಲೆವೆಲ್ ಪಾರ್ಕಿಂಗ್ ಕಟ್ಟಡ ನಿರ್ಮಾಣ ಕಷ್ಟ. ಹೆಚ್ಚಿನ ರಾಷ್ಟ್ರೀಯ ಹೆದ್ದಾರಿ ಫ್ಲೈಓವರ್ ಅಡಿ ವಾಹನ ನಿಲುಗಡೆಗೆ ಹೆದ್ದಾರಿ ಪ್ರಾಧಿಕಾರ ಅವಕಾಶ ನೀಡಿದ್ದರೂ, ಕುಂದಾಪುರದಲ್ಲಿ ಕ್ಯಾತೆ ತೆಗೆಯುವುದು ಸರಿಯಲ್ಲ. ನಗರದಲ್ಲಿ ವ್ಯವಸ್ಥಿತ ಪಾರ್ಕಿಂಗ್ ಬೇಕು, ಹಣ ಪಾವತಿಯಾದರೂ ಪರವಾಗಿಲ್ಲ ಎಂದು ಗಿರೀಶ್ ಜಿ.ಕೆ. ಹೇಳಿದರು.

## ಸುಲಿಗೆ ಯತ್ನ: ಇಬ್ಬರ ವಿರುದ್ಧ ಪ್ರಕರಣ ದಾಖಲು

• ಉದಯವಾಹಿನಿ ಮಂಗಳೂರು

ಪಟಾಕಿ ಅಂಗಡಿ ಮಾಲೀಕನನ್ನು ಬೆದರಿಸಿ ಸುಲಿಗೆ ಮಾಡಲು ಯತ್ನಿಸಿದ ಇಬ್ಬರ ವಿರುದ್ಧ ಬಜಪೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸುರತ್ಕಲ್‌ನ ಫಾಜಿಲ್ ಕೊಲೆ ಆರೋಪಿ, ರೌಡಿಶೀಟರ್ ಪ್ರಶಾಂತ್ ಯಾನೆ ಪಚ್ಚು ಮತ್ತು ಆತನ ಗೆಳೆಯ ಅಶ್ವಿತ್ ಆರೋಪಿಗಳು.

ಅ.22ರಂದು ದಾಮೋದರ್ ಎಂಬವರ ಅಂಗಡಿಗೆ ಹೋದ ಇಬ್ಬರೂ ಹಣ ನೀಡುವಂತೆ ಬೆದರಿಸಿದ್ದಾರೆ. ಹೆದರಿಕೆಯಿಂದ ದಾಮೋದರ್ ದೂರು ನೀಡಲು ಹಂಜರಿದಿದ್ದರು. ರಕ್ಷಣೆಯ ಭರವಸೆ ನೀಡಿದ ನಂತರ ದೂರು ದಾಖಲಿಸಿದ್ದಾರೆ. ಆರೋಪಿಗಳು ತಲೆಮರೆಸಿಕೊಂಡಿದ್ದಾರೆ ಎಂದು ನಗರ ಪೊಲೀಸ್ ಕಮಿಷನರ್ ಸುಧೀರ್ ಕುಮಾರ್ ರೆಡ್ಡಿ ತಿಳಿಸಿದ್ದಾರೆ.

## ಮಳೆಯಿಂದ ನೆಲಕ್ಕೊರಗಿದ ಭತ್ತ ಕ್ರಿಮಿನಾಶಕ ಸೇವಿಸಲು ಮುಂದಾದ ರೈತ

• ಉದಯವಾಹಿನಿ ಕೊಪ್ಪಳ

ಜಿಲ್ಲೆಯಲ್ಲಿ ಮೂರ್ನಾಲ್ಕು ದಿನಗಳಿಂದ ಸುರಿದ ಮಳೆ ಹಾಗೂ ಗಾಳಿಯಿಂದಾಗಿ ಭತ್ತದ ಬೆಳೆಗೆ ಹಾನಿಯಾಗಿದ್ದು, ಇದರಿಂದ ಮನನೊಂದು ಕೊಪ್ಪಳ ತಾಲ್ಲೂಕಿನ ಬಸಾಪುರ ಗ್ರಾಮದ ರೈತ ಲಕ್ಷ್ಮಣ ರಾಜರಾಮಪೇಟೆ ಕ್ರಿಮಿನಾಶಕ ಸೇವಿಸಲು ಮುಂದಾಗಿದ್ದ ಘಟನೆ ಶುಕ್ರವಾರ ನಡೆದಿದೆ. ಅಕ್ಕಪಕ್ಕದಲ್ಲಿದ್ದರು ರೈತನನ್ನು ತಡೆದು ಸಮಾಧಾನ ಪಡಿಸಿದ್ದಾರೆ. ಲಕ್ಷ್ಮಣ ಎಂಟು ಎಕರೆಯಲ್ಲಿ ಭತ್ತ ಬೆಳೆದಿದ್ದರು. ನಿರಂತರ ಮಳೆಯಿಂದಾಗಿ ಕೊಪ್ಪಳ ತಾಲ್ಲೂಕಿನ ಹಿಟ್ನಾಳ, ಹುಲಿಗಿ, ಅಗಳಕೇರಾ, ಬಂಡಿಹರ್ಲಾಪುರ, ಬಸಾಪುರ ಸೇರಿದಂತೆ ಅನೇಕ ಕಡೆ ಭತ್ತದ ಬೆಳೆಗೆ ಹಾನಿಯಾಗಿದೆ. ಗಂಗಾವತಿ ಮತ್ತು ಕಾರಟಗಿ ತಾಲ್ಲೂಕಿನಲ್ಲಿಯೂ ಭತ್ತ ನೆಲಕ್ಕೊರಗಿದೆ. ರಾತ್ರಿ ಹಾಗೂ ಶುಕ್ರವಾರ ಬೆಳಿಗ್ಗೆಯಿಂದ ಸಂಜೆ ತನಕ ಮಳೆ ಸುರಿದಿದ್ದು ದೈನಂದಿನ ಚಟುವಟಿಕೆ ಮೇಲೂ ಪರಿಣಾಮ ಬೀರಿತು. ಗಾಳಿ ಹಾಗೂ ಮಳೆಯಿಂದಾಗಿ ಜಿಲ್ಲೆಯ ಕೆಲವು ಕಡೆ ಭತ್ತದ ಬೆಳೆಗೆ ಹಾನಿಯಾಗಿದ್ದು ಇಲಾಖೆಯ ಸಿಬ್ಬಂದಿ ಭೇಟಿ ನೀಡಿ ಪರಿಶೀಲಿಸಿದ್ದಾರೆ. ಮಳೆ ಪೂರ್ಣವಾಗಿ ನಿಂತ ಬಳಿಕ ಹಾನಿ ಪ್ರಮಾಣ ಗೊತ್ತಾಗಲಿದೆ' ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕ ರುದ್ರೇಶಪ್ಪ ಟಿ.ಎಸ್. ತಿಳಿಸಿದರು.

## • ದೂರು ಬಂದ ಬೆನ್ನಲ್ಲೇ ಜಿಲ್ಲಾಡಳಿತದಿಂದ ರಾಜ್ಯ ಸರ್ಕಾರಕ್ಕೆ ವರದಿ ಸಲ್ಲಿಕೆ

# ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಲ್ಲಿ ಭ್ರಷ್ಟಾಚಾರ


• ಉದಯವಾಹಿನಿ ಕೊಪ್ಪಳ

ಜಿಲ್ಲೆಯ ಗಣಿ , ಭೂ ವಿಜ್ಞಾನ ಇಲಾಖೆಯಲ್ಲಿ ಭ್ರಷ್ಟಾಚಾರದ ಆರೋಪ ಹಾಗೂ ನಿಯಮಬಾಹಿರವಾಗಿ ಕೆಲಸ ಮಾಡುತ್ತಿರುವ ಕುರಿತು ದೂರು ಬಂದ ಬೆನ್ನಲ್ಲೇ ಜಿಲ್ಲಾಡಳಿತದಿಂದ ರಾಜ್ಯ ಸರ್ಕಾರಕ್ಕೆ ವರದಿ ಸಲ್ಲಿಕೆಯಾಗಿದೆ. ಗಣಿ ಇಲಾಖೆಯ ಕೊಪ್ಪಳ ಜಿಲ್ಲೆಯ ಅಧಿಕಾರಿಗಳ ನಡೆಯಿಂದ ರಾಜ್ಯ ಸರ್ಕಾರಕ್ಕೆ ರಾಜಧನ ನಷ್ಟವಾಗುತ್ತಿದೆ. ಆದ್ದರಿಂದ ಹಿರಿಯ ಭೂ ವಿಜ್ಞಾನಿ ಪುಷ್ಪಲತಾ ಎಸ್. ಕವಲೂರು ಸೇರಿದಂತೆ 10 ಜನ ಸಿಬ್ಬಂದಿಯನ್ನು ವರ್ಗಾವಣೆ ಮಾಡಬೇಕು ಎಂದು ಮುಖ್ಯಮಂತ್ರಿ ಆರ್ಥಿಕ ಸಲಹೆಗಾರರೂ ಆದ ಶಾಸಕ ಬಸವರಾಜ ರಾಯರಡ್ಡಿ ಅವರು ಮುಖ್ಯಮಂತ್ರಿಗೆ ಪತ್ರ ಬರೆದಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿಯೂ ವ್ಯಾಪಕ ಚರ್ಚೆಯಾಗುತ್ತಿದೆ.

**ಸರ್ಕಾರಕ್ಕೆ ಜಿಲ್ಲಾಡಳಿತ ವರದಿ**

ಜಿಲ್ಲೆಯಲ್ಲಿ ಸುಮಾರು 85 ಕಿ.ಮೀ. ಗೂ ಹೆಚ್ಚು ತುಂಗಭದ್ರಾ ನದಿಯ ತಟವಿದ್ದು ನೈಸರ್ಗಿಕವಾಗಿ ಸಾಕಷ್ಟು ಮಣ್ಣು ಶೇಖರಣೆಯಾಗುತ್ತದೆ. ಇದು ಅಕ್ರಮವಾಗಿ ಸಾಗಣೆ ಮಾಡಲಾಗುತ್ತಿದೆ ಎಂದು ರಾಯರಡ್ಡಿ ಅವರು ಪತ್ರದಲ್ಲಿ ಆರೋಪಿಸಿದ್ದಾರೆ. ಇದರ ಬೆನ್ನಲ್ಲೇ ಸರ್ಕಾರದ ಮುಖ್ಯ ಕಾರ್ಯದರ್ಶಿ ಕಚೇರಿಯಿಂದ ಜಿಲ್ಲಾಡಳಿತಕ್ಕೆ ವರದಿ ನೀಡುವಂತೆ ಸೂಚಿಸಲಾಗಿದ್ದು, ಜಿಲ್ಲಾಡಳಿತ ಮತ್ತು ಗಣಿ ಇಲಾಖೆಯ ಹೆಚ್ಚುವರಿ ನಿರ್ದೇಶಕರು ಕೂಡ ಒಂದಷ್ಟು ದಾಖಲೆಗಳನ್ನು ಕಳುಹಿಸಿದ್ದಾರೆ. ಈ ಕುರಿತು ಶುಕ್ರವಾರ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ಸುರೇಶ ಇಟ್ನಾಳ, ರಾಯರಡ್ಡಿ ಅವರ ಪತ್ರದ ಬಳಿಕ ತನಿಖೆ ನಡೆಯುತ್ತಿದೆ. ಕುಕನೂರು ತಾಲ್ಲೂಕಿನ ತಳಕಲ್ ಗ್ರಾಮದ

> ಅಕ್ರಮ ಗಣಿಗಾರಿಕೆ ಬಗ್ಗೆ ದೂರುಗಳು ಬಂದಾಗಲೆಲ್ಲ ಕ್ರಮ ಕೈಗೊಂಡು ಎಫ್‌ಐಆರ್ ಹಾಕಿದ್ದೇವೆ. ದಂಡವನ್ನೂ ವಿಧಿಸಿದ್ದೇವೆ. ಅಕ್ರಮ ತಡೆಯಲು ಕಾರ್ಯಪಡೆ ರಚಿಸಲಾಗಿದೆ.
>
> –ಸುರೇಶ ಇಟ್ನಾಳ, ಜಿಲ್ಲಾಧಿಕಾರಿ


☛ ಉದಯವಾಹಿನಿ ಚಿತ್ರ

**ತಾಂತ್ರಿಕ ಬಿಡ್‌ಗೂ ಮೊದಲೇ ಹಣಕಾಸು ಬಿಡ್**

**ಜಿಲ್ಲೆಯಲ್ಲಿ ಅಧಿಕೃತವಾಗಿಯೇ ಮರಳು ಪಾಯಿಂಟ್‌ಗಳನ್ನು ಗುರುತಿಸಲು ಕರೆಯಲಾಗಿದ್ದ ಟೆಂಡರ್ ಪೂರ್ಣಗೊಳ್ಳುವ ಮೊದಲೇ ಹಣಕಾಸು ಬಿಡ್ ಬಹಿರಂಗವಾಗಿರುವ ಅಂಶ ಗೊತ್ತಾಗಿದೆ. ತಾಲ್ಲೂಕಿನ ಹಿರೇಹಳ್ಳ ಸೇರಿದಂತೆ ಅನೇಕ ಕಡೆ ವ್ಯಾಪಕವಾಗಿ ಮರಳು ಅಕ್ರಮವಾಗಿ ಸಾಗಣೆ ಮಾಡುತ್ತಿರುವ ಆರೋಪಗಳು ಕೇಳಿಬಂದಿವೆ. ಆದ್ದರಿಂದ ಜಿಲ್ಲೆಯಾದ್ಯಂತ ಮರಳು ಪಾಯಿಂಟ್‌ಗಳನ್ನು ಅಧಿಕೃತಗೊಳಿಸಲು ಹಿಂದಿನ ಜಿಲ್ಲಾಧಿಕಾರಿಯಿದ್ದಾಗ ಟೆಂಡರ್ ಕರೆಯಲಾಗಿತ್ತು. ತಾಂತ್ರಿಕ ಬಿಡ್ ಪ್ರಕ್ರಿಯೆ ಪೂರ್ಣಗೊಳ್ಳುವ ಮೊದಲೇ ಆರ್ಥಿಕ ಬಿಡ್ ಬಹಿರಂಗವಾಗಿದ್ದರಿಂದ ಟೆಂಡರ್ ಪ್ರಕ್ರಿಯೆಯನ್ನೇ ರದ್ದುಪಡಿಸಿ ಈಗ ಮತ್ತೊಮ್ಮೆ ಟೆಂಡರ್ ಕರೆಯಲಾಗಿದೆ.**

ಬೆಣ್ಣೆಕೆರೆಯ ಸರ್ವೆ ಸಂಖ್ಯೆ 277ರ 9.07 ಎಕರೆ ಪ್ರದೇಶದಲ್ಲಿ ಅಭಿವೃದ್ಧಿ ಕಾಮಗಾರಿ ವಿಚಾರವಾಗಿ ವಿಧಿಸಲಾಗಿದ್ದ ರಾಜಧನ ವಿಚಾರದಲ್ಲಿ ತಪ್ಪು ಗ್ರಹಿಕೆಯಾಗಿದೆ. ಇದು ಮನವರಿಕೆಯಾದ ಬಳಿಕ ಆದೇಶ ವಾಪಸ್ ಪಡೆಯಲಾಗಿದೆ' ಎಂದು ಸ್ಪಷ್ಟಪಡಿಸಿದರು. ಅಕ್ರಮವಾಗಿ ಗಣಿಗಾರಿಕೆ ಮಾಡುತ್ತಿರುವವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಗಣಿ ಇಲಾಖೆ ಅಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನ ನೀಡಿದ್ದೇನೆ. ಅಗತ್ಯ ಸಂದರ್ಭದಲ್ಲಿ ಪೊಲೀಸರು ಕೂಡ ಅವರಿಗೆ ರಕ್ಷಣೆ ಕೊಡುತ್ತಿದ್ದಾರೆ. ಅಕ್ರಮ ತಡೆಯುವುದು ಗಣಿ ಇಲಾಖೆಯ ಅಧಿಕಾರಿಗಳದ್ದು ಪ್ರಮುಖ ಕೆಲಸವಿರುತ್ತದೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ತಿಳಿಸಿದ್ದು ಅವರೂ ಅಧಿಕಾರಿಗಳ ರಕ್ಷಣೆಗೆ ಕ್ರಮ ವಹಿಸಿದ್ದಾರೆ' ಎಂದು ತಿಳಿಸಿದರು.

**ಅನಾಮಧೇಯ ಪತ್ರಕ್ಕೆ ಹೊಣೆಯಿಲ್ಲ**


**ಬಸವರಾಜ ರಾಯರಡ್ಡಿ ಅವರ ಪತ್ರದ ಬಗ್ಗೆ ಮಾಧ್ಯಮಗಳಲ್ಲಿ ವರದಿ ಬಂದ ದಿನವೇ ಸಾಮಾಜಿಕ ತಾಣಗಳಲ್ಲಿ ರಾಯರಡ್ಡಿ ಅವರಿಗೆ 20 ಪ್ರಶ್ನೆಗಳನ್ನು ಕೇಳಿದ ಅನಾಮಧೇಯ ಪತ್ರ ಹರಿದಾಡಿತ್ತು. ಅನಾಮಧೇಯ ಪತ್ರಕ್ಕೆ ಉತ್ತರ ನೀಡುವುದಿಲ್ಲ ಎಂದು ಜಿಲ್ಲಾಧಿಕಾರಿ ಸ್ಪಷ್ಟಡಿಸಿದರೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಪತ್ರಕ್ಕೂ ನಮಗೂ ಸಂಬಂಧವಿಲ್ಲ ಎಂದಿದ್ದಾರೆ. ಹಿರಿಯ ಭೂ ವಿಜ್ಞಾನಿ ಪುಷ್ಪಲತಾ ಎಸ್. ಕವಲೂರು ಪತ್ರದ ಕುರಿತು ಸ್ಪಷ್ಟಿಕರಣ ನೀಡಿದ್ದು 'ಸಹಿ ಇಲ್ಲದ ಪತ್ರಕ್ಕೂ ಇಲಾಖೆಗೂ ಯಾವುದೇ ಸಂಬಂಧವಿಲ್ಲ. ಈ ವಿಷಯವನ್ನು ಜಿಲ್ಲಾ ಕಚೇರಿಯಿಂದ ಹೊರಡಿಸಿರುವುದಿಲ್ಲ' ಎಂದು ಹೇಳಿದ್ದಾರೆ.**

## ಬೋಟ್ ಮುಳುಗಡೆ: ಪರಿಹಾರಕ್ಕಾಗಿ ಸಚಿವರಿಗೆ ಮನವಿ

• ಉದಯವಾಹಿನಿ ಅಂಕೋಲಾ

ತಾಲ್ಲೂಕಿನ ಬೇಲೆಕೇರಿ ಮೀನುಗಾರಿಕಾ ಬಂದರಿನಲ್ಲಿ ಅಲೆ ತಡೆಗೋಡೆ ಮತ್ತು ಡ್ರೆಜಿಂಗ್ ಇಲ್ಲದ ಕಾರಣ ಎರಡು ದೋಣಿಗಳು ಮುಳುಗಿ ಲಕ್ಷಾಂತರ ರೂಪಾಯಿ ಹಾನಿಯಾಗಿರುವುದಕ್ಕೆ ಪರಿಹಾರ ದೊರಕಿಸಿಕೊಡುವಂತೆ ಒತ್ತಾಯಿಸಿ ಬೆಲೇಕೇರಿ ಫಿಶರೀಸ್ ಕೋ – ಆಪರೇಟಿವ್ ಸೊಸೈಟಿ ವತಿಯಿಂದ ಮೀನುಗಾರಿಕಾ ಮತ್ತು ಬಂದರು ಒಳನಾಡು ಜಲಸಾರಿಗೆ ಸಚಿವ ಮಂಕಾಳ ವೈದ್ಯ ಅವರಿಗೆ ಅಂಕೋಲಾದಲ್ಲಿ ಮನವಿ ಸಲ್ಲಿಸಲಾಯಿತು.

ಬೇಲೆಕೇರಿ ಬಂದರಿನಲ್ಲಿ ಕಳೆದ ವಾರ ಬೆಳಗಿನ ಜಾವ ಸಮುದ್ರದಲ್ಲಿ ರಭಸವಾಗಿ ಬಂದ ಅಲೆಗಳ ಅಬ್ಬರಕ್ಕೆ ಸಿಲುಕಿ ಹಾಗೂ ಮೀನುಗಾರಿಕೆ ಮುಗಿಸಿಕೊಂಡು ಬಂದರಿಗೆ ಬರುವ ಸಂದರ್ಭದಲ್ಲಿ ಬಂದರಿನ ಮಧ್ಯದಲ್ಲಿ ಸಿಲುಕಿ ಎರಡು ಬೋಟ್‌ಗಳು ಮುಳುಗಿ ಲಕ್ಷಾಂತರ ರೂಪಾಯಿ ಹಾನಿಯಾಗಿದೆ. ಈ ಎರಡೂ ಬೋಟ್ ಮಾಲೀಕರು ತುಂಬಾ ತೊಂದರೆಯಲ್ಲಿದ್ದು ಅವರಿಗೆ ಸೂಕ್ತ ಪರಿಹಾರ ದೊರಕಿಸಿಕೊಡಬೇಕು ಎಂದು ಮನವಿ ಮಾಡಿದರು. ಬಂದರಿನಲ್ಲಿ ಅಲೆ ತಡೆಗೋಡೆ ಇಲ್ಲದಿರುವುದು ಹಾಗೂ ಹೂಳು ತುಂಬಿ ಡ್ರೆಜಿಂಗ್ ಆಗದೇ ಇರುವುದರಿಂದ


☛ ಉದಯವಾಹಿನಿ ಚಿತ್ರ

ಕಳೆದ ಹಲವು ವರ್ಷಗಳಿಂದ ಈ ರೀತಿಯ ಅವಘಡಗಳು ಸಂಭವಿಸಿ ಲಕ್ಷಾಂತರ ರೂಪಾಯಿ ಹಾನಿ ಅನುಭವಿಸುತ್ತ ಬಂದಿದ್ದೇವೆ. ಇದರಿಂದ ಬೇಲೆಕೇರಿ ಬಂದರಿನಲ್ಲಿ ಮೀನುಗಾರಿಕೆ ನಡೆಸುವುದೇ ಕಷ್ಟಕರವಾಗಿದೆ. ಇದಕ್ಕೆ ಸಂಬಂಧಿಸಿ ತಮಗೂ ಹಲವು ಬಾರಿ ಮನವಿ ಸಲ್ಲಿಸಿದ್ದೇವೆ. ಆರು ತಿಂಗಳೊಳಗೆ ಸಮಸ್ಯೆ ಬಗೆಹರಿಸುವುದಾಗಿ ಭರವಸೆ ನೀಡಿದ್ದೀರಿ. ಈಗ ಡ್ರೆಜಿಂಗ್ ಕಾಮಗಾರಿ ಮಂಜೂರಿಯಾಗಿದೆ ಆದರೆ ಇಲ್ಲಿಯವರೆಗೂ ಕಾಮಗಾರಿ ಆರಂಭವಾಗಿಲ್ಲ. ಆದ್ದರಿಂದ ಅಲೆ ತಡೆಗೋಡೆ ಕಾಮಗಾರಿಗೆ ಅನುಮೋದನೆ ದೊರಕಿಸಿಕೊಟ್ಟು, ಆದಷ್ಟು ಬೇಗ ಡ್ರೆಜಿಂಗ್ ಕಾಮಗಾರಿ ಆರಂಭಿಸಬೇಕು' ಎಂದು ಮನವಿ ಮಾಡಿದರು.

## ಕೃಷಿ ಭೂಮಿಗೆ ನೀರು: ಈರುಳ್ಳಿ, ಮೆಣಸಿನ ಕಾಯಿಗೆ ಹಾನಿ

• ಉದಯವಾಹಿನಿ ಅಜ್ಜಂಪುರ

ಭಾರಿ ಮಳೆಯಿಂದಾಗಿ ಇಲ್ಲಿಗೆ ಸಮೀಪದ ಅಂತರಗಟ್ಟೆ ಬಳಿಯ, ಎಚ್. ತಿಮ್ಮಾಪುರ– ಹನುಮನಹಳ್ಳಿ ನಡುವಿನ ಹಳ್ಳ ಭರ್ತಿಯಾಗಿದೆ. ಹಳ್ಳದ ಹೊರ ಹರಿವು ಹೆಚ್ಚಾಗಿದ್ದು, ರಸ್ತೆಯ ಮೇಲೆ ನೀರು ಹರಿಯಿತು. ಹಳ್ಳದ ನೀರು ಚನ್ನಗಿರಿ, ತರೀಕೆರೆ, ಅಜ್ಜಂಪುರ ತಾಲ್ಲೂಕಿನ ಸುಮಾರು 22 ಕೆರೆಗಳ ಮೂಲಕ ವಾಣಿವಿಲಾಸ ಸಾಗರ ಜಲಾಶಯ ಸೇರುತ್ತದೆ. ಈ ಪಥದಲ್ಲಿನ ಕುಕ್ಕೆ ಸಮುದ್ರ ಕೆರೆಯ ಹಿನ್ನೀರು, ಎಚ್.ತಿಮ್ಮಾಪುರ, ಕಲ್ಕೆರೆ, ಹನುವನಹಳ್ಳಿ, ಚಿಕ್ಕಬಳ್ಳೇಕೆರೆ, ಕೆರೆ ಹೊಸಹಳ್ಳಿ ಭಾಗದ ಕೃಷಿ ಭೂಮಿ ಮೇಲೆ ಹರಿದು, ಬೆಳೆ ಹಾನಿಯಾಗಿದೆ. ಹಳ್ಳದ ನೀರಿನ ಪ್ರವಾಹಕ್ಕೆ ಸಿಲುಕಿ ಈರುಳ್ಳಿ ಗಡ್ಡೆ ಕೊಚ್ಚಿ ಹೋಗಿದೆ. ಮೆಣಸಿನ ಕಾಯಿ ಗಿಡ ನೆಲಕಚ್ಚಿವೆ.

ಬಿತ್ತನೆಯಾಗಿದ್ದ ರಾಗಿ, ಜೋಳ, ಕಡಲೆಕಾಳು ಬೀಜ ನೀರಿನಲ್ಲಿ ತೇಲಿ ಹೋಗಿವೆ. ಅಪಾರ ಪ್ರಮಾಣದ ನಷ್ಟ ಉಂಟಾಗಿದೆ ಎಂದು ರೈತ ಚನ್ನಬಸಪ್ಪ ಅಳಲು ತೋಡಿಕೊಂಡಿದ್ದಾರೆ. ಅಂತರಗಟ್ಟೆ–ಚಿಕ್ಕಬಳ್ಳೇಕೆರೆ ರಸ್ತೆ ಮೇಲೆ ನೀರು ರಭಸವಾಗಿ ಹರಿಯುತ್ತಿದ್ದು, ಹಡಗಲು–ಕಳ್ಳಿಹೊಸಹಳ್ಳಿ ನಡುವಿನ ಸಂಪರ್ಕ ಕಡಿತಗೊಂಡಿದೆ. ಗ್ರಾಮಗಳ ನಿವಾಸಿಗಳು ಸುತ್ತಿ ಬಳಸಿ ಗ್ರಾಮ ಸೇರುವಂತಾಗಿದೆ ಎಂದು ಸ್ಥಳೀಯ ನಿವಾಸಿ ರೇವಣ್ಣ ಕಷ್ಟ ಹೇಳಿಕೊಂಡಿದ್ದಾರೆ. ಸ್ಥಳಕ್ಕೆ ತಹಶೀಲ್ದಾರ್, ಜಿಲ್ಲಾಧಿಕಾರಿ ಭೇಟಿ


☛ ಉದಯವಾಹಿನಿ ಚಿತ್ರ

> **ಹಳ್ಳಕ್ಕೆ ವೈಜ್ಞಾನಿಕವಾದ ಸೇತುವೆ ನಿರ್ಮಿಸಿಲ್ಲ. ಹಳ್ಳದ ಪಥ ಸ್ವಚ್ಛಗೊಳಿಸಿಲ್ಲ. ಪಥ ವಿಸ್ತರಣೆ ಮಾಡದೆ ಹಳ್ಳದ ಮೂಲಕ ವಾಣಿ ವಿಲಾಸ ಸಾಗರಕ್ಕೆ ಭದ್ರೆ, ನೀರು ಹರಿಯುತ್ತಿದೆ. ಇದರಿಂದಲೇ ನಮ್ಮ ಭಾಗದಲ್ಲಿ ಬೆಳೆ ಹಾನಿ ಸಂಭವಿಸುತ್ತಿದೆ. ಇದಕ್ಕೆ ಭದ್ರಾ ಮೇಲ್ದಂಡೆ ಅಧಿಕಾರಿಗಳೇ ಕಾರಣ** –ರೈತ ಮಲ್ಲೇಶಪ್ಪ

ನೀಡಬೇಕು. ಬೆಳೆ ಕಳೆದುಕೊಂಡವರಿಗೆ ಪರಿಹಾರ ವಿತರಿಸಬೇಕು. ಹಳ್ಳದ ನೀರಿನಿಂದಾಗಿ ಬಿತ್ತನೆ ಬೀಜ ಕಳೆದುಕೊಂಡವರಿಗೆ, ಪುನ: ಬಿತ್ತನೆ ಮಾಡಲು ಉಚಿತವಾಗಿ ಬಿತ್ತನೆ ಬೀಜ ಕೊಡಬೇಕು ಎಂದರು.

## ದೇವದಾಸಿ ಮಹಿಳೆಯರನ್ನು ಪರಿಗಣಿಸಲು ಆಗ್ರಹ

• ಉದಯವಾಹಿನಿ ಗಂಗಾವತಿ

ಸಮೀಕ್ಷೆ ಪಟ್ಟಿಯಿಂದ ಹೊರಗುಳಿದ ದೇವದಾಸಿ ಮಹಿಳೆ ಮತ್ತು ಅವರ ಕುಟುಂಬ ಸದಸ್ಯರನ್ನು ಕೂಡಲೇ ಪಟ್ಟಿಗೆ ಸೇರಿಸಿ ಪುನರ್ವಸತಿಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ದೇವದಾಸಿ ಮಹಿಳೆಯರ ವಿಮೋಚನಾ ಸಂಘದ ತಾಲ್ಲೂಕು ಸಮಿತಿ ಸಿಡಿಪಿಒ ಕಚೇರಿ ಎದುರು ಧರಣಿ ಸತ್ಯಾಗ್ರಹ ನಡೆಸಿತು.

ತಾಲ್ಲೂಕು ಸಮಿತಿ ಅಧ್ಯಕ್ಷೆ ಜಿ.ಹುಲಿಗೆಮ್ಮ ಮಾತನಾಡಿ, ರಾಜ್ಯ ದೇವದಾಸಿ ಮಹಿಳೆಯರ ವಿಮೋಚನಾ ಸಂಘ ನಿರಂತರವಾಗಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಹೋರಾಟ ನಡೆಸುತ್ತಾ ಬಂದಿದ್ದು, ದೌರ್ಜನ್ಯದ ದೇವದಾಸಿ ಪದ್ಧತಿ ರದ್ದತಿಗೆ ದೇವದಾಸಿ ನಿಷೇಧ ಮಸೂದೆ–2025 ಜಾರಿ ಮಾಡಿರುವುದು ಶ್ಲಾಘನೀಯ. ಈಚೆಗೆ ದೇವದಾಸಿ ಮಹಿಳೆಯರ ಮತ್ತು ಕುಟುಂಬಸ್ಥರ ಮರು ಸಮೀಕ್ಷೆ


☛ ಉದಯವಾಹಿನಿ ಚಿತ್ರ

ನಡೆಸಿದ್ದು, ದೇವದಾಸಿಗಳಿದ್ದರೂ ಸಮೀಕ್ಷೆ ಪಟ್ಟಿಯಲ್ಲಿ ಹೆಸರಿಲ್ಲ ಎಂಬ ಕಾರಣಕ್ಕೆ ಅವರಿಗೆ ಮತ್ತು ಮಕ್ಕಳಿಗೆ ಪ್ರಮಾಣಪತ್ರ ನೀಡದೆ, ಪಟ್ಟಿಯಿಂದ ದೂರ ಮಾಡುತ್ತಿರುವುದು ನೋವಿನ ಸಂಗತಿಯಾಗಿದೆ' ಎಂದರು. ಪಟ್ಟಿಯಿಂದ ಹೊರಗುಳಿದ ದೇವದಾಸಿ ಮಹಿಳೆಯರು ಮತ್ತು ಕುಟುಂಬಸ್ಥರನ್ನು ಪಟ್ಟಿಗೆ ಸೇರಿಸಿ 2026ರ ಬಜೆಟ್‌ನಲ್ಲಿ ಎಲ್ಲರಿಗೂ ಸೌಲಭ್ಯಗಳನ್ನು ಒದಗಿಸಬೇಕು ಎಂದು ಒತ್ತಾಯಿಸಿದರು.

## ಹದಗೆಟ್ಟ ಹೆದ್ದಾರಿ: ಪ್ರಯಾಣ ಅಪಾಯಕಾರಿ

• ಉದಯವಾಹಿನಿ ಕಡೂರು

ಬೈಪಾಸ್ ರಸ್ತೆ ಕಾಮಗಾರಿಯ ನಿಧಾನಗತಿ, ಸರ್ವಿಸ್ ರಸ್ತೆಗಳ ಮೇಲಿನ ಒತ್ತಡದ ನಡುವೆ ಮಳೆಗೆ ಸಿಲುಕಿರುವ ರಸ್ತೆಗಳು ಹದಗಟ್ಟಿವೆ. ಕಡೂರು–ಬೀರೂರು ನಡುವೆ ಇರುವ ಹೆದ್ದಾರಿಯು ಬೀರೂರು ಹೊರವಲಯದಲ್ಲಿ ಗುಂಡಿ ಬಿದ್ದು ವಾಹನ ಸಂಚಾರಕ್ಕೆ ತೊಂದರೆ ಆಗುತ್ತಿದೆ. ಈ ರಸ್ತೆ ಮೇಲೆ ಓಡಾಡುವವರ ಆರೋಗ್ಯಕ್ಕೂ ಸಮಸ್ಯೆ ಆಗುತ್ತಿದೆ.

ಬೀರೂರು ಹೊರವಲಯದಲ್ಲಿ ಆರಂಭಗೊಂಡು ಕಡೂರು ಹೊರವಲಯದ ಬಳ್ಳೇಕೆರೆ ಸಂಪರ್ಕಿಸುವ ಹೆದ್ದಾರಿ ಪ್ರವೇಶಕ್ಕೂ ಮೊದಲು ಹೆದ್ದಾರಿ 206ರಲ್ಲಿ ಇರುವ, ಕಡೂರು ಕಡೆಗಿನ ಅಂಡರ್‌ಪಾಸ್ ಪಕ್ಕ ಇರುವ ರಸ್ತೆಯೂ ಗುಂಡಿ ಬಿದ್ದಿದೆ. ರಸ್ತೆಯೂ ಕಿರಿದಾಗಿದ್ದು, ಪಕ್ಕದಲ್ಲಿ ಬೈಪಾಸ್ ತಡೆಗೋಡೆಯೂ ಇರುವ ಕಾರಣ ಗುಂಡಿ ತಪ್ಪಿಸಲು ಸಾಧ್ಯವಾಗುತ್ತಿಲ್ಲ. ರಸ್ತೆ ಗುಂಡಿಯ ಸಮಸ್ಯೆಯ ಜತೆಗೆ ಅವೈಜ್ಞಾನಿಕ


☛ ಉದಯವಾಹಿನಿ ಚಿತ್ರ

ಸರ್ವೀಸ್ ರಸ್ತೆಗಳು ಅಪಾಯಕ್ಕೆ ಆಹ್ವಾನ ನೀಡುವಂತಿವೆ.

ಕಡೂರು ತಿರುವಿನಲ್ಲಿ ಫ್ಲೈ ಓವರ್ ಪಕ್ಕದಲ್ಲಿ ಮೂರು ರಸ್ತೆಗಳು ಒಂದು ಕಡೆ ಕಡೂರು ಹೆದ್ದಾರಿ ತಲುಪಿದರೆ, ಇನ್ನೊಂದು ಶಿವಮೊಗ್ಗ ಕಡೆಗೆ, ಮತ್ತೊಂದು ತಂಗಲಿ ಕಡೆ ತೆರಳುವ ರಸ್ತೆಗಳಲ್ಲಿ ಪ್ರಯಾಣಿಸುವವರ ಸ್ಥಿತಿ ಅಯೋಮಯವಾಗಿದೆ. ಇಲ್ಲಿ ಆಗಾಗ್ಗೆ ಸಣ್ಣ ಪುಟ್ಟ ಅಪಘಾತಗಳು ಸಂಭವಿಸುತ್ತಿವೆ. ವಾಹನ ದಟ್ಟಣೆ ಹೆಚ್ಚಿದರೆ ಅಪಘಾತ, ಪ್ರಾಣಾಪಾಯ ಸಂಭವಿಸುವ ಸ್ಥಿತಿಯೂ ಇದೆ. ಅಜ್ಜಂಪುರ ರಸ್ತೆ ಕಡೆಯಿಂದ ಬೈಪಾಸ್ ಮೂಲಕ ಹೆದ್ದಾರಿಗೆ ಸಂಪರ್ಕ ಕಲ್ಪಿಸಿದ್ದು, ಬೀರೂರು ಕಡೆಯಿಂದ ಬರುವವರು ಅಥವಾ ಕಡೂರಿನಿಂದ ಶಿವಮೊಗ್ಗ ಕಡೆ ತೆರಳುವವರು ಸ್ವಲ್ಪ ಎಚ್ಚರ ತಪ್ಪಿದರೂ ಅಪಘಾತಕ್ಕೆ ತುತ್ತಾಗಬೇಕಾದ ಸ್ಥಿತಿ ಇದೆ ಎನ್ನುತ್ತಾರೆ ವಾಹನ ಸವಾರರು.

**ವಾಹನ ದಟ್ಟಣೆ ಹೆಚ್ಚಿದ ಅಪಘಾತ**

ಮಳೆ ಹೆಚ್ಚಾಗುತ್ತಿರುವುದರಿಂದ ಬೀರೂರು ಪ್ರಥಮ ದರ್ಜೆ ಕಾಲೇಜು ಬಳಿ ಹೆದ್ದಾರಿ ಗುಂಡಿ ಬಿದ್ದಿದೆ. ಬೀರೂರು–ಅಜ್ಜಂಪುರ ರಸ್ತೆಯಲ್ಲಿ ಯುಜಿಡಿ ಮ್ಯಾನ್‌ಹೋಲ್‌ಗಳು ರಸ್ತೆಯ ಮಧ್ಯೆಯೇ ಇದ್ದು ರಸ್ತೆಯನ್ನೇ ಹದಗೆಡಿಸಿವೆ.

# ಶೀಘ್ರದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಅಡಿಗಲ್ಲು: ತಿಮ್ಮಾಪುರ

## ರನ್ನ ಸಹಕಾರ ಸಕ್ಕರೆ ಕಾರ್ಖಾನೆ ಬಂದ್ ಆಗಿತ್ತು. ರೈತರ ಹಿತದೃಷ್ಟಿಯಿಂದ ಅದನ್ನೂ ಪುನರಾರಂಭಿಸಲಾಗಿದೆ

• ಉದಯವಾಹಿನಿ ಬಾಗಲಕೋಟೆ

ಸರ್ಕಾರಿ ವೈದ್ಯಕೀಯ ಕಾಲೇಜು ಹಾಗೂ ಸಂಶೋಧನಾ ಕೇಂದ್ರಕ್ಕೆ ಶೀಘ್ರದಲ್ಲಿಯೇ ಅಡಿಗಲ್ಲು ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು' ಎಂದು ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ. ತಿಮ್ಮಾಪುರ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಅಡಿಗಲ್ಲು ನೆರವೇರಿಸಲು ಮುಖ್ಯಮಂತ್ರಿ ಅವರ ಸಮಯ ಕೂಡ ಕೇಳಲಾಗಿದೆ. ಬಹು ವರ್ಷಗಳ ಕನಸು ನನಸಾಗಿದೆ' ಎಂದರು.

**ಬಹು ವರ್ಷಗಳ ಕನಸು ನನಸು**

'ರನ್ನ ಸಹಕಾರ ಸಕ್ಕರೆ ಕಾರ್ಖಾನೆ ಬಂದ್ ಆಗಿತ್ತು. ರೈತರ ಹಿತದೃಷ್ಟಿಯಿಂದ ಅದನ್ನೂ ಪುನರಾರಂಭಿಸಲಾಗಿದೆ. ಶೀಘ್ರದಲ್ಲಿಯೇ ಚಾಲುಕ್ಯ ಉತ್ಸವ ಕೂಡ ನಡೆಯಲಿದೆ' ಎಂದರು.

ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–3ಕ್ಕಾಗಿ ಭೂಸ್ವಾಧೀನ ಮಾಡಿಕೊಳ್ಳುವ ಭೂಮಿಗೆ ಈಗಾಗಲೇ ಸರ್ಕಾರ ಬೆಲೆ ನಿರ್ಧಾರ ಮಾಡಿದೆ. ಪ್ರತಿ ವರ್ಷ ರೂ.18 ಸಾವಿರ ಕೋಟಿ ಗಳಂತೆ ನಾಲ್ಕು ವರ್ಷಗಳಲ್ಲಿ ಯೋಜನೆ ಪೂರ್ಣಗೊಳಿಸಲಾಗುವುದು' ಎಂದರು.

'ಅಧಿಕಾರಕ್ಕೆ ಬಂದರೆ ಐದು ವರ್ಷಗಳಲ್ಲಿ ಪೂರ್ಣಗೊಳಿಸುವುದಾಗಿ ಹೇಳಿದ್ದೀರಲ್ಲ ಎಂಬ ಪ್ರಶ್ನೆಗೆ, ದೊಡ್ಡ ಯೋಜನೆಯಾಗಿರುವುದರಿಂದ ಸಮಯ ಬೇಕಾಗುತ್ತದೆ. ಮುಂದಿನ ಸರ್ಕಾರವೂ ಈ ಯೋಜನೆ ಅನುಷ್ಠಾನ ಮುಂದುವರೆಸಲಿದೆ. ಮುಂದಿನ ಅವಧಿಗೂ ನಮ್ಮದೇ ಸರ್ಕಾರ ಬರಲಿದ್ದು, ನಮ್ಮ ಸರ್ಕಾರವೇ ಪೂರ್ಣಗೊಳಿಸಲಿದೆ' ಎಂದು ಹೇಳಿದರು. 'ಈ ಹಿಂದೆ ಅಲಮಟ್ಟಿ ಜಲಾಶಯಕ್ಕೆ ಗೇಟ್ ಅಳವಡಿಸಿದ್ದು ನಮ್ಮ ಸರ್ಕಾರ. ನೀರು ನಿಲ್ಲಿಸಿದ್ದು ನಾವೇ. ರೈತರ ಭೂಮಿಗೆ ಉತ್ತಮ ಬೆಲೆ ನಿರ್ಧಾರ ಕೂಡ ನಮ್ಮ ಸರ್ಕಾರವೇ ಮಾಡಿದೆ. ಕಾಂಗ್ರೆಸ್ ಸರ್ಕಾರ ಯೋಜನೆ ಜಾರಿಗೆ ಬದ್ಧವಾಗಿದೆ. ಬೇರೆ ಪಕ್ಷಗಳ ಸರ್ಕಾರ ಏನು ಮಾಡಿವೆ' ಎಂದು ಪ್ರಶ್ನಿಸಿದರು.

ರಾಜ್ಯದ ಗಡಿ ಭಾಗಗಳಲ್ಲಿ ಆಂಧ್ರ ಪ್ರದೇಶಕ್ಕೆ ಹೋಗುತ್ತಿದ್ದ ಮದ್ಯ ಸರಬರಾಜು ನಿಂತಿರುವುದರಿಂದ ಆದಾಯದಲ್ಲಿ ಸ್ವಲ್ಪ ಕಡಿಮೆಯಾಗಿದೆ. ಆದರೆ, ನಿರೀಕ್ಷಿತ ಗುರಿ ತಲುಪಲು ಯಾವುದೇ ತೊಂದರೆ ಇಲ್ಲ. ಇಲಾಖೆಯಿಂದ ವೈನ್ ಶಾಪ್‌ಗಳಿಗೆ ಯಾವುದೇ ಟಾರ್ಗೆಟ್ ನೀಡಿಲ್ಲ' ಎಂದು ಸಚಿವ ತಿಮ್ಮಾಪುರ ಹೇಳಿದರು. ಅಂಧಶ್ರದ್ಧೆ, ಧರ್ಮದ ಹೆಸರಿನಲ್ಲಿ ರಾಜಕಾರಣ ಮಾಡುವ ಪಕ್ಷ, ಸಂಘಟನೆಗಳು ಇರಬಾರದು. ಅಂತಹವುಗಳನ್ನು ಬ್ಯಾನ್ ಮಾಡಿದರೆ ತಪ್ಪೇನಿಲ್ಲ' ಎಂದರು.

'ಸಾರ್ವಜನಿಕ ಸ್ಥಳ ಬಳಕೆಗೆ ಅನುಮತಿ ಪಡೆಯಬೇಕು ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿರುವುದು ಸರಿಯಾಗಿದೆ. ಅವರ ಹೇಳಿಕೆಯನ್ನು ಸಂಪೂರ್ಣವಾಗಿ ಬೆಂಬಲಿಸುತ್ತೇನೆ. ಇದನ್ನು ಈ ಹಿಂದೆ ಜಗದೀಶ ಶೆಟ್ಟರ್ ಮುಖ್ಯಮಂತ್ರಿಯಾಗಿದ್ದಾಗಲೇ ಮಾಡಲಾಗಿದೆ. ಅದನ್ನೇ ಖರ್ಗೆ ಹೇಳಿದ್ದಾರೆ' ಎಂದು ಹೇಳಿದರು. ಕಾಂಗ್ರೆಸ್ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ನಾಗರಾಜ ಹದ್ದಿ, ಸೈಫುದ್ದೀನ್ ಕಲಾದಗಿ, ಮುಧೋಳ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸದುಗೌಡ ಪಾಟೀಲ ಇದ್ದರು.



**ಸಿಎಂ: ಹೈಕಮಾಂಡ್ ತೀರ್ಮಾನ ಅಂತಿಮ**

**ಮುಖ್ಯಮಂತ್ರಿ ಯಾರಾಗಬೇಕು ಎಂಬ ನಿರ್ಧಾರವನ್ನು ಹೈಕಮಾಂಡ್ ಹಾಗೂ ಸಿಎಲ್‌ಪಿ ತೆಗೆದುಕೊಳ್ಳುತ್ತದೆ. ವಿಧಾನ ಪರಿಷತ್ ಸದಸ್ಯ ಯತೀಂದ್ರ ಹೇಳಿಕೆ ವೈಯಕ್ತಿಕ ಅಭಿಪ್ರಾಯ. ಪಕ್ಷದ ಸೂಚನೆ ಇರುವುದರಿಂದ ನಾನೇನು ಹೇಳುವುದಿಲ್ಲ ಎಂದು ಸಚಿವ ಆರ್.ಬಿ. ತಿಮ್ಮಾಪುರ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಸಚಿವ ಸತೀಶ ಜಾರಕಿಹೊಳಿ ಅವರಲ್ಲಿ ನಾಯಕತ್ವ ಇದೆ. ಅವರು ಮುಂದೆ ರಾಜ್ಯದ ಮುಖ್ಯಮಂತ್ರಿಯಾಗುತ್ತಾರೆ ಎಂದು ನಾನೇ ಹೇಳಿದ್ದೇನೆ. ಇದೇ ಅವಧಿಯಲ್ಲಿ ಆಗುತ್ತಾರೆ ಎಂದಿಲ್ಲ ಎಂದರು. ದಲಿತ ಸಿಎಂ ಆಗಬೇಕು ಎನ್ನುವ ಹೊತ್ತಿನಲ್ಲಿ ಸತೀಶ ಜಾರಕಿಹೊಳಿ ಅವರ ಹೆಸರು ಮುಂಚೂಣಿಗೆ ಬರುತ್ತಿದೆಯಲ್ಲ ಎಂಬ ಪ್ರಶ್ನೆಗೆ ಜಾರಕಿಹೊಳಿ ಅವರೂ ದಲಿತರು. ಸಿಎಂ ಆಗುವ ಅವಕಾಶ ಸಿಕ್ಕರೆ ಯಾರು ಬೇಡ ಎನ್ನುತ್ತಾರೆ. ಮುಖ್ಯಮಂತ್ರಿಯಾಗುವ ಲೈನ್‌ನಲ್ಲಿ ಜಾರಕಿಹೊಳಿ ಇದ್ದಾರೆ ಎಂದು ಹೇಳಿದರು.**

## ಮಿನಿ ನ್ಯೂಸ್

### 3 ಲಕ್ಷ ರೂ.ಮೌಲ್ಯದ ಚಿನ್ನಾಭರಣ, ಮೊಬೈಲ್, ಬೈಕ್ ಕಳವು

• ಉದಯವಾಹಿನಿ ಕಲಬುರಗಿ

ಮದ್ಯ ಸೇವಿಸಿ ಗಾಢ ನಿದ್ರೆಗೆ ಜಾರಿದ ಪೇದೆಯೊಬ್ಬರ ಕೊರಳಲ್ಲಿನ 3 ಲಕ್ಷ ರೂ.ಮೌಲ್ಯದ ಬಂಗಾರದ ಆಭರಣ, 10 ಸಾವಿರ ರೂ.ಮೌಲ್ಯದ ಮೊಬೈಲ್ ಮತ್ತು ಬೈಕ್ ಕಳವು ಮಾಡಿಕೊಂಡು ಹೋಗಿರುವ ಘಟನೆ ನಡೆದಿದೆ. ನಗರದ ಬ್ರಹ್ಮಪುರ ಪೊಲೀಸ್ ಠಾಣೆಯಲ್ಲಿ ಸಿಪಿಸಿ ಆಗಿರುವ ಮಲ್ಲಿಕಾರ್ಜುನ ಸಂಕಾಲಿ ಎಂಬುವವರ ಕೊರಳಲ್ಲಿನ ಬಂಗಾರದ ಆಭರಣ, ಮೊಬೈಲ್ ಮತ್ತು ಬೈಕ್ ಕಳ್ಳರು ಕಳವು ಮಾಡಿಕೊಂಡು ಹೋಗಿದ್ದಾರೆ.

ಮಲ್ಲಿಕಾರ್ಜುನ ಸಂಕಾಲಿ ಅವರು ಅಟಲ್ ಬಿಹಾರಿ ವಾಜಪೇಯಿ ಬಡಾವಣೆಯ ಸ್ವಾಮಿ ಸಮರ್ಥ ಪಕ್ಕದ ಖುಲ್ಲಾ ಲೇಔಟ್‌ನಲ್ಲಿರುವ ಶಿವನ ಕಟ್ಟೆಯ ಪಕ್ಕದಲ್ಲಿ ಕುಳಿತು ಮದ್ಯ ಸೇವಿಸಿ ವಿಶ್ರಾಂತಿಯಲ್ಲಿದ್ದಾಗ ಗಾಢ ನಿದ್ರೆಗೆ ಜಾರಿದ್ದು, ಈ ವೇಳೆ ಕಳ್ಳರು ಅವರ ಕೊರಳಲ್ಲಿದ್ದ 3 ಲಕ್ಷ ರೂ.ಮೌಲ್ಯದ ಬಂಗಾರದ ಆಭರಣ, 10 ಸಾವಿರ ರೂ. ಮೌಲ್ಯದ ವಿವೋ ಕಂಪನಿಯ ಮೊಬೈಲ್ ಮತ್ತು 30 ಸಾವಿರ ರೂ. ಮೌಲ್ಯದ ಬೈಕ್ ಸೇರಿ 3.40 ಲಕ್ಷ ರೂ.ಮೌಲ್ಯದ ವಸ್ತುಗಳನ್ನು ಕಳವು ಮಾಡಿಕೊಂಡು ಹೋಗಿದ್ದು, ಅವರು ಈ ಬಗ್ಗೆ ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ. ತನಿಖೆ ನಡೆದಿದೆ.

### ಪ್ರತಿ ಟನ್‌ಗೆ ರೂ. 3,363 ನೀಡಲು ಆಗ್ರಹ: ಕಬ್ಬು ಬೆಳೆಗಾರರಿಂದ ಪ್ರತಿಭಟನೆ

• ಉದಯವಾಹಿನಿ ಹಳಿಯಾಳ

ಸ್ಥಳೀಯ ಈಐಡಿ ಪ್ಯಾರಿ ಸಕ್ಕರೆ ಕಾರ್ಖಾನೆ ಕಬ್ಬು ಬೆಳೆಗಾರರ ಬೇಡಿಕೆಯಂತೆ ಪ್ರತಿ ಟನ್‌ಗೆ ರೂ.3,363 ದರವನ್ನು ನೀಡಬೇಕೆಂದು ಆಗ್ರಹಿಸಿ ಕಬ್ಬು ಬೆಳೆಗಾರರು ಪ್ರತಿಭಟನೆ ಆರಂಭಿಸಿದ್ದಾರೆ. ಇಲ್ಲಿಯ ತಹಶೀಲ್ದಾರ್ ಕಾರ್ಯಾಲಯದ ಎದುರಿನ ಶಿವಾಜಿ ವೃತ್ತದಲ್ಲಿ ಕಬ್ಬು ಬೆಳೆಗಾರರು ಸೇರಿ ಪ್ರತಿಭಟನೆ ನಡೆಸಿದರು. ಸರ್ಕಾರ ಎಫ್.ಆರ್.ಪಿ ದರವನ್ನು ರೂ. 4,000 ನಿಗದಿ ಮಾಡಿದೆ. ಆದರೆ ಸ್ಥಳೀಯ ಈಐಡಿ ಪ್ಯಾರಿ ಸಕ್ಕರೆ ಕಾರ್ಖಾನೆ ಪ್ರತಿ ಟನ್‌ಗೆ ರೂ. 3,050 ದರವನ್ನು ನಿಗದಿ ಮಾಡಿ ಘೋಷಣೆ ಮಾಡಿದೆ. ಇವುಗಳಲ್ಲಿ ರೂ. 950ನ್ನು ಕಬ್ಬು ಕಟಾವು ಮತ್ತು ಸಾಗಣೆ ವೆಚ್ಚವೆಂದು ಕಡಿತಗೊಳಿಸಲಾಗಿದೆ. ಕಳೆದ ಮೂರು ವರ್ಷಗಳಿಂದ ರೂ. 893 ರನ್ನು ಕಾರ್ಖಾನೆಯವರು ಹೆಚ್ಚುವರಿಯಾಗಿ ತೆಗೆದುಕೊಂಡಿದ್ದಾರೆ. ಆ ಬಗ್ಗೆ ಸರ್ಕಾರ ಲೆಕ್ಕಪರಿಶೋಧನೆ (ಆಡಿಟ್) ಮಾಡಿದಾಗ ಗೊತ್ತಾಗಿದೆ. ಕಬ್ಬು ಬೆಳೆಗಾರರಿಗೆ ಕಳೆದ ಮೂರು ವರ್ಷಗಳಿಂದ ಪಾವತಿಸಬೇಕಾಗಿದ್ದ ರೂ. 256ನ್ನು ಪಾವತಿಸಬೇಕು. ಪ್ರಸಕ್ತ ಸಾಲಿನಲ್ಲಿ ಕಬ್ಬು ನುರಿಸುವ ಮುಂಚೆ ಬೆಳೆಗಾರರ ಬೇಡಿಕೆಯಂತೆ ದರವನ್ನು ರೂ. 3,363 ನೀಡಬೇಕು. ಬೇಡಿಕೆ ಈಡೇರುವವರೆಗೆ ಪ್ರತಿಭಟನೆ ಮುಂದುವರಿಸಲಾಗುವುದು' ಎಂದು ಬೆಳೆಗಾರರು ತಿಳಿಸಿದ್ದಾರೆ.

### ಚೆನ್ನಮ್ಮ ಭಾರತೀಯ ಮಹಿಳೆಯರ ಶೌರ್ಯಕ್ಕೆ ಸಾಕ್ಷಿ : ಶಿಕ್ಷಣಾಧಿಕಾರಿ

• ಉದಯವಾಹಿನಿ ಹರಿಹರ

ಯುದ್ಧ ಕಲೆಗಳನ್ನು ಕರಗತ ಮಾಡಿಕೊಂಡು ಬ್ರಿಟಿಷರ ವಿರುದ್ಧ ಹೋರಾಟಕ್ಕಿಳಿದ ಕಿತ್ತೂರ ರಾಣಿ ಚೆನ್ನಮ್ಮ ಭಾರತೀಯ ಮಹಿಳೆಯರ ಶೌರ್ಯಕ್ಕೆ ಸಾಕ್ಷಿಯಾಗಿದ್ದಾರೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಡಿ. ದುರುಗಪ್ಪ ಹೇಳಿದರು. ಇಲ್ಲಿನ ತಾಲ್ಲೂಕು ಕಚೇರಿಯಲ್ಲಿ ತಾಲ್ಲೂಕು ಆಡಳಿತದಿಂದ ಆಯೋಜಿಸಿದ್ದ ಕಿತ್ತೂರ ರಾಣಿ ಚೆನ್ನಮ್ಮರ ಜಯಂತಿ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು.

ಬ್ರಿಟಿಷರ ಹೊಸ ಕಾಯ್ದೆಯಿಂದಾಗಿ ರಾಜ್ಯಾಡಳಿತ ಕೈತಪ್ಪುವುದನ್ನು ತಪ್ಪಿಸಲು ಕೈಯಲ್ಲಿ ಖಡ್ಗ ಹಿಡಿದು ರಣರಂಗಕ್ಕೆ ಇಳಿದ ಚೆನ್ನಮ್ಮನ ಹೆಸರು ದೇಶದ ಇತಿಹಾಸದಲ್ಲಿ ಅಚ್ಚಳಿಯದಂತೆ ಉಳಿದಿದೆ ಎಂದು ಸ್ಮರಿಸಿದರು. ರಾಣಿ ಚೆನ್ನಮ್ಮರ ಹೋರಾಟವು ಲಕ್ಷಾಂತರ ಭಾರತೀಯರಿಗೆ ಬ್ರಿಟೀಷರ ವಿರುದ್ಧದ ಹೋರಾಟಕ್ಕೆ ಇಳಿಯಲು ಪ್ರೇರಣೆ ನೀಡಿತು. ಅವರ ಶೌರ್ಯವನ್ನು ಸ್ಮರಿಸಲು ಸಂಸತ್ ಭವನದ ಆವರಣದಲ್ಲಿ ಕಿತ್ತೂರು ರಾಣಿ ಚೆನ್ನಮ್ಮರ ಪುತ್ಥಳಿ ಸ್ಥಾಪಿಸಲಾಗಿದೆ ಎಂದು ಪಂಚಮಸಾಲಿ ಗುರುಪೀಠದ ಧರ್ಮದರ್ಶಿ ಚಂದ್ರಶೇಖರ್ ಪೂಜಾರ್ ಹೇಳಿದರು. ದೇಶದ ಅಸ್ಮಿತೆಯನ್ನು ಕಾಪಾಡಿದ ಅಸಂಖ್ಯಾತ ಹೋರಾಟಗಾರರ ಪೈಕಿ ಚೆನ್ನಮ್ಮರ ಹೆಸರು ಪ್ರಧಾನವಾಗಿದೆ. ಅವರ ಹೋರಾಟದ ಗುಣವನ್ನು ಈಗಿನ ಮಹಿಳೆಯರು ಹೊಂದಿದರೆ ಸಮಾಜದಲ್ಲಿ ಸಾಕಷ್ಟು ಪರಿವರ್ತನೆ ಆಗಲು ಸಾಧ್ಯವಿದೆ ಎಂದು ಅಖಿಲ ಭಾರತ ವೀರಶೈವ ಮಹಾಸಭಾದ ತಾಲ್ಲೂಕು ಘಟಕದ ಅಧ್ಯಕ್ಷ ಡಿ.ಜಿ. ಶಿವಾನಂದಪ್ಪ ಹೇಳಿದರು.

### ದರ ನಿಗದಿಪಡಿಸಿದೆ ಕಬ್ಬು ಕಟಾವು ರೈತರ ಪ್ರತಿಭಟನೆ

• ಉದಯವಾಹಿನಿ ಕಲಘಟಗಿ

ಹಳಿಯಾಳ ಇಐಡಿ ಕಾರ್ಖಾನೆ , ಕೋಣಕೇರಿ ಕಬ್ಬಿನ ಕಾರ್ಖಾನೆಯವರು ದರ ನಿಗದಿ ಪಡಿಸಿದೆ ಕಬ್ಬು ಕಟಾವು ಆರಂಭಿಸಿದ್ದಾರೆ' ಎಂದು ಆರೋಪಿಸಿ ಕಬ್ಬು ಬೆಳೆಗಾರರು ಪ್ರತಿಭಟನೆ ನಡೆಸಿದರು. ಪಟ್ಟಣದ ಅಂಜನೇಯ ವೃತ್ತದ ಬಳಿ ಹುಬ್ಬಳ್ಳಿ– ಕಾರವಾರ ರಾಷ್ಟ್ರೀಯ ಹೆದ್ದಾರಿಯನ್ನು ಎರಡು ತಾಸು ತಡೆದು ಪ್ರತಿಭಟಿಸಿ, ಕಾರ್ಖಾನೆ ವಿರುದ್ಧ ಘೋಷಣೆ ಕೂಗಿದರು. ಕಬ್ಬು ಬೆಳೆಗಾರರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪರಶುರಾಮ ಎತ್ತಿನಗುಡ್ಡ ಮಾತನಾಡಿ, ಹಳಿಯಾಳದ ಕಾರ್ಖಾನೆಯವರು ಹಿಂದಿನ ವರ್ಷ ಕಬ್ಬು ಸಾಗಿಸಿದ ರೈತರಿಗೆ ರೂ. 26 ಕೋಟಿ ಬಾಕಿ ಉಳಿಸಿಕೊಂಡು ಹೈಕೋರ್ಟ್ ಮೊರೆ ಹೋಗಿದ್ದಾರೆ. ನ್ಯಾಯಾಲಯದಲ್ಲಿ ಅವರಿಗೆ ಛೀಮಾರಿ ಹಾಕಿದ್ದಾರೆ' ಎಂದರು. ರೈತ ಮುಖಂಡರಾದ ಉಳವಪ್ಪ ಬಳಿಗೇರ ಮಾತನಾಡಿ, ರೈತರಿಗೆ ಮೋಸ ಮಾಡುತ್ತಿರುವ ಕಾರ್ಖಾನೆಯವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವವರೆಗೆ ಪ್ರತಿಭಟನೆ ಹಿಂಪಡೆಯುವುದಿಲ್ಲ' ಎಂದು ಪಟ್ಟು ಹಿಡಿದರು. ಸ್ಥಳಕ್ಕೆ ತಹಶೀಲ್ದಾರ್ ಬಸವರಾಜ ಹೊಂಕಣದವರ ಭೇಟಿ ನೀಡಿ, ಪರಿಶೀಲಿಸಿ ಕ್ರಮ ಜರುಗಿಸುವುದಾಗಿ ತಿಳಿಸಿದರು.

**ಪ್ರಕರಣ ದಾಖಲು:** ಕೆಲವು ದಿನಗಳ ಹಿಂದೆ ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರು ಕಬ್ಬು ಬೆಳೆಗಾರರು ಅಧಿಕಾರಿಗಳು ಹಾಗೂ ಕಾರ್ಖಾನೆಯವರ ಸಭೆ ನಡೆಸಿ 'ಹಿಂದಿನ ಬಾಕಿ ಪಾವತಿಸಬೇಕು ಹಾಗೂ ಈ ವರ್ಷದ ದರ ನಿಗದಿ ಪಡಿಸಿ ಕಟಾವು ಮಾಡಿಸಿ' ಎಂದು ಸೂಚಿಸಿದ್ದರು. ಆದರೆ ಈ ನಿಯಮ ಪಾಲನೆ ಮಾಡದೇ ಕಾರ್ಮಿಕರ ಗ್ಯಾಂಗ್ ಕಳುಹಿಸಿ ಕಬ್ಬು ಕಟಾವು ಆರಂಭಿಸಿದ್ದಾರೆ' ಎಂದು ಆರೋಪ ಕೇಳಿಬಂದಿದೆ.


☛ ಉದಯವಾಹಿನಿ ಚಿತ್ರ

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ದೇಹದ ನೋವಿನಿಂದ ಬಳಲುವ ಸಾಧ್ಯತೆ ಹೆಚ್ಚಿದೆ. ನಿಮ್ಮ ದೇಹದ ಮೇಲೆ ಹೆಚ್ಚು ಒತ್ತಡ ಹಾಕುವ ಯಾವುದೇ ದೈಹಿಕ ಪರಿಶ್ರಮವನ್ನು ತಪ್ಪಿಸಲು ಪ್ರಯತ್ನಿಸಿ.

**ವೃಷಭ** ನಿಮ್ಮ ದೊಡ್ಡ ಆಸ್ತಿಯೆಂದರೆ ನಿಮ್ಮ ಹಾಸ್ಯಪ್ರಜ್ಞೆಯಾಗಿದೆ ಇದನ್ನು ನಿಮ್ಮ ಅನಾರೋಗ್ಯ ಗುಣಪಡಿಸಲು ಬಳಸಲು ಪ್ರಯತ್ನಿಸಿ. ಯೋಜಿತವಲ್ಲದ ಮೂಲಗಳಿಂದ ಹಣದ ಲಾಭ ನಿಮ್ಮ ದಿನವನ್ನು ಬೆಳಗಿಸುತ್ತದೆ.

**ಮಿಥುನ** ನೀವು ದೈಹಿಕ ಅನಾರೋಗ್ಯದಿಂದ ಚೇತರಿಸಿಕೊಳ್ಳುವ ಸಾಧ್ಯತೆಗಳು ಹೆಚ್ಚಿದ್ದು ಇದು ನಿಮ್ಮನ್ನು ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಲು ಸಕ್ರಿಯಗೊಳಿಸುತ್ತದೆ. ಹಣಕಾಸಿನ ಭಾಗವು ಉತ್ತಮವಾಗಿರುತ್ತದೆ.

**ಕರ್ಕಾಟಕ** ಕಣ್ಣಿನ ಪೊರೆ ರೋಗಿಗಳಿಗೆ ಧೂಮಪಾನವು ಅವರ ಕಣ್ಣುಗಳಿಗೆ ಮತ್ತಷ್ಟು ಹಾನಿಯುಂಟುಮಾಡಬಹುದಾದ್ದರಿಂದ ಅವರು ಕಲುಷಿತ ಪರಿಸರದಲ್ಲಿ ಹೋಗಬಾರದು.

**ಸಿಂಹ** ಮಾದಕ ವಸ್ತುವಿನ ಅವಲಂಬನೆ ಹೆಚ್ಚುವ ಸಾಧ್ಯತೆಗಳಿರುವುದರಿಂದ ಸ್ವಯಂ ಔಷಧೋಪಚಾರ ಮಾಡಬೇಡಿ. ದೀರ್ಘಕಾಲದ ದೃಷ್ಟಿಕೋನದಿಂದ ಹೂಡಿಕೆ ಮಾಡಬೇಕು.

**ಕನ್ಯಾ** ಮಾತನಾಡುವ ಮುನ್ನ ಯೋಚಿಸಿ. ತಿಳಿಯದೆ ನಿಮ್ಮ ಅಭಿಪ್ರಾಯಗಳು ಬೇರೊಬ್ಬರ ಭಾವನೆಗಳಿಗೆ ಧಕ್ಕೆಯುಂಟು ಮಾಡಬಹುದು. ನಿಮ್ಮ ವೆಚ್ಚಗಳನ್ನು ನಿಯಂತ್ರಿಸಲು ಪ್ರಯತ್ನಿಸಿ.

**ತುಲಾ** ನಿಮಗೆ ತಕ್ಷಣ ಅವಶ್ಯಕತೆಯಿಲ್ಲದ ವಸ್ತುಗಳ ಮೇಲೆ ಹಣ ವೆಚ್ಚ ಮಾಡಿದಲ್ಲಿ ನಿಮ್ಮ ಸಂಗಾತಿಯನ್ನು ಅಸಮಾಧಾನಪಡಿಸುತ್ತೀರಿ. ಇಂದಿನ ದಿನ ಪ್ರೀತಿಯ ಬಣ್ಣಗಳಲ್ಲಿ ಮುಳುಗಿರುತ್ತದೆ.

**ವೃಶ್ಚಿಕ** ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ. ನೀವು ಪ್ರಣಯದ ಮನೋಭಾವ ಹೊಂದಿರುತ್ತೀರಿ. ನಿಮ್ಮ ಪ್ರೀತಿಪಾತ್ರರಿಗಾಗಿ ವಿಶೇಷ ಯೋಜನೆಗಳನ್ನು ಮಾಡಲು ಮರೆಯಬೇಡಿ.

**ಧನಸ್ಸು** ನಿಮ್ಮ ಅನಿರೀಕ್ಷಿತ ಸ್ವಭಾವ ನಿಮ್ಮ ವೈವಾಹಿಕ ಸಂಬಂಧವನ್ನು ಹಾಳು ಮಾಡಲು ಬಿಡಬೇಡಿ. ಇದನ್ನು ತಡೆಯುವುದನ್ನು ಖಚಿತಪಡಿಸಿಕೊಳ್ಳಿ, ಇಲ್ಲದಿದ್ದಲ್ಲಿ ನೀವು ನಂತರ ವಿಷಾದಪಡಬಹುದು.

**ಮಕರ** ನಿಮ್ಮ ಮುಖದಲ್ಲಿ ನಿರಂತರವಾದ ನಗುವಿರುವ ಮತ್ತು ಅಪರಿಚಿತರೂ ಪರಿಚಿತರಂತೆ ತೋರುವ ಒಂದು ದಿನ. ನೀವು ಒಳ್ಳೆಯ ಹಣ ಮಾಡುತ್ತೀರಿ, ಆದರೆ ವೆಚ್ಚಗಳಲ್ಲಿ ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ.

**ಕುಂಭ** ಧೂಮಪಾನ ತ್ಯಜಿಸುವುದು ನೀವು ದೈಹಿಕವಾಗಿ ಆರೋಗ್ಯವಾಗಿ ಉಳಿಯಲು ಸಹಾಯ ಮಾಡುತ್ತದೆ. ರಾತ್ರಿಯ ವೇಳೆಯಲ್ಲಿ ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ.

**ಮೀನ** ನಿಮ್ಮ ಧೀರ್ಘಕಾಲೀನ ಅನಾರೋಗ್ಯದ ಜೊತೆ ಹೋರಾಡುವಾಗ ಆತ್ಮ ವಿಶ್ವಾಸ ಶೌರ್ಯದ ಮೂಲವೆಂದು ತಿಳಿದಿರಿ. ಇಂದು ನೀವು ಸುಲಭವಾಗಿ ಬಂಡವಾಳ ಪಡೆಯಬಹುದು.

### ಹಟ್ಟಿ ಹಬ್ಬದ ಆಚರಣೆ: ಸ್ಪರ್ಧೆ ಆಯೋಜನೆ ಮೇಲೆ ಪೊಲೀಸರು ಕಣ್ಣು

# ಹೋರಿ ಗುದ್ದಿ ನಾಲ್ವರು ಸಾವು: ಎಫ್‌ಐಆರ್

• ಉದಯವಾಹಿನಿ, ಹಾವೇರಿ

ಜಿಲ್ಲೆಯಾದ್ಯಂತ ಹಟ್ಟಿ ಹಬ್ಬದ ಅಂಗವಾಗಿ ಆಯೋಜಿಸಿದ್ದ ಹೋರಿ ಬೆದರಿಸುವ ಆಚರಣೆ ವೇಳೆ ಅವಘಡ ಸಂಭವಿಸಿ ನಾಲ್ವರು ಮೃತಪಟ್ಟಿದ್ದು, ಪ್ರಾಣಿ ಹಿಂಸೆ, ನಿರ್ಲಕ್ಷ್ಯದ ಆರೋಪದಡಿ ಪೊಲೀಸರು ಕ್ರಿಮಿನಲ್ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ದೀಪಾವಳಿ ಹಬ್ಬವನ್ನು ಜಿಲ್ಲೆಯ ಜನರು, ಹಟ್ಟಿ ಹಬ್ಬ ಎಂದೇ ಆಚರಿಸುತ್ತಾರೆ. ಹಬ್ಬದ ದಿನದಂದು ಹೋರಿಗಳನ್ನು ಅಲಂಕರಿಸಿ ಪೂಜೆ ಮಾಡುತ್ತಾರೆ. ಇದೇ ಹೋರಿಗಳನ್ನು ಕಿಕ್ಕಿರಿದು ಸೇರುವ ಜನರ ನಡುವೆ ಓಡಿಸುತ್ತಾರೆ. ಈ ಗ್ರಾಮೀಣ ಆಚರಣೆ ವೇಳೆಯಲ್ಲಿಯೇ ಈ ವರ್ಷ ನಾಲ್ವರು ಮೃತಪಟ್ಟಿದ್ದು, 30ಕ್ಕೂ ಹೆಚ್ಚು ಜನರು ಗಾಯಗೊಂಡು ಪ್ರಾಥಮಿಕ ಚಿಕಿತ್ಸೆ ಪಡೆದುಕೊಂಡಿದ್ದಾರೆ. ಹೋರಿ ಬೆದರಿಸುವ ಆಚರಣೆಗೂ ಸ್ಪರ್ಧೆಗೂ ವ್ಯತ್ಯಾಸವಿದೆ. ಆಚರಣೆ ವೇಳೆ ನಡೆದಿರುವ ಅವಘಡಗಳನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ಮುಂದಿನ ದಿನಗಳಲ್ಲಿ ಹೋರಿ ಬೆದರಿಸುವ ಸ್ಪರ್ಧೆ ನಡೆಯದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುವುದು' ಎಂದು ಹೆಚ್ಚುವರಿ ಪೊಲೀಸ್ ಎಸ್‌ಪಿ ಎಲ್.ವೈ. ಶಿರಕೋಳ ತಿಳಿಸಿದರು.

ಹಾವೇರಿಯ ದಾನೇಶ್ವರಿನಗರದ ಚಂದ್ರಶೇಖರ ಕೋಡಿಹಳ್ಳಿ (75), ಹಾವೇರಿ ತಾಲ್ಲೂಕಿನ ದೇವಿಹೊಸೂರಿನ ಘನಿಸಾಬ ಮಹಮ್ಮದ್ ಹುಸೇನ್ ಬಂಕಾಪುರ (75), ಹಾನಗಲ್ ತಾಲ್ಲೂಕಿನ ತಿಳವಳ್ಳಿಯ ಭರತ್ ರಾಮಪ್ಪ ಹಿಂಗಮೇರಿ (24), ಯಳವಟ್ಟಿ ಗ್ರಾಮದ ಶ್ರೀಕಾಂತ ಗುರುಶಾಂತಪ್ಪ ಕೋಣನಕೇರಿ (40) ಎಂಬುವವರು ಅವಘಡದಲ್ಲಿ ಮೃತಪಟ್ಟಿದ್ದಾರೆ. 'ಮೃತರ ಕುಟುಂಬಸ್ಥರು, ಸಂಬಂಧಿಕರಿಂದ ಹೇಳಿಕೆ ಪಡೆಯಲಾಗಿದೆ.

ಪ್ರಾಣಿ ಹಿಂಸೆ ಹಾಗೂ ಪ್ರಾಣಿಯನ್ನು ಪ್ರಚೋದಿಸಿ ನಿರ್ಲಕ್ಷ್ಯ ವಹಿಸಿ ಸಾವಿಗೆ ಕಾರಣವಾದ ಆರೋಪದಡಿ ಹೋರಿ ವಾರಸುದಾರರು/ಪೋಷಕರು, ಆಯೋಜಕರು ಹಾಗೂ ಇತರರ ವಿರುದ್ಧ ಎಫ್‌ಐಆರ್ ದಾಖಲಿಸಿಕೊಳ್ಳಲಾಗಿದೆ.

ಮುಂಬರುವ ದಿನಗಳಲ್ಲಿ ಸ್ಪರ್ಧೆಗಳು ನಡೆದರೆ, ಹೋರಿ ಮಾಲೀಕರು, ಆಯೋಜಕರು, ಪ್ರೋತ್ಸಾಹಕರು, ಬಹುಮಾನ ಕೊಡಿಸುವ ದಾನಿಗಳು ಹಾಗೂ ಪ್ರಚೋದಿಸುವ ಎಲ್ಲರ ವಿರುದ್ಧವೂ ಕ್ರಿಮಿನಲ್ ಪ್ರಕರಣ ದಾಖಲಿಸಲಾಗುವುದು' ಎಂದು ಎಚ್ಚರಿಕೆ ನೀಡಿದರು.

**ಪೆಟ್ಟಾದರೂ ಮನೆಗೆ ಹೋಗಿದ್ದ ಮೆಕ್ಯಾನಿಕ್:** ತಿಳವಳ್ಳಿಯ ಭರತ್ (24), ಸಹೋದರನ ಗ್ಯಾರೇಜ್‌ನಲ್ಲಿ ಮೆಕ್ಯಾನಿಕ್ ಕೆಲಸ ಮಾಡುತ್ತಿದ್ದರು. ಆಚರಣೆ ನೋಡಲು ಹೋಗಿದ್ದಾಗ ಹೋರಿಯೊಂದು ಗುದ್ದಿದ್ದರಿಂದ ನೆಲಕ್ಕೆ ಬಿದ್ದಿದ್ದರು. ತಲೆಗೆ ತೀವ್ರ ಪೆಟ್ಟಾಗಿತ್ತು. ಜನರು ನೀರು ಕುಡಿಸಿದ್ದರು. ನಂತರ, ಚೇತರಿಸಿಕೊಂಡಿದ್ದ ಅವರು ಮನೆಗೆ ಹೋಗಿದ್ದರು' ಎಂದು ಪ್ರತ್ಯಕ್ಷದರ್ಶಿಯೊಬ್ಬರು ಹೇಳಿದರು. ಸಂಜೆ ಭರತ್ ಅವರಿಗೆ ತಲೆ ನೋವು ಹೆಚ್ಚಾಗಿತ್ತು. ಕೂಡಲೇ ಅವರನ್ನು ಹಾವೇರಿ ಜಿಲ್ಲಾಸ್ಪತ್ರೆಗೆ ಕರೆದೊಯ್ಯಲಾಗಿತ್ತು. ತಲೆಯ ಒಳಭಾಗದಲ್ಲಿ ತೀವ್ರ ಪೆಟ್ಟಾಗಿ ರಕ್ತಸ್ರಾವವಾಗಿದ್ದರಿಂದ ಚಿಕಿತ್ಸೆಗೆ ಸ್ಪಂದಿಸದೇ ಅವರು ತೀರಿಕೊಂಡರು' ಎಂದು ತಿಳಿಸಿದರು.

**ಕಟ್ಟೆ ಮೇಲೆ ಕುಳಿತಿದ್ದ ವೃದ್ಧ:** 'ದೇವಿಹೊಸೂರಿನ ಘನಿಸಾಬ್ (75) ಅವರು ಮನೆಯ ಕಟ್ಟೆ ಮೇಲೆ ಕುಳಿತಿದ್ದರು. ಮೆರವಣಿಗೆಯಲ್ಲಿ ಹೊರಟಿದ್ದಾಗ ಬೆದರಿದ್ದ ಹೋರಿ, ಕಟ್ಟೆಗೆ ನುಗ್ಗಿ ಘನಿಸಾಬ್ ಎದೆ ಹಾಗೂ ಕುತ್ತಿಗೆಗೆ ಕೊಂಬಿನಿಂದ ತಿವಿದಿತ್ತು. ತೀವ್ರ ಗಾಯಗೊಂಡ ಘನಿಸಾಬ್ ಅವರು ಜಿಲ್ಲಾಸ್ಪತ್ರೆಯಲ್ಲಿ ಮೃತಪಟ್ಟಿದ್ದಾರೆ' ಎಂದು ಗ್ರಾಮಸ್ಥರೊಬ್ಬರು ಹೇಳಿದರು.

**ಮಾರುಕಟ್ಟೆಗೆ ಹೊರಟಿದ್ದ ನಿವೃತ್ತ ಲೈನ್‌ಮನ್:** 'ಹೆಸ್ಕಾಂ ನಿವೃತ್ತ ಲೈನ್‌ಮನ್ ಚಂದ್ರಶೇಖರ್ (75) ಅವರು ಮಾರುಕಟ್ಟೆಗೆ ಹೊರಟಿದ್ದರು. ಹಾವೇರಿಯ ವೀರಭದ್ರೇಶ್ವರ ದೇವಸ್ಥಾನ ಮುಂಭಾಗದಲ್ಲಿ ಹೋರಿ ಬೆದರಿಸುವ ಆಚರಣೆಯಿತ್ತು. ಅಲ್ಲಿಗೆ ಬಂದಿದ್ದ ಹೋರಿಯೊಂದು ಓಡಿ ಬಂದು ಚಂದ್ರಶೇಖರ್ ಅವರಿಗೆ ಗುದ್ದಿತ್ತು. ನೆಲಕ್ಕೆ ಬಿದ್ದ ಅವರ ತಲೆಗೆ ತೀವ್ರ ಪೆಟ್ಟಾಗಿತ್ತು. ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆಗೆ ಸ್ಪಂದಿಸದೇ ಅವರು ಮೃತಪಟ್ಟಿದ್ದಾರೆ' ಎಂದು ಪ್ರತ್ಯಕ್ಷದರ್ಶಿಯೊಬ್ಬರು ತಿಳಿಸಿದರು.


ಉದಯವಾಹಿನಿ ಚಿತ್ರ

**ಕ್ರಿಮಿನಲ್ ಪ್ರಕರಣ ದಾಖಲು**


> ಹೋರಿ ಬೆದರಿಸುವ ಸ್ಪರ್ಧೆ ಆಯೋಜನೆಗೆ ಅನುಮತಿ ಇಲ್ಲ. ಇಂಥ ಸ್ಪರ್ಧೆಗಳನ್ನು ಆಯೋಜಿಸದಂತೆ ಹೋರಿ ಮಾಲೀಕರು ಆಯೋಜಕರಿಗೆ ಎಚ್ಚರಿಕೆಯ ನೋಟಿಸ್ ನೀಡಲಾಗುವುದು.
> -ಯಶೋಧಾ ವಂಟಗೋಡಿ ಜಿಲ್ಲಾ ಎಸ್‌ಪಿ

**ಎರಡು ಹೋರಿಗಳು ಸಾವು**

ತಿಳವಳ್ಳಿ ಗ್ರಾಮದಲ್ಲಿ ಆಯೋಜಿಸಿದ್ದ ಹೋರಿ ಬೆದರಿಸುವ ಆಚರಣೆಯಲ್ಲಿ ಪಾಲ್ಗೊಂಡಿದ್ದ ಎರಡು ಹೋರಿಗಳು ಮೃತಪಟ್ಟಿವೆ. ಹಬ್ಬದಲ್ಲಿದ್ದ ತಿಳವಳ್ಳಿ ಜಾಕಿ ಎಂಬ ಪಿಪಿ ಹೋರಿ ಕೆರೆಯ ಹಿರಿಯಾರ ಕಾಲುವೆಗೆ ಬಿದ್ದು ಮೃತಪಟ್ಟಿದೆ. ಇನ್ನೊಂದು ಹೋರಿ ಸಹ ಆರೋಗ್ಯ ಸಮಸ್ಯೆ ಉಂಟಾಗಿ ತೀರಿಕೊಂಡಿದೆ.

## ಸಲ್ಲಿಕೆಯಾಗದ ನಾಮಪತ್ರ

• ಉದಯವಾಹಿನಿ, ಚಿತ್ರದುರ್ಗ



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಚಿತ್ರದುರ್ಗ ಜಿಲ್ಲಾ ಘಟಕದ 2025-28ನೇ ಅವಧಿಯ ಚುನಾವಣೆಗೆ ಸಂಬಂಧಿಸಿದಂತೆ ಅಕ್ಟೋಬರ್ 23ರಂದು ಯಾವುದೇ ನಾಮಪತ್ರ ಸಲ್ಲಿಕೆ ಆಗಿಲ್ಲ. ಅಕ್ಟೋಬರ್ 19 ರಿಂದ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭಗೊಂಡಿದ್ದು, ಇದುವರೆಗೆ ಯಾವ ಹುದ್ದೆಗೂ ನಾಮಪತ್ರ ಸಲ್ಲಿಕೆಯಾಗಿಲ್ಲ. ಅಕ್ಟೋಬರ್ 27ರಂದು ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿದೆ. ಬೆಳಿಗ್ಗೆ 11 ರಿಂದ ಮಧ್ಯಾಹ್ನ 3 ರವರೆಗೆ ಕಚೇರಿ ಅವಧಿಯಲ್ಲಿ ಬಂದು ನಾಮಪತ್ರ ಸಲ್ಲಿಸಬಹುದು. ಅ. 28ರಂದು ನಾಮಪತ್ರಗಳ ಪರಿಶೀಲನೆ, ಅ. 30ರಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ. ಅಂದೇ ಅಭ್ಯರ್ಥಿಗಳ ಅಂತಿಮ ಪಟ್ಟಿ ಪ್ರಕಟಿಸಲಾಗುವುದು. ಅಗತ್ಯಬಿದ್ದಲ್ಲಿ ನವೆಂಬರ್ 9ರಂದು ಬೆಳಿಗ್ಗೆ 9ರಿಂದ ಮಧ್ಯಾಹ್ನ 3ರವರೆಗೆ ಮತದಾನ ನಡೆಯಲಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಚಿತ್ರದುರ್ಗ ಜಿಲ್ಲಾ ಘಟಕದ ಜಿಲ್ಲಾ ಚುನಾವಣಾಧಿಕಾರಿ ಚಿಕ್ಕಪ್ಪನಹಳ್ಳಿ ಷಣ್ಮುಖ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೆಸ್ಕಾಂ ಆನ್‌ಲೈನ್ ಸೇವೆ ಅಲಭ್ಯ

• ಉದಯವಾಹಿನಿ, ಕಲಬುರಗಿ

ಜೆಸ್ಕಾಂ ವಿದ್ಯುತ್ ಸರಬರಾಜು ಕಂಪನಿಯ ಮಾಹಿತಿ ತಂತ್ರಜ್ಞಾನ ವ್ಯವಸ್ಥೆಯ ತುರ್ತು ನಿರ್ವಹಣೆ ಕಾರ್ಯ ಹಿನ್ನೆಲೆಯಲ್ಲಿ ಆನ್‌ಲೈನ್ ಸೇವೆಗಳು ಇಂದು ಲಭ್ಯ ಇರುವುದಿಲ್ಲ ಎಂದು ಜೆಸ್ಕಾಂ ಪ್ರಕಟಣೆ ತಿಳಿಸಿದೆ. ಸಿಸ್ಟಂ ಡೌನ್‌ಟೈಮ್ ಅಕ್ಟೋಬರ್ 24ರ ರಾತ್ರಿ 8ರಿಂದ ಆರಂಭವಾಗಿ 25ರ ಮಧ್ಯಾಹ್ನ 1 ಗಂಟೆಗೆ ಕೊನೆಗೊಳ್ಳುತ್ತದೆ. ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ಗ್ರಾಹಕರಿಗೆ, ಜೆಸ್ಕಾಂ ಪೋರ್ಟಲ್ ಮೂಲಕ ಮಾಡುವ ಆನ್‌ಲೈನ್ ಸೇವೆಗಳಾದ ಬಿಲ್ ಪಾವತಿ, ಹೊಸ ಸಂಪರ್ಕ ಲಭ್ಯವಿರುವುದಿಲ್ಲ, ಹಾಗೆಯೇ ವಿದ್ಯುತ್ ಬಿಲ್ ಪಾವತಿಗಾಗಿ ಬಳಸುವ ಜೆಸ್ಕಾಂ ಸ್ನೇಹಿ ಆ್ಯಪ್, ಕರ್ನಾಟಕ ಒನ್ ಸೇರಿದಂತೆ ಮೊದಲಾದ ಥರ್ಡ್ ಪಾರ್ಟಿ ಪಾವತಿ ವಿಧಾನಗಳಲ್ಲಿ ಆನ್‌ಲೈನ್ ಸೇವೆ ಅಲಭ್ಯ. ಅಡಚಣೆಗಾಗಿ ಗ್ರಾಹಕರು ಸಹಕಾರ ನೀಡಬೇಕೆಂದು ಜೆಸ್ಕಾಂ ಕೋರಿದೆ.

ಕಲಬುರಗಿ, ಮಾನವಿ, ಸಿಂಧನೂರು, ಬೀದರ್, ಗಂಗಾವತಿ, ಸೇಡಂ, ಬಸವಕಲ್ಯಾಣ, ವಾಡಿ, ಆಳಂದ, ಭಾಲ್ಕಿ, ಶಹಾಬಾದ್, ಶಹಾಪುರ, ಸುರಪುರ, ಸಿರಗುಪ್ಪಾ, ಕಂಪ್ಲಿ, ಯಾದಗಿರಿ, ರಾಯಚೂರು, ಬಳ್ಳಾರಿ, ಕೊಪ್ಪಳ, ಹುಮ್ನಾಬಾದ್ ಹಾಗೂ ಹೊಸಪೇಟೆಗಳಲ್ಲಿ ಜೆಸ್ಕಾಂ ಆನ್‌ಲೈನ್ ಸೇವೆಗಳು ಲಭ್ಯವಿರುವದಿಲ್ಲ.

## ಅಂಕಪಟ್ಟಿ ವಿತರಿಸಲು ಆಗ್ರಹ

• ಉದಯವಾಹಿನಿ, ಬಳ್ಳಾರಿ

ಬಳ್ಳಾರಿ-ವಿಜಯನಗರ ಜಿಲ್ಲೆಯಗಳ ಸರಕಾರಿ ಮತ್ತು ಖಾಸಗಿಯ ಪದವಿ ಕಾಲೇಜ್ ನ 70, ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳ ಅಂಕಪಟ್ಟಿ ವಿತರಿಸುವುದು ಆಯಾ ಕಾಲೇಜಿನ ಬೇಜವಾಬ್ದಾರಿಯಾಗಿರುತ್ತದೆ. ಪ್ರಿನ್ಸಿಪಾಲರು ಅಂಕಪಟ್ಟಿ ತೆಗೆದುಕೊಂಡು ಹೋಗಿ ವಿತರಿಸಲಾರದೆ ವಿದ್ಯಾರ್ಥಿಗಳಿಗೆ ಬಹಳಷ್ಟು ತೊಂದರೆ ಆಗುತ್ತಿದ್ದು ಆಯಾ ಕಾಲೇಜಿನ ಪ್ರಿನ್ಸಿಪಾಲರ ಮೇಲೆ ಕಟ್ಟುನಿಟ್ಟಿನ ಶಿಸ್ತಿನ ಕ್ರಮ ಕೈಗೊಳ್ಳುವಂತೆ ಕರ್ನಾಟಕ ದಲಿತ ರಕ್ಷಣಾ ವೇದಿಕೆ ಬಳ್ಳಾರಿ ಜಿಲ್ಲಾ ಸಮಿತಿ ಆಗ್ರಹಿಸಿದೆ. ಈ ಕುರಿತು ವಿ.ಎಸ್.ಕೆ ವಿವಿ ಕುಲಪತಿಗಳಿಗೆ ಮನವಿ ಸಲ್ಲಿಸಿದೆ.

ಒಂದು ವೇಳೆ ತಾವುಗಳು ವಿದ್ಯಾರ್ಥಿಗಳಿಗೆ ಅಂಕಪಟ್ಟಿಗಳನ್ನು ಒದಗಿಸಲಾರದೆ ನಿರ್ಲಕ್ಷ್ಯವಹಿಸಿದ ಪಕ್ಷದಲ್ಲಿ ನಿಮ್ಮ ವಿಶ್ವವಿದ್ಯಾಲಯದ ಕಚೇರಿ ಮುಂದೆ ಧರಣಿ ಸತ್ಯಾಗ್ರಹವನ್ನು ಹಮ್ಮಿಕೊಳ್ಳಲಾಗುತ್ತದೆ ಎಂದು ಎಚ್ಚರಿಕೆ ನೀಡಲಾಗಿದೆ. ಮನವಿಪತ್ರ ಸಲ್ಲಿಸಿದ ಸಂದರ್ಭದಲ್ಲಿ ಕರ್ನಾಟಕ ದಲಿತ ರಕ್ಷಣಾ ವೇದಿಕೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆ ಶಂಕರ್ ನಂದಿಹಾಳ, ಸಿ ಹನುಮೇಶ್ ಕಟ್ಟಿಮನಿ, ಉಪಸ್ಥಿತರಿದ್ದರು.

## ಶಿಕ್ಷಣದಲ್ಲಿ ರಾಜಕೀಯ ಹಸ್ತಕ್ಷೇಪ ಬೇಡ : ಎಂಎಲ್‌ಸಿ ಭೋಜೇಗೌಡ

• ಉದಯವಾಹಿನಿ, ಮಂಗಳೂರು

ಶಿಕ್ಷಣ ಕ್ಷೇತ್ರದಲ್ಲಿ ರಾಜಕೀಯ ಹಸ್ತಕ್ಷೇಪ ಇರಲೇ ಬಾರದು, ಆಗ ಮಾತ್ರ ಶಿಕ್ಷಣ ಕ್ಷೇತ್ರ ಅಭಿವೃದ್ಧಿ ಹೊಂದಲು ಸಾಧ್ಯ ಎಂದು ವಿಧಾನ ಪರಿಷತ್ ಸದಸ್ಯ ಭೋಜೇ ಗೌಡ ಹೇಳಿದ್ದಾರೆ. ಮಂಗಳೂರಿನ ಖಾಸಗಿ ಹೋಟೇಲ್‌ನಲ್ಲಿ ಕರ್ನಾಟಕ ಅನುದಾನ ರಹಿತ ಪದವಿ ಪೂರ್ವ ಕಾಲೇಜು ಆಡಳಿತ ಮಂಡಳಿಗಳ ಸಂಘ ಕುಪ್ಮಾ ಇದರ ದ.ಕ. ಜಿಲ್ಲಾ ಸಮಿತಿಯ ಪದಗ್ರಹಣ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಐಎಎಸ್, ಐಪಿಎಸ್ ಕಲಿತ ಅಧಿಕಾರಿಗಳು ನಾವು ಕೂಡ ತಳಮಟ್ಟದ ಇಂತಹ ಶಿಕ್ಷಣ ಸಂಸ್ಥೆಗಳಿಂದಲೇ ಮೇಲೆ ಬಂದಿರುವುದನ್ನು ಮರೆಯಬಾರದು. ಆಡಳಿತ ಭಾಷೆ ಕನ್ನಡ ಮಾಡುತ್ತೇವೆ ಎನ್ನುವ ಮುಖ್ಯಮಂತ್ರಿಗಳು ಬಾಯ್ಮಾತಿನಲ್ಲಿ ಹೇಳಿದರೆ ಸಾಲದು, ಅದಕ್ಕೆ ಪೂರಕ ವ್ಯವಸ್ಥೆ ಮಾಡಿಕೊಡಬೇಕು. ಶಿಕ್ಷಣ ಸಂಸ್ಥೆಗಳಲ್ಲಿ ಗುಣಮಟ್ಟದ ಜೊತೆ ಸಂಸ್ಕಾರ, ಮೌಲ್ಯಯುತ ಶಿಕ್ಷಣಕ್ಕೆ ಒತ್ತು ನೀಡಬೇಕು ಎಂದರು. ಪದವಿ ಪೂರ್ವ ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕಿ ರಾಜೇಶ್ವರಿ ಎಚ್.ಎಚ್. ಮಾತನಾಡಿ, ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಎಲ್ಲರ ಪಾತ್ರ ಬಹುಮುಖ್ಯ. ಸರ್ಕಾರಿ ಶಾಲೆಗಳಿಗೆ ಸರಿಸಾಟಿಯಾಗಿ ಖಾಸಗಿ ಶಾಲೆಗಳು ಮೂಲಸೌಕರ್ಯವನ್ನು ಹೊಂದಿವೆ. ಖಾಸಗಿ ಶಾಲೆಗಳೂ ಉತ್ತಮ ರೀತಿಯ ಶಿಕ್ಷಣ ನೀಡುತ್ತಿವೆ.

ರಾಜ್ಯದಲ್ಲಿ 4,500 ಪಿಯು ಕಾಲೇಜುಗಳಿದ್ದು, ದ.ಕ. ಜಿಲ್ಲೆಯಲ್ಲಿ 55 ಸರ್ಕಾರಿ ಪಿಯು, 41 ಅನುದಾನಿತ ಹಾಗೂ 113 ಅನುದಾನ ರಹಿತ ಪಿಯು ಕಾಲೇಜುಗಳಿವೆ. ಇವುಗಳಲ್ಲಿ ವಸತಿ ಶಾಲೆಗಳೂ ಸೇರಿವೆ. ಎಲ್ಲವೂ ಗುಣಟ್ಟದ ಶಿಕ್ಷಣ ನೀಡುತ್ತಿವೆ ಎಂದರು. ಕುಪ್ಮಾ ರಾಜ್ಯ ಸಮಿತಿ ಗೌರವಾಧ್ಯಕ್ಷ ಡಾ.ಎಂ.ಬಿ.ಪುರಾಣಿಕ್ ಮಾತನಾಡಿ, ಕೊರೋನಾ ವೇಳೆ ಖಾಸಗಿ ಪಿಯು ಶಿಕ್ಷಣ ಸಂಸ್ಥೆಗಳು ತೊಂದರೆಗೆ ಸಿಲುಕಿದ್ದು, ಬಳಿಕ ಸುಧಾರಿಸಿಕೊಂಡಿವೆ. ವಿದ್ಯಾರ್ಥಿಗಳ ಜೀವನದಲ್ಲಿ ಹೈಸ್ಕೂಲ್ ಮತ್ತು ಪಿಯುಸಿ ವ್ಯಕ್ತಿತ್ವ ರೂಪಿಸುವ ಹಂತಗಳಾಗಿವೆ ಎಂದರು.

ಇನ್ನೋರ್ವ ಗೌರವಾಧ್ಯಕ್ಷ ಡಾ.ಕೆ.ಸಿ.ನಾಯ್ಕ್ ಮಾತನಾಡಿ, ನಾನೇ ಸ್ಥಾಪಿಸಿದ ಕುಪ್ಮಾ ರಾಜ್ಯ ಮಟ್ಟಕ್ಕೆ ವಿಸ್ತರಣೆಗೊಳ್ಳುತ್ತಿರುವುದು ಖುಷಿ ತಂದಿದೆ. ಇನ್ನಷ್ಟು ಮಂದಿ ಸದಸ್ಯರ ಸೇರ್ಪಡೆಯಾಗಬೇಕಾಗಿದೆ ಎಂದರು.


ಉದಯವಾಹಿನಿ ಚಿತ್ರ

> 130 ಪಿಯು ಕಾಲೇಜು ಪೈಕಿ ಇದರ ಸದಸ್ಯರಾದವರು 31 ಕಾಲೇಜುಗಳು ಮಾತ್ರ. ಪ್ರತಿಯೊಬ್ಬ ಸದಸ್ಯರೂ ಹೊಸದಾಗಿ ಕನಿಷ್ಠ ಒಬ್ಬರು ಸದಸ್ಯರ ಸೇರ್ಪಡೆಗೆ ಪ್ರಯತ್ನಿಸಬೇಕು. ಈ ಮೂಲಕ ಕುಪ್ಮಾ ಸಂಘಟನೆ ಬಲಪಡಿಸಬೇಕು.
> -ಪ್ರೊ. ನರೇಂದ್ರ ಎಲ್.ನಾಯಕ್ ಕಾರ್ಯದರ್ಶಿ

## ವೈದ್ಯಕೀಯ ಕಾಲೇಜ್ ಹೋರಾಟಕ್ಕೆ ಜೆಡಿಎಸ್ ಬೆಂಬಲ



ಉದಯವಾಹಿನಿ ಚಿತ್ರ

• ಉದಯವಾಹಿನಿ, ವಿಜಯಪುರ

ವಿಜಯಪುರ ಜಿಲ್ಲೆಗೆ ಸರ್ಕಾರಿ ವೈದ್ಯಕೀಯ ಕಾಲೇಜ್ ಸ್ಥಾಪಿಸುವಂತೆ ಹೋರಾಟ ಸಮಿತಿ ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಕೈಗೊಂಡ ಅನಿರ್ದಿಷ್ಟ ಧರಣಿ ಸತ್ಯಾಗ್ರಹ 37ನೇ ದಿನಕ್ಕೆ ಕಾಲಿಟ್ಟಿದೆ.

ವಿವಿಧ ಸಂಘಟನೆಗಳು ವ್ಯಾಪಕ ಬೆಂಬಲ ನೀಡುತ್ತಿದ್ದು, ದಿನೇ ದಿನೇ ಹೋರಾಟ ತೀವ್ರತೆ ಪಡೆಯುತ್ತಿದೆ. ಆದರೂ ಕುಂಭಕರ್ಣ ನಿದ್ರೆಯಲ್ಲಿರುವ ಸರ್ಕಾರ ಎಚ್ಚೆತ್ತುಕೊಳ್ಳುತ್ತಿಲ್ಲ. ಇದರಿಂದ ಹೋರಾಟಗಾರರು ತೀವ್ರ ಅಸಮಾಧಾನಗೊಂಡಿದ್ದಾರೆ. ಹೋರಾಟಗಾರರ ನ್ಯಾಯಯುತ ಬೇಡಿಕೆಯನ್ನು ಸರ್ಕಾರ ಕೂಡಲೇ ಈಡೇರಿಸಬೇಕು ಎನ್ನುವುದು ಎಲ್ಲರ ಒತ್ತಾಯವಾಗಿದೆ.

ವೇದಿಕೆಗೆ ಭೇಟಿ ನೀಡಿ ಬೆಂಬಲ ವ್ಯಕ್ತಪಡಿಸಿದ ಜಿಲ್ಲಾಧ್ಯಕ್ಷ ಬಸನಗೌಡ ಮಾಡ ಮಾತನಾಡಿ, ಈ ಹೋರಾಟ ನ್ಯಾಯಯುತವಾಗಿದೆ. ಸರ್ಕಾರಿ ವೈದ್ಯಕೀಯ ಕಾಲೇಜು ಆಗುವವರೆಗೂ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ. ನಾನು ನಮ್ಮ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರ ಬಳಿ ನಿಯೋಗ ಕರೆದುಕೊಂಡು ನ್ಯಾಯ ದೊರಕಿಸುವೆ. ಈ ಹೋರಾಟ ರಾಜ್ಯಮಟ್ಟದಲ್ಲಿ ಹರಡುವಂತೆ ಯೋಜನೆ ರೂಪಿಸಬೇಕಾಗಿದೆ. ಈ ಸರ್ಕಾರಕ್ಕೆ ಕಿವಿ, ಕಣ್ಣು, ಬಾಯಿ ಇಲ್ಲವೇ ಇಲ್ಲ. ನಮ್ಮ ಜಿಲ್ಲೆಯ ಜನತೆಯ ಬಗ್ಗೆ ಕಿಂಚಿತ್ತೂ ಕಾಳಜಿ ಇಲ್ಲ ಎಂದು ಟೀಕಿಸಿದರು.

## ಅಕ್ರಮ ಸಾರಾಯಿ ಮಾರಾಟ: ಕ್ರಮಕ್ಕೆ ಸೂಚನೆ

• ಉದಯವಾಹಿನಿ, ಹಾನಗಲ್

ಅಕ್ರಮ ಸಾರಾಯಿ ಮಾರಾಟದ ವಿರುದ್ಧ ಯಾವುದೇ ಮುಲಾಜಿಗೆ ಒಳಗಾಗದೇ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳುವಂತೆ ಶಾಸಕ ಶ್ರೀನಿವಾಸ ಮಾನೆ ಅಬಕಾರಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಇಲ್ಲಿ ಅಬಕಾರಿ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು ತಾಲ್ಲೂಕಿನ 14 ಕ್ಕೂ ಹೆಚ್ಚು ಗ್ರಾಮಗಳಲ್ಲಿ ಅಕ್ರಮವಾಗಿ ಹೋಟೆಲ್, ಕಿರಾಣಿ ಸೇರಿದಂತೆ ಇನ್ನಿತರ ಸಣ್ಣಪುಟ್ಟ ಅಂಗಡಿಗಳಲ್ಲಿ ಸಾರಾಯಿ ಮಾರಾಟ ಮಾಡುತ್ತಿರುವ ಬಗ್ಗೆ ದೂರುಗಳಿವೆ. ಅಕ್ರಮ ಸಾರಾಯಿ ಮಾರಾಟವನ್ನು ಮಟ್ಟ ಹಾಕುವ ಮೂಲಕ ಗ್ರಾಮೀಣ ಪ್ರದೇಶಗಳಲ್ಲಿ ಜನತೆ ನೆಮ್ಮದಿಯಿಂದ ಜೀವನ ಸಾಗಿಸಲು ಉತ್ತಮ ವಾತಾವರಣ ನಿರ್ಮಿಸುವಂತೆ ಸೂಚಿಸಿದರು. ಸಾರ್ವಜನಿಕರಿಂದ ಬರುವ ದೂರುಗಳ ಬಗ್ಗೆ ಕಾಳಜಿ ವಹಿಸಬೇಕು. ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ಸಲ್ಲದು. ಶಾಲೆ, ಕಾಲೇಜುಗಳ ಮೈದಾನ , ಇತರ ಸಾರ್ವಜನಿಕ ಸ್ಥಳಗಳಲ್ಲಿ ಮದ್ಯಪಾನ ಮಾಡಿ ವಾತಾವರಣ ಹದಗೆಡಿಸುತ್ತಿರುವ ಬಗ್ಗೆ ದೂರುಗಳಿದ್ದು, ಈ ಬಗ್ಗೆ ಸಹ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಶಾಸಕ ಮಾನೆ ಸೂಚಿಸಿದರು.

## ನ.15 ರೊಳಗಾಗಿ ಪ್ರತಿ ಬೂತಿಗೆ ಕನಿಷ್ಠ 150 ಜನ ಸಹಿ ಸಂಗ್ರಹ: ಮಾಜಿ ಶಾಸಕ ಆನಂದ ನ್ಯಾಮಗೌಡ

• ಉದಯವಾಹಿನಿ, ಜಮಖಂಡಿ

ಬಿಜೆಪಿ ಮತಗಳ್ಳತನದ ಮೂಲಕ ಮೋಸ ಮಾಡುತ್ತಿದೆ ಎಂದು ಮಾಜಿ ಶಾಸಕ ಆನಂದ ನ್ಯಾಮಗೌಡ ನೇತೃತ್ವದಲ್ಲಿ ವೋಟ್ ಚೋರಿ ವಿರುದ್ಧ ಸಹಿ ಸಂಗ್ರಹ ಅಭಿಯಾನ ಜರುಗಿತು. ದೇಶದ ಪ್ರಧಾನಿ ಮತಗಳ್ಳತನದ ಮೇಲೆ ಚುನಾವಣೆ ಗೆದ್ದು ಆಡಳಿತ ನಡೆಸುತ್ತಿದ್ದಾರೆ ಎಂದು ಮಾಜಿ ಶಾಸಕ ಆನಂದ ನ್ಯಾಮಗೌಡ ಹೇಳಿದರು.

ನಗರದಲ್ಲಿ ಮಾಜಿ ಶಾಸಕರ ಗೃಹ ಕಚೇರಿಯಲ್ಲಿ ಕಾಂಗ್ರೆಸ್ ಪಕ್ಷ ಏರ್ಪಡಿಸಿದ್ದ ವೋಟ್ ಚೋರಿ ವಿರುದ್ಧ ಸಹಿ ಸಂಗ್ರಹ ಅಭಿಯಾನದಲ್ಲಿ ಅವರು ಮಾತನಾಡಿ ಕಾಂಗ್ರೆಸ್ ಪಕ್ಷ ಎಷ್ಟೇ ಅಭಿವೃದ್ಧಿಪರ ಕೆಲಸ ಮಾಡಿದರೂ ಸಹ ಚುನಾವನೆಯಲ್ಲಿ ಅತೀ ಕಡಿಮೆ ಅಂತರದಲ್ಲಿ ಗೆಲವು ಅಥವಾ ಸೋಲು ಅನುಭವಿಸುತ್ತಿದೆ, ಇದಕ್ಕೆ ಮತಗಳ್ಳತನವೇ ಕಾರಣವಾಗಿದೆ ಇದನ್ನು ನಮ್ಮ ನಾಯಕರು ಸಾಕ್ಷಿ ಸಮೇತ ವರದಿ ನೀಡಿದ್ದಾರೆ ಎಂದು ಹೇಳಿದರು. ಭಾರತೀಯ ಜನತಾ ಪಕ್ಷವು ರಾಜ್ಯ ಅಷ್ಟೇ ಅಲ್ಲದೇ ದೇಶದಲ್ಲಿ ಅನೇಕ ಕ್ಷೇತ್ರಗಳಲ್ಲಿ ಮತಗಳ್ಳತನ ಮಾಡಿದ್ದ ಪುರಾವೆಗಳನ್ನು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಬಹಿರಂಗ ಪಡಿಸಿದ್ದಾರೆ. ಕಾಂಗ್ರೆಸ್ ಮನೆ ಮನೆಗೆ ಹೋಗಿ ಮತಗಳ್ಳತನದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲಿದೆ' ಎಂದು ತಿಳಿಸಿದರು. ಮತಗಳ್ಳತನವು ಮತದಾರರನ್ನು ಹುಚ್ಚು ಮಾಡಿದೆ ಅದರ ಜೊತೆಗೆ ಕೆಲವಂದಿಷ್ಟು ಮತದಾರರನ್ನು ಹಕ್ಕನ್ನೂ ಸಹ ಕೈಬಿಡಲಾಗಿದೆ ಎಂದು ಆರೋಪಿಸಿದರು.

ಇದೇ ರೀತಿ ಮುಂದು ವರೆದರೆ ಮುಂಬರುವ ದಿನಗಳಲ್ಲಿ ಇದೇ ತರಹ ಮತಗಳ್ಳತನದಿಂದ ಅಧಿಕಾರಕ್ಕೆ ಬರುವ ಸಾಧ್ಯತೆ ಹೆಚ್ಚಾಗಿದೆ ಅದಕ್ಕಾಗಿ ನಮ್ಮ ಹಿರಿಯ ನಾಯಕರ ತಂಡವು ಮುಖ್ಯ ಚುನಾವಣಾ ಆಯುಕ್ತರಿಗೆ ದೂರು ಸಲ್ಲಿಸಿದರೂ ಸಹ ಮಾಹಿತಿ ನೀಡಿಲ್ಲ ಅವರ ಬದಲಾಗಿ ಭಾಜಪದವರು ಉತ್ತರ ನೀಡುತ್ತಿದ್ದಾರೆ. ಈ ವ್ಯವಸ್ಥೆಯು ಹದಗೆಡುತ್ತಿದೆ. ಮತಗಳ್ಳತದ ಆರೋಪಕ್ಕೆ ಸಕ್ಷಮವಾಗಿ ಉತ್ತರ ನೀಡುವ ಶಕ್ತಿ ಅವರಿಗಿಲ್ಲ ಎಂದರು.


ಉದಯವಾಹಿನಿ ಚಿತ್ರ

## ಸವದಿ ಬಿಜೆಪಿಯಲ್ಲೇ ಇದ್ದಿದ್ದರೆ ದೊಡ್ಡ ನಾಯಕರಾಗುತ್ತಿದ್ದರು

• ಉದಯವಾಹಿನಿ, ಅಥಣಿ

ಶಾಸಕ ಲಕ್ಷ್ಮಣ ಸವದಿ ಬಿಜೆಪಿಯಲ್ಲೇ ಇದ್ದಿದ್ದರೆ ದೊಡ್ಡ ನಾಯಕರಾಗುತ್ತಿದ್ದರು. ಆದರೆ, ಕಾಂಗ್ರೆಸ್ ಸೇರಿ ತಮ್ಮ ವ್ಯಕ್ತಿತ್ವ ಹಾಳು ಮಾಡಿಕೊಂಡರು. ಇನ್ಮುಂದೆ ಸವದಿ ಬಿಜೆಪಿ ಸೇರಲು ನಾವು ಆಸ್ಪದ ಕೊಡುವುದಿಲ್ಲ' ಎಂದು ಶಾಸಕ ರಮೇಶ ಜಾರಕಿಹೊಳಿ ಹೇಳಿದರು.

ನಾವು ಯಾವುದೋ ಕಾರಣಕ್ಕೆ ಕಾಂಗ್ರೆಸ್ ತೊರೆದು ಬಿಜೆಪಿ ಸೇರಿದಾಗ ಲಕ್ಷ್ಮಣ ಸವದಿ ಅವರಿಗೆ ಲಾಭವಾಯಿತು. ಆದರೆ, ನಂತರ ಅವರು ಬಿಜೆಪಿಯನ್ನೇ ತೊರೆದಿದ್ದು ಒಳ್ಳೆಯದಾಯಿತು. ಇನ್ಮುಂದೆ ಸವದಿ ಬಿಜೆಪಿಗೆ ಬರುವುದಾದರೆ, ಎಲ್ಲಿ ತಡೆಯಬೇಕೋ ತಡೆಯುತ್ತೇವೆ' ಎಂದರು. ತಮಗೆ ಡಿಸಿಸಿ ಬ್ಯಾಂಕ್ ಅಧ್ಯಕ್ಷನಾಗುವ ಆಸೆ ಇಲ್ಲ ಎಂದು ಸವದಿ ಹೇಳುತ್ತಾರೆ. ಆದರೆ, ಅವಕಾಶ ಸಿಕ್ಕರೆ ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಲು ಅವರು ಹಿಂಜರಿಯುವುದಿಲ್ಲ. ಡಿಸಿಸಿ ಬ್ಯಾಂಕ್ ಅಧ್ಯಕ್ಷ ಸ್ಥಾನ ಸಿಗುತ್ತದೆ ಎಂದರೆ ಜಾರಕಿಹೊಳಿ ಕುಟುಂಬದವರ ಮನೆಗೆ ಬಂದು ಕಾಲಿಗೆ ಬೀಳುತ್ತಾರೆ' ಎಂದು ಲೇವಡಿ ಮಾಡಿದರು.


ಉದಯವಾಹಿನಿ ಚಿತ್ರ

### ನಾನು ಯಾರಿಂದಲೂ ಬುದ್ಧಿ ಕಲಿಯಬೇಕಾದ ಅಗತ್ಯವಿಲ್ಲ: ಸವದಿ

**ಅಥಣಿ ತಾಲ್ಲೂಕಿನ ಜನರು ಶಾಸಕ ರಮೇಶ ಜಾರಕಿಹೊಳಿ ಬೆಂಬಲಿಸಿದ ಅಭ್ಯರ್ಥಿ ಸೋಲಿಸುವ ಮೂಲಕ ಅವರನ್ನು ತಿರಸ್ಕರಿಸಿದ್ದಾರೆ. ರಮೇಶ ಅವರಿಗೆ ಅದರ ಅರಿವು ಇದ್ದಿದ್ದರೆ ಅಥಣಿ ತಾಲ್ಲೂಕಿನತ್ತ ಸುಳಿಯುತ್ತಿರಲಿಲ್ಲ' ಎಂದು ಶಾಸಕ ಲಕ್ಷ್ಮಣ ಸವದಿ ಹೇಳಿದರು. ತಮ್ಮ ವಿರುದ್ಧ ಅಶ್ಲೀಲ ಪದ ಬಳಸಿದ ರಮೇಶ ಜಾರಕಿಹೊಳಿ ವಿರುದ್ಧ ಇಲ್ಲಿ ವಾಗ್ದಾಳಿ ನಡೆಸಿದ ಅವರು 2023ರ ವಿಧಾನಸಭೆ ಚುನಾವಣೆ ಮತ್ತು ಡಿಸಿಸಿ ಬ್ಯಾಂಕ್ ಚುನಾವಣೆಯಲ್ಲಿ ತಾಲ್ಲೂಕಿನ ಜನರು ರಮೇಶ ಮತ್ತು ಅವರ ಬೆಂಬಲಿತ ಅಭ್ಯರ್ಥಿ ತಿರಸ್ಕರಿಸಿದ್ದಾರೆ. 2028ರ ವಿಧಾನಸಭೆ ಚುನಾವಣೆಯಲ್ಲೂ ತಿರಸ್ಕರಿಸಲಿದ್ದಾರೆ. ನಾನು ಯಾರಿಂದಲೂ ಬುದ್ಧಿ ಕಲಿಯಬೇಕಾದ ಅಗತ್ಯವಿಲ್ಲ' ಎಂದು ತಿರುಗೇಟು ನೀಡಿದರು. 'ಜಾಣರಿಗೆ ಸೂಕ್ಷ್ಮತೆ ಅರ್ಥವಾಗುತ್ತದೆ. ಸೂಕ್ಷ್ಮತೆ ಹೊಂದಿರದವರಿಗೆ ಯಾವ ಅರಿವು ಇರುವುದಿಲ್ಲ. ಮನುಷ್ಯನಿಗೆ ಸಂಸ್ಕಾರ ಮುಖ್ಯ. ಸಂಸ್ಕಾರ ಹೊಂದಿರದವರು ಏನು ಬೇಕಾದರೂ ಮಾತನಾಡುತ್ತಾರೆ. ನನಗೆ ಹೆತ್ತವರು ಸಂಸ್ಕಾರ ಕೊಟ್ಟಿದ್ದಾರೆ. ಹಾಗಾಗಿ ಮೂರ್ಖರ ಮಾತಿಗೆ ಉತ್ತರಿಸಲಾರೆ' ಎಂದು ಚಾಟಿ ಬೀಸಿದರು.**

## ಗೋಕಳ್ಳರಿಗೆ ಪೊಲೀಸರಿಂದ ಗುಂಡು

• ಉದಯವಾಹಿನಿ, ಪುತ್ತೂರು

ಪುತ್ತೂರಿನ ಇತಿಹಾಸದಲ್ಲಿಯೇ ಮೊದಲ ಬಾರಿಗೆ ಗೋಕಳ್ಳ ಸಾಗಾಣಿಕೆದಾರರ ವಿರುದ್ಧ ಪೊಲೀಸರು ಫೈರಿಂಗ್ ಮಾಡಿದ್ದಾರೆ. ಇದರಿಂದ ಆರೋಪಿಯ ಕಾಲಿಗೆ ಗುಂಡು ಬಿದ್ದು ಗಾಯವಾಗಿದೆ. ಅಕ್ರಮವಾಗಿ ಸಾಗಿಸಲಾಗುತ್ತಿದ್ದ 12 ದನಗಳಲ್ಲಿ ಒಂದು ಜಾನುವಾರು ಸತ್ತಿದ್ದು, ಉಳಿದ ಜಾನುವಾರುಗಳನ್ನು ರಕ್ಷಣೆ ಮಾಡಲಾಗಿದೆ. ಪುತ್ತೂರು ಗ್ರಾಮಾಂತರ ಠಾಣಾ ವ್ಯಾಪ್ತಿಯ ಈಶ್ವರಮಂಗಲದ ಬೆಳ್ಳಿಚಡವು ಎಂಬಲ್ಲಿ ಈ ಘಟನೆ ನಡೆದಿದೆ. ಹಾಸನದಿಂದ ಕೇರಳಕ್ಕೆ ಈಚರ್ ಗಾಡಿಯೊಂದರಲ್ಲಿ ಅಕ್ರಮವಾಗಿ ಸಾಗಿಸುತ್ತಿದ್ದ ಲಾರಿ ಚಾಲಕ ಮೂಲತಾ ಕೇರಳದ ಕಾಸರಗೋಡಿನ ನಿವಾಸಿಯಾದ ಆರೋಪಿ ಅಬ್ದುಲ್ಲಾ (40) ಎಂಬಾತನ ಕಾಲಿಗೆ ಪೊಲೀಸರು ಗುಂಡು ಹಾರಿಸಿದ್ದಾರೆ. ಈತನ ಜತೆಗಿದ್ದ ಇನ್ನೋರ್ವ ಆರೋಪಿ ಪರಾರಿಯಾಗಿದ್ದಾನೆ.

ಅ.22ರಂದು ನಸುಕಿನ ವೇಳೆ ಈ ಜಾನುವಾರುಗಳ ಅಕ್ರಮಸಾಗಾಟ ನಡೆದಿದ್ದು, ಇದನ್ನು ಗಮನಿಸಿದ ಪೊಲೀಸರು ಗಾಡಿಯನ್ನು ನಿಲ್ಲಿಸುವಂತೆ ಸೂಚನೆ ನೀಡಿದ್ದಾರೆ. ಆದರೆ ಆರೋಪಿ ಗಾಡಿಯನ್ನು ನಿಲ್ಲಿಸದೆ ಸುಮಾರು 10 ಕಿಮೀ ತನಕ ಗಾಡಿಯನ್ನು ಬೆನ್ನಟ್ಟಿದ್ದಾರೆ. ಈ ಸಂದರ್ಭದಲ್ಲಿ ಆರೋಪಿಯು ತನ್ನ ಈಚರ್ ಗಾಡಿಯಿಂದ ಪೊಲೀಸ್ ವಾಹನಕ್ಕೆ ಡಿಕ್ಕಿ ಹೊಡೆದಿದ್ದಾನೆ. ಇದರಿಂದ ಸಂಪ್ಯ ಠಾಣಾ ಎಸ್ಸೈ ಪಿಎಸ್‌ಐ ಜಂಬೂರಾಜ್ ಮಹಾಜನ್ ಎರಡು ಸುತ್ತು ಗುಂಡು ಹಾರಿಸಿದ್ದಾರೆ. ಈ ವೇಳೆ ಒಂದು ಗುಂಡು ವಾಹನದ ಮೇಲೆ ಹಾಗೂ ಒಂದು ಗುಂಡು ಆರೋಪಿಯ ಕಾಲಿಗೆ ಬಿದ್ದಿದೆ. ಗಾಯಗೊಂಡ ಆರೋಪಿಯನ್ನು ಪೊಲೀಸರು ಮಂಗಳೂರಿನ ವೆನ್ಲಾಕ್ ಆಸ್ಪತ್ರೆಗೆ ದಾಖಲಿಸಿದ್ದಾರೆ. ಈತನ ಮೇಲೆ ಬೆಳ್ಳಾರೆ ಠಾಣೆಯಲ್ಲಿ ಈ ಹಿಂದೆ ಗೋಹತ್ಯೆ ಪ್ರಕರಣ ದಾಖಲಾಗಿತ್ತು. ಪರಾರಿಯಾಗಿರುವ ಆರೋಪಿಯ ಬಂಧನಕ್ಕೆ ಪೊಲೀಸರು ತೀವ್ರ ತನಿಖೆ ಕೈಗೊಂಡಿದ್ದಾರೆ.

**ಕತ್ತಿ ಹಿಡಿದ ಪುತ್ತಿಲ**

ಈ ನಡುವೆ ಸ್ಥಳದಲ್ಲಿದ್ದ ಅರುಣ್‌ಕುಮಾರ್ ಪುತ್ತಿಲ ಕತ್ತಿ ಹಿಡಿದಿದ್ದಾರೆ ಎಂದು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿ ಚರ್ಚೆಗೆ ಕಾರಣವಾಗಿತ್ತು. ಇದಕ್ಕೆ ಸ್ಪಷ್ಟನೆ ನೀಡಿದ ಜಿಲ್ಲಾ ಪೊಲೀಸರು ಈಚರ್ ಗಾಡಿಯಲ್ಲಿ ಜಾನುವಾರುಗಳನ್ನು ಕಟ್ಟಿ ಹಾಕಲಾಗಿದ್ದು, ಇದರಲ್ಲಿ ಒಂದು ದನ ಸತ್ತು ಹೋಗಿತ್ತು. ಈ ಜಾನುವಾರುಗಳನ್ನು ಕಟ್ಟಿ ಹಾಕಿದ ಹಗ್ಗಗಳನ್ನು ತುಂಡು ಮಾಡುವ ಸಲುವಾಗಿ ಸ್ಥಳೀಯ ಮುಸ್ಲಿಂ ಸಮುದಾಯದ ಮನೆಯೊಂದರಿಂದ ತಂದಿದ್ದ ಕತ್ತಿಯನ್ನು ಬಳಕೆ ಮಾಡಲಾಗಿತ್ತು.

ಇಂತಹ ಸಂದರ್ಭದಲ್ಲಿ ಸಹಜವಾಗಿ ಪೊಲೀಸರು ಸ್ಥಳೀಯರ ಸಹಕಾರ ತೆಗೆದುಕೊಳ್ಳುತ್ತಾರೆ. ಆದರೆ ಈ ವಿಚಾರದ ಕುರಿತು ತಪ್ಪು ಪ್ರಚಾರ ಮಾಡುವ ವ್ಯಕ್ತಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಕೆಯನ್ನೂ ನೀಡಿದ್ದಾರೆ.


ಉದಯವಾಹಿನಿ ಚಿತ್ರ

**ಪುತ್ತೂರಿನಲ್ಲಿ ಪ್ರಥಮಬಾರಿಗೆ ಫೈರಿಂಗ್**

# ಕಬ್ಬು ನುರಿಸುವ ಹಂಗಾಮ ಪ್ರಯೋಗಿಕವಾಗಿ ಚಾಲನೆ

### ವರ್ಷಕ್ಕೆ 8ಲಕ್ಷ ಟನ್ ಕಬ್ಬು,8ಲಕ್ಷ ಟನ್ ಮೆಕ್ಕೆಜೋಳ ನುರಿಸುವ ಗುರಿ ಹೊಂದಿದೆ: ಯತ್ನಾಳ

• ಉದಯವಾಹಿನಿ, ಚಿಂಚೋಳಿ

ಪಟ್ಟಣದ ಸಿದ್ದಸಿರಿ ಎಥನಾಲ್ ಪವ್ಹರ್ ಘಟಕ ಕಾರ್ಖಾನೆಯು ವರ್ಷಕ್ಕೆ 08ಲಕ್ಷ ಟನ್ ಕಬ್ಬು ಹಾಗೂ 08ಲಕ್ಷ ಟನ್ ಮೆಕ್ಕೆಜೋಳ ನುರಿಸುವ ಸಾಮರ್ಥ್ಯ,ಹಾಗೂ 450ಲಕ್ಷ ಲೀಟರ್ ಇಥೆನಾಲ್ ಉತ್ಪಾದನೆ ಹಾಗೂ 30ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಮಾಡಲಾಗುವುದು ಎಂದು ಸಿದ್ದಸಿರಿ ಸಮೂಹ ಸಂಸ್ಥೆಗಳ ಅಧ್ಯಕ್ಷರು,ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಹೇಳಿದರು.

ಪಟ್ಟಣದ ಹೊರವಲಯದ ಸಿದ್ದಸಿರಿ ಎಥನಾಲ್ ಪವ್ಹರ್ ಘಟಕ ಕಾರ್ಖಾನೆಯ 2025-26ನೇ ಸಾಲಿನ ಕಬ್ಬು ನುರಿಸುವ ಹಂಗಾಮ ಪ್ರಯೋಗಿಕವಾಗಿ ಚಾಲನೆ ನೀಡಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರೈತರಿಗೆ ಕಬ್ಬಿನ ಬೆಲೆಯು ಇನ್ನು ನಿಗಧಿ ಮಾಡಿಲ್ಲ, ಕೇಂದ್ರ ಸರ್ಕಾರ ನಿಗಧಿ ಮಾಡಿದ ಬೆಂಬಲ ಬೆಲೆಯನ್ನು ನೀಡಲಾಗುವುದು.

ರೈತರ ಕಬ್ಬು ಖರೀದಿಸಿದ 15ದಿನದೊಳಗೆ ರೈತರ ಹಣ ಅವರ ಖಾತೆಗೆ ಪಾವತಿ ಮಾಡಲಾಗುವುದು, ಕಳೆದ ವರ್ಷ ಕಾರ್ಖಾನೆ ಬಂದ್ ಆಗಿರುವುದರಿಂದ 250ಕೋಟಿ ರೂ.ಕಾರ್ಖಾನೆಗೆ ನಷ್ಟವಾಗಿದೆ, 30ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಕಾರ್ಖಾನೆಯಲ್ಲಿ ಮಾಡಿ 10ಮೆಗಾವ್ಯಾಟ್ ಕಂಪನಿಗೆ ಬೇಕಾಗುತ್ತದೆ ಉಳಿದಿದ್ದು ಜೆಸ್ಕಾಂ ಅಥವಾ ಕೆಪಿಟಿಸಿಎಲ್ ಗೆ ಮಾರಾಟ ಮಾಡುತ್ತೇವೆ.

ಮುಂದಿನ ವರ್ಷ ರೈತರಿಗೆ ಹೊಸ ತಳಿಯ ಕಬ್ಬಿನ ಬೀಜ ವಿತರಣೆ ಮಾಡುತ್ತೇವೆ,ನಮ್ಮಲ್ಲಿ ಯಾವುದೇ ದಲ್ಲಾಳಿಗಳು ಇಲ್ಲದೆ ರೈತರ ಕಬ್ಬು ಖರೀದಿಸಿ ರೈತರ ಖಾತೆಗೆ ಹಣ ಪಾವತಿ ಮಾಡಲಾಗುತ್ತಿದೆ,ಮೆಕ್ಕೆಜೋಳ ಮತ್ತು ಕಬ್ಬು ಮಾರ್ಕೆಟಿಂಗ್ ದರದಲ್ಲಿ ಖರೀದಿಸುತ್ತೇವೆ,ಕಬ್ಬು ಕಟಿಂಗ್ ಮಾಡುವ 35ಯಂತ್ರಗಳು ಈಗಾಗಲೇ ಬಂದಿವೆ, ಕಬ್ಬು ಕಂಪನಿಗೆ ರವಾನಿಸಲು 100 ಟ್ರ್ಯಾಕ್ಟರ್ ರೈತರು ಪಡೆದುಕೊಂಡಿದ್ದು ಕಬ್ಬು ಕಂಪನಿಗೆ ಬರುತ್ತದೆ.

ಈ ಸಂದರ್ಭದಲ್ಲಿ ಮಾಜಿ ಸಂಸದ ಡಾ.ಉಮೇಶ ಜಾಧವ, ಬಾಬುರಾವ ಪಾಟೀಲ್, ಜಗದೀಶ ಕ್ಷತ್ರಿ, ಪ್ರಭುಗೌಡ ದೇಸಾಯಿ, ಕಂಚಾಳಕುಂಟಿ ನಂದಿಶ್ವರ ಮಠದ ಪೂಜ್ಯ ಷ.ಬ್ರ.ಕರುಣೇಶ್ವರ ಶಿವಾಚಾರ್ಯರು, ಪೂಜ್ಯ ಗುರುಪಾದ ಮಹಾಶಿವಯೋಗಿಗಳು,ಪೂಜ್ಯ ವಿಜಯ ಮಹಾಂತೇಶ್ವರ ಶಿವಾಚಾರ್ಯರು,ಪೂಜ್ಯ ಚಿಕ್ಕಗುರುನಂಜೇಶ್ವರ ಮಹಾಸ್ವಾಮಿಗಳು,ಪೂಜ್ಯ ಬಾಲಯೋಗಿ ದತ್ತದಿಗಂಬರ ಮಹಾರಾಜರು,ಪೂಜ್ಯ ಪಂಪಾಪತಿ ಮರಿದೇವರು,ಹಾಗೂ ಗೋಪಾಲರಾವ ಕಟ್ಟಿಮನಿ,ಕೆಎಂ ಬಾರಿ, ಶ್ರೀಮಂತ ಕಟ್ಟಿಮನಿ,ಭೀಮಶೇಟ್ಟಿ ಮುರುಡಾ, ವೀರೇಶ ಎಂಪಳ್ಳಿ,ಚಂದ್ರಶೇಖರ ಗುತ್ತೇದಾರ, ಜಗದೀಶಸಿಂಗ್ ಠಾಕೂರ್,ಆರ್.ಆರ್.ಪಾಟೀಲ,ವೀರಣ್ಣ ಗಂಗಾಣಿ,ರಾಜು ಪವ್ಹಾರ,ಪ್ರೇಮಸಿಂಗ್ ಜಾಧವ,ಅಶೋಕ ಚವ್ಹಾಣ,ಅನೇಕರಿದ್ದರು.


ಉದಯವಾಹಿನಿ ಚಿತ್ರ


**ಸಿದ್ದಸಿರಿ ಇಥೆನಾಲ್ ಪವ್ಹರ್ ಘಟಕ**

> **ಸಿದ್ದಸಿರಿ ಎಥನಾಲ್ ಕಾರ್ಖಾನೆಗೆ 302ಹಳ್ಳಿಗಳು ಒಳಪಡುತ್ತವೆ,ಕಾರ್ಖಾನೆಯು ಪ್ರತಿದಿನ 5000ರಿಂದ 6000ಟನ್ ಕಬ್ಬು ನುರಿಸುವ ಸಾಮರ್ಥ್ಯ ಹೊಂದಿದೆ,ಈಗಾಗಲೇ ಕಾರ್ಖಾನೆಯಲ್ಲಿ ಪಬ್ಲಿಕ್ ಶಾಲೆ ಪ್ರಾರಂಭಿಸಿದ್ದು 1500ವಿಧ್ಯಾರ್ಥಿಗಳು ವಿಧ್ಯಾಭ್ಯಾಸ ಮಾಡುತ್ತಿದ್ದಾರೆ,108 ಬೆಡ್ ಮಲ್ಟಿಸ್ಪೇಷಾಲೀಟಿ ಆಸ್ಪತ್ರೆ ಶೀಘ್ರದಲ್ಲೇ ಪ್ರಾರಂಭ,ಹಾಗೂ ರೈತರಿಗಾಗಿ ಕೃಷಿ ಕೇಂದ್ರ ಪ್ರಾರಂಭಿಸಲಾಗಿದೆ, ಕಾರ್ಖಾನೆಯಲ್ಲಿ ರೈತರ ಟ್ರ್ಯಾಕ್ಟರ್ ಹಾಗೂ ಕಂಪನಿ ವಾಹನಗಳಿಗಾಗಿ ಪೆಟ್ರೋಲ್ ಪಂಪ್ ಪ್ರಾರಂಭಿಸಿದ್ದೇವೆ, ಒಟ್ಟಾರೆ 870ಜನ ಕೆಲಸ ಮಾಡುತ್ತಾರೆ ಸ್ಥಳೀಯರು 450ಜನರಿದ್ದಾರೆ. ಸಿದ್ದಸಿರಿ ಸೌಹಾರ್ದ ಸಹಕಾರಿ ನಿಯಮಿತ ಒಟ್ಟಾರೆ 450ಸಾವಿರ ಕೋಟಿ ರೂ.ಠೇವಣಿಯಾಗಿದೆ,ರಾಜ್ಯದಲ್ಲಿ 211ಸಹಕಾರಿ ಸಂಘಗಳಿವೆ, ಈವರ್ಷ 26ಕೋಟಿ ರೂ.ನಿವ್ವಳ ಲಾಭವಾಗಿದೆ.** -ಶಾಸಕ ಬಸನಗೌಡ ಪಾಟೀಲ ಯತ್ನಾಳ

## 18 ವರ್ಷ ತುಂಬಿದ ಬಳಿಕ ಪಾಲಕರ ಆಸ್ತಿ ಒಪ್ಪಂದವನ್ನು ಮಕ್ಕಳು ರದ್ದುಪಡಿಸಬಹುದು

**ಹೊಸದಿಲ್ಲಿ:** ಅಪ್ರಾಪ್ತ ವಯಸ್ಕರು 18 ವರ್ಷ ಪೂರೈಸಿದ ನಂತರ, ಅವರ ಪೋಷಕರು ಅಥವಾ ಪಾಲಕರು ಮಾಡಿದ ಯಾವುದೇ ಆಸ್ತಿ ಮಾರಾಟ ಅಥವಾ ವರ್ಗಾವಣೆಯನ್ನು, ನ್ಯಾಯಾಲಯದಲ್ಲಿ ಮೊಕದ್ದಮೆ ಹೂಡದೆ ಪ್ರಶ್ನಿಸಬಹುದು ಎಂದು ಸುಪ್ರೀಂಕೋರ್ಟ್ ಮಹತ್ವದ ತೀರ್ಪು ನೀಡಿದೆ.

ಆಸ್ತಿ ವರ್ಗಾವಣೆಗಳನ್ನು ಸ್ಪಷ್ಟ ಕ್ರಮಗಳನ್ನು ತೆಗೆದುಕೊಳ್ಳುವ ಮೂಲಕ, ಅಂದರೆ ಆಸ್ತಿಯನ್ನು ತಾವೇ ಮಾರಾಟ ಮಾಡುವ



ಮೂಲಕ ಅಥವಾ ವರ್ಗಾಯಿಸುವ ಮೂಲಕ, ರದ್ದುಗೊಳಿಸಬಹುದು ಎಂದು ಸರ್ವೋಚ್ಚ ನ್ಯಾಯಾಲಯ ಸ್ಪಷ್ಟಪಡಿಸಿದೆ. ಆಸ್ತಿ ಮಾರಾಟ ಅಥವಾ ವರ್ಗಾವಣೆ ಕುರಿತ ಭವಿಷ್ಯದ ವ್ಯಾಜ್ಯಗಳಿಗೆ ಈ ತೀರ್ಪು ಮಾನದಂಡವಾಗಲಿದೆ.

ಕರ್ನಾಟಕದ ಶಾಮನೂರು ಗ್ರಾಮದ ಕೆ.ಎಸ್. ಶಿವಪ್ಪ ಮತ್ತು ಕೆ. ನೀಲಮ್ಮ ನಡುವಿನ ಆಸ್ತಿ ಮಾರಾಟ ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಪಂಕಜ್ ಮಿಥಾಲ್ ಮತ್ತು ಪ್ರಸನ್ನ ಬಿ ವರಾಳೆ ನೇತೃತ್ವದ ದ್ವಿಸದಸ್ಯ ಪೀಠ, ಅಪ್ರಾಪ್ತ ವಯಸ್ಕರು 18 ವರ್ಷ ಪೂರೈಸಿದ ನಂತರ ಅವರ ಪೋಷಕರು ಮತ್ತು ಪಾಲಕರು ಮಾಡಿದ ಯಾವುದೇ ಆಸ್ತಿ ಮಾರಾಟ ಮತ್ತು ವರ್ಗಾವಣೆಯನ್ನು ರದ್ದಗೊಳಿಸಬಹುದು ಎಂದು ತೀರ್ಪು ನೀಡಿತು.

ಕರ್ನಾಟಕದ ಶಮನೂರು ಗ್ರಾಮದ ಎರಡು ನಿವೇಶನಗಳಿಗೆ ಸಂಬಂಧಿಸಿದ ಪ್ರಕರಣ ಇದಾಗಿದ್ದು, 1971ರಲ್ಲಿ ಕೆ.ಎಸ್. ರುದ್ರಪ್ಪ ಎಂಬುವವರು ತಮ್ಮ ಮೂವರು ಅಪ್ರಾಪ್ತ ವಯಸ್ಸಿನ ಗಂಡು ಮಕ್ಕಳ ಹೆಸರಿನಲ್ಲಿ ನಿವೇಶನ ಖರೀದಿಸಿದ್ದರು. ರುದ್ರಪ್ಪ ಅವರು ನ್ಯಾಯಾಲಯದ ಅನುಮತಿಯಿಲ್ಲದೆ ನಿವೇಶನಗಳನ್ನು ಮಾರಾಟ ಮಾಡಿದ್ದರು. ಮಕ್ಕಳು ಪ್ರಾಪ್ತ ವಯಸ್ಕರಾದ ನಂತರ, ಅವರು ಆ ನಿವೇಶನಗಳನ್ನು ಕೆ.ಎಸ್. ಶಿವಪ್ಪ ಅವರಿಗೆ ಮಾರಾಟ ಮಾಡಿದರು. ಆದರೆ ಈ ಹಿಂದೆ ನಿವೇಶನಗಳನ್ನು ಖರೀದಿಸಿದ್ದ ಮೂರನೇ ವ್ಯಕ್ತಿಗಳು, ಮಾಲೀಕತ್ವಕ್ಕಾಗಿ ನ್ಯಾಯಾಲಯದ ಮೊರೆ ಹೋಗಿದ್ದರು.

ಈ ಪ್ರಕರಣ ಸುಪ್ರೀಂ ವರೆಗೂ ಹೋಗಿ, ಇದೀಗ ಆಸ್ತಿ ಮಾರಾಟ ಅಥವಾ ವರ್ಗಾವಣೆಗೆ ಸಂಬಂಧಿಸಿದ ಕಾನೂನುಗಳಲ್ಲಿ ಮಹತ್ವದ ಅಂಶ ಸೇರ್ಪಡೆಗೆ ಕಾರಣವಾಗಿದೆ. ಮೂಲ ಮಾರಾಟವನ್ನು ರದ್ದುಗೊಳಿಸಲು ಅಪ್ರಾಪ್ತ ವಯಸ್ಕರು ಮೊಕದ್ದಮೆ ಹೂಡಬೇಕೇ ಅಥವಾ ಬೇಡವೇ ಎಂಬುದರ ಬಗ್ಗೆ, ಈ ಪ್ರಕರಣದ ವಿಚಾರಣೆ ನಡೆಸಿದ ಕೆಳ ಹಂತದ ನ್ಯಾಯಾಲಯಗಳಲ್ಲಿ ಭಿನ್ನಾಭಿಪ್ರಾಯಗಳಿದ್ದವು. ಇದಕ್ಕೆ ಸ್ಪಷ್ಟನೆ ನೀಡಿರುವ ಸುಪ್ರೀಂಕೋರ್ಟ್, ಔಪಚಾರಿಕ ಮೊಕದ್ದಮೆಯ ಅಗತ್ಯವಿಲ್ಲ ಎಂದು ಹೇಳಿದೆ.

### ಒರಿಸ್ಸಾದಲ್ಲಿ ನೋಂದಾಯಿತ ಕಾವೇರಿ ಟ್ರಾವೆಲ್ಸ್‌ನ ಸ್ಲೀಪರ್ ಕೋಚ್ ಬಸ್‌ನಲ್ಲಿ 40 ಕ್ಕೂ ಹೆಚ್ಚು ಮಂದಿ ಪ್ರಯಾಣ

# ಕರ್ನೂಲು ಬಸ್ ದುರಂತ: 20ಕ್ಕೂ ಮಂದಿ ಸಜೀವ ದಹನ

**ಕರ್ನೂಲ್:** ಹೈದರಾಬಾದ್‌ನಿಂದ ಬೆಂಗಳೂರಿಗೆ ಹೋಗುತ್ತಿದ್ದ ಖಾಸಗಿ ಬಸ್ ಕರ್ನೂಲ್ ಜಿಲ್ಲೆಯ ಚಿನ್ನೇಕೂರ್ ಬಳಿ ಬೈಕ್‌ಗೆ ಡಿಕ್ಕಿ ಹೊಡೆದು ಅಪಘಾತಕ್ಕೀಡಾಗಿ ಬೆಂಕಿ ಹೊತ್ತಿಕೊಂಡ ಪರಿಣಾಮ ಹಸುಗೂಸು ಸೇರಿ ಒಟ್ಟು 20ಜನರು ಸಾವನ್ನಪ್ಪಿದ್ದಾರೆ. ಅವರಲ್ಲಿ 20ಕ್ಕೂ ಹೆಚ್ಚು ಮಂದಿ ಸಜೀವ ದಹನವಾಗಿದ್ದು, 15 ಮಂದಿ ಪವಾಡ ಸದೃಶ್ಯವಾಗಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಒರಿಸ್ಸಾದಲ್ಲಿ ನೋಂದಾಯಿತ ಕಾವೇರಿ ಟ್ರಾವೆಲ್ಸ್‌ನ ಐಶಾರಾಮಿ ಸ್ಲೀಪರ್ ಕೋಚ್ ಬಸ್‌ನಲ್ಲಿ 40 ಕ್ಕೂ ಹೆಚ್ಚು ಮಂದಿ ಪ್ರಯಾಣಿಸುತ್ತಿದ್ದರು. ಈ ಬಸ್ ಕರ್ನೂಲ್‌ನ ಚಿನ್ನೇಕೂರ್ ಬಳಿ ಬರುತ್ತಿದ್ದಂತೆ ಮೊದಲು ಮೋಟಾರ್ ಬೈಕ್‌ಗೆ ಡಿಕ್ಕಿ ಹೊಡೆದಿದೆ. ಅಪಘಾತದ ಬಳಿಕ ಚಾಲಕ ಬಸ್ ನಿಲ್ಲಿಸದೇ ಇದ್ದುದರಿಂದ ಬೈಕ್‌ನ್ನು ಸುಮಾರು ದೂರ ಎಳೆದುಕೊಂಡು ಹೋಗಿದೆ. ಈ ವೇಳೆ ಬೈಕ್‌ನ ಪೆಟ್ರೋಲ್ ಟ್ಯಾಂಕ್‌ಗೆ ಬೆಂಕಿ ಹತ್ತಿಕೊಂಡು ಸ್ಫೋಟಗೊಂಡಿದೆ. ಇದರಿಂದ ಬಸ್‌ಗೆ ಕ್ಷಣಾರ್ಧದಲ್ಲಿ ಬೆಂಕಿಯ ಕಿಡಿತಾಗಿ ಬಸ್ ಪೂರ್ತಿ ಬೆಂಕಿ ಆವರಿಸಿಕೊಂಡಿದೆ. ಮುಂಜಾನೆ 3.30ರ ಸವಿ

**ಬೈಕ್‌ನ ಪೆಟ್ರೋಲ್ ಟ್ಯಾಂಕ್‌ಗೆ ಬೆಂಕಿ**


**ಕರ್ನೂಲ್ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಿಯಂತ್ರಣ ಕೊಠಡಿ: 08518-277305**
**ಕರ್ನೂಲ್ ಸರ್ಕಾರಿ ಆಸ್ಪತ್ರೆ- 9121101059, 9494609814, 9052951010**
**ಅಪಘಾತ ಸ್ಥಳ ನಿಯಂತ್ರಣ ಕೊಠಡಿ: 9121101061**
**ಕರ್ನೂಲ್ ಪೊಲೀಸ್ ಕಚೇರಿ ನಿಯಂತ್ರಣ ಕೊಠಡಿ: 9121101075**

ನಿದ್ದೆಯ ಸಮಯದಲ್ಲಿ ಈ ದುರಂತ ಸಂಭವಿಸಿದೆ. ಪ್ರಯಾಣಿಕರು ಏನಾಗುತ್ತಿದೆ ಎಂದು ಅರ್ಥೈಸಿಕೊಳ್ಳುವ ವೇಳೆಗೆ ಬಸ್ ಪೂರ್ತಿ ಬೆಂಕಿಯ ಕೆನ್ನಾಲಿಗೆ ಹಾಗೂ ಹೊಗೆ ಆವರಿಸಿದೆ. ಎಸಿ ಸ್ಲೆಪರ್ ಕೋಚ್ ಬಸ್ ಆಗಿದ್ದರಿಂದ ಎಲ್ಲಾ ಕಿಟಕಿಯ ಗಾಜುಗಳು ಮುಚ್ಚಲ್ಪಟ್ಟಿದ್ದವು. ದುರಾದೃಷ್ಟವಶಾತ್ ಬಸ್‌ನ ಬೆಂಕಿಯ ಕೆನ್ನಾಲಿಗೆಯಿಂದ ವೈರ್‌ಗಳು ಸುಟ್ಟು ಬಸ್‌ನ ಯಾಂತ್ರೀಕೃತ ಬಾಗಿಲು ಕೂಡ ತೆರೆಯದೆ ಜಾಮ್ ಆಗಿತ್ತು ಎನ್ನಲಾಗಿದೆ. ಕೆಲವು ಪ್ರಯಾಣಿಕರು ಕಿಟಕಿಯ ಗಾಜುಗಳನ್ನು ಹೊಡೆದು ಹೊರಗೆ ಜಿಗಿದು ಪ್ರಾಣ ಉಳಿಸಿಕೊಂಡಿದ್ದಾರೆ. ಆದರೆ ಬಹುತೇಕರಿಗೆ ಇದು ಸಾಧ್ಯವಾಗಿಲ್ಲ. ಬೆಂಗಳೂರಿನಲ್ಲಿ ಸಾಫ್ಟ್‌ವೇರ್ ಇಂಜಿನಿಯರ್ ಆಗಿ ಕೆಲಸ ಮಾಡುತ್ತಿದ್ದ ರಮೇಶ್ ಮತ್ತು ಅವರ ಕುಟುಂಬ ದೀಪಾವಳಿ ಹಬ್ಬಕ್ಕಾಗಿ ಹೈದರಬಾದ್‌ನಲ್ಲಿರುವ ತಮ್ಮ ತವರಿಗೆ ಹೋಗಿತ್ತು. ವಾಪಾಸ್ ಬರುವಾಗ ಈ ದುರುಂತ ಸಂಭವಿಸಿ, ರಮೇಶ್, ಅವರ ಪತ್ನಿ, ಇಬ್ಬರು ಮಕ್ಕಳು ಸೇರಿ ಇಡೀ ಕುಟುಂಬ ಬೆಂಕಿಗಾಹುತಿಯಾಗಿದೆ.

ಸುದ್ದಿ ತಿಳಿದು ಪೊಲೀಸರು ಮತ್ತು ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ, ಬೆಂಕಿಯನ್ನು ನಂದಿಸಿದ್ದಾರೆ. ಅದೃಷ್ಟವಶಾತ್ ಬಸ್‌ನ ಡಿಸೇಲ್ ಟ್ಯಾಂಕ್‌ಗೆ ಬೆಂಕಿ ಹೊತ್ತಿಕೊಂಡಿಲ್ಲ, ಒಂದು ವೇಳೆ ಟ್ಯಾಂಕ್‌ಗೆ ಬೆಂಕಿ ತಾಗಿ ಸ್ಫೋಟಿಸಿದ್ದರೆ ಬಸ್‌ನಲ್ಲಿ ಯಾರೂ ಬದುಕಿ ಉಳಿಯುವ ಸಾಧ್ಯತೆಗಳು ಕಡಿಮೆ ಇತ್ತು ಎನ್ನಲಾಗಿದೆ.

ಬೈಕ್ ಸವಾರ ಸೇರಿ ಹಲವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಸಾವಿನ ಸಂಖ್ಯೆ 25 ಕ್ಕೆ ಏರಿಕೆಯಾಗಿದ್ದು, ಇನ್ನೂ ಹೆಚ್ಚಾಗಬಹುದು ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.ಬಸ್ಸಿನಲ್ಲಿ ಚಾಲಕ ಸೇರಿ 40ಕ್ಕೂ ಹೆಚ್ಚು ಪ್ರಯಾಣಿಕರಿದ್ದರು ಎಂದು ಕರ್ನೂಲ್ ಜಿಲ್ಲಾಧಿಕಾರಿ ಡಾ.ಎ.ಸಿರಿ ತಿಳಿಸಿದ್ದಾರೆ. ಬಸ್‌ನಲ್ಲಿ ಸಜೀವ ದಹನವಾದ 20 ಮಂದಿಯ ಪೈಕಿ 11 ಜನರ ಗುರುತು ಪತ್ತೆ ಹಚ್ಚಲಾಗಿದೆ. ಇನ್ನೂಳಿದ ಒಂಬತ್ತು ಜನರ ಮಾಹಿತಿ ಪಡೆಯಲು ಯತ್ನಿಸಲಾಗುತ್ತಿದೆ ಎಂದು ಕರ್ನೂಲ್ ವಿಭಾಗದ ಡಿಐಜಿ ಕೋಯಾ ಪ್ರವೀಣ್ ಮಾಹಿತಿ ನೀಡಿದ್ದಾರೆ. ಸಜೀವ ದಹನವಾಗಿರುವ ದೇಹಗಳ ಡಿಎನ್‌ಎ ಮಾದರಿಗಳನ್ನು ವೈದ್ಯಕೀಯ ತಜ್ಞರ ತಂಡ ಸಂಗ್ರಹಿಸಿದೆ. ಮುಂಜಾನೆ ಪ್ರಯಾಣಿಕರು ಗಾಢ ನಿದ್ರೆಯಲ್ಲಿದ್ದಾಗ ದುರಂತ ಸಂಭವಿಸಿದ ಕಾರಣ ಅನೇಕ ಪ್ರಯಾಣಿಕರು ದುರಂತದಿಂದ ತಪ್ಪಿಸಿಕೊಳ್ಳಲು ಸಾಧ್ಯವಾಗಲಿಲ್ಲ ಎಂದು ಅವರು ವಿಷಾಧಿಸಿದ್ದಾರೆ.

ಬೆಂಕಿ ಹೊತ್ತಿಕೊಂಡ ಬಸ್‌ನಲ್ಲಿ ಯಾವುದೇ ಅಗ್ನಿಶಾಮಕ ನಿಯಂತ್ರಣ ಸಾಧನಗಳು ಇರಲಿಲ್ಲ ಎಂದು ಡಿಐಜಿ ತಿಳಿಸಿದ್ದಾರೆ. ಇದು ಪ್ರಯಾಣದ ಸಮಯದಲ್ಲಿ ಸುರಕ್ಷತಾ ಅನುಸರಣೆ ಮತ್ತು ತುರ್ತು ಸಿದ್ಧತೆಯಲ್ಲಿನ ಲೋಪಗಳನ್ನು ಎತ್ತಿ ತೋರಿಸಿದೆ ಎಂದು ಅವರು ಹೇಳಿದ್ದಾರೆ. ಬಸ್ ದುರಂತದ ಬೆನ್ನಲ್ಲೇ ಖಾಸಗಿ ಬಸ್‌ಗಳ ಸುರಕ್ಷತೆಯ ಕುರಿತು ಚರ್ಚೆಗಳು ಶುರುವಾಗಿವೆ.



**2 ಲಕ್ಷ ಪರಿಹಾರ**

ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಬಸ್ ದುರಂತದಲ್ಲಿ ಮೃತಪಟ್ಟವರಿಗಾಗಿ ತೀವ್ರ ಸಂತಾಪ ವ್ಯಕ್ತ ಪಡಿಸಿದ್ದಾರೆ. ಮೃತಪಟ್ಟವರ ಕುಟುಂಬಕ್ಕೆ ತಲಾ 2 ಲಕ್ಷ ರೂಪಾಯಿಗಳ ಪರಿಹಾರ ಘೋಷಿಸಿದ್ದು, ಗಾಯಗೊಂಡವರಿಗೆ ತಲಾ 50 ಸಾವಿರ ರೂಪಾಯಿ ನೀಡುವುದಾಗಿ ತಮ ಸಾಮಾಜಿಕ ಜಾಲತಾಣ ಖಾತೆಯಲ್ಲಿ ತಿಳಿಸಿದ್ದಾರೆ.

**ರಾಜ್ಯದ ಸಂತಾಪ**

ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಲೋಕಸಭೆ ವಿರೋಧಪಕ್ಷದ ನಾಯಕ ರಾಹುಲ್‌ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ತೆಲಂಗಾಣ ಮುಖ್ಯಮಂತ್ರಿ ಎ ರೇವಂತ್ ರೆಡ್ಡಿ, ಕೇಂದ್ರ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದು, ಅಗಲಿದವರ ಆತ್ಮಕ್ಕೆ ಸದ್ಗತಿ ಸಿಗಲಿ ಹಾಗೂ ಗಾಯಗೊಂಡವರು ಶೀಘ್ರ ಗುಣಮುಖರಾಗಲಿ ಎಂದು ಹಾರೈಸಿದ್ದಾರೆ.

**ಸಂತ್ರಸ್ತ ಕುಟುಂಬಕ್ಕೆ ಬೆಂಬಲ**

ಆಂಧ್ರ ಪ್ರದೇಶದ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಅವರು ಈ ಘಟನೆಗೆ ಆಘಾತ ವ್ಯಕ್ತಪಡಿಸಿದ್ದಾರೆ. ಪ್ರೀತಿಪಾತ್ರರನ್ನು ಕಳೆದುಕೊಂಡವರ ಕುಟುಂಬಗಳಿಗೆ ಸಂತಾಪಗಳನ್ನು ಸೂಚಿಸುವುದಾಗಿ ಹೇಳಿರುವ ಅವರು, ಗಾಯಗೊಂಡವರು ಮತ್ತು ಸಂತ್ರಸ್ತರ ಕುಟುಂಬಗಳಿಗೆ ಸರ್ಕಾರ ಸಾಧ್ಯವಿರುವ ಎಲ್ಲಾ ಬೆಂಬಲವನ್ನು ನೀಡಲಿದೆ ಎಂದು ತಿಳಿಸಿದ್ದಾರೆ.

## ಮಿನಿ ನ್ಯೂಸ್

### ನ.1ರಿಂದ ಬ್ಯಾಂಕ್‌ಗಳ ನಾಮಿನಿ ನಿಯಮದಲ್ಲಿ ಬದಲಾವಣೆ

**ನವದೆಹಲಿ:** ಬರುವ ನವಂಬರ್ ಒಂದರಿಂದ ಬ್ಯಾಂಕ್‌ಗಳ ನಾಮಿನಿ ನಿಯಮದಲ್ಲಿ ಭಾರಿ ಬದಲಾವಣೆ ಮಾಡಲಾಗಿದೆ. ನವೆಂಬರ್ 1ರಿಂದ ಬ್ಯಾಂಕ್‌ಗಳ ನಾಮಿನಿ ನಿಯಮದಲ್ಲಿ ಬದಲಾವಣೆ ಆಗಲಿದ್ದು, ಬ್ಯಾಂಕ್ ಅಕೌಂಟ್, ಲಾಕರ್‌ಗಳಿಗೆ ಒಂದಕ್ಕಿಂತ ಹೆಚ್ಚು ನಾಮಿನಿಗಳನ್ನು ಮಾಡಬಹುದು ಎಂದು ಕೇಂದ್ರ ಹಣಕಾಸು ಇಲಾಖೆ ಮಾಹಿತಿ ನೀಡಿದೆ. ಇದುವರೆಗೆ ಒಂದು ಬ್ಯಾಂಕ್ ಖಾತೆ ಅಥವಾ ಲಾಕರ್‌ಗಳಿಗೆ ಇದ್ದ ಒಬ್ಬರು ನಾಮಿನಿ ಬದಲಿಗೆ ನಾಲ್ವರು ನಾಮಿನಿಗಳಿಗೆ ಅವಕಾಶ ಮಾಡಿಕೊಡಲಾಗಿದೆ. ಈ ಮೂಲಕ ಕ್ಲೈಮ್ ಸೆಟಲ್‌ಮೆಂಟ್‌ಗಳು ಸುಲಭವಾಗಲಿದೆ. ಠೇವಣಿ ಸಂದರ್ಭದಲ್ಲೇ ಖಾತೆದಾರರು 4 ನಾಮಿನಿಗಳನ್ನು ಆಯ್ಕೆ ಮಾಡಬಹುದಾಗಿದೆ.

ಠೇವಣಿದಾರರು ಮೃತರಾದ ನಂತರ ಇದರಲ್ಲಿ ಕ್ರಮಸಂಖ್ಯೆಗೆ ಅನುಗುಣವಾಗಿ ಖಾತೆದಾರರ ಹಣಕಾಸಿಗೆ ಉತ್ತರಾಧಿಕಾರಿಗಳಾಗಲಿದ್ದಾರೆ. ಇದರಿಂದಾಗಿ ಯಾವುದೆ ತೊಂದರೆ ಇಲ್ಲದೇ ನಿಗದಿತ ಹಣಕಾಸಿನ ಭಾಗವು ಆ ನಾಮಿನಿಗಳಿಗೆ ನೇರವಾಗಿ ವರ್ಗಾವಣೆ ಮಾಡಲು ಅವಕಾಶ ಕಲ್ಪಿಸಿಕೊಡಲಿದೆ. ಬ್ಯಾಂಕಿಂಗ್ ಕಾನೂನುಗಳು (ತಿದ್ದುಪಡಿ) ಕಾಯಿದೆ-2025 ನವೆಂಬರ್ 1ರಿಂದ ಜಾರಿಗೆ ಬರಲಿದೆ ಅಂತ ಕೇಂದ್ರ ಹಣಕಾಸು ಇಲಾಖೆ ಹೇಳಿದೆ.

### ಮುಂಬೈನ ಬಹುಮಹಡಿ ವಸತಿ ಕಟ್ಟಡಕ್ಕೆ ಬೆಂಕಿ ಬಿದ್ದು ನಾಲ್ವರು ಸಾವು

**ಮುಂಬೈ:** ಕಳೆದ ರಾತ್ರಿ ನವಿ ಮುಂಬೈನ ಬಹುಮಹಡಿ ವಸತಿ ಕಟ್ಟಡದಲ್ಲಿ ಸಂಭವಿಸಿದ ಅಗ್ನಿ ಅನಾಹುತದಲ್ಲಿ ನಾಲ್ವರು ಸಾವನ್ನಪ್ಪಿದ್ದಾರೆ. ವಾಶಿ ಪ್ರದೇಶದ ಸೆಕ್ಟರ್-14ರಲ್ಲಿರುವ ರಹೇಜಾ ರೆಸಿಡೆನ್ಸಿಯ ಎಂಜಿಎಂ ಕಾಂಪ್ಲೆಕ್ಸ್‌ನ 10ನೆ ಮಹಡಿಯ ಫ್ಲಾಟ್‌ವೊಂದರಲ್ಲಿ ರಾತ್ರಿ 12.30ರ ಸಂದರ್ಭದಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಇದು 11 ಮತ್ತು 12ನೆ ಮಹಡಿಗೂ ಹರಡಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಘಟನೆಯಲ್ಲಿ ಇಬ್ಬರು ಮಹಿಳೆಯರು, ಇಬ್ಬರು ಪುರುಷರು ಹಾಗೂ ಆರು ವರ್ಷದ ಬಾಲಕಿ ಸಾವನ್ನಪ್ಪಿದ್ದು, ಸುಮಾರು 10 ಮಂದಿ ಗಾಯಗೊಂಡಿದ್ದಾರೆ. ಸ್ಥಳಕ್ಕೆ ದಾವಿಸಿದ 8 ಅಗ್ನಿಶಾಮಕ ವಾಹನಗಳು ಮತ್ತು 40ಕ್ಕೂ ಹೆಚ್ಚು ಸಿಬ್ಬಂದಿ ಮುಂಜಾನೆ 4 ಗಂಟೆವರೆಗೂ ಸತತ ಪ್ರಯತ್ನ ನಡೆಸಿ ಬೆಂಕಿಯನ್ನು ನಂದಿಸಿದ್ದಾರೆ. ಬೆಂಕಿ ಹೊತ್ತಿಕೊಳ್ಳಲು ಕಾರಣ ತಿಳಿದುಬಂದಿಲ್ಲ, ಆದರೆ, ಪಟಾಕಿ ಹೊಡೆಯುವಾಗ ಬೆಂಕಿ ಕಿಡಿ ತಗುಲಿರುವ ಸಾಧ್ಯತೆಯಿದೆ ಎಂದು ಶಂಕಿಸಲಾಗಿದೆ. ಗಾಯಾಳುಗಳಲ್ಲಿ ಕೆಲವರ ಸ್ಥಿತಿ ಗಂಭೀರವಾಗಿದ್ದು, ಸಾವಿನ ಸಂಖ್ಯೆ ಹೆಚ್ಚಾಗಬಹುದೆಂಬ ಶಂಕೆ ವ್ಯಕ್ತವಾಗಿದೆ.

### ಆಶ್ಲೆ ಟೆಲಿಸ್ ಬಿಡುಗಡೆ

**ವರ್ಜೀನಿಯಾ :** ಪ್ರಮುಖ ಬೇಹುಗಾರಿಕೆ ಪ್ರಕರಣದ ವಿಚಾರಣೆಗೆ ಮುನ್ನ ಭಾರತೀಯ-ಅಮೆರಿಕನ್ ವಿದ್ವಾಂಸ ಮತ್ತು ನೀತಿ ಸಲಹೆಗಾರ ಆಶ್ಲೇ ಟೆಲ್ಲಿಸ್ ಅವರನ್ನು ಜಾಮೀನಿನ ಮೇಲೆ ಬಿಡುಗಡೆ ಮಾಡಲಾಗಿದೆ ಎಂದು ಮಾಧ್ಯಮ ವರದಿಗಳು ತಿಳಿಸಿವೆ. ಅಮೆರಿಕ ರಾಷ್ಟ್ರೀಯ ಭದ್ರತೆಯನ್ನು ರಕ್ಷಿಸುವಲ್ಲಿ ಅವರ ಸುದೀರ್ಘ ಸೇವೆ ಮತ್ತು ಸಮರ್ಪಣೆಯನ್ನು ಬಿಂಬಿಸುವ ಮೂಲಕ ಅವರು ತನಿಖಾಧಿಕಾರಿಗಳೊಂದಿಗೆ ಸಂಪೂರ್ಣವಾಗಿ ಸಹಕರಿಸುತ್ತಾರೆ ಎಂದು ಅವರ ವಕೀಲರು ನೀಡಿದ ಭರವಸೆಯನ್ನು ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. 64 ವರ್ಷದ ಹಿರಿಯ ಅಮೆರಿಕ ರಾಷ್ಟ್ರೀಯ ಭದ್ರತಾ ತಜ್ಞ ಟೆಲ್ಲಿಸ್ ಅವರನ್ನು ಈ ತಿಂಗಳ ಆರಂಭದಲ್ಲಿ ಬಂಧಿಸಲಾಯಿತು. ಅವರು ತಮ್ಮ ವರ್ಜೀನಿಯಾ ಮನೆಯಲ್ಲಿ ಉನ್ನತ ರಹಸ್ಯ ರಕ್ಷಣಾ ದಾಖಲೆಗಳನ್ನು ಇಟ್ಟುಕೊಂಡಿದ್ದಾರೆ ಎಂದು ಪ್ರಾಸಿಕ್ಯೂಟರ್‌ಗಳು ಆರೋಪಿಸಿದ್ದರು.

### ಪಿಯೂಷ್ ಪಾಂಡೆ ನಿಧನ

**ಮುಂಬೈ:** ದೇಶದ ಪ್ರಸಿದ್ಧ ಜಾಹೀರಾತು ಗುರು ಪಿಯೂಷ್ ಪಾಂಡೆ ನಿಧನರಾಗಿದ್ದಾರೆ. ಅವರು 70 ನೇ ವಯಸ್ಸಿನಲ್ಲಿ ಜಗತ್ತಿಗೆ ವಿದಾಯ ಹೇಳಿದ್ದಾರೆ. ಪಿಯೂಷ್ ಪಾಂಡೆ ಭಾರತೀಯ ಜಾಹೀರಾತು ಜಗತ್ತಿಗೆ ಮಹತ್ವದ ಕೊಡುಗೆ ನೀಡಿದ್ದಾರೆ. ಫೆವಿಕಾಲ್ ಮತ್ತು ಕ್ಯಾಡ್ಬರಿ ಸೇರಿದಂತೆ ಜಾಹೀರಾತುಗಳ ಜೊತೆಗೆ, ಅವರು ಅಬ್ಕಿ ಬಾರ್ ಮೋದಿ ಸರ್ಕಾರ್ ಎಂಬ ಘೋಷಣೆ ಮತ್ತು ಮಿಲೇ ಸುರ್ ಮೇರಾ ತುಮ್ಹಾರಾ ಹಾಡಿನ ಲೇಖಕರು.

ಪಿಯೂಷ್ ಪಾಂಡೆ ಅವರ ಸಾವಿಗೆ ಕಾರಣ ತಿಳಿದುಬಂದಿಲ್ಲ. ಅವರು ಗಂಭೀರ ಸೋಂಕಿನಿಂದ ಬಳಲುತ್ತಿದ್ದರು ಎಂದು ವರದಿಗಳು ತಿಳಿಸಿವೆ. ಇಂದು ಮುಂಬೈನಲ್ಲಿ ಅಂತ್ಯಕ್ರಿಯೆ ನಡೆಯಲಿದೆ. ಪ್ರಧಾನಿ ನರೇಂದ್ರ ಮೋದಿ ಅವರಿಗೆ ಗೌರವ ಸಲ್ಲಿಸಿ. ಪ್ರಧಾನಿ ಎಕ್ಸ್‌ನಲ್ಲಿ ಪಿಯೂಷ್ ಪಾಂಡೆ ಅವರ ಸೃಜನಶೀಲತೆಗೆ ಹೆಸರುವಾಸಿಯಾಗಿದ್ದರು. ಅವರು ಜಾಹೀರಾತು ಜಗತ್ತಿಗೆ ಅಪಾರ ಕೊಡುಗೆ ನೀಡಿದ್ದಾರೆ.

## ತೈಲ ನಿರ್ಬಂಧಗಳಿಗೆ ರಷ್ಯಾ ವ್ಯಂಗ್ಯಭರಿತ ಧಾಟಿಯಲ್ಲಿ ತಿರುಗೇಟು

**ಮಾಸ್ಕೋ:** ಉಕ್ರೇನ್ ಮೇಲಿನ ರಷ್ಯಾ ಆಕ್ರಮಣಕ್ಕೆ ಅಂತ್ಯ ಹಾಡುವ ಪ್ರಯತ್ನದ ಭಾಗವಾಗಿ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತವು ರಷ್ಯಾದ ಎರಡು ಬೃಹತ್ ತೈಲ ಕಂಪನಿಗಳ ಮೇಲೆ ಕಠಿಣ ನಿರ್ಬಂಧ ವಿಧಿಸಿದೆ. ಅಮೆರಿಕದ ಈ ನಿರ್ಬಂಧ, ರೋಸ್‌ನೆಫ್ಟ್ ಮತ್ತು ಲುಕೋಯಿಲ್ ಕಂಪನಿಗಳ ಜಾಗತಿಕ ತೈಲ ಮಾರಾಟ ಕ್ಷಮತೆಯನ್ನು ಗಮನಾರ್ಹವಾಗಿ ಕಡಿಮೆ ಮಾಡಲಿದೆ. ತನ್ನ ಎರಡು ಬೃಹತ್ ತೈಲ ಕಂಪನಿಗಳ ಮೇಲಿನ ಅಮೆರಿಕದ ನಿರ್ಬಂಧಕ್ಕೆ ಹಗುರವಾಗಿ ಪ್ರತಿಕ್ರಿಯಿಸಿರುವ ರಷ್ಯಾ, ನಮ್ಮ ತೈಲದ ಮೇಲೆ ಅಮೆರಿಕ ಮತ್ತು ಪಾಶ್ಚಿಮಾತ್ಯ ರಾಷ್ಟ್ರಗಳ ನಿರ್ಬಂಧ ಸಾಮಾನ್ಯ ಸಂಗತಿಯಾಗಿದೆ ಎಂದು ವ್ಯಂಗ್ಯಭರಿತ ಧಾಟಿಯಲ್ಲಿ ತಿರುಗೇಟು ನೀಡಿದೆ. ರಷ್ಯಾದಿಂದ ಇಷ್ಟೊಂದು ಶಾಂತವಾದ ಪ್ರತಿಕ್ರಿಯೆಯನ್ನು ಖುದ್ದು ಅಮೆರಿಕ ಕೂಡ ನಿರೀಕ್ಷಿಸಿರಲಿಲ್ಲ.

ಈ ಕುರಿತು ಮಾತನಾಡಿರುವ ರಷ್ಯಾದ ವಿದೇಶಾಂಗ ಸಚಿವಾಲಯ ವಕ್ತಾರೆ ಮಾರಿಯಾ ಜಖರೋವಾ, ರಷ್ಯಾದ ತೈಲದ ಮೇಲೆ ಅಮೆರಿಕ ಮತ್ತು ಪಾಶ್ಚಿಮಾತ್ಯ ರಾಷ್ಟ್ರಗಳು ಹೇರುವ ನಿರ್ಬಂಧಗಳಿಗೆ ನಾವು ಹೊಂದಿಕೊಂಡಿದ್ದೇವೆ ಎಂದು ಸೂಚ್ಯವಾಗಿ ಹೇಳಿದ್ದಾರೆ.



ನಿರ್ಬಂಧಗಳಿಗೆ ಹೆದರುವುದಿಲ್ಲ ಎಂಬ ರಷ್ಯಾದ ಸಂದೇಶ, ಅಮೆರಿಕವನ್ನು ಚಿಂತೆಗೀಡು ಮಾಡಿದೆ. ನಮ್ಮ ತೈಲ ಉದ್ಯಮದ ಮೇಲಿನ ಹೊಸ ಅಮೆರಿಕದ ನಿರ್ಬಂಧಗಳು, ಉಕ್ರೇನ್ ಯುದ್ಧವನ್ನು ಕೊನೆಗೊಳಿಸುವ ರಾಜತಾಂತ್ರಿಕ ಪ್ರಯತ್ನಗಳಿಗೆ ಹಾನಿ ಮಾಡುವ ಅಪಾಯವಿದೆ. ಈ ಸಮರವನ್ನು ನಿಲ್ಲಿಸಲು ನಡೆಯುತ್ತಿರುವ ಜಾಗತಿಕ ಪ್ರಯತ್ನಗಳನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತಷ್ಟು ಹಿಂದಕ್ಕೆ ತಳ್ಳಿದ್ದಾರೆ ಎಂದು ಮಾರಿಯಾ ಜಖರೋವಾ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಹೆಜ್ಜೆಯನ್ನು ನಾವು ಸಂಪೂರ್ಣವಾಗಿ ಪ್ರತಿಕೂಲವೆಂದು ಪರಿಗಣಿಸುತ್ತೇವೆ. ಉಕ್ರೇನ್ ಸಂಘರ್ಷಕ್ಕೆ ಅರ್ಥಪೂರ್ಣ ಮಾತುಕತೆಗಳ ಮೂಲಕ ಪರಿಹಾರಗಳನ್ನು ಸೂಚಿಸುವ ದೃಷ್ಟಿಯಿಂದಲೂ, ಈ ನಡೆ ಸಮರ್ಥನೀಯವಲ್ಲ. ನಮಗೆ ನಿರ್ಬಂಧಗಳು ಹೊಸದಲ್ಲವಾದರೂ, ಉಕ್ರೇನ್ ಯುದ್ಧ ನಿಲ್ಲಿಸುವ ಜಾಗತಿಕ ಪ್ರಯತ್ನಗಳಿಗೆ ನಾವು ಮಹತ್ವ ನೀಡುತ್ತೇವೆ ಎಂದು ರಷ್ಯಾದ ವಿದೇಶಾಂಗ ಇಲಾಖೆ ವಕ್ತಾರೆ ಹೇಳಿದ್ದಾರೆ. ನಮ್ಮ ದೇಶವು ಪಾಶ್ಚಿಮಾತ್ಯ ನಿರ್ಬಂಧಗಳಿಗೆ ಬಲವಾದ ಇಮ್ಯುನಿಟಿಯನ್ನು ಬೆಳೆಸಿಕೊಂಡಿದೆ. ನಾವು ನಮ್ಮ ಇಂಧನ ಸಾಮರ್ಥ್ಯ ಸೇರಿದಂತೆ ಆರ್ಥಿಕ ಸಾಮರ್ಥ್ಯವನ್ನೂ ಆತ್ಮವಿಶ್ವಾಸದಿಂದ ಬಲಪಡಿಸುತ್ತೇವೆ. ನಮ್ಮ ಮೇಲೆ ಪಾಶ್ಚಿಮಾತ್ಯ ರಾಷ್ಟ್ರಗಳು ನಿರ್ಬಂಧ ಹೇರುವುದು ನಮಗೆ ಸಾಮಾನ್ಯ ಸಂಗತಿಯಂತೆ ಕಾಣುತ್ತದೆ ಎಂದು ಮಾರಿಯಾ ಜಖರೋವಾ ಅಮೆರಿಕದ ಕಾಲೆಳೆದಿದ್ದಾರೆ.

- **ರಷ್ಯಾದ ಎರಡು ಬೃಹತ್ ತೈಲ ಕಂಪನಿಗಳ ಮೇಲೆ ಅಮೆರಿಕದ ನಿರ್ಬಂಧ.**
- **ಅಮೆರಿಕದ ತೈಲ ನಿರ್ಬಂಧ ನಿರ್ಧಾರಕ್ಕೆ ಶಾಂತ ಪ್ರತಿಕ್ರಿಯೆ ನೀಡಿದ ರಷ್ಯಾ.**
- **ಪಾಶ್ಚಿಮಾತ್ಯ ರಾಷ್ಟ್ರಗಳ ನಿರ್ಬಂಧ ಹೊಸದಲ್ಲ ಎಂದು ವ್ಯಂಗ್ಯವಾಡಿದ ರಷ್ಯಾ.**

## ಇಂಡಿ ಒಕ್ಕೂಟ ಅಧಿಕಾರಕ್ಕೆ ಬಂದರೆ ಭ್ರಷ್ಟಾಚಾರ ಮುಕ್ತ ಸರ್ಕಾರ : ತೇಜಸ್ವಿ ಯಾದವ್

**ಪಾಟ್ನಾ:** ಬಿಹಾರ ಚುನಾವಣೆಯಲ್ಲಿ ಇಂಡಿಯಾ ಒಕ್ಕೂಟ ನೇತೃತ್ವದ ಸರ್ಕಾರ ಅಸ್ತಿತ್ವಕ್ಕೆ ಬಂದರೆ ಭ್ರಷ್ಟಾಚಾರ ಮುಕ್ತ ಸರ್ಕಾರ ನಡೆಸುವುದಾಗಿ ಸಿಎಂ ಅಭ್ಯರ್ಥಿ ತೇಜಸ್ವಿ ಯಾದವ್ ಘೋಷಿಸಿದ್ದಾರೆ. ಜನರ ಕುಂದುಕೊರತೆಗಳನ್ನು ಆಲಿಸುವ ಮತ್ತು ಅವರಿಗೆ ಕೈಗೆಟುಕುವ ಔಷಧಿಗಳು ಮತ್ತು ಉದ್ಯೋಗಗಳನ್ನು ಖಚಿತಪಡಿಸುವ ಸರ್ಕಾರವನ್ನು ಮಂಡಿಸುವುದಾಗಿ ಆರ್‌ಜೆಡಿ ನಾಯಕ ಭರವಸೆ ನೀಡಿದ್ದಾರೆ.

ಇಂಡಿಯಾ ಬ್ಲಾಕ್ ಬಿಹಾರದಲ್ಲಿ ಅಧಿಕಾರಕ್ಕೆ ಬಂದರೆ, ಮುಖ್ಯಮಂತ್ರಿಯಾಗಿ, ಯಾವುದೇ ಅಪರಾಧ ನಡೆಯದಂತೆ ನಾನು ಖಚಿತಪಡಿಸುತ್ತೇನೆ. ಭ್ರಷ್ಟಾಚಾರ ಮುಕ್ತ ಸರ್ಕಾರವನ್ನು ನಾನು ಮಂಡಿಸುತ್ತೇನೆ ಎಂದು ಪಾಟ್ನಾದಲ್ಲಿ ವರದಿಗಾರರೊಂದಿಗೆ ಮಾತನಾಡುತ್ತಾ ಹೇಳಿದರು. ವಿರೋಧ ಪಕ್ಷವಾದ ಇಂಡಿ ಒಕ್ಕೂಟ ಬಿಹಾರ ವಿಧಾನಸಭಾ ಚುನಾವಣೆಗೆ ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ಅವರನ್ನು ಮುಖ್ಯಮಂತ್ರಿ ಅಭ್ಯರ್ಥಿಯಾಗಿ ಘೋಷಿಸಿದೆ. ಇದು ವಾರಗಳ ಕಾಲ ನಡೆದ ತೀವ್ರ ಚರ್ಚೆಗಳ ನಂತರ ಮತ್ತು ಚುನಾವಣೆಗೆ ಮುನ್ನ ಏಕತೆಯನ್ನು ಪ್ರದರ್ಶಿಸಿದ ನಂತರ ನಡೆದ ಜಗಳಗಳನ್ನು ಕೊನೆಗೊಳಿಸುವ ಕೊನೆಯ ಪ್ರಯತ್ನವೆಂದು ಪರಿಗಣಿಸಲಾಗಿದೆ. ವಿರೋಧ ಪಕ್ಷದ ಬಣದೊಂದಿಗಿನ ಭಿನ್ನಾಭಿಪ್ರಾಯಗಳನ್ನು ಪರಿಹರಿಸಲು ಪಾಟ್ನಾದಲ್ಲಿ ನೆಲೆಸಿರುವ ಹಿರಿಯ ಕಾಂಗ್ರೆಸ್ ನಾಯಕ ಅಶೋಕ್ ಗೆಹ್ಲೋಟ್ ಅವರು , ಬಿಹಾರದ ಸಂಕೀರ್ಣ ಸಾಮಾಜಿಕ ರಚನೆಯನ್ನು ಗಮನದಲ್ಲಿಟ್ಟುಕೊಂಡು ವಿಕಾಸಶೀಲ್ ಇನ್ಸಾನ್ ಪಕ್ಷದ (ವಿಐಪಿ) ಮುಖ್ಯಸ್ಥ ಮುಖೇಶ್ ಸಾಹ್ನಿ ಮತ್ತು ಸಮಾಜದ ಇತರ ವರ್ಗಗಳ ನಾಯಕರು ರಾಜ್ಯದಲ್ಲಿ ಅಧಿಕಾರಕ್ಕೆ ಬಂದರೆ ಉಪ ಮುಖ್ಯಮಂತ್ರಿಗಳಾಗುತ್ತಾರೆ ಎಂದು ಹೇಳಿದರು.



## ಐಪಿಎಸ್ ಅಧಿಕಾರಿಯ ಮೇಲೆ ಎಸ್‌ಐ ಪತ್ನಿ ದೂರು

**ರಾಯ್‌ಪುರ:** ಛತ್ತೀಸ್‌ಗಢದ ಐಪಿಎಸ್‌ಅಧಿಕಾರಿ ರತನ್ ಲಾಲ್ ಡಾಂಗಿ ಅವರ ವಿರುದ್ಧ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಪತ್ನಿ, ದೈಹಿಕ, ಮಾನಸಿಕ ಮತ್ತು ಕಿರುಕುಳದ ದೂರು ನೀಡಿದ್ದಾರೆ. ಇದಲ್ಲದೆ ರತನ್ ಲಾಲ್ ಡಾಂಗಿ ನನಗೆ ಬ್ಲ್ಯಾಕ್‌ಮೇಲ್ ಮಾಡುತ್ತಿದ್ದಾರೆ ಎಂದು ಕೂಡ ದೂರಲಾಗಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಈ ವಿಷಯದ ಬಗ್ಗೆ ತನಿಖೆ ನಡೆಸಲು ಇಲಾಖೆ ಸಮಿತಿಯನ್ನು ರಚಿಸಿದೆ ಕಳೆದ ಅ. 15 ರಂದು, 2003ರ ಬ್ಯಾಚ್‌ನ ಐಪಿಎಸ್ ಅಧಿಕಾರಿ ಮತ್ತು ಪೊಲೀಸ್ ಮಹಾನಿರ್ದೇಶಕ ರತನ್ ಲಾಲ್ ಡಾಂಗಿ ವಿರುದ್ಧ ದೈಹಿಕ, ಮಾನಸಿಕ ಮತ್ತು ಆರ್ಥಿಕ ಕಿರುಕುಳದ ಆರೋಪದ ಮೇಲೆ ಮಹಿಳೆಯಿಂದ ದೂರು ಬಂದಿತ್ತು.

ದೂರುಗಳ ಗಂಭೀರತೆಯನ್ನು ಪರಿಗಣಿಸಿ, ಪೊಲೀಸ್ ಪ್ರಧಾನ ಕಚೇರಿಯಲ್ಲಿ ಇಬ್ಬರು ಸದಸ್ಯರ ತನಿಖಾ ಸಮಿತಿಯನ್ನು ರಚಿಸಲಾಗಿದೆ ಎಂದು ಹೇಳಿದ್ದಾರೆ. ತನಿಖಾ ಸಮಿತಿಯಲ್ಲಿ ಪೊಲೀಸ್ ಮಹಾನಿರ್ದೇಶಕ ಡಾ. ಆನಂದ್ ಛಾಬ್ರಾ, ಮತ್ತು ಉಪ ಪೊಲೀಸ್ ಮಹಾನಿರ್ದೇಶಕ ಮಿಲ್ನಾ ಕುರ್ರೆ ಇದ್ದಾರೆ. ತನಿಖಾ ಸಮಿತಿಯ ವರದಿಯ ಆಧಾರದ ಮೇಲೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಲಾಗಿದೆ.

ಪ್ರಕರಣ ಕುರಿತು ಮಾತನಾಡಿರುವ ರತನ್ ಲಾಲ್ ಡಾಂಗಿ ಆ ಮಹಿಳೆ ವರ್ಷದಿಂದ ನನಗೆ ಬ್ಲ್ಯಾಕ್‌ಮೇಲ್ ಮಡಿ ಹಣ ಸುಲಿಗೆ ಮಾಡಿದ್ದಾರೆ ಎಂದು ಹೇಳಿದ್ದಾರೆ. 2017-18ರಲ್ಲಿ ದಾಂತೇವಾಡದಲ್ಲಿ ಉಪ ಪೊಲೀಸ್ ಮಹಾನಿರ್ದೇಶಕರಾಗಿದ್ದಾಗ ಮಹಿಳೆಯೊಬ್ಬರು ತನ್ನ ಪತಿಯ ಕೆಲಸದ ಬಗ್ಗೆ ಸಂಪರ್ಕಿಸಿದ್ದಳು. ಬ್ಯೂಟಿ ಪಾರ್ಲರ್‌ನಲ್ಲಿ ಕೆಲಸ ಮಾಡುತ್ತಿದ್ದ ಮಹಿಳೆ ನಂತರ 2023 ರಲ್ಲಿ ಪೊಲೀಸ್ ತರಬೇತಿ ಕಾಲೇಜಿನ ನಿರ್ದೇಶಕಿಯಾಗಿ ನೇಮಕಗೊಂಡಾಗ ನನ್ನ ಅಶ್ಲೀಲ ವೀಡಿಯೊಗಳನ್ನು ಪ್ರಸಾರ ಮಾಡುವುದಾಗಿ ಹೇಳಿಕೊಂಡು ಹಣ ಕೇಳಿದ್ದಾಳೆ ಎಂದು ಡಾಂಗಿ ಆರೋಪಿಸಿದ್ದಾರೆ.

ಆತಹತ್ಯೆ ಮಾಡಿಕೊಳ್ಳುವುದಾಗಿ ಮತ್ತು ನನ್ನನ್ನು ಅದರಲ್ಲಿ ಸಿಲುಕಿಸುವುದಾಗಿ ಬೆದರಿಕೆ ಹಾಕಿದ್ದಾಳೆ. ಅಂದಿನಿಂದ ಈ ಮಹಿಳೆ ನನ್ನಿಂದ ಹಣ ಸುಲಿಗೆ ಮಾಡುತ್ತಿದ್ದಾಳೆ ಮತ್ತು ನನ್ನ ಹೆಂಡತಿಯಿಂದ ಬೇರೆಯಾಗುವಂತೆ ಒತ್ತಡ ಹೇರುತ್ತಿದ್ದಾಳೆ. ಆಕೆಯ ಬ್ಲಾಕ್‌ಮೇಲಿಂಗ್‌ನಿಂದ ಹತಾಶೆಗೊಂಡು, ನಾನು ಪೊಲೀಸ್ ಪ್ರಧಾನ ಕಚೇರಿಗೆ ದೂರು ನೀಡಿದ್ದೇನೆ, ಎಂದು ಅವರು ಹೇಳಿದರು.




## ಸರ್ಕಾರದ ನಿರ್ಲಕ್ಷ್ಯವೇ ಅಪಘಾತಕ್ಕೆ ಕಾರಣ

**ವಾಷಿಂಗ್ಟನ್:** ಅಮೇರಿಕಾ ಅಧ್ಯಕ್ಷ ಮೊದಲೇ ಅಕ್ರಮ ವಲಸಿಗರ ಮೇಲೆ ನಿಗಿನಿಗಿ ಕೆಂಡ ಕಾರುತ್ತಿದ್ದಾರೆ. ಇಂತಹ ಪರಿಸ್ಥಿತಿ ಇರುವಾಗ ದಕ್ಷಿಣ ಕ್ಯಾಲಿಫೋರ್ನಿಯಾದಲ್ಲಿ ಟ್ರಕ್ ಹಾಯಿಸಿ ಮೂವರ ದಾರುಣ ಸಾವಿಗೆ ಭಾರತ ಮೂಲದ 21 ವರ್ಷದ ಅಕ್ರಮ ವಲಸಿಗ ಜಶನ್‌ಪ್ರೀತ್ ಸಿಂಗ್ ಕಾರಣವಾಗಿದ್ದಾನೆ.

ಈ ಕುರಿತು ಕ್ರಿಮಿನಲ್ ಹಿನ್ನಲೆ ಹೊಂದಿರುವ ಅಕ್ರಮ ವಲಸಿಗರಿಗೆ ನೀಡಿರುವ ವಾಣಿಜ್ಯ ಚಾಲನಾ ಪರವಾನಗಿಗಳ ಆತಂಕಕಾರಿ ಕ್ರಮವನ್ನು ಶ್ವೇತಭವನ ಪತ್ರಿಕಾ ಕಾರ್ಯದರ್ಶಿ ಕ್ಯಾರೋಲಿನ್ ಲೀವಿಟ್ ಕ್ಯಾಲಿಫೋರ್ನಿಯಾ ಆಡಳಿತವನ್ನು ಖಂಡಿಸಿದ್ದಾರೆ.

**ಘಟನೆ ಕುರಿತು ಶ್ವೇತಭವನ ಹೇಳಿದ್ದೇನು?:** ಈ ಕುರಿತು ಶ್ವೇತಭವನದಲ್ಲಿ ಪತ್ರಿಕಾ ಕಾರ್ಯದರ್ಶಿ ಕ್ಯಾರೋಲಿನ್ ಲೀವಿಟ್ ಈ ಜಶನ್ ಪ್ರೀತ್ ಸಿಂಗ್ ಎಂಬ ವ್ಯಕ್ತಿಗೆ ಕ್ಯಾಲಿಫೋರ್ನಿಯಾ ಪರವಾನಗಿ ನೀಡಿದೆ ಎಂದು ನಾನು ದೃಢೀಕರಿಸಬಲ್ಲೆ, ಮತ್ತು ಸಾರಿಗೆ ಇಲಾಖೆ ಈಗಾಗಲೇ ಪರಿಶೀಲಿಸಿದೆ. ಮೂರು ಜನರನ್ನು ಕೊಂದಿರುವ ಈತ 2022 ರಲ್ಲಿ ದಕ್ಷಿಣ ಗಡಿಯ ಮೂಲಕ ಅಮೆರಿಕಾವನ್ನು ಪ್ರವೇಶಿಸಿದ್ದಾನೆ, ವಲಸೆ ಅಧಿಕಾರಿಗಳಿಂದ ಬಂಧನಕೊಳಗಾದ ಈತನನ್ನು ಬೈಡನ್ ಇದ್ದ ಹಿಂದಿನ ಆಡಳಿತ ಅವನನ್ನು ಬಿಡುಗಡೆ ಮಾಡಿ ಮತ್ತೆ ದೇಶದೊಳಗೆ ಬಿಡುಗಡೆ ಮಾಡಿದೆ ಎಂದು ಹೇಳಿದ್ದಾರೆ.

ಕ್ಯಾಲಿಫೋರ್ನಿಯಾದಲ್ಲಿ ನಡೆದ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಅಕ್ಟೋಬರ್ 22 ರಂದು, ಕ್ಯಾಲಿಫೋರ್ನಿಯಾದ ಸ್ಥಳೀಯ ಅಧಿಕಾರಿಗಳು ಕುಡಿದು ನಶೆಯಲ್ಲಿ ನರಹತ್ಯೆ ಮತ್ತು ಮದ್ಯದ ಪ್ರಭಾವದಲ್ಲಿ ವಾಹನ ಚಲಾಯಿಸಿದ ಆರೋಪದ ಮೇಲೆ ಈ ವ್ಯಕ್ತಿಯನ್ನು ಬಂಧಿಸಿದ್ದಾರೆ. ಅನಂತರ ಈಗ ಅಮೆರಿಕಾದ ವಲಸೆ ಮತ್ತು ಕಸ್ಟಮ್ಸ್ ಜಾರಿ ಇಲಾಖೆ ಈ ವ್ಯಕ್ತಿ ಮೇಲೆ ಪ್ರತ್ಯೇಕ ಪ್ರಕರಣ ದಾಖಲಿಸಿ ಬಂಧಿಸಿದ್ದಾರೆ ಎಂದು ಮಾಹಿತಿ ನೀಡಿದರು.



- **ಕ್ಯಾಲಿಫೋರ್ನಿಯಾ ಟ್ರಕ್ ದುರ್ಘಟನೆ ಪ್ರಕರಣದ ಕುರಿತು ಶ್ವೇತಭವನ ಪತ್ರಿಕಾಗೋಷ್ಠಿ**
- **ಕ್ರಿಮಿನಲ್ ಹಿನ್ನಲೆ ಇರುವವನಿಗೆ ಕ್ಯಾಲಿಫೋರ್ನಿಯಾ ಆಡಳಿತ ಪರವಾನಗಿ ನೀಡಿದೆ ಎಂದ ಕ್ಯಾರೋಲಿನ್ ಲೀವಿಟ್**
- **ಅಮೆರಿಕಾದ ನಾಗರಿಕರಲ್ಲದವರಿಗೆ ಪರವಾನಗಿ ನಿರ್ಬಂಧ ವಿಧಿಸಿದ್ದರೂ ಹೆಚ್ಚುತ್ತಿರುವ ಅಪಘಾತ ಪ್ರಕರಣಗಳು**

# ಭವಿಷ್ಯದ ಪ್ರಜೆಗಳನ್ನು ರೂಪಿಸುವ ಯುಎಇಯ ಅನನ್ಯ ಪರಿ

## ಇಂದಿನ ಮಕ್ಕಳೇ ನಾಳಿನ ಪ್ರಜೆಗಳು ಎಂಬ ಸದತ್ಯವನ್ನು ಅರಿತಿರುವ ದುಬೈ, ಶಿಕ್ಷಣ ವ್ಯವಸ್ಥೆಯಲ್ಲಿ ಕ್ರಾಂತಿಕಾರಿ ಬದಲಾವಣೆ

**ದುಬೈ:** ಸಂಯುಕ್ತ ಅರಬ್ ಸಂಸ್ಥಾನ (ಯುಎಇ) ಯಾವಾಗಲೂ ದೂರದೃಷ್ಟಿಯುಳ್ಳ ಯೋಜನೆಗಳನ್ನು ರೂಪಿಸುತ್ತದೆ. ದೇಶದ ಉಜ್ವಲ ಭವಿಷ್ಯವನ್ನು ಖಾತರಿಪಡಿಸಲು ಅದು ಸುದೀರ್ಘ ಮತ್ತು ಸುಸ್ಥಿರ ಯೋಜನೆಗಳನ್ನು ಘೋಷಣೆ ಮಾಡುತ್ತಲೇ ಇರುತ್ತದೆ. ಅದರಂತೆ ಇಂದಿನ ಮಕ್ಕಳೇ ನಾಳಿನ ಪ್ರಜೆಗಳು ಎಂಬ ಸದತ್ಯವನ್ನು ಅರಿತಿರುವ ದುಬೈ, ಶಿಕ್ಷಣ ವ್ಯವಸ್ಥೆಯಲ್ಲಿ ಕ್ರಾಂತಿಕಾರಿ ಬದಲಾವಣೆಗಳಿಗೆ ಮುಂದಡಿ ಇಟ್ಟಿದೆ.


ಇದಕ್ಕೆ ಪುಷ್ಠಿ ಎಂಬಂತೆ ದುಬೈ ಯುವರಾಜ ಶೇಖ್ ಹಮ್ದಾನ್ ಬಿನ್ ಮೊಹಮ್ಮದ್ ಬಿನ್ ರಶೀದ್ ಅಲ್ ಮಕ್ತೌಮ್ ಅವರು, ಎಮಿರೇಟ್‌ನ 16 ಖಾಸಗಿ ಶಾಲೆಗಳ 16 ವಿದ್ಯಾರ್ಥಿಗಳನ್ನು ಒಳಗೊಂಡ ಹೊಸ ದುಬೈ ವಿದ್ಯಾರ್ಥಿ ಮಂಡಳಿಯ ರಚನೆಗೆ ಅನುಮೋದನೆ ನೀಡಿದ್ದಾರೆ. ಇದು ಮಕ್ಕಳ ಶೈಕ್ಷಣಿಕ ಚಟುವಟಿಕೆ ಮಾತ್ರವಲ್ಲದೇ ಅವರ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗಿ ಕೆಲಸ ಮಾಡಲಿದೆ. 2021ರಲ್ಲಿ ದುಬೈ ಕನ್ನಡ ವಿದ್ಯಾರ್ಥಿ ಶ್ರೇಯಸ್‌ಗೆ ಅವರಿಗೆ ಶೇಕ್ ಹಂದಾನ್ ಪ್ರಶಸ್ತಿ ಲಭಿಸಿದ್ದನ್ನು ಇಲ್ಲಿ ಉಲ್ಲೇಖಿಸಬಹುದು. ದುಬೈ ವಿದ್ಯಾರ್ಥಿ ಮಂಡಳಿಯು 9, 10, 12 ಮತ್ತು 13ನೇ ತರಗತಿಯವರೆಗಿನ ವಿದ್ಯಾರ್ಥಿಗಳನ್ನು ಒಳಗೊಂಡಿದೆ. ಅವರು ಆರು ವಿಭಿನ್ನ ಪಠ್ಯಕ್ರಮಗಳು ಮತ್ತು ಎಮಿರೇಟ್ಸ್ ಸೇರಿದಂತೆ ಒಂಬತ್ತು ವಿಭಿನ್ನ ರಾಷ್ಟ್ರೀಯತೆಗಳು ಮತ್ತು ಸಂಸ್ಕೃತಿಗಳನ್ನು ಪ್ರತಿನಿಧಿಸುತ್ತಾರೆ. ಈ ವಿದ್ಯಾರ್ಥಿ ಮಂಡಳಿ 16 ಖಾಸಗಿ ಶಾಲೆಗಳಿಂದ ಆರಿಸಲಾದ 16 ವಿದ್ಯಾರ್ಥಿಗಳನ್ನು ಒಳಗೊಂಡಿರುತ್ತದೆ.

**ಆಯ್ಕೆ ಪ್ರಕ್ರಿಯೆ:** ದುಬೈನ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಕಲಿಯುತ್ತಿರುವ ಸಮಾರು 400,000 ವಿದ್ಯಾರ್ಥಿಗಳಿಗೆ ಧ್ವನಿಯಾಗಿ, ಈ ಹೊಸ ವಿದ್ಯಾರ್ಥಿ ಮಂಡಳಿ ತನ್ನ ಕರ್ತವ್ಯವನ್ನು ನಿರ್ವಹಿಸಲಿದೆ. ಎಮಿರೇಟ್‌ನ ಶಾಲೆಗಳ ವೈವಿಧ್ಯಮಯ ಸ್ವರೂಪವನ್ನು ಪ್ರತಿಬಿಂಬಿಸಲು, ಎಂಟು ವಿದ್ಯಾರ್ಥಿಗಳು ಮತ್ತು ಎಂಟು ವಿದ್ಯಾರ್ಥಿನಿಯರನ್ನು ಒಳಗೊಂಡಿದೆ.

ದುಬೈ ವಿದ್ಯಾರ್ಥಿ ಮಂಡಳಿಗೆ 90 ಖಾಸಗಿ ಶಾಲೆಗಳಿಂದ, 40 ವಿದ್ಯಾರ್ಥಿಗಳನ್ನು ಶಾರ್ಟ್‌ಲಿಸ್ಟ್ ಮಾಡಲಾಗಿತ್ತು. ತದನಂತರ ವೈಯಕ್ತಿಕ ಸಂದರ್ಶನಗಳು ಮತ್ತು ಗುಂಪು ಚಟುವಟಿಕೆಗಳನ್ನು ಒಳಗೊಂಡ ಕಠಿಣ ಮತ್ತು ಪಾರದರ್ಶಕ ಪ್ರಕ್ರಿಯೆಯ ಮೂಲಕ, ವಿದ್ಯಾರ್ಥಿ ಮಂಡಳಿಗೆ ಅಂತಿಮವಾಗಿ 16 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಯಿತು. ಈ ವಿದ್ಯಾರ್ಥಿ ಮಂಡಳಿ ಸದಸ್ಯತ್ವವು ಒಂದು ಶೈಕ್ಷಣಿಕ ವರ್ಷದವರೆಗೆ ಮಾನ್ಯವಾಗಿರುತ್ತದೆ,. ಎರಡನೇ ಅವಧಿಗೆ ಮಂಡಳಿಯನ್ನು ನವೀಕರಿಸಲು, ಕಾರ್ಯಕ್ಷಮತೆ ಮತ್ತು ಅರ್ಹತಾ ಮಾನದಂಡಗಳ ನಿರಂತರ ಮೇಲ್ವಿಚಾರಣೆಯನ್ನು ನಡೆಸಲಾಗುತ್ತದೆ.

ಇದು ಮಕ್ಕಳನ್ನು ಶಾಲಾ ಹಂತದಲ್ಲೇ ನಾಯಕತ್ವ ಗುಣ ಬೆಳೆಸಿಕೊಳ್ಳುವಂತೆ ಪ್ರೇರೆಪಿಸುತ್ತದೆ. ಪ್ರತಿವರ್ಷ ರಚನೆಯಾಗುವ ದುಬೈ ವಿದ್ಯಾರ್ಥಿ ಮಂಡಳಿಯು, ವಿದ್ಯಾರ್ಥಿ ಸಮುದಾಯ ಮತ್ತು ದುಬೈನ ಜ್ಞಾನ ಮತ್ತು ಮಾನವ ಅಭಿವೃದ್ಧಿ ಪ್ರಾಧಿಕಾರ ನಡುವಿನ ಕೊಂಡಿಯಾಗಿ ಕಾರ್ಯನಿರ್ವಹಿಸುತ್ತದೆ. ದುಬೈನಾದ್ಯಂತ ಹರಡಿಕೊಂಡಿರುವ ಖಾಸಗಿ ಶಾಲೆಗಳ ಸುಮಾರು 4 ಲಕ್ಷಕ್ಕೂ ಅಧಿಕ ವಿದ್ಯಾರ್ಥಿಗಳ ಬೇಕು-ಬೇಡಗಳಿಗೆ ಈ ಮಂಡಳಿ ಸ್ಪಂದನೆ ನೀಡುತ್ತದೆ. ಇದೇ ಕಾರಣಕ್ಕೆ ದುಬೈ ವಿದ್ಯಾರ್ಥಿ ಮಂಡಳಿಯನ್ನು ನವೀನ ಮನಸ್ಸುಗಳು, ಪರಿಶ್ರಮ ಪಡುವ ಹೃದಯಗಳು ಮತ್ತು ನಮ್ಮನ್ನು ಒಂದುಗೂಡಿಸುವ ಹೆಮ್ಮೆಯ ವಿದ್ಯಾರ್ಥಿ ಸಂಘಟನೆ ಎಂದು ದುಬೈ ಉಪಪ್ರಧಾನಿ, ರಕ್ಷಣಾ ಸಚಿವರೂ ಆಗಿರುವ ಕ್ರೌನ್ಸ್ ಪ್ರಿನ್ಸ್ ಶೇಖ್ ಹಮ್ದಾನ್ ಬಿನ್ ಮೊಹಮ್ಮದ್ ಬಿನ್ ರಶೀದ್ ಅಲ್ ಮಕ್ತೌಮ್ ಬಣ್ಣಿಸಿದ್ದಾರೆ.

**ಅಮೆರಿಕಕ್ಕೆ ಪರ್ಯಾಯ ಹುಡುಕಿಕೊಂಡ ವಿದೇಶಿ ವಿದ್ಯಾರ್ಥಿಗಳು, ಯುಎಇ ಯೂನಿವರ್ಸಿಟಿಗಳಿಗೆ ಅರ್ಜಿ:** ಇದೇ ವೇಳೆ ವಿದ್ಯಾರ್ಥಿ ಮಂಡಳಿಗೆ ಹೊಸದಾಗಿ ಆಯ್ಕೆಯಾದ ಸದಸ್ಯರಿಗೆ ದುಬೈ ಕ್ರೌನ್ ಪ್ರಿನ್ಸ್, ಯುಎಇ ಉಪಾಧ್ಯಕ್ಷ ಮತ್ತು ಪ್ರಧಾನಮಂತ್ರಿ, ಹಾಗೂ ದುಬೈ ಆಡಳಿತಗಾರ ಶೇಖ್ ಮೊಹಮ್ಮದ್ ಬಿನ್ ರಶೀದ್ ಅಲ್ ಮಕ್ತೌಮ್ ರಚಿತ ಪುಸ್ತಕದ ಪ್ರತಿಯೊಂದನ್ನು ಉಡುಗೊರೆಯಾಗಿ ನೀಡಿದರು.




**16 ಹೊಸ ವಿದ್ಯಾರ್ಥಿಗಳ ಆಯ್ಕೆ**

- **ಹೊಸ ದುಬೈ ವಿದ್ಯಾರ್ಥಿ ಮಂಡಳಿ ರಚನೆಗೆ ಕ್ರೌನ್ ಪ್ರಿನ್ಸ್ ಗ್ರೀನ್ ಸಿಗ್ನಲ್.**
- **ದುಬೈ ವಿದ್ಯಾರ್ಥಿ ಮಂಡಳಿಗೆ ಖಾಸಗಿ ಶಾಲೆಗಳ 16 ಹೊಸ ವಿದ್ಯಾರ್ಥಿಗಳ ಆಯ್ಕೆ.**
- **ಭವಿಷ್ಯದ ಪ್ರಜೆಗಳನ್ನು ತಯಾರು ಮಾಡಲು ದುಬೈ ಆಯ್ದುಕೊಂಡಿರುವ ಮಾರ್ಗವೇನು?**


**ಜವಾಬ್ದಾರಿ ಮತ್ತು ನಿರೀಕ್ಷೆಗಳು**

ದುಬೈ ವಿದ್ಯಾರ್ಥಿ ಮಂಡಳಿಗೆ ಅನುಮೋದನೆ ನೀಡಿ ಮಾತನಾಡಿದ ಕ್ರೌನ್ ಪ್ರಿನ್ಸ್ ಶೇಖ್ ಹಮ್ದಾನ್ ಬಿನ್ ಮೊಹಮ್ಮದ್ ಬಿನ್ ರಶೀದ್ ಅಲ್ ಮಕ್ತೌಮ್, ನೀವು ಈಗ ದುಬೈನಲ್ಲಿ ವಿದ್ಯಾರ್ಥಿಗಳ ಧ್ವನಿಯಾಗಿದ್ದೀರಿ. ನಿಮ್ಮ ಗೆಳೆಯರ ಮಹತ್ವಾಕಾಂಕ್ಷೆಗಳನ್ನು ಈಡೇರಿಸುವ ಮೂಲಕ ಮತ್ತು ಅವರ ಆಲೋಚನೆಗಳಿಗೆ ಧ್ವನಿಯಾಗುವ ಮೂಲಕ ಶಿಕ್ಷಣ ವ್ಯವಸ್ಥೆಯ ಅಭಿವೃದ್ಧಿಗೆ ನೀವು ಕೊಡುಗೆ ನೀಡುತ್ತೀರಿ ಎಂಬ ಭರವಸೆ ಇದೆ ಎಂದು ಹೇಳಿದ್ದಾರೆ.

# ಮಾರಿಗಲ್ಲು: ಕುತೂಹಲ

ಶೀರ್ಷಿಕೆ ಹಾಗೂ ಟೀಸರ್ ಮೂಲಕ ಕುತೂಹಲ ಹೆಚ್ಚಿಸಿರುವ ಮಾರಿಗಲ್ಲು ವೆಬ್ ಸರಣಿಯ ಟ್ರೇಲರ್ ಬಿಡುಗಡೆಯಾಗಿದೆ. ಜೀ5 ಮತ್ತು 'ಪಿಆರ್‌ಕೆ ಪ್ರೊಡಕ್ಷನ್ಸ್' ಜಂಟಿಯಾಗಿ ನಿರ್ಮಿಸಿರುವ ಈ ವೆಬ್ ಸೀರೀಸ್ ಇದೇ ತಿಂಗಳ 31ರಿಂದ ಪ್ರಸಾರ ಆಗಲಿದೆ. ಜೀ 5 ಒಟಿಟಿಯಲ್ಲಿ ವೀಕ್ಷಣೆಗೆ ಲಭ್ಯವಾಗಲಿದೆ. ಮಾರಿಗಲ್ಲು 1990ರ ದಶಕದ ಕಥೆಯಾಗಿದೆ. ಅಲ್ಲದೇ ಕದಂಬರ ಕಾಲಘಟ್ಟದ ಹಿನ್ನೆಲೆನೂ ಇಲ್ಲಿದೆ.

ಈ ಮೂಲಕ ನಮ್ಮ ಮಣ್ಣಿನ ಕಥೆಯನ್ನು ಜೀ 5 ಹಾಗೂ ಪಿ.ಆರ್.ಕೆ ಪ್ರೊಡಕ್ಷನ್ ಹೇಳೋದಿಕ್ಕೆ ಹೊರಟಿದೆ. ಶಿರಸಿ ಬಳಿಯ ಮಾರಿಗಲ್ಲು ಎಂಬ ಕಾಲ್ಪನಿಕ ಹಳ್ಳಿಯೊಂದರಲ್ಲಿ ನಡೆದ ಕಥೆಯನ್ನು ಸರಣಿಯಲ್ಲಿ ಕಟ್ಟಿಕೊಡಲಾಗಿದೆ. ಕದಂಬರ ರಾಜಧಾನಿಯಾಗಿರುವ ಬನವಾಸಿಗೆ ತನ್ನದೇ ಆದ ಪರಂಪರೆ ಹಾಗೂ ಇತಿಹಾಸವಿದೆ. ಇದು ದೊಡ್ಡ ಮನೆತನ ಎಂದು ಹೆಸರು ಪಡೆದಿದೆ. ಕದಂಬರ ಕಾಲದ ನಿಧಿಯನ್ನು ಹುಡುಕಲು ಹೊರಟ ಶಿರಸಿ ಯುವಕರ ಕಹಾನಿಯನ್ನು ಇದರಲ್ಲಿ ತೋರಿಸಲಾಗಿದೆ. ನಂಬಿಕೆ, ಸ್ವಾರ್ಥ, ದುರಾಸೆ ಮುಂತಾದ ಭಾವನೆಗಳಿಗೆ ಒಳಗಾದ ಪಾತ್ರಗಳನ್ನು ಈ ಪಯಣದಲ್ಲಿ ಸೂಕ್ಷ್ಮವಾಗಿ ಹೇಳಾಗಿದೆ. 'ಮಾರಿಗಲ್ಲು' ಮೂಲಕ ರಂಗಾಯಣ ರಘು, ಗೋಪಾಲ್ ಕೃಷ್ಣ ದೇಶಪಾಂಡೆ ವೆಬ್ ಸೀರಿಸ್ ಲೋಕಕ್ಕೆ ಎಂಟ್ರಿ ಕೊಟ್ಟಿದ್ದಾರೆ. ಪ್ರಪ್ರಥಮ ಬಾರಿಗೆ ಈ ಇಬ್ಬರು ವೆಬ್ ಸೇರೀಸ್ ನಲ್ಲಿ ಪ್ರಮುಖ ಪಾತ್ರದಲ್ಲಿ ನಟಿಸಿರುವುದು ಕುತೂಹಲ ಹೆಚ್ಚಿಸಿದೆ ಪ್ರವೀಣ್ ತೇಜ್ ಪಾತ್ರವರ್ಗದಲ್ಲಿದ್ದಾರೆ. ಇವರೊಂದಿಗೆ ಜೀ ಕನ್ನಡದ ಹಿಟ್ ರಿಯಾಲಿಟಿ ಶೋ ಡ್ರಾಮಾ ಜೂನಿಯರ್ಸ್ ಖ್ಯಾತಿಯ ಎಎಸ್ ಸೂರಜ್, ನಟ ಪ್ರಶಾಂತ್ ಸಿದ್ದಿ ಅಭಿನಯಿಸಿದ್ದಾರೆ.



ಇವರಿಬ್ಬರು ಮೂಲತಃ ಶಿರಸಿಯವರಾಗಿದ್ದು, ಸಹಜವಾಗಿ ನಿರೀಕ್ಷೆ ಹೆಚ್ಚು ಮಾಡಿದೆ. ಟಿವಿ ಲೋಕದಲ್ಲಿ ಖ್ಯಾತಿ ಪಡೆದಿರುವ ನಿನಾದ್ ಹೃತ್ಸಾ ಮಾರಿಗಲ್ಲು ಭಾಗವಾಗಿದ್ದಾರೆ. ಸ್ಥಳೀಯ ರಂಗಭೂಮಿ ಕಲಾವಿದರು ವೆಬ್ ಸೀರೀಸ್ ನಲ್ಲಿ ನಟಿಸಿದ್ದಾರೆ. ಅನುಭವಿ ತಾರಾಬಳಗದ ಜೊತೆಗೆ ಹೊಸ ಪ್ರತಿಭೆಗಳಿಗೆ ವೆಬ್ ಸರಣಿಯಲ್ಲಿ ಅವಕಾಶ ನೀಡಲಾಗಿದೆ. ಈ ವೆಬ್ ಸೀರಿಸ್ ಅನ್ನು ಪಿಆರ್‌ಕೆ ವತಿಯಿಂದ ಅಶ್ವಿನಿ ಪುನೀತ್ ರಾಜ್‌ಕುಮಾರ್ ನಿರ್ಮಾಣ ಮಾಡಿದ್ದು, ದೇವರಾಜ್ ಪೂಜಾರಿ ಕಥೆ ಬರೆದು ನಿರ್ದೇಶನ ಮಾಡಿದ್ದಾರೆ.

# ದಿವ್ಯಾ ಸುರೇಶ್ ಹಿಟ್ ರನ್?



**ಮಹಿಳೆಗೆ ಗಂಭೀರ ಗಾಯ**

ಬಿಗ್ ಬಾಸ್ ಮಾಜಿ ಸ್ಪರ್ಧಿ ಹಾಗೂ ನಟಿ ದಿವ್ಯಾ ಸುರೇಶ್ ಕಾರು ಬೈಕ್‌ಗೆ ಡಿಕ್ಕಿಯಾದ ಪರಿಣಾಮ ಮಹಿಳೆಯೊಬ್ಬರು ಗಂಭಿರವಾಗಿ ಗಾಯಗೊಂಡಿದ್ದಾರೆ. ಈ ವೇಳೆ ನಟಿ ಕಾರು ನಿಲ್ಲಿಸದೇ ಅಲ್ಲಿಂದ ಪರಾರಿಯಾಗಿದ್ದಾರೆ ಎಂಬ ಆರೋಪ ಕೇಳಿಬಂದಿದೆ.

ಅ.4ರ ರಾತ್ರಿ 1:30ಕ್ಕೆ ಬ್ಯಾಟರಾಯನಪುರದ ಎಂ.ಎಂ. ರಸ್ತೆಯಲ್ಲಿ ಈ ಅಪಘಾತ ಸಂಭವಿಸಿದ್ದು, ತಡವಾಗಿ ಬೆಳಕಿಗೆ ಬಂದಿದೆ. ಈ ಸಂಬಂಧ ಅ.7 ರಂದು ಗಾಯಗೊಂಡ ಮಹಿಳೆಯ ಸಂಬಂಧಿ ಕಿರಣ್ ನಟಿ ವಿರುದ್ಧ ದೂರು ದಾಖಲಿಸಿದ್ದಾರೆ. ದೂರಿನಲ್ಲಿ ನಮ್ಮ ಸಂಬಂಧಿ ಅನುಷಾಗೆ ಹುಷಾರಿರಲಿಲ್ಲ. ಹೀಗಾಗಿ ಅವತ್ತು ರಾತ್ರಿ ಗಿರಿನಗರದ ಆಸ್ಪತ್ರೆಗೆ ಹೋಗ್ತಾ ಇದ್ದೆವು. ಬೈಕ್‌ನಲ್ಲಿ ಮಧ್ಯೆ ಅನುಷಾ ಕುತಿದ್ರೂ.

ನಾನು ಬೈಕ್ ಓಡಿಸುತ್ತಾ ಇದ್ದೆ, ಅನಿತಾ ಬೈಕ್ ಹಿಂದೆ ಕುಳಿತಿದ್ದರು. ಈ ವೇಳೆ ನಾಯಿ ಬೊಗಳಿದ್ದಕ್ಕೆ ಸ್ವಲ್ಪ ಬಲಕ್ಕೆ ಬೈಕ್ ತೆಗೆದುಕೊಂಡೆ. ಆಗ ಏಕಾಏಕಿ ಕ್ರಾಸ್‌ನಲ್ಲಿ ಬಂದು ದಿವ್ಯಾ ಸುರೇಶ್ ಕಾರು ಅನಿತಾ ಅವರ ಕಾಲಿಗೆ ಗುದ್ದಿತ್ತು. ದಿವ್ಯಾ ಕಾರು ಡಿಕ್ಕಿಯಾದ ರಭಸಕ್ಕೆ ಬೈಕ್‌ನಲ್ಲಿದ್ದ ಮೂವರು ಬಿದ್ದಿದ್ದೆವು. ಕಾರು ಡಿಕ್ಕಿ ಹೊಡೆದಾಗ ಮಹಿಳೆಗೆ ಕಾಲಿನ ಮಂಡಿ ಚಿಪ್ಪಿಗೆ ಪೆಟ್ಟಾಗಿತ್ತು. ಕೂಡಲೇ ನಮ್ಮನ್ನು ನೋಡದೇ, ಕಾರು ನಿಲ್ಲಿಸದೇ ದಿವ್ಯಾ ಸುರೇಶ್ ಪರಾರಿಯಾಗಿದ್ದರು. ಆಸ್ಪತ್ರೆಯಲ್ಲಿ ಪರೀಕ್ಷೆ ನಡೆಸಿದ ವೈದ್ಯರು ಕಾಲಿನ ಮಂಡಿ ಚಿಪ್ಪು ಮುರಿದಿರೋದಾಗಿ ಚಿಕಿತ್ಸೆ ನೀಡಿದ್ದಾರೆ. ಸಿಸಿಟಿವಿ ಮೂಲಕ ಕಾರಿನ ನಂಬರ್ ಟ್ರೇಸ್ ಮಾಡಿದ್ದ ಬ್ಯಾಟರಾಯನಪುರ ಸಂಚಾರಿ ಪೊಲೀಸರು ದಿವ್ಯಾ ಸುರೇಶ್‌ರನ್ನು ಕರೆಸಿ, ಕಾರನ್ನು ಸೀಜ್ ಮಾಡಿದ್ದರು. ಆದರೆ ರಾತ್ರೋರಾತ್ರಿ ನಟಿ ಕಾರನ್ನು ಬಿಡಿಸಿಕೊಂಡು ಹೋಗಿದ್ದಾರೆ ಎಂದು ಅವರು ಆರೋಪಿಸಿದ್ದಾರೆ.ಅನಿತಾಗೆ ಆಪರೇಷನ್‌ಗೆ ಎರಡು ಲಕ್ಷ ರೂ. ಹಣ ಖರ್ಚಾಗಿದೆ. ನಾನು ಕ್ಯಾಬ್ ಓಡಿಸಿ ಜೀವನ ಮಾಡುತ್ತಿದ್ದೇನೆ. ಇದುವರೆಗೂ ಸಂತ್ರಸ್ಥ ಮಹಿಳೆಯನ್ನು ನಟಿ ದಿವ್ಯಾ ಸುರೇಶ್ ಸಂಪರ್ಕಿಸಿಲ್ಲ. ದಯವಿಟ್ಟು ನಮಗೆ ಪರಿಹಾರ ಕೊಡಿಸಿ ಎಂದು ಕಿರಣ್ ಮನವಿ ಮಾಡಿದ್ದಾರೆ.



# ಹೇ ಪ್ರಭು ಸಿನಿಮಾದ ಹಾಡು ಬಿಡುಗಡೆ

ಟಿಪ್ಸ್ ಕನ್ನಡ ಯೂಟ್ಯೂಬ್ ಚಾನೆಲ್ ಮೂಲಕ 'ಎದ್ದೇಳೋ ಈಗ..' ಹಾಡನ್ನು ಬಿಡುಗಡೆ ಮಾಡಲಾಗಿದೆ. 'ಹೇ ಪ್ರಭು' ಸಿನಿಮಾದ ಈ ಹಾಡಿಗೆ ಡ್ಯಾನಿ ಆಂಡರ್ಸನ್ ಸಂಗೀತ ನೀಡಿದ್ದಾರೆ. ತೇಜಸ್ವಿ ಹರಿದಾಸ್ ಹಾಡಿದ್ದಾರೆ. ಅರಸು ಅಂತಾರೆ ಅವರು ಸಾಹಿತ್ಯ ಬರೆದಿದ್ದಾರೆ. ಸಿನಿಮಾದ ಕಥೆಯ ಬಗ್ಗೆ ಚಿತ್ರತಂಡ ಮಾಹಿತಿ ಹಂಚಿಕೊಂಡಿದೆ. ನಿರ್ದೇಶಕ ವೆಂಕಟ್ ಭಾರದ್ವಾಜ್ ಅವರು 'ಹೇ ಪ್ರಭು' ಸಿನಿಮಾಗೆ ಆಕ್ಷನ್-ಕಟ್ ಹೇಳಿದ್ದಾರೆ. ಈ ಚಿತ್ರದಿಂದ ಮೊದಲ ಹಾಡನ್ನು ಬಿಡುಗಡೆ ಮಾಡಲಾಗಿದೆ. 'ಎದ್ದೇಳೋ ಈಗ..' ಎಂಬ ಈ ಹಾಡಿನಲ್ಲಿ ಸ್ಫೂರ್ತಿದಾಯಕ ಸಾಲುಗಳು ಇವೆ. ತೇಜಸ್ವಿ ಹರಿದಾಸ್ ಅವರ ಕಂಠದಲ್ಲಿ ಈ ಹಾಡು ಮೂಡಿಬಂದಿದೆ.

ಆತ್ಮವಿಶ್ವಾಸ ಮತ್ತು ಹೋರಾಟದ ಮನೋಭಾವವನ್ನು ಈ ಹಾಡು ಪ್ರತಿಬಿಂಬಿಸುತ್ತದೆ ಎಂದು 'ಹೇ ಪ್ರಭು' ಚಿತ್ರತಂಡ ಹೇಳಿದೆ. ಅರಸು ಅಂತಾರೆ ಅವರು 'ಎದ್ದೇಳೋ ಈಗ..' ಹಾಡಿಗೆ ಸಾಹಿತ್ಯ ಬರೆದಿದ್ದಾರೆ. ಡ್ಯಾನಿ ಆಂಡರ್ಸನ್ ಅವರು ಸಂಗೀತ ಸಂಯೋಜನೆ ಮಾಡಿದ್ದಾರೆ. 'ಹೇ ಪ್ರಭು' ಸಿನಿಮಾ ಈಗ ಬಿಡುಗಡೆಗೆ ಸಜ್ಜಾಗುತ್ತಿದೆ. ಈ ಸಿನಿಮಾದಲ್ಲಿ ಜಯವರ್ಧನ್, ಸಂಹಿತಾ ವಿನ್ಯ, ಗಜಾನನ ಹೆಗ್ಡೆ, ಯಮುನಾ ಶ್ರೀನಿಧಿ, ಲಕ್ಷ್ಮಣ ಶಿವಶಂಕರ, ಡಾ. ಪ್ರಮೋದ್, ಹರಿ ಧನಂಜಯ ಮುಂತಾದ ಕಲಾವಿದರು ಅಭಿನಯಿಸಿದ್ದಾರೆ. 'ಅಮೃತ ಫಿಲ್ಮ್ ಸೆಂಟರ್' ಮತ್ತು '24 ರೀಲ್ಸ್' ಸಂಸ್ಥೆಗಳ ಜೊತೆಯಾಗಿ ಈ ಸಿನಿಮಾ ನಿರ್ಮಾಣ ಮಾಡಿವೆ.



# ವಾರಿಜಶ್ರೀ ಕೈಹಿಡಿದ ಗಾಯಕ ರಘು ದೀಕ್ಷಿತ್

**ಕುಟುಂಬಸ್ಥರ ಸಮ್ಮುಖದಲ್ಲಿ ಸಪ್ತಪದಿ**

ಗಾಯಕ, ಸಂಗೀತ ನಿರ್ದೇಶಕ ರಘು ದೀಕ್ಷಿತ್ ಎರಡನೇ ಮದುವೆಯಾಗಿದ್ದಾರೆ. ಬೆಂಗಳೂರು ನಗರದ ಹೊರವಲಯದ ಖಾಸಗಿ ರೆಸಾರ್ಟ್‌ನಲ್ಲಿ ನಟ ರಘು ದೀಕ್ಷಿತ್ ಮತ್ತು ವಾರಿಜಾಶ್ರೀ ವೈವಾಹಿಕ ಜೀವನಕ್ಕೆ ಕಾಲಿಟ್ಟಿದ್ದಾರೆ. ಆಪ್ತರು, ಸ್ನೇಹಿತರು ಹಾಗೂ ಕುಟುಂಬದವರ ಸಮ್ಮುಖದಲ್ಲಿ ಸಡಗರದಿಂದ ಈ ವಿವಾಹ ನೆರವೇರಿದೆ. ಸೋಶಿಯಲ್ ಮೀಡಿಯಾದಲ್ಲಿ ಮದುವೆಯ ಫೋಟೋಗಳು ವೈರಲ್ ಆಗುತ್ತಿವೆ.

ರಘು ದೀಕ್ಷಿತ್ ಜೊತೆ ಗಾಯಕಿ ವಾರಿಜಶ್ರೀ ವೇಣುಗೋಪಾಲ್ ಜೊತೆ ಅವರು ವೈವಾಹಿಕ ಜೀವನ ಆರಂಭಿಸಿದ್ದಾರೆ. ರಘು ದೀಕ್ಷಿತ್ ಮತ್ತು ವಾರಿಜಶ್ರೀ ಮದುವೆ ಆಗಲಿದ್ದಾರೆ ಎಂಬ ಬಗ್ಗೆ ಇತ್ತೀಚೆಗಷ್ಟೇ ಸುದ್ದಿ ಹೊರಬಿದ್ದಿತ್ತು. ಕುಟುಂಬದವರು ಮತ್ತು ಆಪ್ತರ ಸಮ್ಮುಖದಲ್ಲಿ ಈ ಮದುವೆ ನೆರವೇರಿದೆ.

ರಘು ದೀಕ್ಷಿತ್ ಹಾಗೂ ವಾರಿಜಶ್ರೀ ವೇಣುಗೋಪಾಲ್ ಇಬ್ಬರೂ ಸಂಗೀತ ಕ್ಷೇತ್ರದಲ್ಲಿ ಹೆಸರು ಮಾಡಿದ್ದಾರೆ. ಒಟ್ಟಿಗೆ ಕೆಲಸವನ್ನ ಮಾಡಿರುವ ಈ ಜೋಡಿ ಕೊರೊನಾ ಕಾಲದಲ್ಲಿ ಮಾಡಿದ 'ಭರವಸೆಯ ಬದುಕು' ಹಾಡು ಅಪಾರ ಮೆಚ್ಚುಗೆಗೆ ಕಾರಣವಾಗಿತ್ತು. ಇದೀಗ ಕೆಲವೇ ಕೆಲವರು ಆಪ್ತರು ಹಾಗೂ ಕುಟುಂಬಸ್ಥರ ಸಮ್ಮುಖದಲ್ಲಿ ಸಪ್ತಪದಿ ತುಳಿದಿದ್ದಾರೆ.

# ತೆರೆಗೆ ಬರಲಿದ್ದಾನೆ ಉಡಾಳ

**ಸದ್ಯದಲ್ಲೇ ಅನಾವರಣ ಚಿತ್ರದ ಮೊದಲ ಹಾಡು**

ಯೋಗರಾಜ್ ಸಿನಿಮಾಸ್ ಹಾಗೂ ರವಿ ಶಾಮನೂರು ಫಿಲಂಸ್ ಲಾಂಛನದಲ್ಲಿ ಈ ಹಿಂದೆ ಪದವಿ ಪೂರ್ವ ಚಿತ್ರವನ್ನು ನಿರ್ಮಿಸಿದ್ದ ದಾವಣಗೆರೆಯ ರವಿ ಶಾಮನೂರು ಹಾಗೂ ಯೋಗರಾಜ್ ಭಟ್ ಅವರು ನಿರ್ಮಿಸಿರುವ, ಅಮೋಲ್ ಪಾಟೀಲ್ ನಿರ್ದೇಶನದ ಹಾಗೂ ಪದವಿಪೂರ್ವ ಖ್ಯಾತಿಯ ಪೃಥ್ವಿ ಶಾಮನೂರು ನಾಯಕನಾಗಿ ನಟಿಸಿರುವ ಉಡಾಳ ಚಿತ್ರದ ಟೀಸರ್ ಇತ್ತೀಚೆಗಷ್ಟೇ ಸರಿಗಮ ಯೂಟ್ಯೂಬ್ ಚಾನಲ್ ನಲ್ಲಿ ಬಿಡುಗಡೆಯಾಗಿತ್ತು. ಟೀಸರ್‌ಗೆ ಮೆಚ್ಚುಗೆಯ ಮಹಾಪೂರವೇ ಹರಿದು ಬರುತ್ತಿದ್ದು, ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದೆ. ಇದೇ ಸಂದರ್ಭದಲ್ಲಿ ಚಿತ್ರತಂಡ ಬಿಡುಗಡೆಯ ದಿನಾಂಕ ಸಹ ಘೋಷಣೆ ಮಾಡಿದೆ. ಬಹು ನಿರೀಕ್ಷಿತ ಈ ಚಿತ್ರ, ನವೆಂಬರ್ 14 ರಂದು ರಾಜ್ಯಾದ್ಯಂತ ಅದ್ದೂರಿಯಾಗಿ ಬಿಡುಗಡೆಯಾಗಲಿದೆ. ಚಿತ್ರದಲ್ಲಿ ಯೋಗರಾಜ್ ಭಟ್ ಅವರು ಬರೆದಿರುವ ಐದು ಹಾಡುಗಳಿಗೆ. ಚೇತನ್ ಡ್ಯಾವಿ, ಸಂಗೀತ ನೀಡಿದ್ದು ಜಸ್ಕರಣ್ ಸಿಂಗ್, ಉತ್ತರ ಕರ್ನಾಟಕ ಭಾಗದಲ್ಲಿ ತಮ್ಮ ಹಾಡಿನ ಮೂಲಕ ಜನಪ್ರಿಯಗೊಂಡ ಮಾಳು ನಿಪ್ನಾಳು, ಬಾಳು ಬೆಳಗುಂದಿ, ಕರಿಬಸವ, ಸೃಷ್ಟಿ ಶಾಮನೂರ್ ಈ ಚಿತ್ರಕ್ಕೆ ಹಾಡಿದ್ದಾರೆ. ಸೃಷ್ಟಿ ಶಾಮನೂರು ಹಾಗೂ ಹಿತ್ತಲಕ ಕರಿಬೇಡ ಮಾವ ಹಾಡಿನ ಖ್ಯಾತಿಯ ಮಾಳು ನಿಪ್ನಾಳು ಹಾಡಿರುವ ಉತ್ತರ ಕರ್ನಾಟಕ ಭಾಗದ ಜನಪ್ರಿಯ ಪದವಾದ ಹೊಡಿ ಶ್ಯಾವಿಗ್ಯಾಗ ಮಜ್ಗಿ ಎನ್ನುವ ಪದದಿಂದಲೇ ಶುರುವಾಗುವ ಮೊದಲ ಹಾಡು ಸದ್ಯದಲ್ಲೇ ಸರಿಗಮ ಯೂಟ್ಯೂಬ್ ಚಾನೆಲ್ ನಲ್ಲಿ ಅನಾವರಣವಾಗಲಿದೆ.




ಮೊದಲ ಚಿತ್ರದಲ್ಲೇ ತಮ್ಮ ನಟನೆಯ ಮೂಲಕ ಎಲ್ಲರ ಗಮನ ಸೆಳೆದಿದ್ದ ಪೃಥ್ವಿ ಶಾಮನೂರು ನಾಯಕನಾಗಿ ನಟಿಸಿರುವ ಎರಡನೇ ಚಿತ್ರವಿದು. ಹೃತಿಕ ಶ್ರೀನಿವಾಸ್ ಉಡಾಳ ಚಿತ್ರದ ನಾಯಕಿ. ಬಲ ರಾಜ್ವಾಡಿ, ಮಾಳು ನಿಪ್ನಾಳ್, ಹರೀಶ್ ಹಿರಿಯೂರು, ಬಿರಾದರ್, ಗೋವಿಂದೇಗೌಡ, ಸುಮಿತ್ ಸಂಕೋಜಿ, ವಾದಿರಾಜ ಬಬ್ಲಾದಿ, ಪ್ರವೀಣ್ ಗಸ್ತಿ, ದಯಾನಂದ ಬೀಳಗಿ, ರೇಣುಕ, ಶ್ರೀಧರ್, ದಾನಪ್ಪ, ಶಿಲ್ಪ ಶಾಂತಕುಮಾರ್, ಸೋನಿಯಾ ಮುಂತಾದವರು ತಾರಾಬಳಗದಲ್ಲಿದ್ದಾರೆ.

ಲವ್, ಕಾಮಿಡಿ, ಸಸ್ಪೆನ್ಸ್ ಹೀಗೆ ನೋಡುಗರಿಗೆ ಬೇಕಾದ ಎಲ್ಲಾ ಅಂಶಗಳಿರುವ ಈ ಚಿತ್ರವನ್ನು ಯೋಗರಾಜ್ ಭಟ್ ಅವರ ಜೊತೆಗೆ ಸಹ ನಿರ್ದೇಶಕರಾಗಿ ಕಾರ್ಯ ನಿರ್ವಹಿಸುತ್ತಿದ್ದ ಅಮೋಲ್ ಪಾಟೀಲ್ ನಿರ್ದೇಶಿಸಿದ್ದಾರೆ.

# ಆಸ್ಟ್ರೇಲಿಯಾದಲ್ಲಿ ರೋಹಿತ್, ಕೊಹ್ಲಿಯ ಕೊನೆಯ ಪಂದ್ಯ

ಸರಣಿ ಕಳೆದುಕೊಂಡಿರುವ ಭಾರತಕ್ಕೆ ಆಸ್ಟ್ರೇಲಿಯಾ ವಿರುದ್ಧ ಕ್ಲೀನ್ ಸ್ವೀಪ್ ತಪ್ಪಿಸುವ ಸವಾಲಿದೆ. ಸಿಡ್ನಿಯಲ್ಲಿ ನಡೆಯಲಿರುವ 3ನೇ ಏಕದಿನ ಪಂದ್ಯ ರೋಹಿತ್ ಶರ್ಮಾ ಮತ್ತು ವಿರಾಟ್ ಕೊಹ್ಲಿಗೆ ಆಸ್ಟ್ರೇಲಿಯಾದಲ್ಲಿ ಕೊನೆಯ ಏಕದಿನ ಪಂದ್ಯವಾಗಿರಲಿದೆ. ಈ ಮೈದಾನದಲ್ಲಿ ಟೀಂ ಇಂಡಿಯಾದ ದಾಖಲೆ ಉತ್ತಮವಾಗಿಲ್ಲ. ಪಂದ್ಯದ ಸಮಯ, ಸ್ಥಳ ಮತ್ತು ನೇರ ಪ್ರಸಾರದ ಸಂಪೂರ್ಣ ಮಾಹಿತಿ ಲಭ್ಯವಿದೆ.

ಆಸ್ಟ್ರೇಲಿಯಾ ನೆಲದಲ್ಲಿ ಸತತ ಎರಡು ಏಕದಿನ ಪಂದ್ಯಗಳನ್ನು ಸೋತು ಸರಣಿಯನ್ನು ಕಳೆದುಕೊಂಡಿರುವ ಟೀಂ ಇಂಡಿಯಾಕ್ಕೆ ಇದೀಗ ಕ್ಲೀನ್ ಸ್ವೀಪ್ ಮುಜುಗರದಿಂದ ಪಾರಾಗುವ ಸವಾಲು ಎದುರಾಗಿದೆ. ಇದರ ಜೊತೆಗೆ ಆಸ್ಟ್ರೇಲಿಯಾದಲ್ಲಿ ಕೊನೆಯ ಪಂದ್ಯವನ್ನಾಡುತ್ತಿರುವ ರೋಹಿತ್ ಶರ್ಮಾ ಹಾಗೂ ವಿರಾಟ್ ಕೊಹ್ಲಿಗೆ ಕೊನೆಯ ಏಕದಿನ ಪಂದ್ಯ ಇನ್ನಷ್ಟು ವಿಶೇಷವಾಗಿರಲಿದೆ. ಏಕೆಂದರೆ ಮುಂದಿನ ಎರಡು ವರ್ಷಗಳ ಕಾಲ ಆಸ್ಟ್ರೇಲಿಯಾದಲ್ಲಿ ಯಾವುದೇ ಏಕದಿನ ಸರಣಿ ನಡೆಯುವುದಿಲ್ಲ. ಹೀಗಾಗಿ ಈ ಜೋಡಿ ಆಸ್ಟ್ರೇಲಿಯಾದಲ್ಲಿ ಮತ್ತೆ ಭಾರತದ ಪರ ಆಡುವ ಸಾಧ್ಯತೆಯಿಲ್ಲ. ಆದ್ದರಿಂದ ಈಗಾಗಲೇ ಸರಣಿ ಸೋತಿರುವ ಟೀಂ ಇಂಡಿಯಾವನ್ನು ಇವರಿಬ್ಬರು ಸೇರಿ ವೈಟ್ ವಾಶ್ ಅವಮಾನದಿಂದ ಪಾರು ಮಾಡಬೇಕಾಗಿದೆ.

ಅಕ್ಟೋಬರ್ 25 ರಂದು ಸಿಡ್ನಿಯಲ್ಲಿ ನಡೆಯಲಿರುವ ಅಂತಿಮ ಏಕದಿನ ಪಂದ್ಯ ಭಾರತಕ್ಕೆ ಸವಾಲಿನ ಪಂದ್ಯವಾಗಿದೆ. ಏಕೆಂದರೆ ಈ ಮೈದಾನದಲ್ಲಿ ಟೀಂ ಇಂಡಿಯಾದ ದಾಖಲೆ ಅಷ್ಟು ಉತ್ತಮವಾಗಿಲ್ಲ. ಕಳೆದ ಒಂಬತ್ತು ವರ್ಷಗಳಲ್ಲಿ ಇಲ್ಲಿ ಆಡಿರುವ ಏಕದಿನ ಪಂದ್ಯಗಳಲ್ಲಿ ಟೀಂ ಇಂಡಿಯಾ ಗೆದ್ದಿಲ್ಲ. ಜನವರಿ 23, 2016 ರಂದು ನಡೆದಿದ್ದ ಏಕದಿನ ಪಂದ್ಯದಲ್ಲಿ ಟೀಂ ಇಂಡಿಯಾ ಕೊನೆಯ ಬಾರಿಗೆ ಗೆಲುವು ಸಾಧಿಸಿತ್ತು. ಅಂದಿನಿಂದ, ಟೀಂ ಇಂಡಿಯಾ ಈ ಮೈದಾನದಲ್ಲಿ ಸತತ ಮೂರು ಪಂದ್ಯಗಳನ್ನು ಸೋತಿದೆ.

ಹೀಗಾಗಿ ಹ್ಯಾಟ್ರಿಕ್ ಸೋಲಿನ ಸರಣಿಯನ್ನು ಮುರಿಯುವುದರ ಜೊತೆಗೆ ಗೆಲುವಿನೊಂದಿಗೆ ಏಕದಿನ ಸರಣಿಗೆ ಅಂತ್ಯ ಹಾಡುವ ಒತ್ತಡದಲ್ಲಿ ಭಾರತ ತಂಡವಿದೆ.




# ಸೆಮಿಫೈನಲ್‌ನಲ್ಲಿ ಭಾರತದ ಎದುರಾಳಿ ಯಾರು?

2025 ರ ಮಹಿಳಾ ಏಕದಿನ ವಿಶ್ವಕಪ್‌ನಲ್ಲಿ ಸೆಮಿಫೈನಲ್ ತಲುಪಿದ ನಾಲ್ಕನೇ ಮತ್ತು ಅಂತಿಮ ತಂಡ ಟೀಂ ಇಂಡಿಯಾ. ಅಕ್ಟೋಬರ್ 23 ರಂದು ನವಿ ಮುಂಬೈನಲ್ಲಿ ನಡೆದ ಪಂದ್ಯದಲ್ಲಿ ಡಕ್ವರ್ತ್-ಲೂಯಿಸ್ ವಿಧಾನದಡಿಯಲ್ಲಿ ನ್ಯೂಜಿಲೆಂಡ್ ತಂಡವನ್ನು 53 ರನ್‌ಗಳಿಂದ ಸೋಲಿಸುವ ಮೂಲಕ ಭಾರತೀಯ ಮಹಿಳಾ ತಂಡ ಸೆಮಿಫೈನಲ್‌ನಲ್ಲಿ ಸ್ಥಾನ ಪಡೆದುಕೊಂಡಿದೆ. ಭಾರತವಲ್ಲದೆ, ಆಸ್ಟ್ರೇಲಿಯಾ, ದಕ್ಷಿಣ ಆಫ್ರಿಕಾ ಮತ್ತು ಇಂಗ್ಲೆಂಡ್ ಸೆಮಿಫೈನಲ್‌ಗೆ ಅರ್ಹತೆ ಪಡೆದ ಇತರ ಮೂರು ತಂಡಗಳಾಗಿವೆ. ಕುತೂಹಲಕಾರಿಯಾಗಿ, ಟೀಂ ಇಂಡಿಯಾ ಸತತ ಮೂರು ಗುಂಪು ಹಂತದ ಪಂದ್ಯಗಳಲ್ಲಿ ಸೋತ ಅದೇ ಮೂರು ತಂಡಗಳು ಇವು. ಆದರೆ ಸೆಮಿಫೈನಲ್‌ನಲ್ಲಿ ಯಾವ ತಂಡವನ್ನು ಎದುರಿಸಲಿದೆ ಎಂಬುದು ಈಗ ಪ್ರಶ್ನೆಯಾಗಿದೆ.



**4ನೇ ಸ್ಥಾನದಲ್ಲಿ ಟೀಂ ಇಂಡಿಯಾ:** ಪಾಯಿಂಟ್ ಟೇಬಲ್ ನೋಡುವುದಾದರೆ, ಆಡಿದ ಆರು ಪಂದ್ಯಗಳಿಂದ ಆಸ್ಟ್ರೇಲಿಯಾ 11 ಅಂಕಗಳೊಂದಿಗೆ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದೆ. ಆರು ಪಂದ್ಯಗಳಿಂದ 10 ಅಂಕಗಳೊಂದಿಗೆ ದಕ್ಷಿಣ ಆಫ್ರಿಕಾ ಎರಡನೇ ಸ್ಥಾನದಲ್ಲಿದೆ. ಆರು ಪಂದ್ಯಗಳಿಂದ 9 ಅಂಕಗಳೊಂದಿಗೆ ಇಂಗ್ಲೆಂಡ್ ಮೂರನೇ ಸ್ಥಾನದಲ್ಲಿದೆ. ಆರು ಪಂದ್ಯಗಳಿಂದ ಆರು ಅಂಕಗಳೊಂದಿಗೆ ಭಾರತವು ಅಗ್ರ ನಾಲ್ಕು ಅಥವಾ ಸೆಮಿಫೈನಲ್‌ಗೆ ಅರ್ಹತೆ ಪಡೆದ ಕೊನೆಯ ತಂಡವಾಗಿದೆ. ಸೆಮಿಫೈನಲ್ ಸ್ಥಾನವನ್ನು ಖಚಿತಪಡಿಸಿಕೊಂಡರೂ, ಈ ಎಲ್ಲಾ ತಂಡಗಳು ಗುಂಪು ಹಂತದಲ್ಲಿ ಇನ್ನೂ ಒಂದು ಪಂದ್ಯವನ್ನು ಆಡಬೇಕಾಗಿದೆ. ಅಂತಿಮ ಗುಂಪು ಪಂದ್ಯದಲ್ಲಿ ಆಸ್ಟ್ರೇಲಿಯಾ ಮತ್ತು ದಕ್ಷಿಣ ಆಫ್ರಿಕಾ ಪರಸ್ಪರ ಮುಖಾಮುಖಿಯಾಗಲಿವೆ. ಇಂಗ್ಲೆಂಡ್, ನ್ಯೂಜಿಲೆಂಡ್ ತಂಡವನ್ನು ಎದುರಿಸಿದರೆ, ಭಾರತ, ಬಾಂಗ್ಲಾದೇಶವನ್ನು ಎದುರಿಸಲಿದೆ. ಟೀಂ ಇಂಡಿಯಾ ತನ್ನ ಪಂದ್ಯವನ್ನು ಗೆದ್ದರೂ ಸಹ, ಅದರ ಸ್ಥಾನ ಬದಲಾಗುವುದಿಲ್ಲ. ಬಾಂಗ್ಲಾದೇಶದ ವಿರುದ್ಧ ಜಯಗಳಿಸಿದ ನಂತರವೂ 8 ಅಂಕಗಳನ್ನು ಹೊಂದಿದ್ದು 4 ನೇ ಸ್ಥಾನದಲ್ಲಿ ಉಳಿಯುತ್ತದೆ. ಆದಾಗ್ಯೂ, ಅಗ್ರ ಮೂರು ಸ್ಥಾನಗಳು ಬದಲಾಗಬಹುದು.

# ರೋಹಿತ್ ಶರ್ಮಾ ನಿಮ್ಮ ವಿದಾಯದ ಪಂದ್ಯ

ಭಾರತ ಮತ್ತು ಆಸ್ಟ್ರೇಲಿಯಾ ನಡುವೆ ಮೂರು ಪಂದ್ಯಗಳ ಏಕದಿನ ಸರಣಿ ನಡೆಯುತ್ತಿದೆ. ಈ ಸರಣಿಯ ಎರಡನೇ ಪಂದ್ಯಕ್ಕೂ ಮುನ್ನ, ಟೀಮ್ ಇಂಡಿಯಾದ ಸ್ಟಾರ್ ಬ್ಯಾಟ್ಸ್‌ಮನ್ ರೋಹಿತ್ ಶರ್ಮಾ ಈ ಪಂದ್ಯದಲ್ಲಿ ಉತ್ತಮ ಪ್ರದರ್ಶನ ನೀಡದಿದ್ದರೆ, ಅವರನ್ನು ಪ್ಲೇಯಿಂಗ್ 11 ರಿಂದ ಕೈಬಿಡಬಹುದು ಮತ್ತು ಅವರ ಅಂತರರಾಷ್ಟ್ರೀಯ ವೃತ್ತಿಜೀವನವೂ ಅಪಾಯದಲ್ಲಿದೆ ಎಂಬ ಸುದ್ದಿ ಹೊರಬಿದ್ದಿತ್ತು. ಏತನ್ಮಧ್ಯೆ, ಸಾಮಾಜಿಕ ಮಾಧ್ಯಮದಲ್ಲಿ ಒಂದು ವಿಡಿಯೋ ವೇಗವಾಗಿ ವೈರಲ್ ಆಗುತ್ತಿದೆ, ಇದರಲ್ಲಿ ಗೌತಮ್ ಗಂಭೀರ್ ಮತ್ತು ರೋಹಿತ್ ಶರ್ಮಾ ನಡುವಣ ಸಂಭಾಷಣೆ ಇದೆ. ಈ ವಿಡಿಯೋದಲ್ಲಿ ಗೌತಮ್ ಗಂಭಿರ್ ಅವರು ರೋಹಿತ್ ಶರ್ಮಾ ಜೊತೆ ಮಾತನಾಡುತ್ತಿರುವುದು ಕೇಳಿಬರುತ್ತಿದೆ. ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ನಡೆಯುತ್ತಿರುವ ಏಕದಿನ ಸರಣಿಯ ಸಮಯದಲ್ಲಿ ಈ ಸಂಭಾಷಣೆ ನಡೆದಿದೆ ಎನ್ನಲಾಗಿದೆ. ವಿಡಿಯೋದಲ್ಲಿ, ಗಂಭೀರ್ ರೋಹಿತ್‌ಗೆ, ''ರೋಹಿತ್, ಇಂದು ವಿದಾಯ ಪಂದ್ಯ ಎಂದು ಎಲ್ಲರೂ ಭಾವಿಸಿದ್ದರು, ಕನಿಷ್ಠ ಒಂದು ಫೋಟೋ ಪೋಸ್ಟ್ ಮಾಡಿ'' ಎಂದು ಹೇಳುತ್ತಾರೆ. ಆದಾಗ್ಯೂ, ಈ ವಿಡಿಯೋವನ್ನು ದೃಢೀಕರಿಸಲು ಸಾಧ್ಯವಾಗಲಿಲ್ಲ. ಈ ಸಂಭಾಷಣೆ ತಮಾಷೆಗಾಗಿಯೋ ಅಥವಾ ಗಂಭೀರವಾಗಿಯೋ ಎಂದು ಅಭಿಮಾನಿಗಳಲ್ಲಿ ಹೆಚ್ಚು ಚರ್ಚೆಯ ವಿಷಯವಾಗಿದೆ. ಸರಣಿಯ ಮೊದಲ ಪಂದ್ಯದಲ್ಲಿ ಕಮ್‌ಬ್ಯಾಕ್ ಮಾಡುವ ಗುರಿ ಹೊಂದಿದ್ದ ರೋಹಿತ್ ಶರ್ಮಾ ಕೇವಲ ಎಂಟು ರನ್ ಗಳಿಸಿ ಕಳಪೆ ಪ್ರದರ್ಶನ ನೀಡಿದ್ದರು. ಇದು ಸಾಕಷ್ಟು ಟೀಕೆಗೆ ಗುರಿಯಾಯಿತು. ಆದಾಗ್ಯೂ, ಎರಡನೇ ಏಕದಿನ ಪಂದ್ಯದಲ್ಲಿ ಅವರು ಅದ್ಭುತ 73 ರನ್ ಗಳಿಸಿ ಸ್ಫೋಟಕ ಕಮ್‌ಬ್ಯಾಕ್ ಮಾಡಿದರು.



# ಟೀಮ್ ಇಂಡಿಯಾ ಸೋಲಿಗೆ ಕಾರಣ ವಿವರಿಸಿದ ಗಿಲ್

**ಪಂದ್ಯದ ನಂತರ ಶುಭ್‌ಮನ್ ಗಿಲ್ ಹೇಳಿದ್ದೇನು**

ಭಾರತ v/s ಆಸ್ಟ್ರೇಲಿಯಾ ಸರಣಿಯ ಎರಡನೇ ಪಂದ್ಯದಲ್ಲಿ ಟೀಮ್ ಇಂಡಿಯಾ 2 ವಿಕೆಟ್‌ಗಳಿಂದ ಸೋತಿತು. ಸತತ ಎರಡು ಸೋಲುಗಳ ನಂತರ, ಸರಣಿ ಕೂಡ ಕಳೆದುಕೊಂಡಿದೆ.

ಏತನ್ಮಧ್ಯೆ, ಪಂದ್ಯದ ನಂತರ ನಾಯಕ ಶುಭ್ಮನ್ ಗಿಲ್ ತಂಡದ ಸೋಲಿಗೆ ಕಾರಣ ವಿವರಿಸಿದ್ದಾರೆ. ಯುವ ನಾಯಕ ಶುಭ್‌ಮನ್ ಗಿಲ್ ನೇತೃತ್ವದ ಭಾರತ ಕ್ರಿಕೆಟ್ ತಂಡವು ಆಸ್ಟ್ರೇಲಿಯಾದಲ್ಲಿ ಮೂರು ಪಂದ್ಯಗಳ ಏಕದಿನ ಸರಣಿಯಲ್ಲಿ ಸತತ ಎರಡು ಏಕದಿನ ಪಂದ್ಯಗಳಲ್ಲಿ ಸೋಲು ಅನುಭವಿಸಿದೆ. ಗುರುವಾರ ಅಡಿಲೇಡ್‌ನಲ್ಲಿ ನಡೆದ ಏಕದಿನ ಪಂದ್ಯದಲ್ಲಿ ಎರಡು ವಿಕೆಟ್‌ಗಳ ಸೋಲಿನೊಂದಿಗೆ, ಭಾರತ ತಂಡವು ಸರಣಿಯನ್ನು ಸಹ ಕಳೆದುಕೊಂಡಿತು. ಆಸ್ಟ್ರೇಲಿಯಾ ಈ ಸರಣಿಯಲ್ಲಿ 2-0 ಮುನ್ನಡೆ ಸಾಧಿಸಿದೆ. ಗಿಲ್ ನಾಯಕತ್ವದಲ್ಲಿ ಆಸ್ಟ್ರೇಲಿಯಾ ಪ್ರವಾಸ ಮಾಡಿದ್ದ ಟೀಮ್ ಇಂಡಿಯಾದಿಂದ ಅಭಿಮಾನಿಗಳು ಗೆಲುವು ನಿರೀಕ್ಷಿಸಿದ್ದರು, ಆದರೆ ಫಲಿತಾಂಶವು ವಿರುದ್ಧವಾಗಿದೆ. ಗಿಲ್ ನಾಯಕತ್ವದಲ್ಲಿ ವಿಫಲರಾಗುವುದಲ್ಲದೆ, ಬ್ಯಾಟಿಂಗ್‌ನಲ್ಲಿಯೂ ಅವರ ಕಡೆಯಿಂದ ಯಾವುದೇ ಮಹತ್ವದ ಕೊಡುಗೆ ಬಂದಿಲ್ಲ. ಎರಡನೇ ಏಕದಿನ ಪಂದ್ಯವನ್ನು ಎರಡು ವಿಕೆಟ್‌ಗಳಿಂದ ಗೆದ್ದ ಆಸ್ಟ್ರೇಲಿಯಾ ಸರಣಿಯಲ್ಲಿ ಸರ್ವತೋಮುಖ ಪ್ರದರ್ಶನದೊಂದಿಗೆ ಅಜೇಯ ಮುನ್ನಡೆ ಸಾಧಿಸಿತು. ಪರ್ತ್‌ನಲ್ಲಿ ನಡೆದ ಮೊದಲ ಪಂದ್ಯದಲ್ಲಿ ಭಾರತ ಏಳು ವಿಕೆಟ್‌ಗಳಿಂದ ಸೋತಿತ್ತು. 78 ಎಸೆತಗಳಲ್ಲಿ ಅದ್ಭುತ 74 ರನ್ ಗಳಿಸಿದ ಮ್ಯಾಥ್ಯೂ ಶಾರ್ಟ್ ಅವರ ಒಂದು ಅವಕಾಶ ಸೇರಿದಂತೆ ಭಾರತೀಯ ಫೀಲ್ಡರ್‌ಗಳು ಕನಿಷ್ಠ ಮೂರು ಅವಕಾಶಗಳನ್ನು ತಪ್ಪಿಸಿಕೊಂಡರು. ''ನಾವು ಉತ್ತಮ ಪ್ರಮಾಣದ ರನ್‌ಗಳನ್ನು ಗಳಿಸಿದ್ದೆವು. ಆದರೆ ನೀವು ಆ ರೀತಿಯ ಸ್ಕೋರ್ ಅನ್ನು ರಕ್ಷಿಸಿಕೊಂಡು ನಂತರ ಕೆಲವು ಅವಕಾಶಗಳನ್ನು ಕಳೆದುಕೊಂಡಾಗ ಗೆಲುವು ಎಂದಿಗೂ ಸುಲಭವಲ್ಲ'' ಎಂದು ಗಿಲ್ ಪಂದ್ಯದ ನಂತರದ ಪ್ರಸ್ತುತಿ ಸಮಾರಂಭದಲ್ಲಿ ಹೇಳಿದರು. ಕ್ಯಾಚ್‌ಗಳನ್ನು ಕೈಬಿಟ್ಟ ಕಾರಣ ಮತ್ತು ಸಾಕಷ್ಟು ರನ್ ಗಳಿಸಲು ಸಾಧ್ಯವಾಗದ ಕಾರಣ ಗುರುವಾರ ಆಸ್ಟ್ರೇಲಿಯಾ ವಿರುದ್ಧದ ಏಕದಿನ ಸರಣಿಯನ್ನು ತಮ್ಮ ತಂಡ ಕಳೆದುಕೊಂಡಿತು ಎಂದು ಭಾರತೀಯ ನಾಯಕ ಶುಭ್‌ಮನ್ ಗಿಲ್ ಒಪ್ಪಿಕೊಂಡಿದ್ದಾರೆ. ಶುಭ್‌ಮನ್ ಗಿಲ್ ಸತತ ಎರಡನೇ ಟಾಸ್ ಸೋತರು. ಎರಡೂ ಪಂದ್ಯಗಳಲ್ಲಿ ಭಾರತ ಮೊದಲು ಬ್ಯಾಟಿಂಗ್ ಮಾಡಬೇಕಾಗಿತ್ತು.



# 10 ತಿಂಗಳ ನಂತರ ಟಿ20 ತಂಡದಲ್ಲಿ ಬಾಬರ್ ಪ್ರತ್ಯಕ್ಷ

ದಕ್ಷಿಣ ಆಫ್ರಿಕಾ ವಿರುದ್ಧದ 2 ಪಂದ್ಯಗಳ ತವರು ಟೆಸ್ಟ್ ಸರಣಿಯನ್ನು ಗೆಲ್ಲುವಲ್ಲಿ ವಿಫಲವಾಗಿರುವ ಪಾಕಿಸ್ತಾನ ತಂಡ, ಇದೀಗ ಅದೇ ಆಫ್ರಿಕಾ ವಿರುದ್ಧ ಟಿ20 ಸರಣಿಯನ್ನು ಆಡಲು ಸಿದ್ಧವಾಗಿದೆ. ಪಾಕಿಸ್ತಾನ ಮತ್ತು ದಕ್ಷಿಣ ಆಫ್ರಿಕಾ ನಡುವಿನ ಟಿ20 ಸರಣಿ ಅಕ್ಟೋಬರ್ 28 ರಿಂದ ನವೆಂಬರ್ 1 ರವರೆಗೆ ನಡೆಯಲಿದೆ. ಪಂದ್ಯಗಳು ರಾವಲ್ಪಿಂಡಿ ಮತ್ತು ಲಾಹೋರ್‌ನಲ್ಲಿ ನಡೆಯಲಿವೆ.

ನಂತರ ಎರಡೂ ತಂಡಗಳು ನವೆಂಬರ್ 4 ರಿಂದ 8 ರವರೆಗೆ ಫೈಸಲಾಬಾದ್‌ನ ಇಕ್ಬಾಲ್ ಕ್ರೀಡಾಂಗಣದಲ್ಲಿ ಮೂರು ಪಂದ್ಯಗಳ ಏಕದಿನ ಸರಣಿಯನ್ನು ಆಡಲಿವೆ. ಅದಾದ ಬಳಿಕ ನವೆಂಬರ್ 11 ರಿಂದ 15 ರವರೆಗೆ ಶ್ರೀಲಂಕಾ ವಿರುದ್ಧ ಏಕದಿನ ಸರಣಿ ನಡೆಯಲಿದ್ದು, ನವೆಂಬರ್ 17 ರಿಂದ 29ರವರೆಗೆ ತ್ರಿಕೋನ ಟಿ20 ಸರಣಿ ನಡೆಯಲಿದೆ. ಇದೀಗ ಈ ಸರಣಿಗಳಿಗೆ ಪಾಕಿಸ್ತಾನ ಕ್ರಿಕೆಟ್ ಮಂಡಳಿ ತಂಡಗಳನ್ನು ಪ್ರಕಟಿಸಿದ್ದು, ಮಾಜಿ ನಾಯಕ ಬಾಬರ್ ಆಜಂ ಸುಮಾರು 10 ತಿಂಗಳ ನಂತರ ಪಾಕಿಸ್ತಾನದ ಟಿ20 ತಂಡಕ್ಕೆ ಮರಳಿದ್ದಾರೆ. ಡಿಸೆಂಬರ್ 13, 2024 ರಂದು ದಕ್ಷಿಣ ಆಫ್ರಿಕಾ ವಿರುದ್ಧ ಕೊನೆಯ ಬಾರಿಗೆ ಟಿ20 ಪಂದ್ಯ ಆಡಿದ್ದ ಬಾಬರ್‌ಗೆ ಆ ಬಳಿಕ ಟಿ20 ತಂಡದಲ್ಲಿ ಸ್ಥಾನ ಸಿಕ್ಕರಲಿಲ್ಲ.

**ಪಾಕಿಸ್ತಾನ ಟಿ20ತಂಡ:** ಸಲ್ಮಾನ್ ಅಲಿ ಅಘಾ (ನಾಯಕ), ಅಬ್ದುಲ್ ಸಮದ್, ಅಬ್ರಾರ್ ಅಹ್ಮದ್, ಬಾಬರ್ ಆಝಂ, ಫಹೀಮ್ ಅಶ್ರಫ್, ಹಸನ್ ನವಾಜ್, ಮೊಹಮ್ಮದ್ ನವಾಜ್, ಮೊಹಮ್ಮದ್ ವಾಸಿಮ್ ಜೂನಿಯರ್, ಮೊಹಮ್ಮದ್ ಸಲ್ಮಾನ್ ಮಿರ್ಜಾ, ನಸೀಮ್ ಶಾ, ಸಾಹಿಬ್ಜಾದಾ ಫರ್ಹಾನ್, ಸೈಮ್ ಅಯ್ಯುಬ್, ಶಾಹೀನ್ ಶಾ ಅಫ್ರಿದಿ, ಉಸ್ಮೆಮಾನ್ ಖಾನ್.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966